# ಆದಿಕಾಂಡ

## ಮುನ್ನುಡಿ

"ಆದಿ" (ಜೆನೆಸಿಸ್) ಎಂದರೆ ಮೊದಲು ಅಥವಾ ಮೂಲ. ಈ ಜಗದ ಹಾಗೂ ಇದರ ಜನತೆಯ ಮೂಲ ಯಾವುದು? ಅದು ಮೊದಲು ಆದುದು ಹೇಗೆ? ಈ ಲೋಕದಲ್ಲಿ ನಾವು ಅನುಭವಿಸುತ್ತಿರುವ ಸಾವು ನೋವುಗಳು, ದುಃಖದುಗುಡಗಳು ಹೇಗೆ ತಲೆಯೆತ್ತಿಕೊಂಡವು? ಇವು ಈ ಪುಸ್ತಕದ ವಿಷಯಗಳು.

ಈ ಲೋಕಕ್ಕೂ ಇದರ ನಿವಾಸಿಗಳಿಗೂ ಮೂಲ ಕಾರಣಕರ್ತ ದೇವರೇ. ತನಗೂ ದೇವರಿಗೂ ಆದಿಯಿಂದ ಇದ್ದ ಸಂಬಂಧವನ್ನು ಮಾನವ ಪಾಪದ ಮೂಲಕ ಕಡಿದುಕೊಂಡ. ಆದರೆ ದೇವರ ಕರುಣೆ ಅಷ್ಟಕ್ಕೆ ನಿಂತು ಹೋಗಲಿಲ್ಲ.

ಮಾನವರೆಲ್ಲರನ್ನು ಉದ್ಧಾರಮಾಡಲು ದೇವರು ಅಬ್ರಹಾಮನನ್ನು ಆರಿಸಿಕೊಂಡರು. ಈ ಪುನರುದ್ಧಾರದ ಕಾರ್ಯದಲ್ಲಿ ಅಬ್ರಹಾಮನ ವಿಶ್ವಾಸ ಅಚಲವಾಗಿತ್ತಾದರೂ, ವಿಧೇಯತೆ ಅಪ್ರತಿಮವಾಗಿತ್ತಾದರೂ ದೇವರ ಪಾತ್ರವೇ ಪ್ರಪ್ರಥಮ ಹಾಗೂ ಪ್ರಧಾನ. ಅವರು ಪೂರ್ವಜರಾದ ಅಬ್ರಹಾಮ, ಇಸಾಕ ಮತ್ತು ಯಾಕೋಬರಿಗೆ ಮಾಡಿದ ವಾಗ್ದಾನ ನೆರವೇರಿಯೇ ತೀರುವುದು ಎಂಬ ದೃಢನಂಬಿಕೆಯೊಂದಿಗೆ ಈ ಪುಸ್ತಕ ಮುಕ್ತಾಯಗೊಳ್ಳುತ್ತದೆ.

ಈ ಆದಿಕಾಂಡ ಮೂರು ಪ್ರಾಮುಖ್ಯ ಸಂಪ್ರದಾಯ ಮೂಲಗಳಿಂದ ಬೆರೆತಿದೆ ಎಂದು ಪರಿಣಿತರ ಅಭಿಪ್ರಾಯ. ಇವುಗಳನ್ನು ಆಂಗ್ಲ ಭಾಷೆಯಲ್ಲಿ "ಯಾವಿಸ್ಟಿಕ್", "ಎಲೊವಿಸ್ಟಿಕ್" ಮತ್ತು "ಪ್ರೀಸ್ಟ್‌ಲೀ" ಮೂಲಗಳೆಂದು ಕರೆಯುತ್ತಾರೆ.

### ಪರಿವಿಡಿ


| | | |
|---|---|---|
| ಭೂಮ್ಯಾಕಾಶಗಳ ಹಾಗು ಮಾನವಕುಲದ ಸೃಷ್ಟಿ | – | 1.1 – 2.25 |
| ಪಾಪ ಮತ್ತು ಪರಿತಾಪದ ಆರಂಭ | – | 3.1 – 3.24 |
| ಆದಾಮನಿಂದ ನೋಹನವರೆಗೆ | – | 4.1 – 5.32 |
| ನೋಹ ಮತ್ತು ಪ್ರಳಯ | – | 6.1 – 10.32 |
| ಬಾಬೆಲ್ ಗೋಪುರ | – | 11.1 – 11.9 |
| ಶೇಮ್‌ನಿಂದ ಅಬ್ರಹಾಮನವರೆಗೆ | – | 11.10 – 11.32 |
| ಪಿತಾಮಹರಾದ ಅಬ್ರಹಾಮ, ಇಸಾಕ ಹಾಗು ಯಕೋಬ | – | 12.1 – 35.29 |
| ಏಸಾವನ ಸಂತತಿ | – | 36.1 – 36.43 |
| ಜೋಸೆಫ್ ಮತ್ತು ಸಹೋದರರು | – | 37.1 – 45.28 |
| ಈಜಿಪ್ಟಿನಲ್ಲಿ ಇಸ್ರಯೇಲರು | – | 46.1 – 50.26 |


### ಭೂಮ್ಯಾಕಾಶಗಳ ಉಗಮ

**1** ಆದಿಯಲ್ಲಿ ದೇವರು ಪರಲೋಕ – ಭೂಲೋಕವನ್ನು ಸೃಷ್ಟಿಮಾಡಿದರು. 2ಭೂಮಿ ನಿರಾಕಾರವಾಗಿಯೂ ಬರಿದಾಗಿಯೂ ಇತ್ತು. ಆದಿ ಸಾಗರದ ಮೇಲೆ ಕಗ್ಗತ್ತಲು ಕವಿದಿತ್ತು. ದೇವರಾತ್ಮ ಜಲರಾಶಿಯ ಮೇಲೆ ಚಲಿಸುತ್ತಿತ್ತು.

3 ಆಗ ದೇವರು, "ಬೆಳಕಾಗಲಿ" ಎನ್ನಲು ಬೆಳಕಾಯಿತು. 4ದೇವರ ಕಣ್ಣಿಗೆ ಅದು ಚೆನ್ನಾಗಿ ಕಂಡಿತು. ಅವರು ಬೆಳಕನ್ನೂ ಕತ್ತಲೆಯನ್ನೂ ಬೇರೆಬೇರೆ ಮಾಡಿ ಬೆಳಕಿಗೆ ಹಗಲೆಂದೂ ಕತ್ತಲೆಗೆ ಇರುಳೆಂದೂ ಹೆಸರಿಟ್ಟರು. 5ಹೀಗೆ ಬೈಗೂ ಬೆಳಗೂ ಆಗಿ ಮೊದಲನೆಯ ದಿನವಾಯಿತು.

6 ಬಳಿಕ ದೇವರು, "ಜಲರಾಶಿಯ ನಡುವೆ ವಿಸ್ತಾರವಾದ ಒಂದು ಗುಮ್ಮಟವು ಉಂಟಾಗಲಿ, ಅದು ಕೆಳಗಿನ ನೀರನ್ನೂ ಮೇಲಿನ ನೀರನ್ನೂ ಬೇರೆ ಬೇರೆ ಮಾಡಲಿ," ಎಂದರು. ಹಾಗೆಯೇ ಆಯಿತು. 7ಹೀಗೆ ದೇವರು ವಿಸ್ತಾರವಾದ ಗುಮ್ಮಟವೊಂದನ್ನು ಮಾಡಿ ಕೆಳಗಿದ್ದ ನೀರನ್ನು ಮೇಲಿದ್ದ ನೀರಿನಿಂದ ವಿಂಗಡಿಸಿದರು. 8ದೇವರು ಆ ಗುಮ್ಮಟಕ್ಕೆ "ಆಕಾಶ" ಎಂದು ಹೆಸರಿಟ್ಟರು. ಹೀಗೆ ಬೈಗೂ ಬೆಳಗೂ ಆಗಿ ಎರಡನೆಯ ದಿನ ಆಯಿತು.

9 ಅನಂತರ ದೇವರು, "ಆಕಾಶದ ಕೆಳಗಿರುವ ನೀರೆಲ್ಲ ಒಂದೇ ಸ್ಥಳದಲ್ಲಿ ಕೂಡಿಕೊಳ್ಳಲಿ; ಒಣ ನೆಲವು ಕಾಣಿಸಿಕೊಳ್ಳಲಿ," ಎಂದರು. ಹಾಗೆಯೇ ಆಯಿತು. 10ದೇವರು ಒಣನೆಲಕ್ಕೆ "ಭೂಮಿ" ಎಂದೂ ಜಲರಾಶಿಗೆ "ಸಮುದ್ರ" ಎಂದೂ ಹೆಸರಿಟ್ಟರು. ದೇವರ ಕಣ್ಣಿಗೆ ಅದೂ ಚೆನ್ನಾಗಿ ಕಂಡಿತು.

11 ತರುವಾಯ ದೇವರು, "ಭೂಮಿಯಲ್ಲಿ ಸಸ್ಯಗಳನ್ನೂ – ಎಲ್ಲ ತರದ ದವಸಧಾನ್ಯ, ಹಣ್ಣು ಹಂಪಲು ಇವುಗಳನ್ನು ಬಿಡುವ ಗಿಡಮರ ಬಳ್ಳಿಗಳನ್ನೂ ಬೆಳೆಯಿಸಲಿ," ಎಂದರು. ಅದು ಹಾಗೆಯೇ ಆಯಿತು. 12ಭೂಮಿಯಲ್ಲಿ ಸಸ್ಯಗಳು ಬೆಳೆದವು; ಎಲ್ಲ ತರದ ದವಸಧಾನ್ಯಗಳನ್ನೂ ಹಣ್ಣು ಹಂಪಲುಗಳನ್ನೂ ಬಿಡುವ ಗಿಡಮರ ಬಳ್ಳಿಗಳು ಕಾಣಿಸಿಕೊಂಡವು. ದೇವರ ಕಣ್ಣಿಗೆ ಅವು ಚೆನ್ನಾಗಿ ಕಂಡವು. 13ಹೀಗೆ ಬೈಗೂ ಬೆಳಗೂ ಆಗಿ ಮೂರನೆಯ ದಿನವಾಯಿತು.

14 ಅದಾದನಂತರ ದೇವರು, "ಹಗಲು ಇರುಳುಗಳನ್ನು ಬೇರೆಬೇರೆ ಮಾಡಲು, ಋತು ಕಾಲಗಳನ್ನೂ ದಿನಸಂವತ್ಸರಗಳನ್ನೂ ಸೂಚಿಸಲು, ಹಾಗು 15ಭೂಮಿಗೆ ಬೆಳಕನ್ನೀಯಲು, ಆಕಾಶ ದೀಪಗಳು ಉಂಟಾಗಲಿ," ಎಂದರು. ಹಾಗೆಯೇ ಆಯಿತು. 16ಹಗಲನ್ನಾಳುವುದಕ್ಕೆ ಸೂರ್ಯನನ್ನೂ ಇರುಳನ್ನಾಳುವುದಕ್ಕೆ ಚಂದ್ರನನ್ನೂ, ಹೀಗೆ ಎರಡು ದೀವಿಗೆಗಳನ್ನು ಸೃಷ್ಟಿಮಾಡಿದರು. ಅದು ಮಾತ್ರವಲ್ಲ, ನಕ್ಷತ್ರಗಳನ್ನೂ ಅವರು ಸೃಷ್ಟಿ ಮಾಡಿದರು. 17ಆ ದೀವಿಗೆಗಳನ್ನು ಆಕಾಶದಲ್ಲಿ ಇಟ್ಟು ಭೂಮಿಗೆ ಬೆಳಕನ್ನೀಯುವಂತೆ ಮಾಡಿದರು. ಹಾಗೂ 18ಹಗಲಿರುಳುಗಳನ್ನು ಆಳುವುದಕ್ಕೂ, ಬೆಳಕನ್ನೂ ಕತ್ತಲನ್ನೂ ಬೇರೆಬೇರೆ ಮಾಡುವುದಕ್ಕೂ ಅವುಗಳನ್ನು ನೇಮಿಸಿದರು. ದೇವರ ಕಣ್ಣಿಗೆ ಅದೂ ಚೆನ್ನಾಗಿ ಕಂಡಿತು. 19ಹೀಗೆ ಬೈಗೂ ಬೆಳಗೂ ಆಗಿ ನಾಲ್ಕನೆಯ ದಿನ ಆಯಿತು.

20 ಆಮೇಲೆ ದೇವರು, "ಹಲವಾರು ಜಲ ಜಂತುಗಳು ನೀರಿನಲ್ಲಿ ತುಂಬಿಕೊಳ್ಳಲಿ, ಭೂಮಿ ಆಕಾಶಗಳ ನಡುವೆ ಪಕ್ಷಿಗಳು ಹಾರಾಡಲಿ," ಎಂದರು. 21ಈ ಪ್ರಕಾರ ದೇವರು ದೊಡ್ಡ ಜಲಚರಗಳನ್ನೂ ನೀರಿನಲ್ಲಿ ತುಂಬಿರುವ ನಾನಾ ವಿಧವಾದ ಜೀವಜಂತುಗಳನ್ನೂ ರೆಕ್ಕೆಗಳುಳ್ಳ ಸಕಲವಿಧವಾದ ಪಕ್ಷಿಗಳನ್ನೂ ಸೃಷ್ಟಿಮಾಡಿದರು. ದೇವರ ದೃಷ್ಟಿಗೆ ಅದೂ ಚೆನ್ನಾಗಿ ಕಂಡಿತು. 22ಅವುಗಳಿಗೆ ದೇವರು, "ನೀವು ಅಭಿವೃದ್ಧಿಯಾಗಿ ಹೆಚ್ಚಿರಿ; ಜಲಚರಗಳು ಸಮುದ್ರದ ನೀರಿನಲ್ಲಿ ತುಂಬಿಕೊಳ್ಳಲಿ, ಪಕ್ಷಿಗಳು ಭೂಮಿಯ ಮೇಲೆ ಹೆಚ್ಚಲಿ," ಎಂದು ಹೇಳಿ ಆಶೀರ್ವದಿಸಿದರು. 23ಹೀಗೆ ಬೈಗೂ ಬೆಳಗೂ ಆಗಿ ಐದನೆಯ ದಿನ ಆಯಿತು.

24 ಆ ಬಳಿಕ ದೇವರು, "ಭೂಮಿಯಿಂದ ಎಲ್ಲ ತರದ ಜೀವಜಂತುಗಳು ಸೃಷ್ಟಿಯಾಗಲಿ, ದೊಡ್ಡ – ಚಿಕ್ಕ ಸಾಕುಪ್ರಾಣಿಗಳೂ ಕಾಡು ಮೃಗಗಳೂ ಹುಟ್ಟಲಿ," ಎಂದರು. ಅಂತೆಯೇ ಆಯಿತು. 25ಎಲ್ಲ ತರದ ದೊಡ್ಡ – ಚಿಕ್ಕ ಕಾಡು ಮೃಗಗಳನ್ನೂ ಸಾಕುಪ್ರಾಣಿಗಳನ್ನೂ ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳನ್ನೂ ದೇವರು ಸೃಷ್ಟಿಮಾಡಿದರು. ಅವರ ನೋಟಕ್ಕೆ ಅದು ಚೆನ್ನಾಗಿ ಕಂಡಿತು.

26ಅದಾದನಂತರ ದೇವರು, "ನಮ್ಮಂತೆಯೇ ಇರುವ ಹಾಗು ನಮ್ಮನ್ನು ಹೋಲುವ, ಮನುಷ್ಯರನ್ನು ಉಂಟುಮಾಡೋಣ. ಅವರು ಸಮುದ್ರದಲ್ಲಿರುವ ಮೀನುಗಳ ಮೇಲೆಯೂ ಅಂತರಿಕ್ಷದಲ್ಲಿ ಹಾರಾಡುವ

ಪಕ್ಷಿಗಳ ಮೇಲೆಯೂ ದೊಡ್ಡ – ಚಿಕ್ಕ ಸಾಕುಪ್ರಾಣಿ ಹಾಗು ಕಾಡುಮೃಗಗಳ ಮೇಲೆಯೂ ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳ ಮೇಲೆಯೂ ದೊರೆತನ ಮಾಡಲಿ," ಎಂದರು. ಹೀಗೆ ದೇವರು:

27 ಸೃಷ್ಟಿಸಿದರು ನರರನ್ನು ತಮ್ಮ
ಹೋಲಿಕೆಯಲ್ಲಿ
ಸೃಷ್ಟಿಸಿದರವರನ್ನು ದೇವಾನುರೂಪದಲ್ಲಿ
ಸೃಷ್ಟಿಸಿದರವರನ್ನು ಸ್ತ್ರೀಪುರುಷರನ್ನಾಗಿ.

28 ಅವರನ್ನು ದೇವರು ಆಶೀರ್ವದಿಸಿ, "ನೀವು ಅಭಿವೃದ್ಧಿಯಾಗಿ, ಅನೇಕ ಮಕ್ಕಳನ್ನು ಪಡೆಯಿರಿ;
ಭೂಮಿಯಲ್ಲಿ ಹರಡಿಕೊಂಡು ಅದನ್ನು ವಶಪಡಿಸಿ ಕೊಳ್ಳಿರಿ; ಸಮುದ್ರದ ಮಿನುಗಳ ಮೇಲೆಯೂ ಆಕಾಶದ
ಪಕ್ಷಿಗಳ ಮೇಲೆಯೂ ಭೂಮಿಯಲ್ಲಿ ಚಲಿಸುವ ಎಲ್ಲ ಪ್ರಾಣಿಗಳ ಮೇಲೆಯೂ ದೊರೆತನ ಮಾಡಿರಿ.
[29]ಇನ್ನೂ, ಭೂಮಿಯಲ್ಲಿರುವ ಎಲ್ಲ ತರದ ದವಸ ಧಾನ್ಯಗಳನ್ನೂ ಹಣ್ಣು ಹಂಪಲುಗಳನ್ನೂ ನಿಮಗೆ
ಆಹಾರವಾಗಿ ಕೊಟ್ಟಿದ್ದೇನೆ. [30]ಇದಲ್ಲದೆ, ಭೂಮಿಯ ಮೇಲೆ ತಿರುಗಾಡುವ ದೊಡ್ಡ – ಚಿಕ್ಕ ಮೃಗಗಳಿಗೂ
ಆಕಾಶದಲ್ಲಿ ಹಾರಾಡುವ ಪಕ್ಷಿಗಳಿಗೂ ನೆಲದಲ್ಲಿ ಹರಿದಾಡುವ ಕ್ರಿಮಿ ಕೀಟಗಳಿಗೂ ಹುಲ್ಲು ಸೊಪ್ಪುಗಳನ್ನು
ಆಹಾರವಾಗಿ ಕೊಟ್ಟಿದ್ದೇನೆ," ಎಂದು ಹೇಳಿದರು. ಹಾಗೆಯೇ ಆಯಿತು. [31]ತಾವು ಸೃಷ್ಟಿಸಿದ ಎಲ್ಲವನ್ನು
ದೇವರು ನೋಡಿದರು. ಅವೆಲ್ಲವೂ ಬಹಳ ಚೆನ್ನಾಗಿತ್ತು. ಹೀಗೆ ಬೈಗೂ ಬೆಳಗೂ ಆಗಿ ಆರನೆಯ ದಿನ
ಆಯಿತು.

**2** ಪರಲೋಕ–ಭೂಲೋಕಗಳೂ ಅವುಗಳಲ್ಲಿ ಇರುವ ಸಮಸ್ತವೂ ಹೀಗೆ ನಿರ್ಮಿತವಾದವು. [2]ದೇವರು
ತಮ್ಮ ಸೃಷ್ಟಿಕಾರ್ಯವನ್ನು ಮುಗಿಸಿಬಿಟ್ಟು ಏಳನೆಯ ದಿನದಲ್ಲಿ ವಿಶ್ರಮಿಸಿಕೊಂಡರು. [3]ಆ ಏಳನೆಯ ದಿನವು
ಪರಿಶುದ್ಧವಾಗಿರಲಿ ಎಂದು ಆಶೀರ್ವದಿಸಿದರು. ತಮ್ಮ ಸೃಷ್ಟಿಕಾರ್ಯವನ್ನೆಲ್ಲ ಮುಗಿಸಿ ಆ ದಿನದಂದು
ವಿಶ್ರಮಿಸಿಕೊಂಡ ಕಾರಣ ಹಾಗೆ ಮಾಡಿದರು.

4 ಇತಿ, ಪರಲೋಕ – ಭೂಲೋಕಗಳ ನಿರ್ಮಾಣ ಚರಿತ್ರೆ.

### ಏದೆನ್ ಉದ್ಯಾನವನ

5 ದೇವರಾದ ಸರ್ವೇಶ್ವರ ಸ್ವಾಮಿ ಪರಲೋಕ – ಭೂಲೋಕಗಳನ್ನು ಸೃಷ್ಟಿ ಮಾಡಿದಾಗ ಯಾವ
ಗಿಡಗಳೂ ಭೂಮಿಯಲ್ಲಿ ಇರಲಿಲ್ಲ. ಯಾವ ಬೀಜವೂ ಮೊಳೆತಿರಲಿಲ್ಲ. ಏಕೆಂದರೆ ದೇವರಾದ ಸರ್ವೇಶ್ವರ
ಭೂಮಿಯ ಮೇಲೆ ಮಳೆಯನ್ನು ಸುರಿಸಿರಲಿಲ್ಲ. ಭೂಮಿಯನ್ನು ವ್ಯವಸಾಯ ಮಾಡಲು ಮನುಷ್ಯನೂ
ಇರಲಿಲ್ಲ. [6]ಆದರೂ ಭೂಮಿಯಿಂದ ನೀರು ಉಕ್ಕಿಬಂದು ನೆಲಕ್ಕೆ ನೀರೆರೆಯುತ್ತಿತ್ತು.

7ಹೀಗಿರಲು, ದೇವರಾದ ಸರ್ವೇಶ್ವರ ನೆಲದ ಮಣ್ಣಿನಿಂದ ಮನುಷ್ಯನನ್ನು ರೂಪಿಸಿ ಅವನ
ಮೂಗಿನಲ್ಲಿ ಜೀವಶ್ವಾಸವನ್ನು ಊದಿದರು. ಆಗ ಮನುಷ್ಯನು ಜೀವಾತ್ಮನಾದನು.

8ಇದಲ್ಲದೆ, ದೇವರಾದ ಸರ್ವೇಶ್ವರ ಪೂರ್ವ ದಿಕ್ಕಿನಲ್ಲಿರುವ ಏದೆನ್ ಪ್ರದೇಶದಲ್ಲಿ ಒಂದು
ಉದ್ಯಾನವನವನ್ನು ಮಾಡಿ ತಾವು ರೂಪಿಸಿದ ಮನುಷ್ಯನನ್ನು ಅದರಲ್ಲಿ ಇರಿಸಿದರು. [9]ನೋಟಕ್ಕೆ ರಮ್ಯವೂ
ಊಟಕ್ಕೆ ರುಚಿಕರವೂ ಆದ ನಾನಾ ತರದ ಮರಗಳನ್ನು ದೇವರಾದ ಸರ್ವೇಶ್ವರ ಅಲ್ಲಿ ಬೆಳೆಯ ಮಾಡಿದರು.
ಆ ವನದ ಮಧ್ಯದಲ್ಲಿ ಜೀವದಾಯಕ ವೃಕ್ಷವನ್ನು ಹಾಗು ಒಳಿತು – ಕೆಡಕುಗಳ ಅರಿವನ್ನು ಮೂಡಿಸುವ
ವೃಕ್ಷವನ್ನು ಬೆಳೆಯಿಸಿದರು.

10ಏದೆನ್ ಪ್ರದೇಶದಲ್ಲಿ ಒಂದು ನದಿ ಹುಟ್ಟಿ ಆ ವನಕ್ಕೆ ನೀರೆರೆಯುತ್ತಿತ್ತು. ಅದು ಅಲ್ಲಿಂದ ಹರಿದು
ಆಚೆಕಡೆ ನಾಲ್ಕು ಉಪನದಿಗಳಾಗಿ ಕವಲೊಡೆದಿತ್ತು. [11]ಮೊದಲನೆಯದರ ಹೆಸರು ಪೀಶೋನ್. ಇದು
ಬಂಗಾರ ದೊರಕುವ ದೇಶವನ್ನೆಲ್ಲಾ ಸುತ್ತಿ ಹರಿಯುತ್ತದೆ. ಆ ದೇಶದ ಬಂಗಾರ ಅಪ್ಪಟವಾದುದು.
[12]'ಬದೋಲಖ' ಎಂಬ ವಿಶೇಷ ಸಾಂಬ್ರಾಣಿ, 'ಗೋಮೇಧಿಕ' ಎಂಬ ರತ್ನವೂ ಅಲ್ಲಿ ದೊರಕುತ್ತವೆ. [13]ಎರಡನೆ

ನದಿಯ ಹೆಸರು ಗೀಹೋನ್, ಇದು ಕೂಷ್ ದೇಶವನ್ನೆಲ್ಲಾ ಸುತ್ತುತ್ತದೆ. [14]ಮೂರನೇ ನದಿಯ ಹೆಸರು ಟೈಗ್ರಿಸ್. ಇದು ಅಸ್ಸೀರಿಯಾ ದೇಶದ ಪೂರ್ವಕ್ಕೆ ಹರಿಯುತ್ತದೆ. ನಾಲ್ಕನೆಯದು ಯೂಫ್ರೆಟಿಸ್ ನದಿ.

15ದೇವರಾದ ಸರ್ವೇಶ್ವರ ಆ ಮನುಷ್ಯನನ್ನು ಕರೆದುಕೊಂಡು ಹೋಗಿ ಏದೆನ್ ವನವನ್ನು ಕೃಷಿ ಮಾಡುವುದಕ್ಕೂ ಕಾಯುವುದಕ್ಕೂ ಅದರಲ್ಲಿ ಬಿಟ್ಟರು.

16 ಇದಲ್ಲದೆ, ದೇವರಾದ ಸರ್ವೇಶ್ವರ ಆ ಮನುಷ್ಯನಿಗೆ "ನೀನು ಈ ತೋಟದಲ್ಲಿರುವ ಎಲ್ಲ ಮರಗಳ ಹಣ್ಣುಗಳನ್ನು ಯಥೇಚ್ಛವಾಗಿ ತಿನ್ನಬಹುದು. [17]ಆದರೆ ಒಳಿತು – ಕೆಡುಕುಗಳ ಅರಿವನ್ನು ಹುಟ್ಟಿಸುವ ಮರದ ಹಣ್ಣನ್ನು ಮಾತ್ರ ತಿನ್ನಬಾರದು; ತಿಂದೆಯಾದರೆ, ಅದೇ ದಿನ ಸತ್ತು ಹೋಗುವೆ," ಎಂದು ವಿಧಿಸಿದರು.

18 ಅನಂತರ ದೇವರಾದ ಸರ್ವೇಶ್ವರ, "ಮನುಷ್ಯನು ಒಂಟಿಯಾಗಿರುವುದು ಒಳ್ಳೆಯದಲ್ಲ, ಅವನಿಗೆ ಸರಿಬೀಳುವ ಸಹಕಾರಿಯನ್ನು ಸೃಷ್ಟಿ ಮಾಡುವೆನು," ಎಂದರು. [19]ಎಲ್ಲ ಭೂಜಂತುಗಳನ್ನೂ ಆಕಾಶದ ಪಕ್ಷಿಗಳನ್ನೂ ಮಣ್ಣಿನಿಂದ ನಿರ್ಮಿಸಿದ ಅವರು, ಮನುಷ್ಯನು ಇವುಗಳಿಗೆ ಏನೇನು ಹೆಸರಿಡುವನೋ ನೋಡೋಣವೆಂದು ಅವನ ಬಳಿಗೆ ಅವುಗಳನ್ನು ಬರಮಾಡಿದರು. ಆ ಮನುಷ್ಯನು ಒಂದೊಂದು ಪ್ರಾಣಿಗೆ ಯಾವ ಯಾವ ಹೆಸರಿಟ್ಟನೋ ಅದೇ ಅವುಗಳಿಗೆ ಹೆಸರು ಆಯಿತು. [20]ಹೀಗೆ ಮನುಷ್ಯನು ಎಲ್ಲ ಸಾಕು ಪ್ರಾಣಿಗಳಿಗೂ ಆಕಾಶದ ಪಕ್ಷಿಗಳಿಗೂ ಕಾಡು ಮೃಗಗಳಿಗೂ ಹೆಸರಿಟ್ಟನು; ಆದರೆ ಅವನಿಗೆ ಸರಿಬೀಳುವ ಜೊತೆಗಾತಿ ಅವುಗಳಲ್ಲಿ ಕಾಣಿಸಲಿಲ್ಲ.

21 ಹೀಗಿರುವಲ್ಲಿ ದೇವರಾದ ಸರ್ವೇಶ್ವರ ಆ ಮನುಷ್ಯನಿಗೆ ಗಾಢನಿದ್ರೆಯನ್ನು ಬರಮಾಡಿದರು. ಅವನು ನಿದ್ರಿಸುತ್ತಿರುವಾಗ ಅವನ ಪಕ್ಕೆಯ ಎಲುಬುಗಳಲ್ಲಿ ಒಂದನ್ನು ತೆಗೆದುಕೊಂಡು ಅದರ ಸ್ಥಳವನ್ನು ಮಾಂಸದಿಂದ ಮುಚ್ಚಿದರು. [22]ಆ ಎಲುಬನ್ನು ಮಹಿಳೆಯನ್ನಾಗಿ ಮಾಡಿ ಆಕೆಯನ್ನು ಅವನ ಬಳಿಗೆ ಬರಮಾಡಿದರು. [23]ಅವನು ಆಕೆಯನ್ನು ನೋಡಿ ಹೀಗೆಂದನು:

ಸರಿ, ನನಗೀಗ ಇವಳು
ನನ್ನೆಲುಬಿನ ಎಲುಬು, ನನ್ನೊಡಲಿನ ಒಡಲು
ನರನಿಂದ ಉತ್ಪತ್ತಿಯಾದಿವಳನ್ನು
ನಾರಿಯೆಂದೇ ಕರೆವರು.

24ಈ ಕಾರಣ, ಪುರುಷನು ತಂದೆತಾಯಿಗಳನ್ನು ಬಿಟ್ಟು ತನ್ನ ಹೆಂಡತಿಯನ್ನು ಸೇರಿಕೊಳ್ಳುವನು; ಅವರಿಬ್ಬರೂ ಒಂದೇ ಒಡಲಾಗಿ ಬಾಳುವರು.

25 ಆ ಸ್ತ್ರೀಪುರುಷರಿಬ್ಬರೂ ಬೆತ್ತಲೆ ಆಗಿದ್ದರೂ ನಾಚಿಕೊಳ್ಳಲಿಲ್ಲ.

## ಮಾನವನ ಪತನ

**3** ಸರ್ವೇಶ್ವರನಾದ ದೇವರು ಉಂಟುಮಾಡಿದ ಭೂಜಂತುಗಳಲ್ಲಿ ಅತಿ ಯುಕ್ತಿಉಳ್ಳದ್ದು ಸರ್ಪ. ಅದು ಮಹಿಳೆಯ ಬಳಿಗೆ ಬಂದು, "ಏನಮ್ಮಾ, ತೋಟದಲ್ಲಿರುವ ಯಾವ ಮರದ ಹಣ್ಣನ್ನೂ ತಿನ್ನಕೂಡದು ಎಂದು ದೇವರು ಆಜ್ಞೆ ಮಾಡಿರುವುದು ನಿಜವೋ"? ಎಂದು ಕೇಳಿತು.

2 ಅದಕ್ಕೆ ಆ ಮಹಿಳೆ, "ತೋಟದಲ್ಲಿರುವ ಮರಗಳ ಹಣ್ಣುಗಳನ್ನು ನಾವು ತಿನ್ನಬಹುದು; [3]ಆದರೆ ಅದರ ನಡುವೆಯಿರುವ ಈ ಮರದ ಹಣ್ಣನ್ನು ಮಾತ್ರ ತಿನ್ನಲೂ ಕೂಡದು, ಮುಟ್ಟಲೂ ಕೂಡದು, 'ತಿಂದರೆ ಸಾಯುವಿರಿ' ಎಂದು ದೇವರು ಹೇಳಿದ್ದಾರೆ," ಎಂದು ಉತ್ತರ ಕೊಟ್ಟಳು.

4ಆಗ ಆ ಸರ್ಪ, "ಆ ಮಾತು ನಿಜವಲ್ಲ, ನೀವು ಸಾಯುವುದು ಸುಳ್ಳು. [5]ಇದರ ಹಣ್ಣನ್ನು ತಿಂದ ಕೂಡಲೆ ನಿಮ್ಮ ಕಣ್ಣುಗಳು ತೆರೆಯುವುವು. ನೀವು ದೇವರಂತೆ ಆಗಿ ಒಳಿತು– ಕೆಡುಕುಗಳನ್ನರಿತ ಜ್ಞಾನಿಗಳು ಆಗಿಬಿಡುವಿರಿ. ಇದು ದೇವರಿಗೆ ಚೆನ್ನಾಗಿ ಗೊತ್ತುಂಟು," ಎಂದಿತು.

6 ಆಗ ಆ ಮಹಿಳೆ, “ಈ ಮರದ ಹಣ್ಣು ಊಟಕ್ಕೆ ಎಷ್ಟು ಚೆನ್ನಾಗಿದೆ, ನೋಟಕ್ಕೆ ಎಷ್ಟು
ರಮಣೀಯವಾಗಿದೆ, ಜ್ಞಾನಾರ್ಜನೆಗೆ ಎಷ್ಟು ಆಕರ್ಷಣೀಯವಾಗಿದೆ” ಎಂದು ತಿಳಿದು, ಅದನ್ನು
ತೆಗೆದುಕೊಂಡು ತಿಂದಳು; ಸಂಗಡವಿದ್ದ ಗಂಡನಿಗೂ ಕೊಟ್ಟಳು; ಅವನೂ ತಿಂದನು. 7ಕೂಡಲೆ ಅವರಿಬ್ಬರ
ಕಣ್ಣುಗಳು ತೆರೆದವು. ತಾವು ಬೆತ್ತಲೆ ಆಗಿದ್ದೇವೆಂದು ತಿಳಿದು ಅವರು ಅಂಜೂರದ ಎಲೆಗಳನ್ನು ಹೊಲಿದು
ಉಟ್ಟುಕೊಂಡರು.

8 ಅಂದು, ಸಂಜೆಯ ತಂಗಾಳಿಯಲ್ಲಿ, ಸರ್ವೇಶ್ವರನಾದ ದೇವರು ತೋಟದೊಳಗೆ ಸಂಚರಿಸುವ
ಸಪ್ಪಳವು ಕೇಳಿಸಿತು. ಅವರಿಗೆ ಕಾಣಿಸಿಕೊಳ್ಳಬಾರದೆಂದು ಆದಾಮನೂ ಹವ್ವಳೂ ಹಿಂದೆ ಅವಿತುಕೊಂಡರು.
9ಆದರೆ ಸರ್ವೇಶ್ವರನಾದ ದೇವರು, “ಎಲ್ಲಿರುತ್ತೀಯಾ?” ಎಂದು ಆದಾಮನನ್ನು ಕೂಗಿ ಕೇಳಿದರು.

10 ಅದಕ್ಕೆ ಅವನು, “ತಾವು ತೋಟದಲ್ಲಿ ಸಂಚರಿಸುವ ಸಪ್ಪಳವು ಕೇಳಿಸಿತು; ಬೆತ್ತಲೆಯಾಗಿದ್ದೇನಲ್ಲಾ
ಎಂದು ಹೆದರಿ ಅವಿತುಕೊಂಡೆ,” ಎಂದನು.

11 “ನೀನು ಬೆತ್ತಲೆಯಾಗಿರುತ್ತಿಯೆಂದು ನಿನಗೆ ತಿಳಿಸಿದವರು ಯಾರು?” ಎಂದು ಕೇಳಿದರು.

12 ಅದಕ್ಕೆ ಆದಾಮನು, “ನನ್ನ ಜೊತೆಯಲ್ಲಿ ಇರಲು ತಾವು ಕೊಟ್ಟ ಮಹಿಳೆ ಆ ಮರದ ಹಣ್ಣನ್ನು
ನನಗೆ ಕೊಟ್ಟಳು; ನಾನು ತಿಂದೆ,” ಎಂದನು.

13 ಸರ್ವೇಶ್ವರನಾದ ದೇವರು ಈ ಮಹಿಳೆಯನ್ನು, “ಇದೇನು ನೀನು ಮಾಡಿದ್ದು?” ಎಂದು ಕೇಳಲು
ಆಕೆ, “ಸರ್ಪವು ನನ್ನನ್ನು ವಂಚಿಸಿ ತಿನ್ನುವಂತೆ ಮಾಡಿತು,” ಎಂದು ಉತ್ತರ ಕೊಟ್ಟಳು.

## ದೇವರು ಕೊಟ್ಟ ಶಾಪ

14 ಆಗ, ಸರ್ವೇಶ್ವರನಾದ ದೇವರು,
ಇಂತೆಂದರು ಸರ್ಪಕ್ಕೆ:
“ಈ ಪರಿಯ ಕೃತ್ಯವನ್ನು
ನೀನೆಸಗಿದುದರಿಂದ
ಶಾಪಗ್ರಸ್ತನಾದೆ ಎಲ್ಲ ಪಶು
ಪ್ರಾಣಿಗಳಿಗಿಂತ;
ಹರಿದಾಡುವೆ ಹೊಟ್ಟೆಯ ಮೇಲೆ
ಇಂದಿನಿಂದ
ತಿನ್ನುವೆ ಮಣ್ಣನೆ ಜೀವಮಾನ
ಪರಿಯಂತ.
15 ಹಗೆತನವಿರಿಸುವೆನು ನಿನಗೂ ಈ
ಮಹಿಳೆಗೂ
ನಿನ್ನ ಸಂತಾನಕ್ಕೂ ಇವಳ
ಸಂತಾನಕ್ಕೂ.
ಜಜ್ಜುವುದಿವಳ ಸಂತಾನ ನಿನ್ನ
ತಲೆಯನ್ನು
ಕಚ್ಚುವೆ ನೀನಾ ಸಂತಾನದ
ಹಿಮ್ಮಡಿಯನು.”
16 ಬಳಿಕ ಆ ಮಹಿಳೆಗೆ:
“ಹೆಚ್ಚಿಸುವೆನು ಪ್ರಸವಕಾಲದ
ನಿನ್ನ ವೇದನೆಯನ್ನು;
ಹೆರುವೆ ನೀನು ಸಂಕಷ್ಟದಿಂದಲೇ

ಮಕ್ಕಳನ್ನು.
ಆದರೂ ನಿನಗಿರುವುದು ಗಂಡನ ಬಯಕೆ
ಒಳಗಾಗುವೆ ನೀನು ಆತನ ಒಡೆತನಕ್ಕೆ."
17 ಅನಂತರ ಆದಾಮನಿಗೆ:
"ತಿನ್ನಬಾರದೆಂದು ನಾ ವಿಧಿಸಿದ
ಮರದ ಹಣ್ಣನ್ನು
ತಿಂದೆ ನೀನು, ಕೇಳಿ ನಿನ್ನಾ
ಮಡದಿಯ ಮಾತನ್ನು.
ಇದಕಾರಣ ಹಾಕಿರುವೆನು ಶಾಪ
ಹೊಲನೆಲಕ್ಕೆ
ದುಡಿವೆ ನೀನು ಜೀವಮಾನವಿಡೀ
ಅದರ ಕೃಷಿಗೆ.
18 ಬೆಳಸುವುದದು ಅತುಳ ಕಳೆಯನ್ನು,
ಮುಳ್ಳುಗಿಡಗಳನ್ನು
ತಿನ್ನಬೇಕಾಗುವುದು ನೀನು ಬೈಲಿನ
ಬೆಳೆಯನ್ನು.
19 ನೀನುತ್ಪತ್ತಿಯಾದ ಮಣ್ಣಿಗೆ ಮರಳಿ
ಸೇರುವ ತನಕ
ಗಳಿಸಬೇಕು ಕವಳವನ್ನು
ನೆತ್ತಿ ಬೆವರಿಡುತ.
ಮಣ್ಣಿನಿಂದಲೇ ಬಂದವನು ನೀನು
ಮರಳಿ ಮಣ್ಣಿಗೆ ಸೇರತಕ್ಕವನು."

20 ಆದಾಮನು ತನ್ನ ಹೆಂಡತಿಗೆ "ಹವ್ವ" ಎಂದು ಹೆಸರಿಟ್ಟನು. ಏಕೆಂದರೆ ಮಾವನಕುಲಕ್ಕೆ ಮೂಲಮಾತೆ ಆಕೆ. 21ಸರ್ವೇಶ್ವರನಾದ ದೇವರು ಆದಾಮನಿಗೂ ಆತನ ಹೆಂಡತಿಗೂ ಚರ್ಮದ ಅಂಗಿಗಳನ್ನು ಮಾಡಿ ತೊಡಿಸಿದರು.

22 ಸರ್ವೇಶ್ವರನಾದ ದೇವರು, "ಮನುಷ್ಯನು ಈಗ ನಮ್ಮಲ್ಲಿ ಒಬ್ಬರಂತೆ ಒಳಿತು – ಕೆಡುಕುಗಳ ಜ್ಞಾನವನ್ನು ಪಡೆದುಬಿಟ್ಟಿದ್ದಾನೆ. ಇನ್ನು ಅಮರ ಜೀವಿಯಾಗಲು ಜೀವವೃಕ್ಷದ ಹಣ್ಣಿಗೆ ಕೈ ಚಾಚಿ ಬಿಡಬಾರದು," ಎಂದುಕೊಂಡರು. 23ಅವನು ಉತ್ಪತ್ತಿಯಾದ ಭೂಮಿಯನ್ನೇ ವ್ಯವಸಾಯ ಮಾಡಲೆಂದು ಏದೆನ್ ತೋಟದಿಂದ ಹೊರಡಿಸಿ ಬಿಟ್ಟರು. 24ಅದಲ್ಲದೆ, ಜೀವವೃಕ್ಷಕ್ಕೆ ಹೋಗುವ ದಾರಿಯನ್ನು ಕಾಯುವುದಕ್ಕಾಗಿ ಆ ವನದ ಪೂರ್ವದಿಕ್ಕಿನಲ್ಲೆ 'ಕೆರೂಬಿ'ಯರನ್ನೂ ಪ್ರಜ್ವಲಿಸುತ್ತಾ ಎಲ್ಲ ಕಡೆ ಸುತ್ತುವ ಕತ್ತಿಯನ್ನೂ ಇರಿಸಿದರು.

### ಕಾಯಿನನಿಂದ ಹೇಬೆಲನ ಕೊಲೆ

**4** ಆದಾಮನು ತನ್ನ ಹೆಂಡತಿಯ ಜೊತೆಕೂಡಲು ಆಕೆ ಗರ್ಭಿಣಿಯಾಗಿ ಕಾಯಿನನನ್ನು ಹೆತ್ತಳು. "ಸರ್ವೇಶ್ವರಸ್ವಾಮಿಯ ಅನುಗ್ರಹದಿಂದ ಒಂದು ಗಂಡು ಮಗುವನ್ನು ಪಡೆದಿದ್ದೇನೆ" ಎಂದಳು. 2ತರುವಾಯ ಅವನ ತಮ್ಮನಾದ ಹೇಬೆಲನಿಗೆ ಜನ್ಮವಿತ್ತಳು. ಹೇಬೆಲನು ಕುರಿಗಾಹಿಯಾದನು; ಕಾಯಿನನು ವ್ಯವಸಾಯಗಾರನಾದನು. 3ಕ್ರಮೇಣ ಕಾಯಿನನು ತಾನು ಬೆಳೆಸಿದ ಫಸಲಲ್ಲಿ ಕೆಲವನ್ನು ತಂದು ಸರ್ವೇಶ್ವರ ಸ್ವಾಮಿಗೆ ಕಾಣಿಕೆಯಾಗಿ ಸಮರ್ಪಿಸಿದನು. 4ಅಂತೆಯೇ, ಹೇಬೆಲನು ತನ್ನ ಹಿಂಡಿನಿಂದ ಚೊಚ್ಚಲ ಕುರಿಗಳನ್ನು ಕಾಣಿಕೆಯಾಗಿ ತಂದು ಅವುಗಳ ಕೊಬ್ಬನ್ನು ಸಮರ್ಪಿಸಿದನು. 5ಸರ್ವೇಶ್ವರ ಹೇಬೆಲನನ್ನೂ ಅವನ

ಕಾಣಿಕೆಯನ್ನೂ ಮೆಚ್ಚಿಕೊಂಡರು; ಆದರೆ ಕಾಯಿನನನ್ನೂ ಅವನ ಕಾಣಿಕೆಯನ್ನೂ ಮೆಚ್ಚಲಿಲ್ಲ. ಇದರಿಂದ
ಕಾಯಿನನು ಕಡುಗೋಪಗೊಂಡನು; ಅವನ ಮುಖ ಸಿಂಡರಿಸಿತು. 6ಆಗ ಸರ್ವೇಶ್ವರ ಕಾಯಿನನಿಗೆ,
"ಕೋಪವೇಕೆ? ಮುಖ ಸಿಂಡರಿಸಿದೆ ಏಕೆ? 7ನೀನು ಒಳಿತನ್ನು ಮಾಡಿದ್ದರೆ ತಲೆ ಎತ್ತುತ್ತಿದ್ದೆ; ಕೆಡುಕನ್ನು
ಮಾಡಿದ್ದರಿಂದ ಪಾಪವು ಹೊಸ್ತಿಲಲ್ಲಿ ಹೊಂಚು ಹಾಕುತ್ತಿದೆ; ಅದು ನಿನ್ನನ್ನು ಬಯಸುತ್ತಿದೆ. ನೀನು ಅದನ್ನು
ಜಯಿಸಬೇಕು," ಎಂದರು.

8 ಬಳಿಕ ಕಾಯಿನನು ತಮ್ಮ ಹೇಬೆಲನಿಗೆ, "ಹೊಲಕ್ಕೆ ಹೋಗೋಣ ಬಾ", ಎಂದು ಕರೆದನು.
ಅವರಿಬ್ಬರೂ ಅಲ್ಲಿಗೆ ಬಂದಾಗ ಕಾಯಿನನು ತಮ್ಮನ ಮೇಲೆ ಬಿದ್ದು ಅವನನ್ನು ಕೊಂದನು. 9"ನಿನ್ನ
ತಮ್ಮನೆಲ್ಲಿ?" ಎಂದು ಸರ್ವೇಶ್ವರ ಕೇಳಿದಾಗ "ನಾನರಿಯೆ, ನನ್ನ ತಮ್ಮನಿಗೆ ನಾನೇನು ಕಾವಲುಗಾರನೋ?"
ಎಂದು ಕಾಯಿನನು ಉತ್ತರ ಕೊಟ್ಟನು.

10 ಆಗ ಸರ್ವೇಶ್ವರ, "ನೀನು ಎಂಥ ಕೃತ್ಯ ಎಸಗಿದೆ? ಪ್ರತೀಕಾರಕ್ಕಾಗಿ ನೆಲದಿಂದ ನಿನ್ನ ತಮ್ಮನ
ರಕ್ತ ಕೂಗಿ ನನಗೆ ಮೊರೆಯಿಡುತ್ತಿದೆ, ಕೇಳು. 11ನಿನ್ನ ಕೈ ಸುರಿಸಿದ ನಿನ್ನ ತಮ್ಮನ ರಕ್ತವನ್ನು ಕುಡಿದ ಈ
ನೆಲದಿಂದಾಗಿ ನೀನು ಶಾಪಗ್ರಸ್ತನು; ತಿರಸ್ಕೃತನು. 12ಇದನ್ನು ನೀನು ವ್ಯವಸಾಯ ಮಾಡಿದರೂ ಇನ್ನು ಮುಂದೆ
ಇದು ಫಲ ಕೊಡುವುದಿಲ್ಲ. ನೆಲೆಯಿಲ್ಲದೆ ನೀನು ಲೋಕದಲ್ಲಿ ಅಲೆಮಾರಿಯಾಗಿರಬೇಕು," ಎಂದರು.

13 ಅದಕ್ಕೆ ಕಾಯಿನನು, "ಸರ್ವೇಶ್ವರಾ, ಈ ಶಿಕ್ಷೆ ನನ್ನಿಂದ ಸಹಿಸಲಾಗದಷ್ಟು ಕಠಿಣ. 14ಈ ನಾಡಿನಿಂದ
ನನ್ನನ್ನು ಹೊರದೂಡುತ್ತಿರುವಿರಿ, ತಮ್ಮ ಸಾನ್ನಿಧ್ಯ ನನಗಿನ್ನು ದೊರಕದು; ನೆಲೆ ಇಲ್ಲದ ನಾನು ಲೋಕದಲ್ಲಿ
ಅಲೆಮಾರಿಯಾಗಿರಬೇಕು; ಕಂಡ ಕಂಡವರೆಲ್ಲರು ನನ್ನನ್ನು ಕೊಲ್ಲುವರು," ಎಂದು ಹೇಳಿದನು.

15 ಅದಕ್ಕೆ ಸರ್ವೇಶ್ವರ, "ಇಲ್ಲ, ಕಾಯಿನನ ಪ್ರಾಣವನ್ನು ತೆಗೆದವನಿಗೆ ಏಳ್ಮಡಿ ದಂಡನೆ ಆಗುವುದು,"
ಎಂದು ಹೇಳಿ, ಅವನನ್ನು ಕಂಡವರು ಕೊಲ್ಲದಂತೆ ಅವನ ಮೇಲೆ ಒಂದು ಗುರುತನ್ನು ಇಟ್ಟರು. 16ಕಾಯಿನನು
ಸರ್ವೇಶ್ವರಸ್ವಾಮಿಯ ಸಾನ್ನಿಧ್ಯದಿಂದ ಹೊರಟು ಹೋಗಿ ಏದೆನ್ ನಾಡಿಗೆ ಪೂರ್ವಕ್ಕಿರುವ "ಅಲೆನಾಡು"
ಎಂಬ ನಾಡಿನಲ್ಲಿ ವಾಸಮಾಡಿದನು.

### ಕಾಯಿನನ ಸಂತತಿ

17 ಕಾಯಿನನು ತನ್ನ ಹೆಂಡತಿಯ ಜೊತೆ ಕೂಡಲು ಆಕೆ ಗರ್ಭಿಣಿಯಾಗಿ ಹನೋಕನನ್ನು ಹೆತ್ತಳು.
ತಾನು ಕಟ್ಟಿದ ಊರಿಗೆ ಕಾಯಿನನು 'ಹನೋಕ' ಎಂದು ತನ್ನ ಮಗನ ಹೆಸರನ್ನೇ ಇಟ್ಟನು. 18ಹನೋಕನಿಗೆ
ಈರಾದನು ಹುಟ್ಟಿದನು. ಈರಾದನಿಗೆ ಮೆಹೂಯಾಯೇಲನು ಹುಟ್ಟಿದನು. ಮೆಹೂಯಾಯೇಲನಿಗೆ
ಮೆತೂಷಾಯೇಲನು, ಮೆತೂಷಾಯೇಲನಿಗೆ ಲೆಮೆಕನು ಹುಟ್ಟಿದರು.

19 ಲೆಮೆಕನಿಗೆ 'ಆದಾ' ಹಾಗು 'ಚಿಲ್ಲಾ' ಎಂಬ ಇಬ್ಬರು ಹೆಂಡಿರು. 20ಆದಾಳು ಯಾಬಾಲನನ್ನು
ಹೆತ್ತಳು. ಗುಡಾರಗಳಲ್ಲಿದ್ದು ದನಕರುಗಳನ್ನು ಸಾಕುವವರಿಗೆ ಇವನೇ ಮೂಲಪುರುಷ. 21ಇವನ ತಮ್ಮನ
ಹೆಸರು ಯೂಬಾಲ. ಇವನು ಕಿನ್ನರಿ ಕೊಳಲುಗಳನ್ನು ನುಡಿಸುವವರಿಗೆ ಮೂಲ ಪುರುಷ. 22ಚಿಲ್ಲಾ
ಎಂಬುವಳು ತೂಬಲ್ ಕಾಯಿನನಿಗೆ ಜನ್ಮವಿತ್ತಳು. ಇವನು ಕಬ್ಬಿಣ, ಹಿತ್ತಾಳೆ ಆಯುಧಗಳನ್ನು ಮಾಡುವ
ಕುಲುಮೆಗಾರರಿಗೆ ಮೂಲ ಪುರುಷ. ತೂಬಲ್ ಕಾಯಿನನ ತಂಗಿಯ ಹೆಸರು ನಯಮಾ. 23ಲೆಮೆಕನು ತನ್ನ
ಹೆಂಡತಿಯರಿಗೆ ಹೀಗೆಂದನು:

ಆದಾ, ಚಿಲ್ಲಾ, ಕೇಳಿ ನಾನು ಹೇಳುವುದನ್ನು
ಲೆಮೆಕನ ಸತಿಯರೇ, ಆಲಿಸಿ ನನ್ನ ಮಾತನ್ನು
ನಾ ಹತಮಾಡಿದೆ ನನಗೆ
ಗಾಯಮಾಡಿದವನನ್ನು
ನಾ ಕೊಂದೆ ನನ್ನನ್ನು ಹೊಡೆದಾ
ಪ್ರಾಯದವನನ್ನು.
24 ಕಾಯಿನನನ್ನು ಕೊಂದವನಿಗೆ
ಆಗುವುದಾದರೆ ಪ್ರತೀಕಾರ ಏಳ್ಮಡಿ

ಲೆಮೆಕನನ್ನು ಕೊಂದವನಿಗೆ
ಆಗುವುದು ಪ್ರತೀಕಾರ ಎಪ್ಪತ್ತೇಳ್ಮಡಿ.

### ‘ಸೇತ್’ ಮತ್ತು ಅವನ ಹೆಂಡತಿ

25 ಆದಾಮ್ ಮತ್ತು ಅವನ ಹೆಂಡತಿಗೆ ಮತ್ತೊಂದು ಗಂಡುಮಗು ಆಯಿತು. ಆಕೆ, “ಕಾಯಿನನು
ಕೊಂದುಹಾಕಿದ ಹೇಬೆಲನಿಗೆ ಬದಲಾಗಿ ದೇವರು ನನಗೆ ಬೇರೆ ಸಂತಾನವನ್ನು ಅನುಗ್ರಹಿಸಿದ್ದಾರೆ,”
ಎಂದುಕೊಂಡು ಅವನಿಗೆ “ಸೇತ್” ಎಂದು ನಾಮಕರಣ ಮಾಡಿದಳು. 26ತರುವಾಯ ಸೇತನು ಸಹ ಒಬ್ಬ
ಮಗನನ್ನು ಪಡೆದು ಅವನಿಗೆ “ಏನೋಷ್” ಎಂದು ಹೆಸರಿಟ್ಟನು. ಜನರು “ಸರ್ವೇಶ್ವರ” ಎಂಬ ಹೆಸರನ್ನು
ಆರಾಧಿಸುವುದಕ್ಕೆ ಪ್ರಾರಂಭಿಸಿದ್ದು ಆ ಕಾಲದಲ್ಲಿಯೇ.

### ಆದಾಮನ ವಂಶಾವಳಿ

(1 ಪೂರ್ವ 1.1–4)

**5** ಆದಾಮನ ವಂಶದವರ ಚರಿತ್ರೆ: ಸೃಷ್ಟಿ ಕಾಲದಲ್ಲಿ ದೇವರು ಮಾನವನನ್ನು ತಮ್ಮ ಹೋಲಿಕೆ ಯಂತೆಯೇ
ಸೃಷ್ಟಿಮಾಡಿದರು. 2ಅವರನ್ನು ಗಂಡನ್ನಾಗಿಯೂ ಹೆಣ್ಣನ್ನಾಗಿಯೂ ಮಾಡಿದರು. ಅಂದೇ ಅವರನ್ನು
ಆಶೀರ್ವದಿಸಿ ಅವರಿಗೆ ‘ಮನುಷ್ಯ’ರೆಂದು ಹೆಸರಿಟ್ಟರು.

3 ಆದಾಮನು 130 ವರ್ಷದವನಾದಾಗ ರೂಪದಲ್ಲಿ ತನ್ನಂತೆಯೇ ಇದ್ದ ಮಗನನ್ನು ಪಡೆದು
ಅವನಿಗೆ ಸೇತನೆಂದು ಹೆಸರಿಟ್ಟನು. 4ಸೇತನು ಹುಟ್ಟಿದ ಮೇಲೆ ಆದಾಮನು 800 ವರ್ಷ ಬದುಕಿದನು.
ಅವನಿಗೆ ಬೇರೆ ಗಂಡು ಮತ್ತು ಹೆಣ್ಣುಮಕ್ಕಳು ಇದ್ದರು. 5ಸತ್ತಾಗ ಅವನಿಗೆ 930 ವರ್ಷಗಳಾಗಿದ್ದವು.

6 ಸೇತನು 105 ವರ್ಷದವನಾದಾಗ ಎನೋಷನನ್ನು ಪಡೆದನು. 7ಎನೋಷನು ಹುಟ್ಟಿದ ಮೇಲೆ
ಅವನು 807 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳೂ ಇದ್ದರು. 8ಸತ್ತಾಗ
ಅವನಿಗೆ 912 ವರ್ಷಗಳಾಗಿದ್ದವು.

9 ಎನೋಷನು 90 ವರ್ಷದವನಾದಾಗ ಕೇನಾನನ್ನು ಪಡೆದನು. 10ಕೇನಾನನು ಹುಟ್ಟಿದ ಮೇಲೆ
ಎನೋಷನು 815 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳೂ ಇದ್ದರು. 11ಸತ್ತಾಗ
ಅವನಿಗೆ ಒಟ್ಟು 905 ವರ್ಷಗಳಾಗಿದ್ದವು.

12 ಕೇನಾನನು 70 ವರ್ಷದವನಾದಾಗ ಮಹಲಲೇಲನನ್ನು ಪಡೆದನು. 13ಮಹಲಲೇಲನು
ಹುಟ್ಟಿದಮೇಲೆ ಕೇನಾನನು 840 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳಿದ್ದರು.
14ಸತ್ತಾಗ ಅವನಿಗೆ ಒಟ್ಟು 910 ವರ್ಷಗಳಾಗಿದ್ದವು.

15 ಮಹಲಲೇಲನು 65 ವರ್ಷದವನಾದಾಗ ಯೆರೆದನನ್ನು ಪಡೆದನು. 16ಯೆರೆದನು ಹುಟ್ಟಿದ
ಮೇಲೆ ಮಹಲಲೇಲನು 830 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳಿದ್ದರು.
17ಸತ್ತಾಗ ಅವನಿಗೆ ಒಟ್ಟು 895 ವರ್ಷಗಳಾಗಿದ್ದುವು.

18 ಯೆರೆದನು 162 ವರ್ಷದವನಾದಾಗ ಹನೋಕನನ್ನು ಪಡೆದನು. 19ಹನೋಕನು ಹುಟ್ಟಿದ ಮೇಲೆ
ಯೆರೆದನು 800 ವರ್ಷ ಬದುಕಿನು. 20ಸತ್ತಾಗ ಅವನಿಗೆ ಒಟ್ಟು 962 ವರ್ಷಗಳಾಗಿದ್ದವು.

21 ಹನೋಕನು 65 ವರ್ಷದವನಾದಾಗ ಮೆತೂಷೆಲಹನನ್ನು ಪಡೆದನು. 22ಮೆತೂಷೆಲಹನು
ಹುಟ್ಟಿದ ಮೇಲೆ ಹನೋಕನು ದೇವರಲ್ಲಿ ಅನ್ಯೋನ್ಯತೆಯಿಂದ 300 ವರ್ಷ ಬದುಕಿದನು. ಅವನಿಗೆ ಬೇರೆ
ಗಂಡು ಮತ್ತು ಹೆಣ್ಣು ಮಕ್ಕಳಿದ್ದರು. 23ಅವನು ಬದುಕಿದ ಕಾಲವೆಲ್ಲ 365 ವರ್ಷಗಳು. 24ಹನೋಕ

ದೇವರೊಂದಿಗೆ ಅನ್ಯೋನ್ಯವಾಗಿ ನಡೆದುಕೊಳ್ಳುತ್ತಾ ಇದ್ದಾಗ ದೇವರು ಅವನನ್ನು ಕರೆದುಕೊಂಡ ಕಾರಣ ಕಣ್ಮರೆಯಾದನು.

25 ಮೆತೂಷೆಲಹನು 187 ವರ್ಷದವನಾದಾಗ ಲೆಮೆಕನನ್ನು ಪಡೆದನು. [26]ಲೆಮೆಕನು ಹುಟ್ಟಿದ ಮೇಲೆ 782 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳಿದ್ದರು. [27]ಸತ್ತಾಗ ಅವನಿಗೆ ಒಟ್ಟು 969 ವರ್ಷಗಳಾಗಿದ್ದವು.

28 ಲೆಮೆಕನು 182 ವರ್ಷದವನಾದಾಗ ಒಬ್ಬ ಮಗನನ್ನು ಪಡೆದನು. [29]ಪ್ರಭು ಶಪಿಸಿದ ಭೂಮಿಯಲ್ಲಿ ನಾವು ಕೈಕೆಸರಾಗಿಸಿಕೊಂಡು ಪಡುವ ಶ್ರಮೆಯಲ್ಲಿ ಈ ಮಗನು ಉಪಶಮನ ತರುವನು ಎಂದುಕೊಂಡು ಅವನಿಗೆ ನೋಹ ಎಂದು ಹೆಸರಿಟ್ಟನು. [30]ನೋಹನು ಹುಟ್ಟಿದ ಮೇಲೆ ಲೆಮೆಕನು 595 ವರ್ಷ ಬದುಕಿದನು. ಅವನಿಗೆ ಬೇರೆ ಗಂಡು ಮತ್ತು ಹೆಣ್ಣು ಮಕ್ಕಳಿದ್ದರು. [31]ಸತ್ತಾಗ ಅವನಿಗೆ ಒಟ್ಟು 777 ವರ್ಷಗಳಾಗಿದ್ದವು. [32]ನೋಹನು 500 ವರ್ಷದವನಾದಾಗ ಶೆಮ್, ಹಾಮ್ ಯೆಫೆತ್ ಎಂಬ ಮೂರು ಮಂದಿ ಮಕ್ಕಳನ್ನು ಪಡೆದನು.

### ಮಾನವರ ದುರ್ನಡತೆ

**6** ಮಾನವಕುಲವು ಜಗದ ಮೇಲೆ ಹಬ್ಬಿ ಹರಡಿದಂತೆ ಅವರಿಗೆ ಹೆಣ್ಣು ಮಕ್ಕಳು ಹುಟ್ಟಿದರು. [2]ಈ ಮನುಷ್ಯ ಪುತ್ರಿಯರ ಚೆಲುವನ್ನು ಕಂಡು ದೇವಪುತ್ರರು ತಮಗೆ ಇಷ್ಟ ಬಂದವರನ್ನೆಲ್ಲ ಮದುವೆಯಾದರು. [3]ಆಗ ಸರ್ವೇಶ್ವರಸ್ವಾಮಿ, “ನನ್ನ ಆತ್ಮವು ಮನುಷ್ಯನಿಗೆ ಶಾಶ್ವತವಾಗಿ ಹೊಣೆಯಾಗಿರಲಾರದು; ಭ್ರಷ್ಟರಾದ ಅವರು ಮರ್ತ್ಯರು. ಅವರ ಆಯುಷ್ಯ ಕೇವಲ ನೂರಿಪ್ಪತ್ತು ವರ್ಷ ಇರಲಿ” ಎಂದರು. [4]ದೇವಪುತ್ರರೂ ಮನುಷ್ಯ ಪುತ್ರಿಯರೂ ಕೂಡಿ ಮಕ್ಕಳು ಹುಟ್ಟಿದರು. ಆ ಕಾಲದಿಂದಲೂ ಅದಾದನಂತರವೂ ಜಗದಲ್ಲಿ ‘ನೆಫೀಲಿಯರು’ ಇದ್ದರು. ಇವರೇ ಪ್ರಾಚೀನ ಕಾಲದ ಸುಪ್ರಸಿದ್ಧ ಪರಾಕ್ರಮಿಗಳು.

5 ಜಗತ್ತಿನಲ್ಲಿ ಮನುಜರ ಕೆಟ್ಟತನವು ಹೆಚ್ಚುತ್ತಲೇ ಇತ್ತು. ಅವರ ಮನದಾಲೋಚನೆಗಳು ಸದಾ ಕೆಟ್ಟದಾಗಿದ್ದವು. [6]ಇದನ್ನು ಕಂಡ ಸರ್ವೇಶ್ವರ ಮನುಜನನ್ನು ಇಲ್ಲಿ ಸೃಷ್ಟಿಮಾಡಿದ್ದಕ್ಕಾಗಿ ವ್ಯಥೆಪಟ್ಟು, [7]“ನಾನು ಸೃಷ್ಟಿಸಿದ ಮಾನವರನ್ನು ಈ ಜಗದಿಂದ ಅಳಿಸಿಬಿಡುತ್ತೇನೆ. ಅವರೊಂದಿಗೆ ಪ್ರಾಣಿಪಕ್ಷಿಗಳನ್ನು, ಕ್ರಿಮಿಕೀಟಗಳನ್ನು ಅಳಿಸಿ ಹಾಕುತ್ತೇನೆ. ಅವುಗಳನ್ನು ಉಂಟುಮಾಡಿದ್ದಕ್ಕಾಗಿ ನನಗೆ ದುಃಖವಾಗುತ್ತಿದೆ,” ಎಂದುಕೊಂಡರು. [8]ಆದರೆ ನೋಹನ ವಿಷಯದಲ್ಲಿ ಸರ್ವೇಶ್ವರಸ್ವಾಮಿಗೆ ಮೆಚ್ಚುಗೆಯಿತ್ತು.

### ನೋಹನ ಚರಿತ್ರೆ

9 ನೋಹನ ಚರಿತ್ರೆಯಿದು: ಆತ ಸತ್ಪುರುಷ. ಅವನಂಥ ನಿರ್ದೋಷಿ ಆ ಕಾಲದಲ್ಲಿ ಯಾರೂ ಇರಲಿಲ್ಲ. ದೇವರೊಡನೆ ಆತ ಅನ್ಯೋನ್ಯವಾಗಿ ನಡೆದುಕೊಳ್ಳುತ್ತಿದ್ದ. [10]ಆತನಿಗೆ ಶೇಮ್, ಹಾಮ್ ಮತ್ತು ಯೆಫೆತ್ ಎಂಬ ಮೂರು ಮಂದಿ ಮಕ್ಕಳು. [11]ಜಗತ್ತು ದೇವರ ದೃಷ್ಟಿಯಲ್ಲಿ ಕೆಟ್ಟುಹೋಗಿತ್ತು; ಹಿಂಸಾಚಾರದಿಂದ ತುಂಬಿತುಳುಕುತ್ತಿತ್ತು. [12]ಭೂ ನಿವಾಸಿಗಳೆಲ್ಲರು ತಮ್ಮ ನಡತೆಯನ್ನು ಕೆಡಿಸಿಕೊಂಡಿದ್ದರು.

13 ಜಗವಿಡೀ ಕೆಟ್ಟುಹೋಗಿರುವುದನ್ನು ಕಂಡ ದೇವರು ನೋಹನಿಗೆ, “ನರಮಾನವರೆಲ್ಲರಿಗೆ ಸರ್ವನಾಶವನ್ನು ತೀರ್ಮಾನಿಸಿದ್ದೇನೆ. ಜಗವೆಲ್ಲವು ಹಿಂಸಾಚಾರದಿಂದ ತುಂಬಿಹೋಗಿದೆ. ನಾನು ಅವರನ್ನೂ ಜಗದಲ್ಲಿರುವುದೆಲ್ಲವನ್ನೂ ಅಳಿಸಿಬಿಡುತ್ತೇನೆ. [14]ನೀನು ತುರಾಯಿಮರದಿಂದ ನಾವೆಯೊಂದನ್ನು ಮಾಡಿಕೊ; ಅದರ ತುಂಬ ಕೊಠಡಿಗಳಿರಲಿ; ಅದರ ಒಳಕ್ಕೂ ಹೊರಕ್ಕೂ ರಾಳಪದಾರ್ಥವನ್ನು ಹಚ್ಚು. [15]ಅದನ್ನು ಹೀಗೆ ಮಾಡು; ಅದರ ಉದ್ದ ಮುನ್ನೂರು ಮೊಳ, ಅಗಲ ಐವತ್ತು ಮೊಳ, ಎತ್ತರ ಮೂವತ್ತು ಮೊಳ ಇರಲಿ. [16]ಅದರೆ ಚಾವಣಿಯ ಕೆಳಗೆ ಸುತ್ತಲೂ ಒಂದು ಮೊಳ ಎತ್ತರದ ಕಿಟಕಿ ಇಡು, ಪಕ್ಕದಲ್ಲಿ ಬಾಗಿಲಿರಲಿ; ಒಂದರ ಮೇಲೆ ಒಂದರಂತೆ ನಾವೆಯಲ್ಲಿ ಮೂರು ಅಂತಸ್ತುಗಳನ್ನು ಮಾಡು. [17]ನಾನು ಭೂಮಿಯ ಮೇಲೆ ಜಲಪ್ರಳಯವನ್ನು ಬರಮಾಡಲಿದ್ದೇನೆ. ಅದು ಆಕಾಶದ ಕೆಳಗಿರುವ ಸಕಲ ಪ್ರಾಣಿಗಳನ್ನೂ ಅಳಿಸಿಬಿಡುವುದು. ಭೂಮಿಯಲ್ಲಿರುವ ಸಮಸ್ತವೂ ನಾಶವಾಗುವುದು. [18]ಆದರೆ ನಿನ್ನೊಡನೆ ಒಂದು ಒಡಂಬಡಿಕೆ

ಮಾಡಿಕೊಳ್ಳುತ್ತೇನೆ. ನೀನು ಹೆಂಡತಿ, ಮಕ್ಕಳು ಹಾಗೂ ಸೊಸೆಯರ ಸಮೇತ ನಾವೆಯನ್ನು ಹತ್ತಬೇಕು.
[19]ಅಲ್ಲದೆ, ನಿನ್ನೊಡನೆ ಬದುಕಿಸಲು ಜೀವಿಗಳ ಪ್ರತಿಯೊಂದು ಜಾತಿಯಲ್ಲೂ ಒಂದು ಗಂಡು, ಒಂದು ಹೆಣ್ಣು
ಹೀಗೆ ಒಂದೊಂದು ಜೊತೆಯನ್ನು ನಾವೆಯಲ್ಲಿ ಸೇರಿಸಿಕೊ. [20]ಪ್ರಾಣಿಪಕ್ಷಿ, ಕ್ರಿಮಿಕೀಟ ಇವುಗಳ ಸಕಲ
ಜಾತಿಗಳಲ್ಲಿ ಎರಡೆರಡು ಬದುಕಿಬಾಳಲು ನಿನ್ನೊಡನೆ ಬರಲಿ. [21]ಎಲ್ಲ ತರಹದ ಭೋಜನ ಪದಾರ್ಥಗಳನ್ನು
ಶೇಖರಿಸಿಟ್ಟುಕೊ. ಅದು ನಿನಗೂ ಪ್ರಾಣಿಗಳಿಗೂ ಆಹಾರವಾಗುವುದು," ಎಂದು ಹೇಳಿದರು. [22]ನೋಹನು
ಹಾಗೆಯೇ ಮಾಡಿದನು. ದೇವರ ಆಜ್ಞಾನುಸಾರ ನಡೆದುಕೊಂಡನು.

## ಜಲಪ್ರಳಯ

**7** ಸರ್ವೇಶ್ವರಸ್ವಾಮಿ ನೋಹನಿಗೆ, "ನೀನೂ ನಿನ್ನ ಮನೆಯವರೆಲ್ಲರೂ ನಾವೆಯನ್ನು ಸೇರಿಕೊಳ್ಳಿರಿ; ಈಗಿನ
ಪೀಳಿಗೆಯಲ್ಲಿ ನೀನೊಬ್ಬನೇ ನನ್ನ ದೃಷ್ಟಿಗೆ ಸತ್ಪುರುಷ. [2]ಎಲ್ಲ ಶುದ್ಧ ಪ್ರಾಣಿಗಳಲ್ಲಿ ಏಳೇಳು ಗಂಡುಹೆಣ್ಣುಗಳನ್ನು
ಶುದ್ಧವಲ್ಲದ ಪ್ರಾಣಿಗಳಲ್ಲಿ ಎರಡೆರಡು ಗಂಡುಹೆಣ್ಣುಗಳನ್ನೂ ನಿನ್ನೊಂದಿಗೆ ಕರೆದುಕೊ. [3]ಪಕ್ಷಿಗಳಲ್ಲಿಯೂ
ಏಳೇಳು ಗಂಡುಹೆಣ್ಣುಗಳನ್ನು ತೆಗೆದುಕೊ. ಹೀಗೆ ಆಯಾ ಜಾತಿಯನ್ನು ಭೂಮಿಯಲ್ಲಿ ಉಳಿಸಿ
ಕಾಪಾಡಬೇಕು. [4]ಏಳು ದಿನಗಳಾನಂತರ ಭೂಮಿಯ ಮೇಲೆ ನಲವತ್ತು ದಿನ ಹಗಲಿರುಳೆನ್ನದೆ ಮಳೆ
ಸುರಿಸುವೆನು; ನಾನು ಸೃಷ್ಟಿಮಾಡಿದ ಜೀವರಾಶಿಗಳನ್ನೆಲ್ಲ ಭೂಮಿಯಿಂದ ಅಳಿಸಿ ಹಾಕುವೆನು," ಎಂದು
ಹೇಳಿದರು. [5]ಸರ್ವೇಶ್ವರ ಆಜ್ಞಾಪಿಸಿದಂತೆಯೇ ನೋಹನು ಎಲ್ಲವನ್ನು ಮಾಡಿದನು.

6 ಭೂಮಿಯ ಮೇಲೆ ಜಲಪ್ರಳಯ ಬಂದಾಗ ನೋಹನಿಗೆ ಆರುನೂರು ವರ್ಷ. [7]ಆ
ಜಲಪ್ರಳಯದಿಂದ ತಪ್ಪಿಸಿಕೊಳ್ಳಲು ನೋಹನು ತನ್ನ ಮಡದಿ, ಮಕ್ಕಳು, ಸೊಸೆಯರ ಸಮೇತ ನಾವೆಯನ್ನು
ಹತ್ತಿದನು. [8]ದೇವರ ಆಜ್ಞಾನುಸಾರ ಶುದ್ಧಾಶುದ್ಧ ಪ್ರಾಣಿಗಳಲ್ಲಿಯೂ ಪಕ್ಷಿಗಳಲ್ಲಿಯೂ ಕ್ರಿಮಿಕೀಟಗಳಲ್ಲಿಯೂ
[9]ಗಂಡು ಹೆಣ್ಣುಗಳು ಜೋಡಿಜೋಡಿಯಾಗಿ ಬಂದು ನೋಹನೊಂದಿಗೆ ನಾವೆಯಲ್ಲಿ ಸೇರಿಕೊಂಡವು. [10]ಏಳು
ದಿನಗಳಾದ ಬಳಿಕ ಜಲಪ್ರಳಯವಾಗತೊಡಗಿತು.

11 ನೋಹನ ಜೀವಮಾನದ ಆರುನೂರನೆಯ ವರ್ಷದ ಎರಡನೆಯ ತಿಂಗಳಿನ ಹದಿನೇಳನೆಯ
ದಿನ ಭೂಮಿಯ ಅಡಿಸಾಗರದ ಸೆಲೆಗಳು ಒಡೆದವು. ಆಕಾಶದ ತೂಬುಗಳು ತೆರೆದವು. [12]ನಲವತ್ತು ದಿನವೂ
ಹಗಲಿರುಳೆನ್ನದೆ ಭೂಮಿಯ ಮೇಲೆ ಬಿರುಮಳೆ ಸುರಿಯಿತು. [13]ಅದೇ ದಿನ ನೋಹನೂ ಅವನ
ಹೆಂಡತಿಯೂ ಮತ್ತು ಶೇಮ್, ಹಾಮ್, ಯೆಫೆತ್ ಎಂಬ ಅವನ ಮಕ್ಕಳೂ ಅವರ ಮಡದಿಯರೂ
ನಾವೆಯನ್ನು ಹೊಕ್ಕರು. [14]ಅವರೊಂದಿಗೆ ಸಕಲ ವಿಧವಾದ ಕಾಡುಮೃಗಗಳೂ ಸಾಕು ಪ್ರಾಣಿಗಳೂ
ಕ್ರಿಮಿಕೀಟಗಳೂ ರೆಕ್ಕೆಬಡಿಯುವ ಹಕ್ಕಿಪಕ್ಷಿಗಳೂ [15]ತಮ್ಮ ತಮ್ಮ ಜಾತಿಗನುಸಾರ ಎಲ್ಲ ಜೀವಿಗಳು ಎರಡೆರಡಾಗಿ
ಬಂದು ನಾವೆಯನ್ನು ಸೇರಿದವು. [16]ದೇವರು ನೋಹನಿಗೆ ಅಪ್ಪಣೆಕೊಟ್ಟ ಮೇರೆಗೆ, ಗಂಡು ಹೆಣ್ಣಂತೆ ಎಲ್ಲ
ಪ್ರಾಣಿಗಳು ಬಂದು ಸೇರಿದವು. ಬಳಿಕ ಸರ್ವೇಶ್ವರ, ನೋಹನನ್ನು ಒಳಗೆ ಬಿಟ್ಟು ಬಾಗಿಲನ್ನು ಮುಚ್ಚಿದರು.

17 ಜಲಪ್ರಳಯದ ಮಳೆ ನಲವತ್ತು ದಿನ ಭೂಮಿಯ ಮೇಲೆ ಒಂದೇ ಸಮನೆ ಸುರಿಯಿತು. ನೀರು
ಹೆಚ್ಚುತ್ತಾ ನಾವೆಯನ್ನು ಮೇಲೆತ್ತಲು ಅದು ನೀರಿನ ಮೇಲೆ ತೇಲತೊಡಗಿತು. [18]ನೀರು ಪ್ರಬಲವಾಗಿ ಹೆಚ್ಚಲು
ನಾವೆಯು ಅದರ ಮೇಲೆ ಚಲಿಸಿತು. [19]ಅದು ಇನ್ನೂ ಎಷ್ಟು ಅಧಿಕವಾಯಿತು ಎಂದರೆ, ಆಕಾಶದ ಕೆಳಗಿರುವ
ಗುಡ್ಡಬೆಟ್ಟಗಳೆಲ್ಲ ಮುಚ್ಚಿ ಹೋದವು. [20]ಹೀಗೆ ಮುಚ್ಚಿಹೋದ ಬೆಟ್ಟಗಳ ಮೇಲೆ ಹದಿನೈದು ಮೊಳ ನೀರು
ನಿಂತಿತು. [21]ಈ ಕಾರಣ ಭೂಮಿಯ ಮೇಲೆ ಸಂಚರಿಸುತ್ತಿದ್ದ ಎಲ್ಲ ಪ್ರಾಣಿಗಳು, ಕಾಡು ಮೃಗಗಳು, ಸಾಕು
ಪ್ರಾಣಿಗಳು, ಕ್ರಿಮಿಕೀಟಗಳು, ಮನುಷ್ಯರು ಸಹಿತವಾಗಿ ನಾಶವಾದುವು. [22]ಉಸಿರಾಡುವ ಭೂಮಿಯ
ಜಂತುಗಳೆಲ್ಲ ಸತ್ತುಹೋದವು. [23]ಮನುಷ್ಯರು ಮೊದಲ್ಗೊಂಡು ಪ್ರಾಣಿಪಕ್ಷಿ, ಕ್ರಿಮಿಕೀಟದವರೆಗೆ ಭೂಮಿಯ
ಮೇಲಿನದೆಲ್ಲವೂ ನಾಶವಾಯಿತು. ಭೂಮಿಯಿಂದ ಎಲ್ಲವೂ ನಿರ್ಮೂಲವಾಯಿತು. ನೋಹನು ಹಾಗೂ
ಅವನೊಂದಿಗೆ ನಾವೆಯಲ್ಲಿದ್ದ ಜೀವಿಗಳು ಮಾತ್ರ ಉಳಿದುಕೊಂಡವು. [24]ಪ್ರಳಯದ ನೀರು ಭೂಮಿಯ
ಮೇಲೆ ನೂರೈವತ್ತು ದಿನಗಳವರೆಗೂ ಪ್ರಬಲವಾಗಿಯೇ ಇತ್ತು.

## ಜಲಪ್ರಳಯದ ಮುಗಿವು

**8** ದೇವರಿಗೆ ನೋಹನ ಮತ್ತು ಅವನ ಸಂಗಡ ನಾವೆಯಲ್ಲಿದ್ದ ಎಲ್ಲ ಪ್ರಾಣಿ ಪಕ್ಷಿಗಳ ನೆನಪಿತ್ತು. ಅವರು
ಭೂಮಿಯ ಮೇಲೆ ಗಾಳಿ ಬೀಸುವಂತೆ ಮಾಡಲು ನೀರು ತಗ್ಗಿತು. 2ಭೂಮಿಯ ಅಡಿಸಾಗರದ ಸೆಲೆಗಳು
ಹಾಗೂ ಆಕಾಶದ ತೂಬುಗಳು ಮುಚ್ಚಿಹೋದವು; ಸುರಿಯುತ್ತಿದ್ದ ಮಳೆ ನಿಂತು ಹೋಯಿತು. 3ಭೂಮಿಯ
ಮೇಲಿದ್ದ ನೀರು ಸ್ವಲ್ಪ ಸ್ವಲ್ಪವಾಗಿ ತಗ್ಗುತ್ತಾ ನೂರೈವತ್ತು ದಿನಗಳಾದ ಮೇಲೆ ಕಡಿಮೆಯಾಯಿತು. 4ಏಳನೆಯ
ತಿಂಗಳಿನ ಹದಿನೇಳನೆಯ ದಿನ ನಾವೆಯು ಅರಾರಾಟ್ ನಾಡಿನ ಬೆಟ್ಟದ ಸಾಲಿನಲ್ಲಿ ನಿಂತಿತು. 5ಹತ್ತನೆಯ
ತಿಂಗಳಿನವರೆಗೂ ನೀರು ಕ್ರಮೇಣ ಕಡಿಮೆಯಾಗುತ್ತ ಬಂದು ಹತ್ತನೆಯ ತಿಂಗಳಿನ ಮೊದಲನೆಯ ದಿನ
ಬೆಟ್ಟಗಳ ಶಿಖರಗಳು ಕಾಣಿಸಿಕೊಂಡವು.

6 ನಲವತ್ತು ದಿನಗಳಾದ ಮೇಲೆ ನೋಹನು ತಾನು ಮಾಡಿದ್ದ ನಾವೆಯ ಕಿಟಕಿಯನ್ನು ತೆರೆದು
ಕಾಗೆಯೊಂದನ್ನು ಹೊರಕ್ಕೆ ಬಿಟ್ಟನು. 7ಅದು ಭೂಮಿಯ ಮೇಲಿದ್ದ ನೀರು ಒಣಗುವ ತನಕ ಹೋಗುತ್ತಾ
ಬರುತ್ತಾ ಇತ್ತು. 8ನೀರು ಇಳಿಯಿತೋ ಇಲ್ಲವೋ ಎಂದು ತಿಳಿದುಕೊಳ್ಳಲು ನೋಹನು ಅನಂತರ
ಪಾರಿವಾಳವೊಂದನ್ನು ಹೊರಕ್ಕೆ ಬಿಟ್ಟನು. 9ಭೂಮಿಯ ಮೇಲೆಲ್ಲ ನೀರು ಇದ್ದುದರಿಂದ, ಕಾಲಿಡುವುದಕ್ಕೆ ಸ್ಥಳ
ಕಾಣದೆ ಈ ಪಾರಿವಾಳ ನಾವೆಗೆ ಹಿಂತಿರುಗಿತು. ನೋಹನು ಕೈ ಚಾಚಿ ಅದನ್ನು ಹಿಡಿದುಕೊಂಡು
ನಾವೆಯೊಳಗೆ ಹಾಕಿಕೊಂಡನು. 10ಇನ್ನೂ ಏಳು ದಿವಸ ಕಾದು, ಪಾರಿವಾಳವನ್ನು ಹೊರಕ್ಕೆ ಬಿಟ್ಟನು. 11ಸಂಜೆ
ವೇಳೆಗೆ ಆ ಪಾರಿವಾಳ ಅವನ ಬಳಿಗೆ ಮರಳಿತು; ಆಗ ಇಗೋ! ಅದರ ಬಾಯಲ್ಲಿ ಎಣ್ಣೇಮರದ ಹೊಸ
ಚಿಗುರಿತ್ತು. ಇದನ್ನು ನೋಡಿ ನೋಹನು ಭೂಮಿಯ ಮೇಲಿಂದ ನೀರು ಇಳಿದುಹೋಗಿದೆಯೆಂದು
ತಿಳಿದುಕೊಂಡನು. 12ಮತ್ತೆ ಏಳುದಿನಗಳಾದ ಮೇಲೆ ಇನ್ನೊಮ್ಮೆ ಪಾರಿವಾಳವನ್ನು ಹೊರಕ್ಕೆ ಬಿಟ್ಟನು. ಈ
ಸಾರಿ ಅದು ಹಿಂತಿರುಗಿ ಬರಲೇ ಇಲ್ಲ.

13 ನೋಹನ 601ನೆಯ ವರ್ಷದ ಮೊದಲನೆಯ ತಿಂಗಳಿನ ಮೊದಲನೆಯ ದಿನದಂದು
ಭೂಮಿಯ ಮೇಲಿದ್ದ ನೀರು ಇಳಿದಿತ್ತು. ನೋಹನು ನಾವೆಯ ಗವಸಣಿಗೆಯನ್ನು ತೆಗೆದು ನೋಡಿದನು.
ಇಗೋ, ಭೂಮಿಯ ತೇವ ಆರುತ್ತಿತ್ತು. 14ಎರಡನೆಯ ತಿಂಗಳಿನ ಇಪ್ಪತ್ತೇಳನೆಯ ದಿನದಂದು ನೆಲವು
ಪೂರ್ತಿಯಾಗಿ ಒಣಗಿತ್ತು.

15-16ಆಗ ದೇವರು ನೋಹನಿಗೆ, "ನೀನು, ನಿನ್ನ ಹೆಂಡತಿ, ಮಕ್ಕಳು ಮತ್ತು ಅವರ ಮಡದಿಯರು
ನಾವೆಯನ್ನು ಬಿಟ್ಟು ಹೊರಗೆ ಬನ್ನಿ. 17ನಿನ್ನ ಬಳಿಯಿರುವ ಪ್ರಾಣಿಪಕ್ಷಿ, ಕ್ರಿಮಿಕೀಟ ಮುಂತಾದ ಎಲ್ಲ
ಜೀವಿಗಳೂ ಹೊರಗೆ ಬರಲಿ; ಅವುಗಳ ಸಂಖ್ಯೆ ಭೂಮಿಯಲ್ಲಿ ಬೆಳೆಯಲಿ; ಅವು ಹೆಚ್ಚಿ ವೃದ್ಧಿಯಾಗಲಿ,"
ಎಂದರು.

18 ಅಂತೆಯೇ ನೋಹನು, ಮಡದಿ, ಮಕ್ಕಳು, ಸೊಸೆಯರ ಸಮೇತ ಹೊರಗೆ ಬಂದನು. 19ಪ್ರಾಣಿ,
ಪಶು, ಪಕ್ಷಿ, ಕ್ರಿಮಿ ಇವುಗಳೆಲ್ಲವೂ ತಮ್ಮ ತಮ್ಮ ಜಾತಿಗನುಸಾರ ನಾವೆಯಿಂದ ಹೊರಗೆ ಬಂದವು.

## ಬಲಿಯ ಅರ್ಪಣೆ

20 ನೋಹನು ಸರ್ವೇಶ್ವರಸ್ವಾಮಿಗೆ ಒಂದು ಬಲಿಪೀಠವನ್ನು ಕಟ್ಟಿದನು. ಶುದ್ಧವಾದ ಎಲ್ಲ
ಪ್ರಾಣಿಪಕ್ಷಿಗಳಿಂದ ಆಯ್ದು ಆ ಪೀಠದ ಮೇಲೆ ದಹನಬಲಿಯನ್ನು ಅರ್ಪಿಸಿದನು. 21ಗಮಗಮಿಸುವ ಅದರ
ಸುಗಂಧವು ಸ್ವಾಮಿಯನ್ನು ಮುಟ್ಟಿತು. ಅವರು ಮನದಲ್ಲೆ ಹೀಗೆಂದುಕೊಂಡರು: "ಇನ್ನು ಮೇಲೆ ನಾನು
ಮನುಷ್ಯರ ನಿಮಿತ್ತ ಭೂಮಿಯನ್ನು ಶಪಿಸುವುದಿಲ್ಲ. ಮನುಷ್ಯರ ಹೃದಯದ ಆಲೋಚನೆ ಚಿಕ್ಕಂದಿನಿಂದಲೇ
ಕೆಟ್ಟದು. ಈಗ ಮಾಡಿದಂತೆ ಇನ್ನು ಮೇಲೆ ಎಲ್ಲ ಜೀವಿಗಳನ್ನು ನಾನು ಸಂಹರಿಸುವುದಿಲ್ಲ.

22 ಬಿತ್ತನೆ – ಕೊಯಿಲು
ಚಳಿ – ಬಿಸಿಲು

ಗ್ರೀಷ್ಮ – ಹೇಮಂತ
ಹಗಲು – ಇರುಳು
ಈ ಕ್ರಮಕ್ಕೆ ಇರದು ಅಂತ್ಯ
ಜಗವಿರುವವರೆಗು.”

**ನೋಹನೊಡನೆ ಒಡಂಬಡಿಕೆ**

**9** ದೇವರು ನೋಹನನ್ನೂ ಅವನ ಮಕ್ಕಳನ್ನೂ ಆಶೀರ್ವದಿಸಿ ಹೀಗೆಂದರು – “ನೀವು ಅಭಿವೃದ್ಧಿಯಾಗಿ
ಹೆಚ್ಚು ಮಕ್ಕಳನ್ನು ಪಡೆಯಿರಿ; ಭೂಲೋಕದಲ್ಲೆಲ್ಲ ಹರಡಿಕೊಳ್ಳಿ. [2]ಭೂಮಿಯ ಮೇಲಿರುವ ಎಲ್ಲ ಪ್ರಾಣಿಗಳೂ
ಆಕಾಶದ ಎಲ್ಲ ಪಕ್ಷಿಗಳೂ ನೆಲದಮೇಲೆ ಹರಿದಾಡುವ ಎಲ್ಲ ಕ್ರಿಮಿಕೀಟಗಳೂ ಸಮುದ್ರದ ಎಲ್ಲ ಮೀನುಗಳೂ
ನಿಮಗೆ ಹೆದರಿ ಬೆದರುವುವು. ಅವುಗಳನ್ನೆಲ್ಲ ನಿಮ್ಮ ಸ್ವಾಧೀನಕ್ಕೆ ಕೊಟ್ಟಿದ್ದೇನೆ. [3]ಭೂಮಿಯ ಮೇಲೆ
ಪೈರುಪಚ್ಚೆಯನ್ನು ಕೊಟ್ಟಂತೆ ಇವುಗಳನ್ನೂ ಕೊಟ್ಟಿದ್ದೇನೆ. [4]ಆದರೆ ಮಾಂಸವನ್ನು ಅದರ ಜೀವಸತ್ವವಾದ
ರಕ್ತಸಮೇತ ತಿನ್ನಬಾರದು. [5]ನಿಮ್ಮ ರಕ್ತಸುರಿಸಿ ಪ್ರಾಣತೆಗೆಯುವವರೆಗೆ ಮುಯ್ಯಿ ತೀರಿಸುವೆನು –
ಮೃಗವಾಗಿದ್ದರೆ ಅದಕ್ಕೂ, ಮನುಷ್ಯನಾಗಿದ್ದರೆ, ಹತನಾದವನು ಅವನ ಸಹೋದರನಾದುದರಿಂದ ಅವನಿಗೂ
ಮುಯ್ಯಿ ತೀರಿಸುವೆನು.

6 “ನಿರ್ಮಿಸಿಹರು ದೇವರು ತಮ್ಮ
ಸ್ವರೂಪದಲ್ಲಿ ನರನನ್ನು
ಎಂತಲೆ ನರನನ್ನು ಕೊಲ್ಲುವವನು
ನರನಿಂದಲೇ ಹತನಾಗುವನು.
7 ನೀವು ಹೆಚ್ಚಿ ಅಭಿವೃದ್ಧಿಯಾಗಿರಿ,
ನಿಮ್ಮ ಸಂಖ್ಯೆ ಬೆಳೆಯಲಿ
ಭೂಮಿಯಲ್ಲಿ.”

8 ಇದಲ್ಲದೆ ದೇವರು ನೋಹನಿಗೂ ಅವನ ಮಕ್ಕಳಿಗೂ ಇಂತೆಂದು ಹೇಳಿದರು:

9 “ಕೇಳಿ, ನಾನು ನಿಮ್ಮನ್ನೂ ನಿಮ್ಮ ಸಂತತಿಯವರನ್ನೂ [10]ನಿಮ್ಮ ಕೂಡ ನಾವೆಯಿಂದ ಹೊರಟು
ಬಂದ ಪ್ರಾಣಿ–ಪಕ್ಷಿ–ಮೃಗಾದಿ ಸಕಲ ಭೂಜಂತುಗಳನ್ನೂ ಕುರಿತು ಒಂದು ಸ್ಥಿರ ಪ್ರತಿಜ್ಞೆಯನ್ನು ಮಾಡುತ್ತೇನೆ.
[11]ಆ ಪ್ರತಿಜ್ಞೆ ಏನೆಂದರೆ – ಇನ್ನು ಮೇಲೆ ನಾನು ಪ್ರಾಣಿಗಳನ್ನೆಲ್ಲಾ ಜಲಪ್ರಳಯದಿಂದ ನಾಶಮಾಡುವುದಿಲ್ಲ;
ಇನ್ನು ಮುಂದೆ ಭೂಮಿಯನ್ನು ಹಾಳುಮಾಡುವ ಪ್ರಳಯವು ಬರುವುದೇ ಇಲ್ಲ.” [12]ದೇವರು ಮತ್ತೆ
ಹೇಳಿದ್ದೇನೆಂದರೆ – “ನಾನು ನಿಮ್ಮನ್ನೂ ನಿಮ್ಮ ಸಂಗಡವಿರುವ ಸಮಸ್ತ ಜೀವರಾಶಿಗಳನ್ನೂ ಕುರಿತು
ತಲತಲಾಂತರಗಳಿಗೆ ಮಾಡುವ ಈ ಪ್ರತಿಜ್ಞೆಗೆ [13]ಮೇಘಗಳಲ್ಲಿ ನಾನಿಟ್ಟಿರುವ ಮಳೆಬಿಲ್ಲೇ ಗುರುತು. ನನಗೂ
ಭೂಪ್ರಾಣಿಗಳಿಗೂ ಆದ ಒಡಂಬಡಿಕೆಗೆ ಇದೇ ಕುರುಹು. [14]ನಾನು ಜಗದ ಮೇಲೆ ಮೇಘಗಳನ್ನು ಕವಿಸುವಾಗ
ಆ ಬಿಲ್ಲು ಮೇಘಗಳಲ್ಲಿ ಕಂಡುಬರುವುದು. [15]ಆಗ ನಿಮ್ಮನ್ನೂ ಎಲ್ಲ ಜೀವರಾಶಿಗಳನ್ನೂ ಕುರಿತು ನಾನು
ಮಾಡಿದ ಪ್ರತಿಜ್ಞೆಯನ್ನು ನೆನೆಸಿಕೊಳ್ಳುತ್ತೇನೆ. ಇನ್ನು ಮುಂದೆ ಜಲ ಹೆಚ್ಚಿ ಭೂಪ್ರಾಣಿಗಳನ್ನೆಲ್ಲಾ
ಹಾಳುಮಾಡುವ ಪ್ರಳಯ ಬರುವುದಿಲ್ಲ. [16]ಆ ಬಿಲ್ಲು ಮೇಘಗಳಲ್ಲಿ ಕಾಣಿಸುವಾಗ ನಾನು ಅದನ್ನು ನೋಡಿ
ದೇವರಾದ ನನಗೂ ಭೂಮಿಯ ಮೇಲಿರುವ ಎಲ್ಲ ಜೀವಜಂತುಗಳಿಗೂ ಆದ ಶಾಶ್ವತ ಒಡಂಬಡಿಕೆಯನ್ನು
ಜ್ಞಾಪಕ ಮಾಡಿಕೊಳ್ಳುತ್ತೇನೆ.” [17]ಇದು ಅಲ್ಲದೆ ದೇವರು ನೋಹನಿಗೆ, “ನನಗೂ ಸಮಸ್ತ ಭೂಜೀವಿಗಳಿಗೂ
ಆದ ಒಡಂಬಡಿಕೆಗೆ ಇದೇ ಗುರುತು,” ಎಂದು ಹೇಳಿದರು.

**ಕಾನಾನ್ಯರಿಗೆ ಶಾಪ; ಶೇಮ್, ಯೆಫೆತರಿಗೆ ಆಶೀರ್ವಾದ**

18 ನಾವೆಯಿಂದ ಹೊರಟುಬಂದ ನೋಹನ ಮಕ್ಕಳು ಶೇಮ್, ಹಾಮ್, ಯೆಫೆತ್ ಎಂಬುವರು.
(ಹಾಮನು ಕಾನಾನನ ತಂದೆ). [19]ಜಗದಲ್ಲೆಲ್ಲ ಹರಡಿಕೊಂಡಿರುವ ಜನರು ನೋಹನ ಈ ಮೂರು
ಮಕ್ಕಳಿಂದಲೇ ಉತ್ಪತ್ತಿಯಾದುದು.

20 ನೋಹನು ವ್ಯವಸಾಯಗಾರ. ದ್ರಾಕ್ಷಿತೋಟ ಮಾಡುವುದನ್ನು ಪ್ರಾರಂಭಿಸಿದವನು ಅವನೇ.
[21]ಒಮ್ಮೆ ಅವನು ಕುಡಿದು ಅಮಲೇರಿ ಗುಡಾರದಲ್ಲಿ ಬೆತ್ತಲೆಯಾಗಿ ಬಿದ್ದಿದ್ದನು. [22]ತನ್ನ ತಂದೆ
ಬೆತ್ತಲೆಯಾಗಿರುವುದನ್ನು ಕಂಡ ಕಾನಾನನ ತಂದೆ ಹಾಮನು ಹೊರಗಿದ್ದ ಶೇಮ್, ಯೆಫೆತ್ ಸೋದರರಿಗೆ
ತಿಳಿಸಿದನು. [23]ಅವರಿಬ್ಬರು ಬಂದು ಹೊದಿಕೆಯನ್ನು ತೆಗೆದುಕೊಂಡು, ಬೆನ್ನಿನ ಹಿಂದೆ ಹಾಕಿಕೊಂಡು,
ಹಿಂದುಹಿಂದಕ್ಕೆ ನಡೆದುಬಂದು ತಂದೆಗೆ ಅದನ್ನು ಹೊದಿಸಿ ಅವನ ಮಾನವನ್ನು ಕಾಪಾಡಿದರು. ಅವರಿಬ್ಬರು
ಹಿಮ್ಮುಖರಾಗಿ ಇದ್ದುದರಿಂದ ತಂದೆ ಬೆತ್ತಲೆಯಾಗಿದ್ದುದನ್ನು ನೋಡಲಿಲ್ಲ. [24]ನೋಹನಿಗೆ ಅಮಲು ಇಳಿದ
ಮೇಲೆ ತನ್ನ ಕಿರಿಯ ಮಗ ಮಾಡಿದ್ದು ತಿಳಿಯಿತು. ಆಗ ಅವನು ಹೀಗೆಂದನು:

25 "ಶಾಪ ತಟ್ಟಲಿ ಕಾನಾನಿಗೆ
ದಾಸಾನುದಾಸನಾಗಲಿ ಅವನು ತನ್ನ
ಸೋದರರಿಗೆ"
26 ಸ್ತೋತ್ರ, ಶೇಮನ ದೇವರಾದ
ಸರ್ವೇಶ್ವರನಿಗೆ
ದಾಸನಾಗಲಿ ಕಾನಾನನು
ಶೇಮನಿಗೆ"
27 ಅಭಿವೃದ್ಧಿಯನು ನೀಡಲಿ ದೇವರು
ಯೆಫೆತನಿಗೆ
ವಾಸವಾಗಿರಲಿವನು ಶೇಮನ
ಗುಡಾರದೊಳಗೆ,
ದಾಸನಾಗಿರಲಿ ಕಾನಾನನು
ಯೆಫೆತನಿಗೆ"

28 ಜಲಪ್ರಳಯ ಮುಗಿದ ಮೇಲೆ ನೋಹನು 350 ವರ್ಷ ಬದುಕಿದ್ದನು. [29]ಸತ್ತಾಗ ಅವನಿಗೆ ಒಟ್ಟು
950 ವರ್ಷಗಳಾಗಿದ್ದವು.

## ನೋಹನ ಮಕ್ಕಳ ಸಂತಾನ

(1 ಪೂರ್ವ. 1.5–23)

**10** ನೋಹನ ಮಕ್ಕಳಾದ ಶೇಮ್, ಹಾಮ್ ಮತ್ತು ಯೆಫೆತರಿಗೆ ಜಲಪ್ರಳಯ ಮುಗಿದ ಮೇಲೆ
ಮಕ್ಕಳಾದರು. ಅವರ ವಂಶಾವಳಿ ಇದು:

### ಯೆಫೆತನ ಸಂತಾನ

2 ಯೆಫೆತನ ಮಕ್ಕಳು ಇವರು – ಗೋಮೆರ್, ಮಾಗೋಗ್, ಮಾದಯ್, ಯಾವಾನ್, ತೂಬಲ್,
ಮೆಷೆಕ್ ಮತ್ತು ತೀರಾಸ್. [3]ಗೋಮೆರನ ಮಕ್ಕಳು ಅಷ್ಕೆನಸ್, ರೀಫತ್ ಮತ್ತು ತೋಗರ್ಮ. [4]ಯಾವಾನನ
ಮಕ್ಕಳು – ಎಲಿಷಾ, ಸ್ಪೇಯಿನ್ (ತಾರ್ಷಿಸ್), ಸೈಪ್ರಸ್ (ಕಿತ್ತೀಮ್), ಮತ್ತು ದೋದಾ ಎಂಬ ಸ್ಥಳದವರು.
ಇವರು ಸಮುದ್ರದ ರೇವುಗಳಲ್ಲಿ ಹರಡಿಕೊಂಡರು. [5]ದೇಶ – ಭಾಷಾ – ಕುಲ – ಜನಾಂಗಗಳ ಪ್ರಕಾರ
ಇವರೇ ಯೆಫೆತನ ವಂಶದವರು.

### ಹಾಮನ ಸಂತಾನ

6 ಹಾಮನ ಮಕ್ಕಳು ಯಾರೆಂದರೆ – ಕೂಷ್, ಈಜಿಪ್ಟ್ (ಮಿಚ್ರಯಿಮ್), ಲಿಬಿಯಾ (ಪೂತ್)
ಮತ್ತು ಕಾನಾನ್ ಎಂಬುವರು. [7]ಕೂಷನ ಮಕ್ಕಳು – ಸೆಬಾ, ಹವೀಲ, ಸಬ್ತಾ, ರಗ್ಮ, ಸಬ್ತೆಕಾ ಎಂಬ
ಜನಾಂಗಗಳು. ರಗ್ಮ ಸಂತಾನದವರು – ಶೆಬಾ, ದೆದಾನ್ ಎಂಬ ಜನಾಂಗಗಳು. [8]ಕೂಷನು ನಿಮ್ರೋದನನ್ನು
ಪಡೆದನು. ಇವನೇ ಪರಾಕ್ರಮದಲ್ಲಿ ಮೊದಲನೆಯ ಭೂರಾಜ, [9]ದೇವರ ದೃಷ್ಟಿಯಲ್ಲಿ ದಿಟ್ಟ ಬೇಟೆಗಾರ.
"ಪ್ರಭು ನಿನ್ನನ್ನು ನಿಮ್ರೋದನಂಥ ದಿಟ್ಟ ಬೇಟೆಗಾರನಾಗಿಸಲಿ" ಎಂಬ ನಾಣ್ಣುಡಿ ಇಂದಿಗೂ ಇದೆ.
[10]ಬಾಬಿಲೋನಿಯ (ಶಿನಾರ್) ನಾಡಿನಲ್ಲಿರುವ ಯೆರೆಕ್, ಅಕ್ಕದ್, ಬಾಬಿಲೋನ್ ಕಲ್ನೇ ಈ ಎಲ್ಲ ಪಟ್ಟಣಗಳೇ
ಅವನ ರಾಜ್ಯದ ಮೂಲ ಪಟ್ಟಣಗಳು. [11]ಅವನು ಆ ನಾಡಿನಿಂದ ಹೊರಟು ಅಸ್ಸೀರಿಯಾ ನಾಡಿಗೆ ಬಂದು
ನಿನೆವೆ, ರೆಹೋಬೋತೀರ್, ಕೆಲಹ ಎಂಬ ಪಟ್ಟಣಗಳನ್ನೂ [12]ನಿನೆವೆಗೂ ಮಹಾ ಪಟ್ಟಣವಾದ ಕೆಲಹಕ್ಕೂ
ನಡುವೆ ಇರುವ ರೆಸೆನ್ ಪಟ್ಟಣವನ್ನೂ ಕಟ್ಟಿಸಿದನು.

13 ಈಜಿಪ್ಟ್ (ಮಿಚ್ರಯಿಮ್) ನವರಿಂದ ಲಿದ್ಯರೂ ಅನಾಮ್ಯರೂ ಲೆಹಾಬ್ಯರೂ ನಫ್ತುಹ್ಯರೂ
ಪತ್ರುಸ್ಯರೂ [14]ಕಸ್ಲುಹ್ಯರೂ ಕೆಫ್ತೋರ್ಯರೂ ಹುಟ್ಟಿದರು. ಕಸ್ಲುಹ್ಯರಿಂದ ಬಂದವರು ಫಿಲಿಷ್ಟಿಯರು.

15 ಕಾನಾನ್ ವಂಶದಲ್ಲಿ ಮೊದಲು ಹುಟ್ಟಿದವನು ಸೀದೋನ್; ಆಮೇಲೆ ಹೇತ್ ಹುಟ್ಟಿದನು.
[16]ಇದಲ್ಲದೆ ಯೆಬೂಸಿಯರೂ ಅಮೋರಿಯರೂ ಗಿರ್ಗಾಷಿಯರೂ [17]ಹಿವ್ವಿಯರೂ ಅರ್ಕಿಯರೂ
ಸೀನಿಯರೂ [18]ಅರ್ವಾದಿಯರೂ ಚೆಮಾರಿಯರೂ ಹಮಾತಿಯರೂ ಕಾನಾನನಿಂದ ಹುಟ್ಟಿದರು.
ಕಾಲಕ್ರಮೇಣ ಈ ಕಾನಾನ್ ಕುಲಗಳವರು ಹರಡಿಕೊಂಡರು. [19]ಕಾನಾನ್ಯರ ನಾಡು ಸೀದೋನ್ ಪಟ್ಟಣದಿಂದ
ಗೆರಾರಿಗೆ ಹೋಗುವ ದಾರಿಯಲ್ಲಿ ಇರುವ ಗಾಜಾ ಪಟ್ಟಣದವರೆಗೂ ಮತ್ತು ಸೊದೋಮ್, ಗೊಮೋರ,
ಆದ್ಮಾ, ಚೆಬೋಯಿಮ್ ಎಂಬ ಪಟ್ಟಣಗಳಿಗೆ ಹೋಗುವ ದಾರಿಯಲ್ಲಿದ್ದ ಲೆಷಾ ಊರಿನವರೆಗೂ ಹಬ್ಬಿತ್ತು.
[20]ಕುಲ – ಭಾಷಾ – ದೇಶ – ಜನಾಂಗಗಳ ಪ್ರಕಾರ ಇವರೇ ಹಾಮನ ವಂಶದವರು.

### ಶೇಮನ ಸಂತಾನ

21 ಹಿಬ್ರಿಯರೆಲ್ಲರಿಗೆ ಮೂಲಪುರುಷನೂ ಯೆಫೆತನ ಅಣ್ಣನೂ ಆಗಿದ್ದ ಶೇಮನಿಗು ಸಹ
ಮಕ್ಕಳಾದರು. [22]ಶೇಮನ ಮಕ್ಕಳು ಇವರು – ಏಲಾಮ್, ಅಶ್ಶೂರ್, ಅರ್ಪಕ್ಷದ್, ಲೂದ್ ಮತ್ತು ಆರಾಮ್.
[23]ಆರಾಮ್ ಸಂತಾನದವರು – ಊಸ್, ಹೂಲ್, ಗೆತೆರ್ ಮತ್ತು ಮಷ್. [24]ಅರ್ಪಕ್ಷದನಿಂದ ಶೆಲಹನೂ
ಶೆಲಹನಿಂದ ಎಬರನೂ ಹುಟ್ಟಿದರು. [25]ಎಬರನಿಗೆ ಇಬ್ಬರು ಮಕ್ಕಳು. ಒಬ್ಬನಿಗೆ ಪೆಲೆಗೆಂಬ ಹೆಸರು. ಇವನ
ಕಾಲದಲ್ಲೇ ಭೂಜನದ ವಿಭಜನೆ ಆದುದು. ಅವನ ತಮ್ಮನ ಹೆಸರು ಯೊಕ್ತಾನ್. [26]ಯೊಕ್ತಾನನ ಮಕ್ಕಳು
ಇವರು – ಆಲ್ಮೋದಾದ್, ಶೆಲಿಪ್, ಹಜರ್ಮಾವೆತ್, ಯೆರೆಹ, [27]ಹದೋರಾಮ್, ಊಜಾಲ್, ದೀಕ್ಲಾ,
[28]ಓಬಾಲ್, ಅಬೀಮಯೇಲ್, ಶೆಬಾ, [29]ಓಫೀರ್, ಹವೀಲ, ಯೋಬಾಬ್ ಎಂಬ ಸ್ಥಳಗಳವರು. ಈ
ಕುಲಗಳೆಲ್ಲ ಯೋಕ್ತಾನನಿಂದ ಹುಟ್ಟಿದವು. [30]ಇವರ ನಿವಾಸವು ಮೇಶಾ ನಾಡು ಮೊದಲುಗೊಂಡು
ಪೂರ್ವಕ್ಕಿರುವ ಸೆಫಾರ್ ಎಂಬ ಬೆಟ್ಟದವರೆಗೂ ಹರಡಿತ್ತು. [31]ಕುಲ, ಭಾಷೆ, ಜನಾಂಗಗಳ ಪ್ರಕಾರ ಇವರೇ
ಶೇಮನ ವಂಶದವರು.

32 ಸಂತತಿ – ಜನಾಂಗಗಳ ಪ್ರಕಾರ ಇವರೇ ನೋಹನ ವಂಶದವರು. ಜಲಪ್ರಳಯವಾದ ನಂತರ
ಭೂಮಿಯ ಮೇಲೆ ಹರಡಿಕೊಂಡ ಜನಾಂಗಗಳು ಇವರೇ.

### ಬಾಬೆಲ್ ಗೋಪುರ – ಭಾಷಾಭೇದ

**11** ಭೂಜನರೆಲ್ಲರಿಗೂ ಇದ್ದುದು ಒಂದೇ ಭಾಷೆ, ಒಂದೇ ನುಡಿ. [2]ಅವರು ಪೂರ್ವ ದಿಕ್ಕಿಗೆ ಪ್ರಯಾಣ
ಮಾಡುತ್ತಾ ಇದ್ದಾಗ ಬಾಬಿಲೋನಿಯ ಕಾಡಿನ ಬಯಲು ಸೀಮೆ ಸಿಕ್ಕಿತು. ಅವರು ಅಲ್ಲೇ ನೆಲೆಸಲು
ತೊಡಗಿದರು. [3]"ಬನ್ನಿ, ಒಳ್ಳೊಳ್ಳೆ ಸುಟ್ಟ ಇಟ್ಟಿಗೆಗಳನ್ನು ಮಾಡೋಣ; [4]ಒಂದು ಪಟ್ಟಣವನ್ನು ಕಟ್ಟೋಣ;
ಆಕಾಶವನ್ನು ಮುಟ್ಟುವಂಥ ಗೋಪುರವನ್ನು ನಿರ್ಮಿಸಿ ಪ್ರಖ್ಯಾತಿ ಪಡೆಯೋಣ. ಹೀಗೆ ಮಾಡಿದರೆ ನಾವು

ಜಗದಲ್ಲೆಲ್ಲಾ ಚದರಿಹೋಗುವುದಕ್ಕೆ ಆಸ್ಪದವಿರುವುದಿಲ್ಲ," ಎಂದು ತಮ್ಮತಮ್ಮೊಳಗೆ ಮಾತನಾಡಿಕೊಂಡರು. ಕಟ್ಟುವಾಗ ಕಲ್ಲಿಗೆ ಬದಲಾಗಿ ಇಟ್ಟಿಗೆಯನ್ನೂ ಗಾರೆಗೆ (ಸುಣ್ಣಕ್ಕೆ) ಬದಲಾಗಿ ಕಲ್ಲರಗನ್ನೂ ಉಪಯೋಗಿಸಿದರು.

5 ನರಮಾನವರು ಕಟ್ಟುತ್ತಿದ್ದ ಆ ಪಟ್ಟಣವನ್ನು ಹಾಗೂ ಗೋಪುರವನ್ನು ನೋಡಲು
ಸರ್ವೇಶ್ವರಸ್ವಾಮಿ ಇಳಿದು ಬಂದರು. [6]ನೋಡಿದ ಮೇಲೆ, "ಇವರು ಒಂದೇ ಜನಾಂಗ; ಇವರೆಲ್ಲರಿಗೂ
ಒಂದೇ ಭಾಷೆ. ಇದು ಇವರು ಕೈಗೊಂಡಿರುವ ಕಾರ್ಯದ ಪ್ರಾರಂಭ ಮಾತ್ರ. ಮುಂದಕ್ಕೆ ಇವರು ಏನು
ಬೇಕಾದರೂ ಮಾಡಿಯಾರು! [7]ನಾವು ಹೋಗಿ ಇವರಲ್ಲಿ ಒಬ್ಬರ ಮಾತು ಒಬ್ಬರಿಗೆ ತಿಳಿಯದಂತೆ ಇವರ
ಭಾಷೆಯನ್ನು ಗಲಿಬಿಲಿಗೊಳಿಸೋಣ," ಎಂದರು. [8]ಅಂತೆಯೇ ಮಾಡಿ ಅವರನ್ನು ಅಲ್ಲಿಂದ ಜಗದೆಲ್ಲೆಡೆಗೆ
ಚದರಿಸಿ ಬಿಟ್ಟರು. ಜನರು ಆ ಪಟ್ಟಣ ಕಟ್ಟುವುದನ್ನು ನಿಲ್ಲಿಸಿಬಿಟ್ಟರು. [9]ಹೀಗೆ ಸರ್ವೇಶ್ವರ ಇಡೀ ಜಗತ್ತಿನ
ಭಾಷೆಯನ್ನು ಗಲಿಬಿಲಿಗೊಳಿಸಿ ಅಲ್ಲಿಂದ ಜನರನ್ನು ಜಗದೆಲ್ಲೆಡೆಗೆ ಚದರಿಸಿದ ಕಾರಣ ಆ ಪಟ್ಟಣಕ್ಕೆ
'ಬಾಬಿಲೋನ್' ಎಂದು ಹೆಸರಾಯಿತು.

## ಅಬ್ರಹಾಮನು ಶೇಮನ ವಂಶಜ

(1 ಪೂರ್ವ 1.24–27)

10 ಶೇಮನ ವಂಶವೃಕ್ಷ: ಜಲಪ್ರಳಯ ಕಳೆದು ಎರಡು ವರ್ಷಗಳಾದ ಮೇಲೆ ಶೇಮನಿಗೆ
ಅರ್ಪಕ್ಷದನು ಹುಟ್ಟಿದನು. ಆಗ ಶೇಮನಿಗೆ 100 ವರ್ಷ ವಯಸ್ಸು. [11]ಅನಂತರ ಶೇಮನು ಗಂಡು ಹೆಣ್ಣು
ಮಕ್ಕಳನ್ನು ಪಡೆದು 500 ವರ್ಷ ಬದುಕಿದ್ದನು.

12 ಮೂವತ್ತೈದು ವರ್ಷದವನಾಗಿದ್ದ ಅರ್ಪಕ್ಷದನಿಗೆ ಶೆಲಹನು ಹುಟ್ಟಿದನು. [13]ಅನಂತರ
ಅರ್ಪಕ್ಷದನು ಗಂಡುಹೆಣ್ಣು ಮಕ್ಕಳನ್ನು ಪಡೆದು ನಾನೂರ ಮೂರು ವರ್ಷ ಬದುಕಿದ್ದನು.

14 ಮೂವತ್ತು ವರ್ಷದವನಾಗಿ ಶೆಲಹನಿಗೆ ಎಬರನು ಹುಟ್ಟಿದನು. [15]ಅನಂತರ ಗಂಡು ಹೆಣ್ಣು
ಮಕ್ಕಳನ್ನು ಪಡೆದು 403 ವರ್ಷ ಬದುಕಿದ್ದನು.

16 ಮೂವತ್ತನಾಲ್ಕು ವರ್ಷದವನಾಗಿದ್ದ ಎಬರನಿಗೆ ಪೆಲೆಗನು ಹುಟ್ಟಿದನು. [17]ಅನಂತರ ಗಂಡುಹೆಣ್ಣು
ಮಕ್ಕಳನ್ನು ಪಡೆದು 430 ವರ್ಷ ಬದುಕಿದ್ದನು.

18ಮೂವತ್ತು ವರ್ಷದವನಾಗಿದ್ದ ಪೆಲೆಗನಿಗೆ ರೆಗೂವನು ಹುಟ್ಟಿದನು. [19]ಅನಂತರ ಪೆಲೆಗನು
ಗಂಡುಹೆಣ್ಣು ಮಕ್ಕಳನ್ನು ಪಡೆದು 290 ವರ್ಷ ಬದುಕಿದ್ದನು.

20ಮೂವತ್ತೆರಡು ವರ್ಷದವನಾಗಿದ್ದ ರೆಗೂವನಿಗೆ ಸೆರೂಗನು ಹುಟ್ಟಿದನು. [21]ಅನಂತರ ರೆಗೂವನು
ಗಂಡುಹೆಣ್ಣು ಮಕ್ಕಳನ್ನು ಪಡೆದು 207 ವರ್ಷ ಬದುಕಿದ್ದನು.

22ಮೂವತ್ತು ವರ್ಷದವನಾಗಿದ್ದ ಸೆರೂಗನಿಗೆ ನಾಹೋರನು ಹುಟ್ಟಿದನು. [23]ಅನಂತರ ಸೆರೂಗನು
ಗಂಡುಹೆಣ್ಣು ಮಕ್ಕಳನ್ನು ಪಡೆದು 200 ವರ್ಷ ಬದುಕಿದ್ದನು.

24ಇಪ್ಪತ್ತೊಂಭತ್ತು ವರ್ಷದವನಾಗಿದ್ದ ನಾಹೋರನಿಗೆ ತೆರಹನು ಹುಟ್ಟಿದನು. [25]ಅನಂತರ
ನಾಹೋರನು ಗಂಡುಹೆಣ್ಣು ಮಕ್ಕಳನ್ನು ಪಡೆದು 190 ವರ್ಷ ಬದುಕಿದ್ದನು.

26ಎಪ್ಪತ್ತು ವರ್ಷದವನಾದ ತೆರಹನಿಗೆ ಅಬ್ರಾಮ, ನಾಹೋರ ಮತ್ತು ಹಾರಾನ ಎಂಬ ಮಕ್ಕಳು
ಹುಟ್ಟಿದರು.

## ಅಬ್ರಾಮನ ಚರಿತ್ರೆ

27 ತೆರಹನ ವಂಶವೃಕ್ಷ: ತೆರಹನಿಗೆ ಅಬ್ರಾಮ, ನಾಹೋರ, ಹಾರಾನ ಇವರು ಹುಟ್ಟಿದರು.
ಹಾರಾನನಿಗೆ ಲೋಟನು ಹುಟ್ಟಿದನು. [28]ಹಾರಾನನು, ತನ್ನ ಜನ್ಮಭೂಮಿಯಲ್ಲಿ, ಬಾಬಿಲೋನಿನ ಊರ್
ಎಂಬ ಪಟ್ಟಣದಲ್ಲಿ, ತನ್ನ ತಂದೆಯಾದ ತೆರಹನು ಜೀವದಿಂದಿರುವಾಗಲೇ ಸತ್ತನು. [29]ಅಬ್ರಾಮನು ಮತ್ತು
ನಾಹೋರನು ಮದುವೆಮಾಡಿಕೊಂಡರು. ಅಬ್ರಾಮನ ಹೆಂಡತಿಯ ಹೆಸರು ಸಾರಯಳು, ನಾಹೋರನ
ಹೆಂಡತಿಯ ಹೆಸರು ಮಿಲ್ಕಾ; ಈಕೆ ಹಾರಾನನ ಮಗಳು; ಹಾರನನು ಮಿಲ್ಕಳಿಗು ಹಾಗೂ ಇಸ್ಕಳಿಗು ತಂದೆ.
[30]ಸಾರಯಳು ಬಂಜೆ, ಆಕೆಗೆ ಮಕ್ಕಳಿರಲಿಲ್ಲ.

31ತೆರಹನು ತನ್ನ ಮಗನಾದ ಅಬ್ರಾಮನನ್ನು ಮತ್ತು ತನಗೆ ಮೊಮ್ಮಗನೂ ಹಾರಾನನಿಗೆ ಮಗನೂ
ಆದ ಲೋಟನನ್ನೂ ಹಾಗು ತನಗೆ ಸೊಸೆಯೂ ಅಬ್ರಾಮನಿಗೆ ಹೆಂಡತಿಯೂ ಆದ ಸಾರಯಳನ್ನೂ
ಕರೆದುಕೊಂಡು ಬಾಬಿಲೋನಿನ ಊರ್ ಎಂಬ ಪಟ್ಟಣವನ್ನು ಬಿಟ್ಟು ಕಾನಾನ್ ನಾಡಿಗೆ ತೆರಳಿದನು. ಅವರು
ಹಾರಾನ್ ಎಂಬ ಪಟ್ಟಣವನ್ನು ತಲುಪಿ ಅಲ್ಲಿ ವಾಸಮಾಡಿಕೊಂಡರು. [32]ತೆರಹನು ಅಲ್ಲಿ ಮೃತನಾದನು.
ಆಗ ಅವನಿಗೆ ಇನ್ನೂರ ಐದು ವರ್ಷವಾಗಿತ್ತು.

## ಅಬ್ರಾಮನಿಗೆ ದೇವರ ಕರೆ

**12** ಸರ್ವೇಶ್ವರಸ್ವಾಮಿ ಅಬ್ರಾಮನಿಗೆ ಹೀಗೆಂದರು – “ನೀನು ನಿನ್ನ ಸ್ವಂತ ನಾಡನ್ನೂ ಬಂಧು
ಬಳಗದವರನ್ನೂ ತವರು ಮನೆಯನ್ನೂ ಬಿಟ್ಟು ನಾನು ತೋರಿಸುವ ನಾಡಿಗೆ ಹೊರಟು ಹೋಗು. [2]ನಾನು
ನಿನ್ನನ್ನು ದೊಡ್ಡ ಜನಾಂಗವಾಗಿ ಮಾಡುತ್ತೇನೆ. ನಿನ್ನನ್ನು ಆಶೀರ್ವದಿಸಿ ನಿನ್ನ ಹೆಸರಿಗೆ ಘನತೆ ಗೌರವವನ್ನು
ತರುತ್ತೇನೆ. ನೀನೇ ಆದರ್ಶದ ಆಶೀರ್ವಾದವಾಗಿ ಬೆಳಗುವೆ.

3 “ನಿನ್ನನ್ನು ಹರಸುವವರನು ನಾ ಹರಸುವೆ.
ನಿನ್ನನ್ನು ಶಪಿಸುವವರನು ನಾ ಶಪಿಸುವೆ.
ಧರೆಯ ಕುಲದವರಿಗೆಲ್ಲ ನಿನ್ನ
ಮುಖೇನ
ದೊರಕುವುದು ನನ್ನಿಂದ ಆಶೀರ್ವಾದ.”

4 ಸರ್ವೇಶ್ವರ ಹೀಗೆಂದು ಹೇಳಿದಮೇಲೆ ಅಬ್ರಾಮನು ಹೊರಟನು. ಲೋಟನು ಅವನ ಸಂಗಡವೆ
ಹೋದನು. ಆ ಹಾರಾನ್ ಪಟ್ಟಣವನ್ನು ಬಿಟ್ಟು ಹೊರಟಾಗ ಅಬ್ರಾಮನಿಗೆ ಎಪ್ಪತ್ತೈದು ವರ್ಷಗಳಾಗಿದ್ದವು.
[5]ತನ್ನ ಹೆಂಡತಿ ಸಾರಯಳನ್ನು, ತನ್ನ ತಮ್ಮನ ಮಗನಾದ ಲೋಟನನ್ನು, ತಾನು ಮತ್ತು ಲೋಟನು
ಹಾರಾನಿನಲ್ಲಿ ಗಳಿಸಿದ ಆಸ್ತಿ ಪಾಸ್ತಿಯನ್ನು ಹಾಗು ದಾಸದಾಸಿಯರನ್ನು ತೆಗೆದುಕೊಂಡು ಹೋಗಿ ಕಾನಾನ್
ನಾಡನ್ನು ಸೇರಿದನು.

6 ಆ ನಾಡಿನಲ್ಲಿ ಸಂಚರಿಸುತ್ತಾ ಅಬ್ರಾಮನು ಶೆಕೆಮ್ ಪುಣ್ಯಕ್ಷೇತ್ರದಲ್ಲಿರುವ ‘ಮೋರೆ’ ಎಂಬ ವೃಕ್ಷದ
ಬಳಿಗೆ ಬಂದನು. ಆ ಕಾಲದಲ್ಲಿ ಕಾನಾನ್ಯರು ಆ ನಾಡಿನಲ್ಲಿ ವಾಸವಾಗಿದ್ದರು. [7]ಅಲ್ಲಿ ಸರ್ವೇಶ್ವರಸ್ವಾಮಿ
ಅಬ್ರಾಮನಿಗೆ ದರ್ಶನವಿತ್ತು – “ಈ ನಾಡನ್ನು ನಾನು ನಿನ್ನ ಸಂತಾನಕ್ಕೆ ಕೊಡುತ್ತೇನೆ” ಎಂದು ಹೇಳಿದರು.
ತನಗೆ ದರ್ಶನಕೊಟ್ಟ ಸರ್ವೇಶ್ವರನಿಗೆ ಅಬ್ರಾಮನು ಅಲ್ಲಿ ಒಂದು ಬಲಿಪೀಠವನ್ನು ಕಟ್ಟಿಸಿದನು. [8]ಬಳಿಕ ಅವನು
ಅಲ್ಲಿಂದ ದಕ್ಷಿಣಕ್ಕೆ ಹೊರಟು ಬೇತೇಲಿಗೆ ಪೂರ್ವಕ್ಕಿರುವ ಗುಡ್ಡಗಾಡಿಗೆ ಬಂದು ಗುಡಾರ ಹಾಕಿ ನೆಲಸಿದನು.
ಪಶ್ಚಿಮಕ್ಕೆ ಬೇತೇಲೂ ಪೂರ್ವಕ್ಕೆ ಆಯಿ ಎಂಬ ಊರು ಇದ್ದವು. ಅಲ್ಲೂ ಸರ್ವೇಶ್ವರಸ್ವಾಮಿಗೆ ಒಂದು
ಬಲಿಪೀಠವನ್ನು ಕಟ್ಟಿಸಿ ಅವರ ನಾಮಸ್ಮರಣೆ ಮಾಡಿ ಆರಾಧಿಸಿದನು. [9]ತರುವಾಯ ಅಲ್ಲಿಂದ ಮುಂದೆ
ಮುಂದಕ್ಕೆ ಸಾಗುತ್ತಾ ಕಾನಾನ್ ನಾಡಿನ ದಕ್ಷಿಣ ಪ್ರಾಂತ್ಯಕ್ಕೆ ಬಂದನು.

## ಈಜಿಪ್ಟಿಗೆ ಪ್ರಯಾಣ

10 ಕಾನಾನ್ ನಾಡಿನಲ್ಲಿ ಕ್ಷಾಮ ತಲೆದೋರಿತು. ಅದು ಘೋರವಾಗಿದ್ದುದರಿಂದ ಅಬ್ರಾಮನು ಕೆಲವು
ಕಾಲ ಈಜಿಪ್ಟಿನಲ್ಲಿರಲು ಅಲ್ಲಿಗೆ ಇಳಿದು ಹೋದನು. [11]ಈಜಿಪ್ಟನ್ನು ಪ್ರವೇಶಿಸುವುದಕ್ಕೆ ಮುಂಚೆಯೆ ತನ್ನ
ಹೆಂಡತಿ ಸಾರಯಳಿಗೆ, “ನೀನು ಬಲು ಚೆಲುವಾದ ಹೆಣ್ಣು; [12]ಈಜಿಪ್ಟಿನವರು ನಿನ್ನನ್ನು ನೋಡಿ, ನೀನು ನನ್ನ
ಹೆಂಡತಿಯಾಗಿರಬಹುದೆಂದು ಊಹಿಸಿ, ನನ್ನನ್ನು ಕೊಂದು ನಿನ್ನನ್ನು ಜೀವದಿಂದ ಉಳಿಸಾರು. [13]ಆದಕಾರಣ
ನೀನು ನನಗೆ ತಂಗಿಯೆಂದೇ ಅವರಿಗೆ ಹೇಳು. ಆಗ ನಿನ್ನ ನಿಮಿತ್ತ ನನಗೆ ಸತ್ಕಾರ ದೊರಕುವುದು; ನಿನ್ನ
ದೆಸೆಯಿಂದ ನನ್ನ ಪ್ರಾಣ ಉಳಿಯುವುದು,” ಎಂದು ತಿಳಿಸಿದನು. [14]ಅಬ್ರಾಮನು ಈಜಿಪ್ಟಿಗೆ ಬಂದಾಗ
ಈಜಿಪ್ಟಿನವರು ಅವನ ಸಂಗಡ ಇದ್ದ ಹೆಣ್ಣು ಬಹಳ ಚೆಲುವೆಯೆಂದುಕೊಂಡರು. [15]ಫರೋಹನ
ಪದಾಧಿಕಾರಿಗಳು ಆಕೆಯನ್ನು ನೋಡಿಬಂದು ಆಕೆಯ ಚೆಲುವನ್ನು ಅವನ ಮುಂದೆ ಹೊಗಳಿದರು. [16]ಅವನು

ಆಕೆಯನ್ನು ಅರಮನೆಗೆ ಕರೆಸಿದನು. ಆಕೆಯ ನಿಮಿತ್ತ ಅಬ್ರಾಮನಿಗೆ ಸತ್ಕಾರ ದೊರಕಿತು; ಕುರಿಮೇಕೆಗಳು,
ದನ ಕರುಗಳು, ಗಂಡು ಹೆಣ್ಣು ಕತ್ತೆಗಳು, ದಾಸದಾಸಿಯರು ಹಾಗು ಒಂಟೆಗಳು ದೊರೆತವು.
17 ಆದರೆ ಅಬ್ರಾಮನ ಹೆಂಡತಿಯನ್ನು ಕರೆಸಿಕೊಂಡ ಕಾರಣ ಫರೋಹನಿಗೂ ಮತ್ತು ಅವನ
ಮನೆಯವರಿಗೂ ಸರ್ವೇಶ್ವರ ದೊಡ್ಡ ದೊಡ್ಡ ಗಂಡಾಂತರಗಳನ್ನು ಬರಮಾಡಿದರು. 18ಆಗ ಫರೋಹನು
ಅಬ್ರಾಮನನ್ನು ಕರೆಸಿ, "ನೀನು ಮಾಡಿರುವುದೇನು? 19ಆಕೆ ನಿನ್ನ ಹೆಂಡತಿಯೆಂದು ನನಗೇಕೆ ತಿಳಿಸಲಿಲ್ಲ?
ತಂಗಿಯೆಂದು ಏಕೆ ಹೇಳಿದೆ? ಹಾಗೆ ಹೇಳಿದ್ದರಿಂದಲೆ ಆಕೆ ನನಗೆ ಹೆಂಡತಿಯಾಗಲೆಂದು ಕರೆಸಿಕೊಂಡೆ.
ಇಗೋ ನಿನ್ನ ಹೆಂಡತಿ! ಕರೆದುಕೊಂಡು ಇಲ್ಲಿಂದ ತೆರಳು," ಎಂದು ಆಜ್ಞಾಪಿಸಿದನು. 20ಅವನ ಅಪ್ಪಣೆ
ಪಡೆದ ಸೇವಕರು ಅಬ್ರಾಮನನ್ನೂ ಅವನ ಹೆಂಡತಿಯನ್ನೂ ಅವನಿಗಿದ್ದ ಎಲ್ಲದರ ಸಮೇತ ಅಲ್ಲಿಂದ
ಕಳಿಸಿಬಿಟ್ಟರು.

### ಅಬ್ರಾಮ್ ಮತ್ತು ಲೋಟನ ಬೇರ್ಪಾಡು

**13** ಅಬ್ರಾಮನು ತನ್ನದುದನ್ನೆಲ್ಲಾ ತೆಗೆದುಕೊಂಡು ಹೆಂಡತಿ ಮತ್ತು ಲೋಟನ ಸಂಗಡ ಈಜಿಪ್ಟನ್ನು ಬಿಟ್ಟು
ಕಾನಾನ್ ನಾಡಿನ ದಕ್ಷಿಣ ಪ್ರಾಂತ್ಯಕ್ಕೆ ಬಂದನು. 2ಈಗ ಅವನಿಗೆ ಪಶುಪ್ರಾಣಿಗಳಿದ್ದವು, ಬೆಳ್ಳಿ ಬಂಗಾರವಿತ್ತು.
ಅವನೀಗ ಘನ ಧನವಂತನಾಗಿದ್ದನು. 3ಅಲ್ಲಿಂದ ಮುಂದೆ ಪ್ರಯಾಣ ಮಾಡುತ್ತಾ 4ಬೇತೇಲಿಗೂ ಆಯಿ
ಎಂಬ ಊರಿಗೂ ನಡುವೆ ತಾನು ಹಿಂದೆ ಗುಡಾರ ಹಾಕಿ ಬಲಿಪೀಠವನ್ನು ಕಟ್ಟಿದ ಕ್ಷೇತ್ರವನ್ನು ತಲುಪಿದನು.
ಅಲ್ಲಿ ಸರ್ವೇಶ್ವರಸ್ವಾಮಿಯ ನಾಮಸ್ಮರಣೆ ಮಾಡಿ ಆರಾಧಿಸಿದನು.
5 ಅಬ್ರಾಮನ ಜೊತೆಯಲ್ಲಿದ್ದ ಲೋಟನಿಗೆ ಕುರಿಮಂದೆಗಳೂ ದನಕರುಗಳೂ ಗುಡಾರಬಿಡಾರಗಳೂ
ಇದ್ದವು. 6ಈ ಕಾರಣ ಅವರಿಬ್ಬರ ಜೀವನಕ್ಕೆ ಅಲ್ಲಿ ಸ್ಥಳ ಸಾಲದೆ ಹೋಯಿತು. ಇಬ್ಬರಿಗೂ ಪಶುಪ್ರಾಣಿಗಳು
ಹೇರಳವಾಗಿದ್ದುದರಿಂದ ಒಂದೇ ಸ್ಥಳದಲ್ಲಿ ವಾಸವಾಗಿರಲು ಆಗಲಿಲ್ಲ. 7ಅಬ್ರಾಮನ ದನಕಾಯುವವರಿಗೂ
ಲೋಟನ ದನಕಾಯುವವರಿಗೂ ಜಗಳ ಬೇರೆ. ಇದೂ ಅಲ್ಲದೆ, ಆ ಕಾಲದಲ್ಲಿ ಕಾನಾನ್ಯರೂ ಪೆರಿಜೀಯರೂ
ಅದೇ ನಾಡಿನಲ್ಲಿ ವಾಸವಾಗಿದ್ದರು. 8ಆದುದರಿಂದ ಅಬ್ರಾಮನು ಲೋಟನಿಗೆ ಹೀಗೆಂದನು: "ನನಗೂ
ನಿನಗೂ, ನನ್ನ ದನಕಾಯುವವರಿಗೂ ನಿನ್ನ ದನಕಾಯುವವರಿಗೂ ಜಗಳವಿರಬಾರದು. ನಾವು ಬಳಗದವರು.
9ನಾಡೆಲ್ಲಾ ನಿನ್ನ ಕಣ್ಮುಂದಿದೆ. ದಯವಿಟ್ಟು ನನ್ನನ್ನು ಬಿಟ್ಟು ಬೇರೆ ಹೋಗು. ನೀನು ಎಡಗಡೆಗೆ ಹೋದರೆ
ನಾನು ಬಲಗಡೆಗೆ ಹೋಗುತ್ತೇನೆ. ನೀನು ಬಲಗಡೆಗೆ ಹೋದರೆ ನಾನು ಎಡಗಡೆಗೆ ಹೋಗುತ್ತೇನೆ."
10ಲೋಟನು ಕಣ್ಣೆತ್ತಿ ನೋಡಿದನು. ಜೋರ್ಡನ್ ನದಿಯ ಸುತ್ತಲಿನ ಪ್ರದೇಶ ಚೋಗರೂರಿನವರೆಗೂ
ಎಲ್ಲೆಲ್ಲೂ ನೀರಾವರಿ ಆಗಿರುವುದು ಕಾಣಿಸಿತು. ಸರ್ವೇಶ್ವರ, ಸೊದೋಮ್ – ಗೊಮೋರ ಪಟ್ಟಣಗಳನ್ನು
ವಿನಾಶ ಮಾಡುವುದಕ್ಕೆ ಮುಂಚೆ ಈ ಪ್ರಾಂತ್ಯವು ಸರ್ವೇಶ್ವರನ ಉದ್ಯಾನವನದಂತೆ, ಈಜಿಪ್ಟಿನ ದೇಶದಂತೆ,
ನೀರಿನ ಸೌಕರ್ಯ ಪಡೆದಿತ್ತು. 11ಆದುದರಿಂದ ಲೋಟನು ಜೋರ್ಡನ್ ನದಿಯ ಸುತ್ತಲಿನ ಪ್ರದೇಶವನ್ನು
ಆರಿಸಿಕೊಂಡು ಪೂರ್ವ ದಿಕ್ಕಿನ ಕಡೆಗೆ ಹೊರಟನು. ಹೀಗೆ ಅವರಿಬ್ಬರೂ ಬೇರೆ ಬೇರೆ ಆದರು. 12ಅಬ್ರಾಮನು
ಕಾನಾನ್ ನಾಡಿನಲ್ಲೇ ವಾಸಮಾಡಿದನು. ಲೋಟನು ಜೋರ್ಡನ್ ನದಿಯ ಸುತ್ತಣ ಊರುಗಳಲ್ಲಿ
ವಾಸಮಾಡುತ್ತಾ ಸೊದೋಮ್‌ಗೆ ಸಮೀಪದಲ್ಲಿ ಗುಡಾರ ಹಾಕಿದನು. 13ಸೊದೋಮಿನ ಪಟ್ಟಣದವರು
ಬಹಳ ದುಷ್ಟರು. ಪ್ರಭುವಿನ ದೃಷ್ಟಿಯಲ್ಲಿ ಕಡುಪಾಪಿಗಳು.

### ಹೆಬ್ರೋನಿಗೆ ಅಬ್ರಾಮನ ಆಗಮನ

14 ಲೋಟನು ಅಬ್ರಾಮನನ್ನು ಬಿಟ್ಟುಹೋದ ಬಳಿಕ ಸರ್ವೇಶ್ವರಸ್ವಾಮಿ ಅಬ್ರಾಮನಿಗೆ, "ನೀನು
ಇರುವ ಸ್ಥಳದಿಂದಲೇ ದಕ್ಷಿಣೋತ್ತರ ಪೂರ್ವ ಪಶ್ಚಿಮಗಳ ಕಡೆಗೆ ಕಣ್ಣೆತ್ತಿ ನೋಡು. 15ನಿನ್ನ ಕಣ್ಣಿಗೆ ಕಾಣಿಸುವ
ಈ ಪ್ರಾಂತ್ಯವನ್ನೆಲ್ಲಾ ನಿನಗೂ ನಿನ್ನ ಸಂತಾನಕ್ಕೂ ಶಾಶ್ವತವಾಗಿ ಕೊಡುತ್ತೇನೆ. 16ನಿನ್ನ ಸಂತಾನದವರನ್ನು
ಭೂಮಿಯ ಧೂಳಿನಷ್ಟು ಅಸಂಖ್ಯಾತರನ್ನಾಗಿ ಮಾಡುತ್ತೇನೆ. ಭೂಮಿಯ ಧೂಳನ್ನು ಲೆಕ್ಕಿಸಲು ಸಾಧ್ಯವಾದಲ್ಲಿ
ನಿನ್ನ ಸಂತಾನದವರನ್ನು ಲೆಕ್ಕಿಸಲು ಸಾಧ್ಯವಾದೀತು. 17ನೀನೆದ್ದು ಈ ನಾಡಿನ ಉದ್ದಗಲಕ್ಕೂ ತಿರುಗಾಡು;

ಇದನ್ನು ನಾನು ನಿನಗೆ ಕೊಡುತ್ತೇನೆ," ಎಂದು ಹೇಳಿದರು. [18]ಅಬ್ರಾಮನು ಅಲ್ಲಿಂದ ಹೊರಟು ಅಲ್ಲಲ್ಲಿ ಗುಡಾರ ಹಾಕಿಸಿಕೊಳ್ಳುತ್ತಾ, ಹೆಬ್ರೋನಿನಲ್ಲಿರುವ ಮಮ್ರೆವೃಕ್ಷಗಳ ತೋಪಿಗೆ ಬಂದು ವಾಸಮಾಡಿದನು. ಸರ್ವೇಶ್ವರಸ್ವಾಮಿಗೆ ಅಲ್ಲಿ ಒಂದು ಬಲಿಪೀಠವನ್ನು ಕಟ್ಟಿಸಿದನು.

### ಅಬ್ರಾಮನಿಂದ ಲೋಟನ ಬಿಡುಗಡೆ

**14** ಆ ದಿನಗಳಲ್ಲಿ ಬಾಬಿಲೋನಿನ ಅರಸ ಅಮ್ರಾಫೆಲನು, ಎಲ್ಲಸಾರಿನ ಅರಸ ಅರಿಯೋಕನು, ಏಲಾಮಿನ
ಅರಸ ಕೆದೊರ್ಲಗೋಮರನು ಮತ್ತು ಗೋಯಿಮದ ಅರಸ ತಿದ್ಗಾಲನು – ಈ ನಾಲ್ವರು [2-3]ಈಗ ಲವಣ
ಸಮುದ್ರ ಎನಿಸಿಕೊಳ್ಳುವ ಸಿದ್ದೀಮ್ ತಗ್ಗುಪ್ರದೇಶದಲ್ಲಿ ಒಂದುಗೂಡಿದ್ದ ಸೊದೋಮಿನ ಅರಸ ಬೆರಗ,
ಗೊಮೋರದ ಅರಸ ಬಿರ್ಶಗ, ಅದ್ಮಾಹದ ಅರಸ ಶಿನಾಬ, ಚೆಬೋಯಿಮನ ಅರಸ ಶೆಮೇಬರ, ಬೆಲಗಿನ
(ಅಂದರೆ ಚೋಗರದ) ಅರಸ – ಈ ಐವರೊಡನೆ ಯುದ್ಧಮಾಡಿದರು. [4]ಬೆರಗ ಮೊದಲಾದ ಈ ಐದು
ಅರಸರು ಹನ್ನೆರಡು ವರ್ಷಕಾಲ ಕೆದೊರ್ಲಗೋಮರನಿಗೆ ಅಧೀನರಾಗಿ ಇದ್ದರು. ಹದಿಮೂರನೆಯ
ವರ್ಷದಲ್ಲಿ ತಿರುಗಿಬಿದ್ದರು. [5]ಹದಿನಾಲ್ಕನೆಯ ವರ್ಷದಲ್ಲಿ ಕೆದೊರ್ಲಗೋಮರನೂ ಮತ್ತು ಅವನಿಗೆ ಸೇರಿದ
ರಾಜರೂ ಬಂದು ಅಷ್ಟರೋತ್ ಕರ್ನಯಿಮ್ ಎಂಬಲ್ಲಿ ರೆಫಾಯರನ್ನೂ ಹಾಮ್ ಎಂಬಲ್ಲಿ ಏಮಿಯರನ್ನೂ
ಸೋಲಿಸಿದರು. [6]ಇದಲ್ಲದೆ ಎದೋಮ್ ಗುಡ್ಡ ಪ್ರಾಂತ್ಯದಲ್ಲಿ ವಾಸವಾಗಿದ್ದ ಹೋರಿಯರನ್ನು ಅಲ್ಲೇ ಸೋಲಿಸಿ,
ಮರಳುಗಾಡಿಗೆ ಹತ್ತಿರವಿರುವ ಏಲ್ಪಾರಾನಿನವರೆಗೂ ಹಿಂದಟ್ಟಿದರು. [7]ಅನಂತರ ಎನ್ಮಿಷ್ಪಾಟ್ ಎನ್ನಲ್ಪಟ್ಟ
ಕಾದೇಶ್‍ಗೆ ಹಿಂದಿರುಗಿ ಬಂದು ಅಮಾಲೇಕ್ಯರ ಸಮಸ್ತ ನಾಡನ್ನು ಮತ್ತು ಹಚಚೋನ್ ತಾಮರಿನಲ್ಲಿ
ವಾಸವಾಗಿದ್ದ ಅಮೋರಿಯರನ್ನು ಜಯಿಸಿದರು.

8ಆಗ ಸೊದೋಮ್, ಗೊಮೋರ, ಅದ್ಮಾಹ, ಚೆಬೋಯಿಮ್, ಚೋಗರ್ ಎಂಬ ಬೇಲಗ್, ಈ
ಪಟ್ಟಣಗಳ ರಾಜರು ಹೊರಟು ಅವರೆಗೆದುರಾಗಿ, ಅಂದರೆ [9]ಏಲಾಮನ ಅರಸ ಕೆದೊರ್ಲಗೋಮರ್,
ಗೋಯಿಮದ ಅರಸ ತಿದ್ಗಾಲ, ಬಾಬಿಲೋನಿನ ಅರಸ ಅಮ್ರಾಫೆಲ, ಎಲ್ಲಸಾರಿನ ಅರಸ ಅರಿಯೋಕ ಇವರಿಗೆ
ವಿರೋಧವಾಗಿ ಸಿದ್ದೀಮ್ ತಗ್ಗುಪ್ರದೇಶದಲ್ಲಿ ತಮ್ಮ ದಂಡನ್ನು ನಿಲ್ಲಿಸಿದರು. ಹೀಗೆ ನಾಲ್ಕು ಮಂದಿ ರಾಜರು
ಐದು ಮಂದಿ ರಾಜರನ್ನು ಎದುರಿಸಿದರು. [10]ಆ ಸಿದ್ದೀಮ್ ತಗ್ಗಿನಲ್ಲಿ ಕಲ್ಲರಗಿನ ಕೆಸರುಗುಣಿಗಳು
ಬಹಳವಿದ್ದವು. ಸೊದೋಮ್ ಗೋಮೋರದ ರಾಜರಕಡೆಯವರು ಹಿಮ್ಮೆಟ್ಟಿ ಓಡಿ ಹೋಗುವಾಗ ಆ
ಗುಣಿಗಳಲ್ಲಿ ಬಿದ್ದು ಸತ್ತರು. ಉಳಿದವರು ಬೆಟ್ಟಗಳಿಗೆ ಓಡಿಹೋದರು. [11]ಗೆದ್ದ ಆ ನಾಲ್ಕು ರಾಜರು
ಸೊದೋಮ್ ಮತ್ತು ಗೊಮೋರ ಪಟ್ಟಣಗಳನ್ನು ಸೂರೆಮಾಡಿದರು. ಅವುಗಳಲ್ಲಿದ್ದ ಆಸ್ತಿಪಾಸ್ತಿಯನ್ನೂ
ದವಸ ಧಾನ್ಯಗಳನ್ನೂ ದೋಚಿಕೊಂಡು ಹೋದರು. [12]ಸೊದೋಮಿನಲ್ಲಿ ವಾಸವಾಗಿದ್ದ ಅಬ್ರಾಮನ ತಮ್ಮನ
ಮಗ ಲೋಟನನ್ನು ಅವನ ಆಸ್ತಿಪಾಸ್ತಿ ಸಹಿತ ಹಿಡಿದುಕೊಂಡು ಹೋದರು.

13 ತಪ್ಪಿಸಿಕೊಂಡು ಓಡಿಹೋದವರಲ್ಲಿ ಒಬ್ಬ ವ್ಯಕ್ತಿ ಹಿಬ್ರಿಯನಾದ ಅಬ್ರಾಮನ ಬಳಿಗೆ ಬಂದು
ನಡೆದುದನ್ನು ತಿಳಿಸಿದನು. ಅಬ್ರಾಮನು ಅಮೋರಿಯನಾದ ಮಮ್ರೆಯನ ತೋಪಿನ ಬಳಿ ವಾಸವಾಗಿದ್ದನು.
ಮಮ್ರೆಯನಿಗೆ ಎಷ್ಕೋಲ ಮತ್ತು ಆನೇರ ಎಂಬ ಸಹೋದರರಿದ್ದರು. ಇವರಿಗೂ ಅಬ್ರಾಮನಿಗೂ
ಒಪ್ಪಂದವಿತ್ತು. [14]ಅಬ್ರಾಮನು ತನ್ನ ತಮ್ಮನ ಮಗ ಸೆರೆಗೆ ಸಿಕ್ಕಿರುವುದನ್ನು ಕೇಳಿ ತನ್ನ ಮನೆಯಲ್ಲೇ ಹುಟ್ಟಿ
ಬೆಳೆದು ಸುಶಿಕ್ಷಿತರಾದ 318 ಮಂದಿ ಆಳುಗಳನ್ನು ಯುದ್ಧಕ್ಕೆ ಸಿದ್ಧ ಮಾಡಿಕೊಂಡು ಹೊರಟನು. ಈ ನಾಲ್ಕು
ಮಂದಿ ರಾಜರನ್ನು ದಾನೂರಿನವರೆಗೆ ಹಿಂದಟ್ಟಿದನು. [15]ಅಲ್ಲಿ ತನ್ನ ದಂಡನ್ನು ಇಬ್ಭಾಗವಾಗಿ ವಿಂಗಡಿಸಿ ರಾತ್ರಿ
ವೇಳೆಯಲ್ಲಿ ಶತ್ರುಗಳ ಮೇಲೆಬಿದ್ದು ಸೋಲಿಸಿದನು. ಅಲ್ಲದೆ ದಮಸ್ಕಸ್ ಪಟ್ಟಣದ ಉತ್ತರಕ್ಕಿರುವ ಹೋಬಾ
ಊರಿನತನಕ ಹಿಂದಟ್ಟಿದನು. [16]ಆ ರಾಜರು ಅಪಹರಿಸಿದ್ದ ಎಲ್ಲ ವಸ್ತುಗಳನ್ನು ಕಿತ್ತುಕೊಂಡನು. ತನ್ನ ತಮ್ಮನ
ಮಗನಾದ ಲೋಟನನ್ನು ಬಿಡುಗಡೆ ಮಾಡಿದನು; ಅವನ ಆಸ್ತಿಪಾಸ್ತಿಯನ್ನು, ಸೆರೆಯಲ್ಲಿದ್ದ ಮಹಿಳೆಯರನ್ನು
ಮತ್ತು ಇತರರನ್ನು ಬಿಡಿಸಿಕೊಂಡು ಹಿಂದಿರುಗಿದನು.

### ಅಬ್ರಾಮನಿಗೆ ಮೆಲ್ಕಿಸದೇಕನಿಂದ ಆಶೀರ್ವಾದ

17 ಅಬ್ರಾಮನು ಕೆದೊರ್ಲಗೋಮರನನ್ನೂ ಅವನೊಂದಿಗಿದ್ದ ರಾಜರನ್ನೂ ಸೋಲಿಸಿ ಬಂದಾಗ ಸೊದೋಮಿನ ಅರಸನು ಅವನನ್ನು ಶಾವೆ ತಗ್ಗಿನಲ್ಲಿ (ಅದಕ್ಕೆ ಅರಸನ ತಗ್ಗು ಎಂಬ ಹೆಸರೂ ಉಂಟು) ಭೇಟಿಯಾಗಲು ಬಂದನು. [18]ಸಾಲೇಮಿನ ಅರಸನೂ ಪರಾತ್ಪರ ದೇವರ ಯಾಜಕನೂ ಆಗಿದ್ದ ಮೆಲ್ಕಿಸದೇಕನು ಸಹ ಅಲ್ಲಿಗೆ ಬಂದು ರೊಟ್ಟಿಯನ್ನೂ ದ್ರಾಕ್ಷಾರಸವನ್ನೂ ಅರ್ಪಿಸಿ ಅಬ್ರಾಮನಿಗೆ ಇಂತೆಂದು ಆಶೀರ್ವಾದ ಮಾಡಿದನು:

19 " ಭೂಮ್ಯಾಕಾಶಗಳನ್ನು ಉಂಟುಮಾಡಿದ
ಪರಾತ್ಪರ ದೇವರ
ಆಶೀರ್ವಾದ ಅಬ್ರಾಮನಿಗಿರಲಿ;
ನಿನ್ನ ಶತ್ರುಗಳನ್ನು ನಿನ್ನ ಕೈವಶ ಮಾಡಿದ
ಆ ಪರಾತ್ಪರ
ದೇವರಿಗೆ ಸ್ತೋತ್ರವಾಗಲಿ!"

20 ಅಬ್ರಾಮನು ತಾನು ಗೆದ್ದು ತಂದಿದ್ದ ಎಲ್ಲ ವಸ್ತುಗಳಲ್ಲಿ ಹತ್ತನೆಯ ಒಂದು ಭಾಗವನ್ನು ಮೆಲ್ಕಿಸದೇಕನಿಗೆ ಕೊಟ್ಟನು.

21 ಸೊದೋಮಿನ ಅರಸನು ಅಬ್ರಾಮನಿಗೆ, "ನೀನು ಬಿಡಿಸಿ ತಂದ ಜನರನ್ನು ನನಗೆ ಕೊಡು: ಆಸ್ತಿಯನ್ನು ನೀನೇ ಇಟ್ಟುಕೊ," ಎಂದನು. [22]ಅದಕ್ಕೆ ಅಬ್ರಾಮನು, "ಭೂಮ್ಯಾಕಾಶಗಳನ್ನು ಉಂಟುಮಾಡಿದ ಪರಾತ್ಪರ ದೇವರ ಕಡೆಗೆ ಕೈಯೆತ್ತಿ ಪ್ರಮಾಣ ಮಾಡುತ್ತೇನೆ: [23]ನಿನಗೆ ಸೇರಿದವುಗಳಲ್ಲಿ ಯಾವುದನ್ನೂ, ಒಂದು ದಾರವನ್ನಾಗಲಿ, ಕೆರದ ಬಾರನ್ನಾಗಲಿ ನಾನು ತೆಗೆದುಕೊಳ್ಳುವುದಿಲ್ಲ. 'ನನ್ನಿಂದ ಅಬ್ರಾಮನು ಐಶ್ವರ್ಯವಂತನಾದ' ಎಂದು ಹೇಳಿಕೊಳ್ಳುವುದಕ್ಕೂ ನಿನಗೆ ಆಸ್ಪದ ಇರಬಾರದು. [24]ನನಗೆ ಏನೂ ಬೇಡ. ಆಳುಗಳು ತಿಂದದ್ದು ಸಾಕು. ನನ್ನ ಜೊತೆಗಾರರಾದ ಅನೇರ, ಎಷ್ಕೋಲ ಮತ್ತು ಮಮ್ರೆ ಅವರಿಗೆ ಬರತಕ್ಕ ಪಾಲು ಮಾತ್ರ ಅವರಿಗೆ ಸೇರಲಿ," ಎಂದು ಹೇಳಿದನು.

### ಅಬ್ರಾಮನೊಡನೆ ಒಡಂಬಡಿಕೆ

**15** ಈ ಘಟನೆಗಳೆಲ್ಲ ನಡೆದ ಮೇಲೆ ಅಬ್ರಾಮನಿಗೆ ಒಂದು ದಿವ್ಯ ದರ್ಶನ ಆಯಿತು. ಅದರಲ್ಲಿ ಸರ್ವೇಶ್ವರಸ್ವಾಮಿಯ ಈ ವಾಣಿ ಕೇಳಿಸಿತು:

"ಅಬ್ರಾಮನೇ, ಭಯಪಡಬೇಡ,
ನಿನ್ನನ್ನು ರಕ್ಷಿಸುವ ಕವಚ ನಾನೇ,
ಘನವಾದ ಬಹುಮಾನ ಸಿಗುವುದು ನಿನಗೆ."

2 ಅದಕ್ಕೆ ಪ್ರತ್ಯುತ್ತರವಾಗಿ ಅಬ್ರಾಮನು – "ಸ್ವಾಮಿ ಸರ್ವೇಶ್ವರಾ, ನನಗೆ ಏನು ಕೊಟ್ಟರೇನು? ನಾನು ಪುತ್ರಸಂತಾನವಿಲ್ಲದವನು. ನನ್ನ ಮನೆ ಮಾರುಗಳಿಗೆ ಉತ್ತರಾಧಿಕಾರಿ ದಮಸ್ಕದ ಎಲೀಯೆಜರನೇ ಹೊರತು ಮತ್ತಾರೂ ಇಲ್ಲ. [3]ನೀವು ನನಗೆ ಮಕ್ಕಳನ್ನು ಕೊಟ್ಟಿಲ್ಲ. ನನ್ನ ಮನೆದಾಸನೇ ನನಗೆ ಉತ್ತರಾಧಿಕಾರಿ," ಎಂದನು.

4 ಮತ್ತೆ ಸ್ವಾಮಿಯ ವಾಣಿ – "ಇಲ್ಲ, ಅವನು ಉತ್ತರಾಧಿಕಾರಿಯಾಗುವುದಿಲ್ಲ. ನಿನ್ನಿಂದ ಹುಟ್ಟಿದವನೇ ನಿನಗೆ ಉತ್ತರಾಧಿಕಾರಿ ಆಗುತ್ತಾನೆ," ಎಂದಿತು. [5]ಸರ್ವೇಶ್ವರ ಬಳಿಕ ಅಬ್ರಾಮನನ್ನು ಹೊರಗೆ ಕರೆತಂದು, "ಆಕಾಶದ ಕಡೆಗೆ ನೋಡು. ಆ ನಕ್ಷತ್ರಗಳನ್ನು ನಿನ್ನಿಂದಾದರೆ ಲೆಕ್ಕಿಸು. ನಿನ್ನ ಸಂತಾನವು ಅಷ್ಟು ಅಸಂಖ್ಯಾತವಾಗುವುದು!" ಎಂದರು.

6ಅಬ್ರಾಮನು ಸರ್ವೇಶ್ವರಸ್ವಾಮಿಯಲ್ಲಿ ವಿಶ್ವಾಸವಿಟ್ಟನು. ಅವರು ಅವನ ವಿಶ್ವಾಸವೇ ಸರಿಯಾದ ಸಂಬಂಧವೆಂದು ಪರಿಗಣಿಸಿದರು.

7 ಸರ್ವೇಶ್ವರ ಬಳಿಕ ಅಬ್ರಾಮನಿಗೆ ಇಂತೆಂದರು: "ಈ ನಾಡನ್ನು ನಿನಗೆ ಸೊತ್ತಾಗಿ ಕೊಡಬೇಕೆಂದು ಬಾಬಿಲೋನಿನಲ್ಲಿರುವ ಊರ್ ಪಟ್ಟಣದಿಂದ ನಿನ್ನನ್ನು ಬರಮಾಡಿದ ಸರ್ವೇಶ್ವರ ನಾನೇ," ಎಂದರು. [8]ಅದಕ್ಕೆ ಅಬ್ರಾಮನು, "ಸರ್ವೇಶ್ವರಾ, ಇದು ನನ್ನ ಸೊತ್ತು ಎಂದು ತಿಳಿದುಕೊಳ್ಳುವುದು ಹೇಗೆ?" ಎಂದನು.

9 ಸರ್ವೇಶ್ವರ ಪ್ರತ್ಯುತ್ತರವಾಗಿ, "ನೀನು ಮೂರು ಮೂರು ವರ್ಷದ ಒಂದು ಕಡಸನ್ನು, ಒಂದು ಆಡನ್ನು, ಒಂದು ಟಗರನ್ನು, ಒಂದು ಬೆಳವಕ್ಕಿಯನ್ನು ಹಾಗು ಒಂದು ಮರಿಪಾರಿವಾಳವನ್ನು ತೆಗೆದುಕೊಂಡು ಬಾ," ಎಂದರು. [10]ಅಬ್ರಾಮನು ಅವುಗಳನ್ನೆಲ್ಲಾ ತೆಗೆದುಕೊಂಡು ಬಂದು ಆ ಪ್ರಾಣಿಗಳನ್ನು ಕಡಿದು, ಎರಡೆರಡು ಹೋಳು ಮಾಡಿ, ತುಂಡಿಗೆ ತುಂಡನ್ನು ಎದುರಾಗಿಟ್ಟನು. ಪಕ್ಷಿಗಳನ್ನು ಮಾತ್ರ ಕಡಿಯಲಿಲ್ಲ. 11ಆ ಪ್ರಾಣಿಗಳ ತುಂಡುಗಳ ಮೇಲೆ ರಣಹದ್ದುಗಳು ಎರಗಿದಾಗ ಅಬ್ರಾಮನು ಅವುಗಳನ್ನು ಓಡಿಸಿಬಿಟ್ಟನು.

12 ಹೊತ್ತು ಮುಳುಗುತ್ತಿದ್ದಾಗ ಅಬ್ರಾಮನಿಗೆ ಗಾಢನಿದ್ರೆ ಹತ್ತಿತು. ಭೀಕರವಾದ ಕಾರ್ಗತ್ತಲು ಅವನನ್ನು ಕವಿಯಿತು. [13]ಆಗ ಅಬ್ರಾಮನಿಗೆ ಸರ್ವೇಶ್ವರ, "ಇದನ್ನು ನೀನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು: ನಿನ್ನ ಸಂತತಿಯವರು ಅನ್ಯನಾಡಿಗೆ ಆಗಂತುಕರಂತೆ ಹೋಗುವರು; ಆ ನಾಡಿಗರಿಗೆ ಗುಲಾಮರಾಗುವರು; ನಾನೂರು ವರ್ಷ ಅಲ್ಲಿಯವರ ಶೋಷಣೆಗೆ ಗುರಿಯಾಗುವರು. [14]ಆದರೆ ಅವರನ್ನು ಗುಲಾಮರನ್ನಾಗಿಸಿಕೊಳ್ಳುವ ರಾಷ್ಟ್ರವನ್ನು ನಾನು ದಂಡಿಸುವೆನು. ಬಳಿಕ ಬಿಡುಗಡೆ ಹೊಂದಿ ಅಧಿಕ ಆಸ್ತಿವಂತರಾಗಿ ಹಿಂತಿರುಗುವರು. [15]ನೀನಂತೂ ಹಣ್ಣು ಹಣ್ಣು ಮುದುಕನಾಗಿ ಶವಸಂಸ್ಕಾರವನ್ನು ಪಡೆಯುವೆ; ಶಾಂತಿ ಸಮಾಧಾನದಿಂದ ನಿನ್ನ ಪಿತೃಗಳನ್ನು ಸೇರುವೆ. [16]ನಿನ್ನ ಸಂತತಿಯವರು ನಾಲ್ಕನೆಯ ತಲಾಂತರವಾದ ಮೇಲೆ ಇಲ್ಲಿಗೆ ಮರಳಿ ಬರುವರು. ಏಕೆಂದರೆ ಅಮೋರಿಯರ ಪಾಪಾಕ್ರಮ ಇನ್ನೂ ಮಾಗಿಲ್ಲ," ಎಂದರು. [17]ಹೊತ್ತು ಮುಳುಗಿ ಕಾರ್ಗತ್ತಲಾದಾಗ ಇಗೋ, ಹೊಗೆಯಾಡುವ ಒಲೆಯೊಂದು ಹಾಗು ಉರಿಯುವ ದೀವಟಿಗೆಯೊಂದು ಕಾಣಿಸಿಕೊಂಡು ಆ ತುಂಡುಗಳ ನಡುವೆ ಹಾದುಹೋದವು. [18]ಸರ್ವೇಶ್ವರ ಅಂದೇ ಅಬ್ರಾಮನ ಸಂಗಡ ಒಂದು ಒಡಂಬಡಿಕೆಯನ್ನು ಮಾಡಿಕೊಂಡರು: "ಈಜಿಪ್ಟಿನ ನದಿಯಿಂದ ಯೂಫ್ರೆಟಿಸ್ ಮಹಾನದಿಯವರೆಗೆ, ಕೊಡುವೆನು ಈ ನಾಡೆಲ್ಲವನ್ನು ನಿನ್ನ ಸಂತತಿಯವರಿಗೆ," [19]ಅಂದರೆ, ಕೇನಿಯರು, ಕೆನಿಜೀಯರು, ಕದ್ಮೋನಿಯರು, [20]ಹಿತ್ತಿಯರು, ಪೆರಿಜೀಯರು, ರೆಫಾಯರು, [21]ಅಮೋರಿಯರು, ಕಾನಾನ್ಯರು, ಗಿರ್ಗಾಷಿಯರು ಹಾಗು ಯೆಬೂಸಿಯರು ವಾಸವಾಗಿರುವ ಪ್ರಾಂತಗಳಿಂದ ಕೂಡಿರುವ ಈ ನಾಡನ್ನು ಕೊಡುವೆನು," ಎಂದು ವಾಗ್ದಾನ ಮಾಡಿದರು.

## ಇಷ್ಮಾಯೇಲನ ಜನನ

**16** ಅಬ್ರಾಮನ ಹೆಂಡತಿ ಸಾರಯಳಿಗೆ ಮಕ್ಕಳಿರಲಿಲ್ಲ. ಆಕೆಗೆ ಈಜಿಪ್ಟ್ ದೇಶದವಳಾದ ಹಾಗರಳೆಂಬ ಒಬ್ಬ ದಾಸಿ ಇದ್ದಳು. [2]ಎಂದೇ ಸಾರಯಳು ಅಬ್ರಾಮನಿಗೆ, "ನೋಡಿ, ನನಗೇನೋ ಸರ್ವೇಶ್ವರಸ್ವಾಮಿ ಮಕ್ಕಳನ್ನು ದಯಪಾಲಿಸಲಿಲ್ಲ; ನೀವು ನನ್ನ ದಾಸಿಯನ್ನು ಸೇರಬೇಕು. ಬಹುಶಃ ಅವಳ ಮೂಲಕವಾದರೂ ನನಗೆ ಮಕ್ಕಳಾದೀತು," ಎಂದು ಹೇಳಿದಳು. ಅಬ್ರಾಮನು ಆಕೆಯ ಮಾತಿಗೆ ಸಮ್ಮತಿಸಿದನು. [3]ಹೀಗೆ ಹತ್ತು ವರ್ಷ ಕಾನಾನ್ ನಾಡಿನಲ್ಲಿ ವಾಸಮಾಡಿದ ಮೇಲೆ ಅಬ್ರಾಮನ ಹೆಂಡತಿ ಸಾರಯಳು ಈಜಿಪ್ಟಿನ ಹಾಗರಳೆಂಬ ದಾಸಿಯನ್ನು ತನ್ನ ಗಂಡನಿಗೆ ಉಪಪತ್ನಿಯಾಗಿ ಒಪ್ಪಿಸಿದಳು. [4]ಅಬ್ರಾಮನು ಹಾಗರಳನ್ನು ಕೂಡಿದನು. ಅವಳು ಗರ್ಭಿಣಿಯಾದಳು. ತಾನು ಗರ್ಭಿಣಿಯಾದೆನೆಂದು ತಿಳಿದ ಅವಳು, ತನ್ನ ಯಜಮಾನಿಯನ್ನೇ ತಾತ್ಸಾರ ಮಾಡತೊಡಗಿದಳು.

5 ಆಗ ಸಾರಯಳು ಅಬ್ರಾಮನಿಗೆ, "ನನಗೆ ಅನ್ಯಾಯವಾಗುತ್ತಿದೆ; ಇದಕ್ಕೆ ನೀವೇ ಹೊಣೆ. ನನ್ನ ದಾಸಿಯನ್ನು ನಿಮಗೆ ಉಪಪತ್ನಿಯಾಗಿ ಕೊಟ್ಟೆನಷ್ಟೆ; ಇವಳೋ, ತಾನು ಗರ್ಭಿಣಿಯಾದೆನೆಂದು ತಿಳಿದದ್ದೆ, ನನ್ನನ್ನು ತಾತ್ಸಾರಮಾಡುತ್ತಿದ್ದಾಳೆ; ಈಗ ಸರ್ವೇಶ್ವರಸ್ವಾಮಿಯೇ ನಿಮಗೂ ನನಗೂ ನ್ಯಾಯ ತೀರಿಸಬೇಕು," ಎಂದು ದೂರಿದಳು.

6 ಅದಕ್ಕೆ ಅಬ್ರಾಮನು, "ನಿನ್ನ ದಾಸಿ ನಿನ್ನ ಕೈಯಲ್ಲೇ ಇದ್ದಾಳೆ. ನಿನಗಿಷ್ಟಬಂದಂತೆ ಮಾಡು," ಎಂದುಬಿಟ್ಟನು. ಬಳಿಕ ಸಾರಯಳು ಕೊಡುತ್ತಿದ್ದ ಕಿರುಕುಳವನ್ನು ತಾಳಲಾರದೆ ಹಾಗರಳು ಓಡಿಹೋದಳು.

7 ಮರಳುಗಾಡಿನಲ್ಲಿ ಶೂರಿಗೆ ಹೋಗುವ ಹಾದಿಪಕ್ಕದಲ್ಲಿದ್ದ ಒಂದು ಒರತೆಯ ಬಳಿ ಸ್ವಾಮಿಯ
ದೂತನು ಅವಳನ್ನು ಕಂಡನು. [8]"ಸಾರಯಳ ದಾಸಿಯಾದ ಹಾಗರಳೇ, ಎಲ್ಲಿಂದ ಬಂದೆ? ಎಲ್ಲಿಗೆ
ಹೋಗುತ್ತಿರುವೆ?" ಎಂದು ವಿಚಾರಿಸಿದನು. "ನನ್ನ ಯಜಮಾನಿ ಸಾರಯಳ ಬಳಿಯಿಂದ
ಓಡಿಹೋಗುತ್ತಿದ್ದೇನೆ," ಎಂದು ಉತ್ತರಕೊಟ್ಟಳು. [9]ಅದಕ್ಕೆ ಆ ದೂತನು, "ನಿನ್ನ ಯಜಮಾನಿಯ ಬಳಿಗೆ
ಹಿಂತಿರುಗು, ಅವಳಿಗೆ ತಗ್ಗಿ ನಡೆದುಕೊ," ಎಂದು ತಿಳಿಸಿದನು. [10]ಅದೂ ಅಲ್ಲದೆ ಸ್ವಾಮಿಯ ದೂತನು,
"ನಿನ್ನ ಸಂತಾನವನ್ನು ಲೆಕ್ಕಿಸಲಾಗದಷ್ಟು ದೊಡ್ಡದಾಗಿಸುವೆನು," ಎಂದು ಹೇಳಿ ಇಂತೆಂದನು:

11 ಹುಟ್ಟುವನು ಮಗನೊಬ್ಬನು
ಗರ್ಭಿಣಿಯಾದ ನಿನಗೆ
ಇಷ್ಮಾಯೇಲೆಂಬ ಹೆಸರನು
ಇಡು ಅವನಿಗೆ
ಕಾರಣ – ಸರ್ವೇಶ್ವರ
ಕಿವಿಗೊಟ್ಟಿಹನು ನಿನ್ನ ಮೊರೆಗೆ.
12 ಬಾಳುವನವನು ಕಾಡುಗತ್ತೆಯಂತೆ
ಎತ್ತುವನು ಕೈಯನು ಎಲ್ಲರ ಮೇಲೆ,
ಎತ್ತುವರೆಲ್ಲರು ಕೈ ಅವನ ಮೇಲೆ
ಬಾಳುವನು ಸೋದರರಿಗೆ
ಎದುರು ಬದುರಾಗೆ."

13 ಹಾಗರಳು, "ನನ್ನನ್ನು ನೋಡುವಾತ ದೇವರನ್ನು ನಾನಿಲ್ಲೇ ನೋಡಿಬಿಟ್ಟೆನಲ್ಲಾ!" ಎಂದುಕೊಂಡು
ತನ್ನ ಸಂಗಡ ಮಾತನಾಡಿದ ಸರ್ವೇಶ್ವರಸ್ವಾಮಿಗೆ, "ಎಲ್ಲವನ್ನು ನೋಡುವಾತ ದೇವರು" ಎಂದು
ಹೆಸರಿಟ್ಟಳು. [14]ಈ ಕಾರಣ ಅಲ್ಲಿದ್ದ ಬಾವಿಗೆ "ಲಹೈರೋಯಿ" (ನನ್ನನ್ನು ನೋಡುವ ಜೀವ ಸ್ವರೂಪನ
ಬಾವಿ) ಎಂದು ಹೆಸರಾಯಿತು. [15]ಹಾಗರಳು ಅಬ್ರಾಮನಿಗೆ ಒಬ್ಬ ಮಗನನ್ನು ಹೆತ್ತಳು. ಅಬ್ರಾಮನು ಅವನಿಗೆ
ಇಷ್ಮಾಯೇಲ್ ಎಂದು ಹೆಸರಿಟ್ಟನು. [16]ಆಗ ಅಬ್ರಾಮನಿಗೆ ಎಂಬತ್ತಾರು ವರ್ಷವಾಗಿತ್ತು.

### ಸುನ್ನತಿ ಒಡಂಬಡಿಕೆಯ ಸಂಕೇತ

**17** ಅಬ್ರಾಮನಿಗೆ ತೊಂಬತ್ತೊಂಬತ್ತು ವರ್ಷಗಳಾಗಿದ್ದಾಗ, ಸರ್ವೇಶ್ವರ ದರ್ಶನವಿತ್ತು ಇಂತೆಂದರು: "ನಾನು
ಸರ್ವಶಕ್ತ ಸರ್ವೇಶ್ವರ. ನೀನು ನನ್ನ ಸಮ್ಮುಖದಲ್ಲಿದ್ದು ನಿರ್ದೋಷಿಯಾಗಿ ನಡೆದುಕೊಳ್ಳಬೇಕು. [2]ನಿನ್ನ
ಸಂಗಡ ನಾನು ಒಂದು ಒಡಂಬಡಿಕೆಯನ್ನು ಮಾಡಿಕೊಳ್ಳುತ್ತೇನೆ: ನಿನಗೆ ಅಧಿಕಾಧಿಕವಾದ ಸಂತತಿಯನ್ನು
ಕೊಡುತ್ತೇನೆ," ಎಂದರು. [3]ಅಬ್ರಾಮನು ಅಡ್ಡಬಿದ್ದು ಸಾಷ್ಟಾಂಗ ಪ್ರಣಾಮ ಮಾಡಿದನು. [4]ದೇವರು ಅವನಿಗೆ,
"ನಾನು ನಿನಗೆ ವಾಗ್ದಾನ ಮಾಡಿ ಹೇಳುತ್ತೇನೆ: ನೀನು ಅನೇಕ ರಾಷ್ಟ್ರಗಳಿಗೆ ಮೂಲ ಪುರುಷನಾಗುವೆ. [5]ಇನ್ನು
ಮುಂದೆ ನಿನಗೆ 'ಅಬ್ರಾಮ' ಎಂಬ ಹೆಸರಿರುವುದಿಲ್ಲ. ನಿನ್ನನ್ನು ನಾನು ಅನೇಕಾನೇಕ ರಾಷ್ಟ್ರಗಳಿಗೆ
ಮೂಲಪುರುಷನನ್ನಾಗಿ ನೇಮಿಸುವುದರಿಂದ ನಿನಗೆ 'ಅಬ್ರಹಾಮ' ಎಂಬ ಹೆಸರಿರುವುದು. [6]ನಿನ್ನನ್ನು ಅತ್ಯಂತ
ಫಲದಾಯಕ ಪುರುಷನನ್ನಾಗಿ ಮಾಡುತ್ತೇನೆ. ನಿನ್ನಿಂದ ರಾಷ್ಟ್ರಗಳೂ ರಾಜರುಗಳೂ ಉತ್ಪತ್ತಿಯಾಗುವರು.
[7]ನಿನಗೂ ನಿನ್ನ ಸಂತತಿಗೂ ನಾನು ದೇವರಾಗಿರುತ್ತೇನೆ. ಈ ನನ್ನ ಒಡಂಬಡಿಕೆಯನ್ನು ನಿನಗೋಸ್ಕರವೂ
ನಿನ್ನ ಸಂತತಿಗೋಸ್ಕರವೂ ತಲತಲಾಂತರದವರೆಗೂ ಚಿರಒಡಂಬಡಿಕೆಯಾಗಿ ಸ್ಥಿರಪಡಿಸುತ್ತೇನೆ. [8]ನೀನು
ಪ್ರವಾಸವಾಗಿರುವ ಈ ಕಾನಾನ್ ನಾಡೆಲ್ಲವನ್ನು ನಿನಗೂ ನಿನ್ನ ಸಂತಾನಕ್ಕೂ ಶಾಶ್ವತವಾದ ಸೊತ್ತಾಗಿ
ಕೊಡುತ್ತೇನೆ. ನಾನು ನಿಮ್ಮ ಕುಲದೇವರಾಗಿರುತ್ತೇನೆ."

9 ಇದಲ್ಲದೆ ದೇವರು ಅಬ್ರಹಾಮನಿಗೆ ಹೀಗೆಂದು ಹೇಳಿದರು: "ನೀನು ಕೂಡ ನನ್ನ
ಒಡಂಬಡಿಕೆಯನ್ನು ಕೈಗೊಂಡು ನಡೆಯಬೇಕು. ನೀನು ಮಾತ್ರವಲ್ಲ, ನಿನ್ನ ಸಂತತಿಯವರು
ತಲತಲಾಂತರಕ್ಕೂ ಅದನ್ನು ಕೈಗೊಂಡು ನಡೆಯಬೇಕು. [10]ನೀನೂ ನಿನ್ನ ಸಂತತಿಯವರೂ ಕೈಗೊಳ್ಳಬೇಕಾದ

ನನ್ನ ಒಡಂಬಡಿಕೆ ಇದು: ನಿಮ್ಮಲ್ಲಿ ಪ್ರತಿಯೊಬ್ಬ ಗಂಡಸಿಗೂ ಸುನ್ನತಿಯಾಗಬೇಕು. [11]ನೀವು ನಿಮ್ಮ ಜನನಾಂಗದ ಮುಂದೊಗಲನ್ನು ಸುನ್ನತಿಮಾಡಿಸಿಕೊಳ್ಳಬೇಕು. ಅದೇ ನಿಮಗೂ ನನಗೂ ಆದ ಒಡಂಬಡಿಕೆಯ ಗುರುತು. [12]ಎಲ್ಲ ತಲಾಂತರಗಳಲ್ಲಿ ನಿಮ್ಮಲ್ಲಿರುವ ಪ್ರತಿಯೊಂದು ಗಂಡುಮಗುವಿಗೂ ಜೀತಗಾರರಿಗೂ ಮನೆಯಲ್ಲಿ ಹುಟ್ಟಿದ ಅಥವಾ ಅನ್ಯರಿಂದ ಕ್ರಯಕ್ಕೆ ಕೊಂಡುಕೊಂಡವರಿಗೂ, ಎಂಟು ದಿನಗಳ ವಯಸ್ಸಾದಾಗ ಸುನ್ನತಿ ಮಾಡಿಸಬೇಕು. [13]ಮನೆಯಲ್ಲಿ ಹುಟ್ಟಿದವನೇ ಆಗಿರಲಿ, ಕ್ರಯಕ್ಕೆ ಕೊಂಡುಕೊಂಡವನೇ ಆಗಿರಲಿ, ಪ್ರತಿ ಒಬ್ಬನಿಗೂ ತಪ್ಪದೆ ಸುನ್ನತಿಯಾಗಬೇಕು. ನಾನು ಮಾಡುವ ಒಡಂಬಡಿಕೆಯ ಗುರುತು ಹೀಗೆ ನಿಮ್ಮ ದೇಹದಲ್ಲಿ ಇದ್ದು ಶಾಶ್ವತವಾದ ಒಡಂಬಡಿಕೆಯನ್ನು ಸೂಚಿಸುವುದು. [14]ಸುನ್ನತಿ ಮಾಡಿಸಿಕೊಳ್ಳದ ಗಂಡಸು ನನ್ನ ಒಡಂಬಡಿಕೆಯನ್ನು ಉಲ್ಲಂಘಿಸಿದವನಾದ ಕಾರಣ, ಅವನು ಕುಲದಿಂದ ಬಹಿಷ್ಕೃತನಾಗಬೇಕು.

15 ದೇವರು ಅಬ್ರಹಾಮನಿಗೆ ಇನ್ನೂ ಹೇಳಿದ್ದು ಏನೆಂದರೆ: "ನೀನು ಇನ್ನು ಮುಂದೆ ನಿನ್ನ ಹೆಂಡತಿಯನ್ನು ಸಾರಯಳು ಎಂದು ಕರೆಯದೆ ಸಾರಳು ಎಂದು ಕರೆಯಬೇಕು. [16]ನಾನು ಆಕೆಯನ್ನು ಆಶೀರ್ವದಿಸಿದ್ದೇನೆ. ಆಕೆ ನಿನಗೊಬ್ಬ ಮಗನನ್ನು ಹೆರುವಳು. ನನ್ನ ಆಶೀರ್ವಾದ ಪಡೆದ ಆಕೆ ರಾಷ್ಟ್ರಗಳಿಗೆ ಮಾತೆಯಾಗುವಳು; ಆಕೆಯಿಂದ ರಾಷ್ಟ್ರಗಳೂ, ರಾಜರುಗಳೂ ಉತ್ಪತ್ತಿಯಾಗುವರು." [17]ಅಬ್ರಹಾಮನು ಅಡ್ಡಬಿದ್ದು ಸಾಷ್ಟಾಂಗ ಪ್ರಣಾಮ ಮಾಡಿದನು. ಆದರೆ, "ನೂರು ವರ್ಷದವನಿಗೆ ಮಗ ಹುಟ್ಟುವುದುಂಟೆ? ತೊಂಬತ್ತು ವರ್ಷದವಳಾದ ಸಾರಳು ಹೆತ್ತಾಳೆ?" ಎಂದು ಅಬ್ರಹಾಮನು ಮನಸ್ಸಿನಲ್ಲೇ ನೆನೆದು ನಕ್ಕು ದೇವರಿಗೆ, [18]"ಇಷ್ಮಾಯೇಲನು ಇದ್ದಾನಲ್ಲವೆ? ನಿಮ್ಮ ಸಮ್ಮುಖದಲ್ಲಿ ಅವನು ಬಾಳಿದರೆ ಸಾಕಲ್ಲವೆ?" ಎಂದನು. [19]ಅದಕ್ಕೆ ದೇವರು, "ಇಲ್ಲ, ನಿನ್ನ ಹೆಂಡತಿ ಸಾರಳೇ ನಿನಗೊಂದು ಮಗನನ್ನು ಹೆರುವಳು. ಅವನಿಗೆ ಇಸಾಕನೆಂದು ಹೆಸರಿಡಬೇಕು. ನನ್ನ ಒಡಂಬಡಿಕೆಯನ್ನು ಅವನೊಂದಿಗೂ ಅವನ ಸಂತತಿಯೊಂದಿಗೂ ಚಿರವಾದ ಒಡಂಬಡಿಕೆಯಾಗಿ ಸ್ಥಿರಗೊಳಿಸುತ್ತೇನೆ. [20]ಇಷ್ಮಾಯೇಲನ ವಿಷಯದಲ್ಲಿ ನೀನು ಮಾಡಿದ ಬಿನ್ನಹವನ್ನು ಕೇಳಿದ್ದೇನೆ. ಅವನನ್ನೂ ಆಶೀರ್ವದಿಸಿದ್ದೇನೆ. ಅವನನ್ನು ಅಭಿವೃದ್ಧಿಮಾಡಿ ಅವನಿಗೆ ಅತ್ಯಧಿಕವಾದ ಸಂತತಿಯನ್ನು ಕೊಡುತ್ತೇನೆ. ಅವನು ಹನ್ನೆರಡು ಮಂದಿ ಅಧಿಪತಿಗಳಿಗೆ ಮೂಲ ಪಿತನಾಗುವನು. ಅವನ ಸಂತತಿಯನ್ನು ದೊಡ್ಡ ರಾಷ್ಟ್ರವನ್ನಾಗಿ ಮಾಡುತ್ತೇನೆ. [21]ಆದರೆ ಆ ನನ್ನ ಒಡಂಬಡಿಕೆಯನ್ನು ಇಸಾಕನಲ್ಲಿಯೇ ಊರ್ಜಿತಗೊಳಿಸುತ್ತೇನೆ. [22]ಬರುವ ವರ್ಷ ಇದೇ ಕಾಲದಲ್ಲಿ ಸಾರಳು ಅವನನ್ನು ಹೆರುವಳು," ಎಂದರು. ಇಷ್ಟನ್ನು ಮಾತಾಡಿ ಮುಗಿಸಿದ ಮೇಲೆ ದೇವರು ಅಬ್ರಹಾಮನಿಂದ ಅದೃಶ್ಯರಾದರು.

23 ಅದೇ ದಿನದಂದು ಅಬ್ರಹಾಮನು ದೇವರ ಅಪ್ಪಣೆಯ ಪ್ರಕಾರ ತನ್ನ ಮಗನಾದ ಇಷ್ಮಾಯೇಲನಿಗೂ ತನ್ನ ಮನೆಯಲ್ಲಿದ್ದ ಎಲ್ಲ ಗಂಡಸರಿಗೂ ಮನೆಯಲ್ಲಿ ಹುಟ್ಟಿದ ಹಾಗು ತಾನು ಕ್ರಯಕ್ಕೆ ಕೊಂಡುಕೊಂಡ ಜೀತದಾರರಿಗೂ ಸುನ್ನತಿ ಮಾಡಿಸಿದನು. [24]ಅಬ್ರಹಾಮನಿಗೆ ಸುನ್ನತಿ ಆದಾಗ ಅವನಿಗೆ ತೊಂಬತ್ತೊಂಬತ್ತು ವರ್ಷವಾಗಿತ್ತು. [25]ಇಷ್ಮಾಯೇಲನಿಗೆ ಸುನ್ನತಿಯಾದಾಗ ಅವನಿಗೆ ಹದಿಮೂರು ವರ್ಷ ವಯಸ್ಸು.

26 ಅಬ್ರಹಾಮನಿಗೂ ಅವನ ಮಗ ಇಷ್ಮಾಯೇಲನಿಗೂ ಒಂದೇ ದಿನದಲ್ಲಿ ಸುನ್ನತಿ ಆಯಿತು. [27]ಅವನ ಮನೆಯಲ್ಲಿದ್ದ ಗಂಡಸರೆಲ್ಲರಿಗೂ ಮನೆಯಲ್ಲಿ ಹುಟ್ಟಿದ ಹಾಗೂ ಅನ್ಯರಿಂದ ಕ್ರಯಕ್ಕೆ ಕೊಂಡುಕೊಂಡಿದ್ದ ಜೀತದಾರರಿಗೂ ಅವನೊಂದಿಗೆ ಸುನ್ನತಿಯಾಯಿತು.

### ಅಬ್ರಹಾಮನಿಗೆ ಪುತ್ರ ವಾಗ್ದಾನ

**18** ಒಂದು ದಿನ ಅಬ್ರಹಾಮನು ಉರಿಬಿಸಿಲ ವೇಳೆಯಲ್ಲಿ ಮಮ್ರೇತೋಪಿನ ತನ್ನ ಗುಡಾರದ ಬಾಗಿಲಲ್ಲಿ ಕುಳಿತಿದ್ದನು. ಆಗ ಅವನಿಗೆ ಸರ್ವೇಶ್ವರ ಸ್ವಾಮಿಯ ದರ್ಶನವಾಯಿತು. [2]ಅವನು ಕಣ್ಣೆತ್ತಿ ನೋಡಿದಾಗ ಯಾರೋ ಮೂರು ಮಂದಿ ಪುರುಷರು ಹತ್ತಿರದಲ್ಲೇ ನಿಂತಿದ್ದರು. ಅವರನ್ನು ಎದುರುಗೊಳ್ಳಲು

ಅಬ್ರಹಾಮನು ಕೂಡಲೆ ಗುಡಾರದ ಬಾಗಿಲಿನಿಂದ ಓಡಿಬಂದು, ತಲೆಬಾಗಿ ನಮಸ್ಕರಿಸಿ, 3"ಸ್ವಾಮಿ,
ದಯವಿರಲಿ, ದಾಸನ ಬಳಿಗೆ ದಯಮಾಡದೆ ಮುಂದೆ ಹೋಗಬೇಡಿ. 4ನೀರು ತರಿಸಿಕೊಡುತ್ತೇನೆ. ಕಾಲು
ತೊಳೆದುಕೊಂಡು ಈ ಮರದ ನೆರಳಿನಲ್ಲಿ ವಿಶ್ರಮಿಸಿಕೊಳ್ಳಿ. 5ಸ್ವಲ್ಪ ಆಹಾರ ತರುತ್ತೇನೆ. ಊಟವಾದ ಮೇಲೆ
ನೀವು ಮುಂದಕ್ಕೆ ಪ್ರಯಾಣ ಮಾಡಬಹುದು. ದಾಸನಿರುವ ಸ್ಥಳದ ಹತ್ತಿರ ಹಾದುಹೋಗುತ್ತಿದ್ದೀರಲ್ಲವೆ?"
ಎನ್ನಲು ಅವರು "ನೀನು ಹೇಳಿದಂತೆಯೇ ಆಗಲಿ," ಎಂದರು.

6ಆಗ ಅಬ್ರಹಾಮನು ಗುಡಾರದಲ್ಲಿದ್ದ ಸಾರಳ ಬಳಿಗೆ ಓಡಿ ಆಕೆಗೆ, "ಹಸನಾದ ಮೂರು
ಸೇರುಹಿಟ್ಟನ್ನು ನಾದಿ, ಬೇಗ ರೊಟ್ಟಿಗಳನ್ನು ಮಾಡು," ಎಂದನು. 7ಅನಂತರ ದನಗಳ ಹಟ್ಟಿಗೆ ಓಡಿಹೋಗಿ
ಕೊಬ್ಬಿದ ಎಳೇ ಕರುವನ್ನು ತೆಗೆದು ಆಳಿನ ಕೈಗೆ ಕೊಟ್ಟನು. ಆಳು ಬೇಗನೆ ಅಡಿಗೆಮಾಡಿದನು. 8ತರುವಾಯ
ಅಬ್ರಹಾಮನು ಹಾಲು ಮೊಸರನ್ನು ಹಾಗೂ ಅಟ್ಟಮಾಂಸವನ್ನು ತೆಗೆದುಕೊಂಡು ಬಂದು ಆ ಮನುಷ್ಯರಿಗೆ
ಬಡಿಸಿದನು. ಅವರು ಮರದ ಕೆಳಗೆ ಊಟಮಾಡಿ ಮುಗಿಸುವವರೆಗೂ ಅವನೇ ಹತ್ತಿರ ನಿಂತು ಉಪಚಾರ
ಮಾಡಿದನು.

9 ಬಳಿಕ, "ನಿನ್ನ ಹೆಂಡತಿ ಸಾರಳು ಎಲ್ಲಿ?" ಎಂದು ಆ ಅತಿಥಿಗಳು ವಿಚಾರಿಸಿದಾಗ, "ಅಲ್ಲಿ
ಗುಡಾರದಲ್ಲಿದ್ದಾಳೆ," ಎಂದು ಉತ್ತರಕೊಟ್ಟನು. 10ಆಗ ಸರ್ವೇಶ್ವರಸ್ವಾಮಿ, "ಬರುವ ವರ್ಷ ಇದೇ ಕಾಲದಲ್ಲಿ
ನಾನು ತಪ್ಪದೆ ಮರಳಿ ನಿನ್ನ ಬಳಿಗೆ ಬರುತ್ತೇನೆ; ಬಂದಾಗ ನಿನ್ನ ಹೆಂಡತಿ ಸಾರಳಿಗೆ ಮಗನಿರುತ್ತಾನೆ,"
ಎಂದರು. ಈ ಮಾತು ಹಿಂದೆ ಗುಡಾರದ ಬಾಗಿಲಲ್ಲಿ ನಿಂತಿದ್ದ ಸಾರಳ ಕಿವಿಗೆ ಬಿದ್ದಿತು. 11ಅಬ್ರಹಾಮನು
ಮತ್ತು ಸಾರಳು ಬಹುವೃದ್ಧರಾಗಿದ್ದರು; ಸಾರಳಿಗೆ ಮುಟ್ಟು ನಿಂತು ಹೋಗಿತ್ತು. 12ಎಂತಲೇ ಆಕೆ, "ನನ್ನಂಥ
ಮುದುಕಿಗೆ ಸಂಭೋಗ ಸಾಧ್ಯವೆ? ನನ್ನ ಯಜಮಾನರೂ ಮುದುಕರಲ್ಲವೆ?" ಎಂದುಕೊಂಡು ನಕ್ಕಳು.
13ಅಬ್ರಹಾಮನಿಗೆ, ಸರ್ವೇಶ್ವರ "ಸಾರಳು ತಾನು ಮುದುಕಿಯಾದ ಕಾರಣ ಹೆರಲು ಸಾಧ್ಯವೆ' ಎಂದು ನಕ್ಕಿದ್ದು
ಏಕೆ? 14ಸರ್ವೇಶ್ವರನಿಗೆ ಅಸಾಧ್ಯವಾದುದು ಯಾವುದು? ನಾನು ಹೇಳಿದಂತೆಯೇ ಬರುವ ವರ್ಷದ ಇದೇ
ಕಾಲದಲ್ಲಿ ನಾನು ನಿನ್ನ ಬಳಿಗೆ ಬಂದಾಗ ಸಾರಳಿಗೆ ಮಗನಿರುತ್ತಾನೆ" ಎಂದು ಹೇಳಿದರು. 15ಆಗ ಸಾರಳು
ಭಯದಿಂದ, "ನಾನು ನಗಲಿಲ್ಲ" ಎಂದು ನಿರಾಕರಿಸಿದಳು. ಸರ್ವೇಶ್ವರ, "ಹಾಗನ್ನಬೇಡಮ್ಮಾ, ನೀನು ನಕ್ಕದ್ದು
ನಿಜ," ಎಂದರು.

**ಸೊದೋಮಿನ ಪರವಾಗಿ ಅಬ್ರಹಾಮನ ಪ್ರಾರ್ಥನೆ**

16 ಆ ಮನುಷ್ಯರು ಅಲ್ಲಿಂದ ಹೊರಟು ಸೊದೋಮ್ ಕಾಣಿಸುತ್ತಿದ್ದ ಒಂದು ಸ್ಥಳಕ್ಕೆ ಬಂದರು.
ಅವರನ್ನು ಸಾಗಕಳುಹಿಸುತ್ತಾ ಅಬ್ರಹಾಮನೂ ಅವರ ಜೊತೆಯಲ್ಲೇ ಅಲ್ಲಿಗೆ ಬಂದನು. 17ಆಗ ಸರ್ವೇಶ್ವರ
ತಮ್ಮೊಳಗೆ ಇಂತೆಂದುಕೊಂಡರು: "ನಾನು ಮಾಡಬೇಕು ಎಂದಿರುವ ಕಾರ್ಯವನ್ನು ಅಬ್ರಹಾಮನಿಂದ
ಮರೆಮಾಡುವುದು ಸರಿಯಲ್ಲ. 18ಅವನಿಂದ ಮಹಾ ಬಲಿಷ್ಠವಾದ ರಾಷ್ಟ್ರವೊಂದು ಹುಟ್ಟಬೇಕಾಗಿದೆ. ಅವನ
ಮುಖಾಂತರ ಜಗದ ಎಲ್ಲ ರಾಷ್ಟ್ರಗಳಿಗೆ ನನ್ನ ಆಶೀರ್ವಾದ ದೊರಕಬೇಕಾಗಿದೆ. 19ಅವನು ತನ್ನ ಪುತ್ರ
ಪೌತ್ರರಿಗೆ, 'ನೀವು ನ್ಯಾಯ ನೀತಿಯನ್ನು ಪಾಲಿಸುತ್ತಾ ಸರ್ವೇಶ್ವರಸ್ವಾಮಿಯ ಮಾರ್ಗದಲ್ಲೇ ನಡೆಯಬೇಕು;
ಹಾಗೆ ಮಾಡಿದರೆ ವಾಗ್ದಾನ ಮಾಡಿದುದನ್ನೆಲ್ಲ ಈಡೇರಿಸುವರು,' ಎಂದು ಬೋಧಿಸಲೆಂದೇ ನಾನು ಅವನನ್ನು
ಆರಿಸಿಕೊಂಡಿದ್ದೇನೆ."

20 ಇದಲ್ಲದೆ ಸರ್ವೇಶ್ವರ, "ಸೊದೋಮ್ ಗೊಮೋರಗಳ ವಿರುದ್ಧ ಎಷ್ಟೋ ಘನತರವಾದ
ದೂರುಗಳು ನನಗೆ ಬಂದಿವೆ; ಆ ಊರಿನವರ ಮೇಲೆ ಹೊರಿಸಲಾಗಿರುವ ಪಾಪಕೃತ್ಯವೂ ಘೋರವಾದುದು.
21ನನಗೆ ಮುಟ್ಟಿರುವ ದೂರಂತೆ ಅವರು ಮಾಡಿದರೋ ಇಲ್ಲವೋ ಎಂದು ನೋಡಿ ತಿಳಿದುಕೊಳ್ಳುತ್ತೇನೆ,"
ಎಂದುಕೊಂಡರು.

22 ಆಗ ಆ ಇಬ್ಬರು ಮನುಷ್ಯರು ಅಲ್ಲಿಂದ ಸೊದೋಮಿನ ಕಡೆಗೆ ಹೋದರು. ಆದರೆ
ಅಬ್ರಹಾಮನು ಸರ್ವೇಶ್ವರಸ್ವಾಮಿಯ ಸಂಗಡವೇ ಉಳಿದುಕೊಂಡನು. 23ಅವನು ಅವರ ಹತ್ತಿರಕ್ಕೆ ಬಂದು,
"ನೀವು ದುರ್ಜನರ ಸಂಗಡ ಸಜ್ಜನರನ್ನೂ ನಾಶ ಮಾಡುವಿರೋ? 24ಒಂದು ವೇಳೆ ಆ ಊರೊಳಗೆ ಐವತ್ತು
ಮಂದಿ ಸಜ್ಜನರಿದ್ದಾರು. ಅದರಲ್ಲಿ ಐವತ್ತು ಮಂದಿ ಸಜ್ಜನರಿದ್ದರೂ ಆ ಸ್ಥಳವನ್ನು ಉಳಿಸದೆ

ನಾಶಮಾಡುವಿರೋ? [25]ಹೀಗೆ ದುಷ್ಟರಿಗೂ ಶಿಷ್ಟರಿಗೂ ಭೇದ ಮಾಡದೆ ದುಷ್ಟರ ಸಂಗಡ ಸಜ್ಜನರನ್ನೂ
ಸಂಹರಿಸುವುದು ನಿಮ್ಮಿಂದ ಎಂದಿಗೂ ಆಗಬಾರದು. ಇಡೀ ಜಗತ್ತಿನ ನ್ಯಾಯಾಧಿಪತಿ ಸರಿಯಾಗಿ
ನ್ಯಾಯತೀರಿಸಬೇಕಲ್ಲವೆ?" ಎಂದನು. [26]ಅದಕ್ಕೆ ಸರ್ವೇಶ್ವರ, "ಸೊದೋಮಿನಲ್ಲಿ ಐವತ್ತು ಮಂದಿ ಸಜ್ಜನರು
ನನಗೆ ಸಿಕ್ಕಿದರೆ ಅವರ ನಿಮಿತ್ತ ಊರನ್ನೆಲ್ಲಾ ಉಳಿಸುತ್ತೇನೆ," ಎಂದರು. [27]ಆಗ ಅಬ್ರಹಾಮನು "ನಾನಂತೂ
ಮಣ್ಣುಬೂದಿ. ಆದರೂ ಸ್ವಾಮಿಯ ಸಂಗಡ ವಾದಿಸುವುದಕ್ಕೆ ಧೈರ್ಯಗೊಂಡಿದ್ದೇನೆ. [28]ಒಂದು ವೇಳೆ
ಐವತ್ತು ಮಂದಿ ಸಜ್ಜನರಿಗೆ ಐದು ಮಂದಿ ಕಡಿಮೆಯಾಗಿದ್ದಾರು. ಐದು ಮಂದಿ ಕಡಿಮೆಯಾದುದಕ್ಕೆ
ಪಟ್ಟಣವನ್ನೆಲ್ಲ ನಾಶ ಮಾಡುವಿರೋ?" ಎಂದು ಕೇಳಲು ಸರ್ವೇಶ್ವರ, "ಅಲ್ಲಿ ನಲವತ್ತೈದು ಮಂದಿ ಸಿಕ್ಕಿದರೆ
ಅದನ್ನು ನಾಶಮಾಡುವುದಿಲ್ಲ" ಎಂದರು. [29]ಅಬ್ರಹಾಮನು ಇನ್ನೂ ಮುಂದುವರೆದು, "ಒಂದು ವೇಳೆ ಅಲ್ಲಿ
ನಲವತ್ತು ಮಂದಿ ಸಿಕ್ಕಾರು" ಎನ್ನಲು "ನಲವತ್ತು ಮಂದಿ ಸಿಕ್ಕಿದರೆ ಆ ಪಟ್ಟಣವನ್ನು ನಾಶಮಾಡುವುದಿಲ್ಲ,"
ಎಂದರು. [30]ಅಬ್ರಹಾಮನು, "ಸ್ವಾಮಿ, ಕೋಪಮಾಡಬೇಡಿ; ಇನ್ನೂ ಮಾತಾಡುತ್ತೇನೆ. ಒಂದು ವೇಳೆ
ಮೂವತ್ತು ಮಂದಿ ಅಲ್ಲಿ ಸಿಕ್ಕಾರು" ಎನ್ನಲು ಸರ್ವೇಶ್ವರ, "ಅಲ್ಲಿ ಮೂವತ್ತು ಮಂದಿ ಸಿಕ್ಕಿದರೂ ಅದನ್ನು
ನಾಶಮಾಡುವುದಿಲ್ಲ" ಎಂದರು. [31]ಅವನು, "ಸ್ವಾಮಿಯ ಸಂಗಡ ಮಾತನಾಡಲು ನಾನು ಇನ್ನೂ
ಧೈರ್ಯಗೊಂಡಿದ್ದೇನೆ; ಒಂದು ವೇಳೆ ಇಪ್ಪತ್ತೇ ಮಂದಿ ಅಲ್ಲಿ ಸಿಕ್ಕಾರು," ಎನ್ನಲು, ಸರ್ವೇಶ್ವರ, "ಇಪ್ಪತ್ತು
ಮಂದಿಯಿದ್ದರೆ ಅವರ ನಿಮಿತ್ತ ಅದನ್ನು ಉಳಿಸುತ್ತೇನೆ, ನಾಶಮಾಡುವುದಿಲ್ಲ," ಎಂದರು. [32]ಅಬ್ರಹಾಮನು,
"ಸ್ವಾಮಿ, ಸಿಟ್ಟುಗೊಳ್ಳಬೇಡಿ; ಇನ್ನು ಒಂದೇ ಒಂದು ಸಾರಿ ಮಾತಾಡುತ್ತೇನೆ; ಒಂದು ವೇಳೆ ಹತ್ತೇ ಮಂದಿ
ಸಿಕ್ಕಾರು" ಎನ್ನಲು, ಸರ್ವೇಶ್ವರ, "ಹತ್ತು ಮಂದಿಯ ನಿಮಿತ್ತವೂ ಅದನ್ನು ಉಳಿಸುತ್ತೇನೆ,
ನಾಶಮಾಡುವುದಿಲ್ಲ," ಎಂದರು. [33]ಅನಂತರ ಅಬ್ರಹಾಮನೊಡನೆ ಮಾತಾಡುವುದನ್ನು ಮುಗಿಸಿ
ಸರ್ವೇಶ್ವರಸ್ವಾಮಿ ಹೊರಟುಹೋದರು. ಅಬ್ರಹಾಮನು ತನ್ನ ಮನೆಗೆ ಹಿಂದಿರುಗಿದನು.

## ಸೊದೋಮಿನ ಪಾಪಕೃತ್ಯ

**19** ಆ ದೂತರಿಬ್ಬರು ಸೊದೋಮಿಗೆ ಬಂದಾಗ ಸಾಯಂಕಾಲವಾಗಿತ್ತು. ಲೋಟನು ಆ ಊರ ಬಾಗಿಲಲ್ಲೇ
ಕುಳಿತುಕೊಂಡಿದ್ದನು. ದೂತರನ್ನು ಕಂಡದ್ದೇ ಅವನು ಎದ್ದುಬಂದು, ಬಾಗಿ ನಮಸ್ಕರಿಸಿ, [2]"ಸ್ವಾಮಿಗಳೇ,
ನಿಮ್ಮ ದಾಸನ ಮನೆಗೆ ಬಂದು ರಾತ್ರಿ ತಂಗಿರಿ. ಕಾಲುಗಳನ್ನು ತೊಳೆದುಕೊಳ್ಳಿ. ಬೆಳಿಗ್ಗೆ ಎದ್ದು ನಿಮ್ಮ
ಪ್ರಯಾಣವನ್ನು ಮುಂದುವರಿಸಬಹುದು," ಎಂದನು. [3]ಅವರು, "ಇಲ್ಲ, ನಾವು ಬೀದಿಯಲ್ಲೇ ರಾತ್ರಿಯನ್ನು
ಕಳೆಯುತ್ತೇವೆ," ಎಂದು ಉತ್ತರಿಸಿದರು. ಅವನು ಬಹಳವಾಗಿ ಒತ್ತಾಯಪಡಿಸಿದ್ದರಿಂದ ಅವನ ಮನೆಯಲ್ಲೇ
ತಂಗಲು ಒಪ್ಪಿಕೊಂಡರು. ಅವರು ಮನೆಗೆ ಬಂದಾಗ ಲೋಟನು ಹುಳಿಯಿಲ್ಲದ ರೊಟ್ಟಿಗಳನ್ನು ಸುಡಿಸಿ
ಔತಣವನ್ನು ಸಿದ್ಧಗೊಳಿಸಿದನು; ಅವರು ಊಟ ಮಾಡಿದರು.

4 ಆದರೆ ಅವರು ಮಲಗುವುದಕ್ಕೆ ಮುಂಚೆ ಆ ಸೊದೋಮ್ ಪಟ್ಟಣದ ಗಂಡಸರು, ಹುಡುಗರು
ಮುದುಕರು ಎನ್ನದೆ, ಎಲ್ಲರೂ ಬಂದು ಆ ಮನೆಯನ್ನು ಮುತ್ತಿದರು. [5]ಅಲ್ಲದೆ ಲೋಟನಿಗೆ, "ಈ ರಾತ್ರಿ
ತಂಗಲು ನಿನ್ನ ಬಳಿಗೆ ಬಂದ ಆ ಮನುಷ್ಯರು ಎಲ್ಲಿ? ಅವರನ್ನು ಹೊರಕ್ಕೆ ಕರೆದುಕೊಂಡು ಬಾ; ಅವರೊಡನೆ
ಸಂಭೋಗಿಸಬೇಕು," ಎಂದು ಕೂಗಿ ಹೇಳಿದರು. [6]ಲೋಟನು, ತನ್ನ ಹಿಂದೆ ಬಾಗಿಲು ಹಾಕಿಕೊಂಡು,
ಹೊರಕ್ಕೆ ಬಂದು, [7]"ಅಣ್ಣ ತಮ್ಮಂದಿರಾ, ನಿಮ್ಮನ್ನು ವಿನಂತಿಸಿ ಕೇಳಿಕೊಳ್ಳುತ್ತೇನೆ: ಈ ಪಾತಕ ಮಾತ್ರ
ಮಾಡಬೇಡಿ; [8]ಕೇಳಿ, ಕನ್ಯೆಯರಾದ ಇಬ್ಬರು ಹೆಣ್ಣು ಮಕ್ಕಳು ನನಗಿದ್ದಾರೆ; ಅವರನ್ನು ಬೇಕಾದರೆ ಹೊರಗೆ
ಕರೆಯಿಸುತ್ತೇನೆ; ನಿಮಗೆ ಇಷ್ಟಬಂದಂತೆ ಮಾಡಬಹುದು. ಆದರೆ ಆ ಮನುಷ್ಯರು ನನ್ನ ಆಶ್ರಯಕ್ಕಾಗಿ
ಬಂದವರು; ಅವರಿಗೆ ಏನೂ ಮಾಡಬೇಡಿ," ಎಂದನು.

9 ಅವರಾದರೋ, "ಬಿಡು ದಾರಿ, ಪ್ರವಾಸಿಯಾಗಿ ಬಂದ ಇವನು ನಮಗೆ
ನ್ಯಾಯಹೇಳುವವನಾಗಿಬಿಟ್ಟ! ದಾರಿ ಬಿಡದಿದ್ದರೆ ಆ ಮನುಷ್ಯರಿಗಿಂತ ನಿನಗೇ ಹೆಚ್ಚು ಕೇಡಾದೀತು," ಎಂದು
ಹೇಳಿ ಲೋಟನ ಮೇಲೆ ಬಿದ್ದು ತುಳಿದು ಬಾಗಿಲನ್ನು ಒಡೆದುಹಾಕುವುದರಲ್ಲಿದ್ದರು. [10]ಅಷ್ಟರಲ್ಲಿ ಒಳಗಿದ್ದ ಆ
ಮನುಷ್ಯರು ಕೈಚಾಚಿ ಲೋಟನನ್ನು ತಮ್ಮತ್ತ ಎಳೆದು ಮನೆಯೊಳಗೆ ಹಾಕಿಕೊಂಡು, ಬಾಗಿಲನ್ನು ಮುಚ್ಚಿದರು;

[11]ದೊಡ್ಡವರು ಚಿಕ್ಕವರು ಎನ್ನದೆ, ಹೊರಗಿದ್ದ ಆ ಜನರೆಲ್ಲರ ಕಣ್ಣು ಕುರುಡಾಗುವಂತೆ ಮಾಡಿದರು; ಬಾಗಿಲು ಯಾವುದೆಂದು ತಿಳಿಯದೆ ಅವರು ತಡಕಾಡುವಂತೆ ಮಾಡಿಬಿಟ್ಟರು.

## ಸೊದೋಮ್‍ನಿಂದ ಲೋಟನ ಓಟ

12 ಬಳಿಕ ಆ ಮನುಷ್ಯರಿಬ್ಬರು ಲೋಟನಿಗೆ, "ನಿನಗೆ ಇಲ್ಲಿ ಯಾರು ಯಾರು ಇದ್ದಾರೆಯೋ, ಗಂಡುಹೆಣ್ಣು ಮಕ್ಕಳು, ಅಳಿಯಂದಿರು ಹಾಗೂ ಪಟ್ಟಣದಲ್ಲಿ ನಿನಗಿರುವ ಬೇರೆ ಎಲ್ಲರನ್ನೂ ಊರ ಹೊರಕ್ಕೆ ಕರೆದುಕೊಂಡು ಬಾ. [13]ನಾವು ಈ ಸ್ಥಳವನ್ನು ನಾಶಮಾಡುವುದಕ್ಕೆ ಬಂದವರು. ಇಲ್ಲಿಯವರ ವಿಷಯವಾಗಿ ಬಂದ ಆಪಾದನೆ ದೊಡ್ಡದಾದುದರಿಂದ ಇವರನ್ನು ನಾಶಮಾಡುವುದಕ್ಕಾಗಿ ಸರ್ವೇಶ್ವರ ನಮ್ಮನ್ನು ಕಳಿಸಿದ್ದಾರೆ," ಎಂದು ತಿಳಿಸಿದರು.

14 ಲೋಟನು ಹೊರಕ್ಕೆ ಹೋಗಿ ತನ್ನ ಹೆಣ್ಣುಮಕ್ಕಳಿಗೆ ಗೊತ್ತು ಮಾಡಿದ್ದ ಅಳಿಯಂದಿರಿಗೆ ಸಂಗತಿಯನ್ನು ಹೇಳಿ, "ನೀವೆದ್ದು ಈ ಸ್ಥಳವನ್ನು ಬಿಟ್ಟು ಹೊರಡಿರಿ; ಈ ಊರನ್ನು ಸರ್ವೇಶ್ವರಸ್ವಾಮಿ ನಾಶಮಾಡಲಿದ್ದಾರೆ" ಎಂದು ಹೇಳಿದನು. ಆ ಅಳಿಯಂದಿರಿಗೆ ಇದೊಂದು ಪರಿಹಾಸ್ಯವಾಗಿ ಕಾಣಿಸಿತು.

15 ಹೊತ್ತು ಮೂಡುವುದಕ್ಕೆ ಮುಂಚೆ ದೂತರು ಲೋಟನಿಗೆ, "ಏಳು, ನಿನ್ನ ಹೆಂಡತಿ ಮತ್ತು ಹೆಣ್ಣುಮಕ್ಕಳಿಬ್ಬರನ್ನು ಕರೆದುಕೊಂಡು ಬೇಗನೆ ಹೊರಡು; ಇಲ್ಲದಿದ್ದರೆ ಊರಿಗೆ ಬರಲಿರುವ ದಂಡನೆಯಲ್ಲಿ ನೀನೂ ಸಿಕ್ಕಿಕೊಂಡು ನಾಶವಾಗಬೇಕಾದೀತು," ಎಂದು ಹೇಳಿ ತ್ವರೆಪಡಿಸಿದರು. [16]ಅವನು ಇನ್ನೂ ತಡಮಾಡುತ್ತಿರುವುದನ್ನು ಕಂಡು, ಆ ಮನುಷ್ಯರು ಅವನನ್ನು ಹಾಗು ಅವನ ಹೆಂಡತಿ ಮಕ್ಕಳನ್ನು ಕೈಹಿಡಿದು ಹೊರಗೆ ತಂದು ಊರಾಚೆಗೆ ಬಿಟ್ಟರು. ಸರ್ವೇಶ್ವರಸ್ವಾಮಿಗೆ ಅವನ ಮೇಲೆ ಅಷ್ಟು ಕನಿಕರವಿತ್ತು. [17]ಊರ ಹೊರಗೆ ಬಿಟ್ಟಾದ ಮೇಲೆ ಆ ಇಬ್ಬರಲ್ಲಿ ಒಬ್ಬನು, "ಪ್ರಾಣ ಉಳಿಸಿಕೊಳ್ಳಬೇಕಾದರೆ ಓಡಬೇಕು, ಹಿಂದಕ್ಕೆ ನೋಡಬಾರದು; ಬಯಲುಸೀಮೆಯಲ್ಲೂ ನಿಲ್ಲದೆ ಗುಡ್ಡಗಾಡಿಗೆ ಓಡಬೇಕು, ಇಲ್ಲವಾದರೆ ನಾಶವಾದೀತು!" ಎಂದು ಎಚ್ಚರಿಸಿದನು.

18 ಅದಕ್ಕೆ ಲೋಟನು, "ಸ್ವಾಮಿ, ಅದು ನನ್ನಿಂದಾಗದು; [19]ನಿಮ್ಮ ದಾಸನ ಮೇಲೆ ಮರುಕವಿಟ್ಟು ಪ್ರಾಣ ಉಳಿಸಿದ್ದೀರೋ ಮಹಾ ಉಪಕಾರ ಆಯಿತು; ಆದರೆ ಗುಡ್ಡಗಾಡಿಗೆ ಓಡಿಹೋಗಲು ನನ್ನಿಂದಾಗದು, ಅಲ್ಲಿಗೆ ಸೇರುವುದಕ್ಕೆ ಮುಂಚೆಯೇ ಈ ವಿಪತ್ತಿಗೆ ಸಿಕ್ಕಿ ಸತ್ತೇನು. [20]ಆದುದರಿಂದ ಅಗೋ, ಅಲ್ಲಿ ಊರೊಂದು ಕಾಣಿಸುತ್ತಿದೆ; ಅದು ಅಷ್ಟೇನು ದೂರವಲ್ಲ, ಚಿಕ್ಕ ಊರು, ಹೌದಲ್ಲವೆ? ಅಲ್ಲಿಗಾದರೂ ಹೋಗಲು ಅಪ್ಪಣೆಯಾದರೆ ಪ್ರಾಣ ಉಳಿಯುತ್ತದೆ," ಎಂದನು.

21 ಅದಕ್ಕಾತನು, "ಸರಿ, ಹಾಗೆಯೇ ಆಗಲಿ, ಈ ನಿನ್ನ ಕೋರಿಕೆಯನ್ನೂ ನೆರವೇರಿಸುತ್ತೇನೆ. ನೀನು ಹೇಳಿದ ಆ ಊರನ್ನು ಹಾಳುಮಾಡುವುದಿಲ್ಲ. [22]ಬೇಗನೆ ಅಲ್ಲಿಗೆ ಹೋಗಿ ಸುರಕ್ಷಿತವಾಗಿರು. ನೀನು ಅಲ್ಲಿಗೆ ಮುಟ್ಟುವ ತನಕ ನಾನು ಏನನ್ನೂ ಮಾಡಲಿಕ್ಕಾಗುವುದಿಲ್ಲ," ಎಂದನು. ಲೋಟನು ಆ ಊರನ್ನು ಚಿಕ್ಕದು ಎಂದು ಕರೆದುದಕ್ಕಾಗಿ ಅದಕ್ಕೆ "ಚೋಗರ್" ಎಂದು ಹೆಸರಾಯಿತು.

## ಸೊದೋಮ್ – ಗೊಮೋರಗಳ ವಿನಾಶ

23 ಲೋಟನು ಚೋಗರನ್ನು ಮುಟ್ಟುವಷ್ಟರಲ್ಲಿ ಸೂರ್ಯೋದಯವಾಗಿತ್ತು. [24]ಆಗ ಸರ್ವೇಶ್ವರಸ್ವಾಮಿ ಸೊದೋಮ್ – ಗೊಮೋರಗಳ ಮೇಲೆ ಅಗ್ನಿ, ಉರಿಯುತ್ತಿರುವ ಗಂಧಕ ಮಳೆ ಸುರಿಸಿದರು. [25]ಆ ಪಟ್ಟಣಗಳನ್ನು, ಇಡೀ ಆ ಬಯಲುಸೀಮೆಯನ್ನೂ ಅವುಗಳ ನಿವಾಸಿಗಳನ್ನೂ ಹೊಲಗಳ ಬೆಳೆಯೆಲ್ಲವನ್ನೂ ಹಾಳುಮಾಡಿದರು. [26]ಲೋಟನ ಹೆಂಡತಿಯೋ, ಅವನ ಹಿಂದೆ ಬರುತ್ತಿದ್ದಾಗ ಹಿಂದಿರುಗಿ ನೋಡಿದಳು; ಕೂಡಲೇ ಉಪ್ಪಿನ ಕಂಬವಾಗಿ ಮಾರ್ಪಟ್ಟಳು.

27 ಇತ್ತ ಅಬ್ರಹಾಮನು ಬೆಳಿಗ್ಗೆ ಎದ್ದು ತಾನು ಸರ್ವೇಶ್ವರಸ್ವಾಮಿ ಸನ್ನಿಧಿಯಲ್ಲಿ ನಿಂತಿದ್ದ ಸ್ಥಳಕ್ಕೆ ಮರಳಿ ಬಂದನು. [28]ಸೊದೋಮ್ – ಗೊಮೋರ ಹಾಗೂ ಆ ಬಯಲುಸೀಮೆಯತ್ತ ಅವನು ಕಣ್ಣುಹಾಯಿಸಿದಾಗ, ಇಗೋ, ಆ ಪ್ರದೇಶದಿಂದ ಹೊಗೆ, ದೊಡ್ಡ ಆವಿಗೆಯ ಹೊಗೆಯಂತೆ ಭುಗಿಲೇರುತ್ತಿತ್ತು. [29]ದೇವರು ಆ ಬಯಲುಸೀಮೆಯ ಪಟ್ಟಣಗಳನ್ನು ನಾಶ ಮಾಡಿದಾಗ ಲೋಟನು ವಾಸವಾಗಿದ್ದ

ಊರುಗಳನ್ನೇನೋ ಹಾಳು ಮಾಡಿದರು. ಆದರೆ ಅಬ್ರಹಾಮನನ್ನು ನೆನಪಿಗೆ ತಂದುಕೊಂಡು ಲೋಟನನ್ನು ತಪ್ಪಿಸಿ ಕಾಪಾಡಿದರು.

### ಲೋಟನಿಂದ ಮೋವಾಬ್ಯರ ಹಾಗೂ ಅಮೋನಿಯರ ಉಗಮ

30 ಲೋಟನು ಚೋಗರಿನಲ್ಲಿ ಮನೆ ಮಾಡುವುದಕ್ಕೆ ಅಂಜಿದನು. ಈ ಕಾರಣ ತನ್ನ ಇಬ್ಬರು ಹೆಣ್ಣು
ಮಕ್ಕಳನ್ನು ಕರೆದುಕೊಂಡು ಗುಡ್ಡಗಾಡನ್ನು ಹತ್ತಿ ಅಲ್ಲಿದ್ದ ಒಂದು ಗವಿಯಲ್ಲಿ ವಾಸಮಾಡಿದನು. [31]ಇಂತಿರಲು,
ಅವನ ಹಿರಿಯ ಮಗಳು ತನ್ನ ತಂಗಿಗೆ ಹೀಗೆಂದಳು, “ನಮ್ಮ ತಂದೆ ಮುದುಕ; ಲೋಕ ಪದ್ಧತಿಯ ಪ್ರಕಾರ
ನಮ್ಮನ್ನು ಮದುವೆ ಮಾಡಿಕೊಳ್ಳುವ ಗಂಡುಗಳು ಇಲ್ಲೆಲ್ಲಿಯೂ ಇಲ್ಲ. [32]ಎಂದೇ ಬಾ ತಂದೆಗೆ ದ್ರಾಕ್ಷಾರಸವನ್ನು
ಕುಡಿಸೋಣ; ಅವನ ಸಂಗಡ ಮಲಗಿಕೊಂಡು ತಂದೆಯಿಂದಲಾದರೂ ಸಂತಾನ ಪಡೆದುಕೊಳ್ಳೋಣ,”
ಎಂದಳು. [33]ಆ ರಾತ್ರಿ ಅವರು ತಂದೆಗೆ ದ್ರಾಕ್ಷಾರಸವನ್ನು ಕುಡಿಸಿದರು. ಹಿರಿಯ ಮಗಳು ಅವನ ಸಂಗಡ
ಮಲಗಿಕೊಂಡಳು. ಅವಳು ಯಾವಾಗ ತನ್ನ ಸಂಗಡ ಮಲಗಿಕೊಂಡಳೋ, ಯಾವಾಗ ಎದ್ದು ಹೋದಳೋ
ಏನೊಂದೂ ಅವನಿಗೆ ತಿಳಿಯಲಿಲ್ಲ. [34]ಮಾರನೆಯ ದಿನ ಹಿರಿಯಳು ಕಿರಿಯಳಿಗೆ, “ನಿನ್ನೆ ರಾತ್ರಿ ನಾನು
ಅಪ್ಪನ ಸಂಗಡ ಮಲಗಿದ್ದೆ. ಈ ರಾತ್ರಿ ಕೂಡ ಅವನಿಗೆ ದ್ರಾಕ್ಷಾರಸವನ್ನು ಕುಡಿಸೋಣ; ಆಮೇಲೆ ನೀನು
ಅವನ ಸಂಗಡ ಮಲಗಿಕೊ; ಹೀಗಾದರೂ ನಮ್ಮ ತಂದೆಯ ಸಂತಾನ ಉಳಿಸೋಣ”, ಎಂದು ಹೇಳಿದಳು.
[35]ಆ ರಾತ್ರಿಯೂ ತಂದೆಗೆ ದ್ರಾಕ್ಷಾರಸವನ್ನು ಕುಡಿಸಿದ ಮೇಲೆ ಕಿರಿಯ ಮಗಳು ಅವನ ಸಂಗಡ
ಮಲಗಿಕೊಂಡಳು. ಅವಳು ಯಾವಾಗ ತನ್ನ ಸಂಗಡ ಮಲಗಿದಳೋ, ಯಾವಾಗ ಎದ್ದು ಹೋದಳೋ
ಏನೊಂದೂ ಅವನಿಗೆ ತಿಳಿಯಲಿಲ್ಲ. [36]ಹೀಗೆ ಲೋಟನ ಇಬ್ಬರು ಹೆಣ್ಣು ಮಕ್ಕಳು ಗರ್ಭಿಣಿಯರಾದರು.
[37]ಹಿರಿಯಳು ಗಂಡು ಮಗುವನ್ನು ಹೆತ್ತು ಅದಕ್ಕೆ “ಮೋವಾಬ್” ಎಂದು ಹೆಸರಿಟ್ಟಳು. ಇಂದಿನವರೆಗೂ
ಇರುವ ಮೋವಾಬ್ಬರಿಗೆ ಅವನೇ ಮೂಲಪುರುಷ. [38]ಕಿರಿಯಳೂ ಗಂಡು ಮಗುವನ್ನು ಹೆತ್ತು ಅದಕ್ಕೆ ‘ಬಿನಮ್ಮಿ’
ಎಂದು ಹೆಸರಿಟ್ಟಳು. ಇಂದಿನವರೆಗೂ ಇರುವ ಅಮ್ಮೋನಿಯರಿಗೆ ಇವನೇ ಮೂಲಪುರುಷ.

### ಅಬ್ರಹಾಮನು ಮತ್ತು ಅಬೀಮೆಲೆಕನು

**20** ಅಬ್ರಹಾಮನು ಅಲ್ಲಿಂದ ಕಾನಾನ್ ನಾಡಿನ ದಕ್ಷಿಣ ಪ್ರಾಂತಕ್ಕೆ ಪ್ರಯಾಣ ಮಾಡುತ್ತಾ ಕಾದೇಶಿಗೂ
ಶೂರಿಗೂ ನಡುವೆ ವಾಸ ಮಾಡಿದನು. ಕೆಲವು ಕಾಲ ಗೆರಾರಿನಲ್ಲೂ ಇದ್ದನು. [2]ಅಲ್ಲಿದ್ದಾಗ ಅಬ್ರಹಾಮನು
ತನ್ನ ಹೆಂಡತಿ ಸಾರಳು ತನಗೆ ತಂಗಿಯಾಗಬೇಕೆಂದು ಹೇಳಿಕೊಂಡನು. ಈ ಕಾರಣ ಗೆರಾರಿನ ಅರಸನಾದ
ಅಬೀಮೆಲೆಕನು ಆಕೆಯನ್ನು ಕರೆಸಿ ತನ್ನ ಮನೆಯಲ್ಲಿ ಸೇರಿಸಿಕೊಂಡನು. [3]ಆದರೆ ದೇವರು ಅಬೀಮೆಲೆಕನಿಗೆ
ಕನಸಿನಲ್ಲಿ ಕಾಣಿಸಿಕೊಂಡು, “ನೀನು ಆ ಮಹಿಳೆಯನ್ನು ಸೇರಿಸಿಕೊಂಡ ಕಾರಣ ಸಾಯತಕ್ಕವನು, ಆಕೆಗೆ
ಗಂಡನಿದ್ದಾನೆ,” ಎಂದರು.

4 ಅಬೀಮೆಲೆಕನು ಆಕೆಯನ್ನು ಅಲ್ಲಿಯವರೆಗೂ ಕೂಡಿರಲಿಲ್ಲ. ಎಂದೇ ಅವನು, “ಸ್ವಾಮಿ
ನಿರಪರಾಧಿಯಾದ ಪ್ರಜೆಯನ್ನು ನೀವು ನಾಶ ಮಾಡುವಿರೋ? [5]ಆ ಮನುಷ್ಯನೇ ಈಕೆ ನನಗೆ
ತಂಗಿಯಾಗಬೇಕೆಂದು ಹೇಳಿದ; ಈಕೆಯೂ ಆತನು ನನಗೆ ಅಣ್ಣನಾಗಬೇಕೆಂದು ಹೇಳಿದಳು.
ಶುದ್ಧಮನಸ್ಸಿನಿಂದ ಹಾಗು ಶುದ್ಧಹಸ್ತದಿಂದ ಈ ಕಾರ್ಯ ಮಾಡಿದೆ,” ಎಂದನು.

6 ಅದಕ್ಕೆ ದೇವರು ಪ್ರತ್ಯುತ್ತರವಾಗಿ, “ನೀನು ಶುದ್ಧ ಮನಸ್ಸಿನಿಂದ ಈ ಕಾರ್ಯಮಾಡಿದೆಯೆಂದು ನಾನು
ಬಲ್ಲೆ; ಆದಕಾರಣವೇ ನನಗೆ ವಿರುದ್ಧವಾಗಿ ನೀನು ಪಾಪಮಾಡದಂತೆ ತಡೆದು ಆಕೆಯನ್ನು
ಮುಟ್ಟಗೊಡಿಸಲಿಲ್ಲ. [7]ಈಗ ಆ ಮನುಷ್ಯನ ಹೆಂಡತಿಯನ್ನು ಮರಳಿ ಅವನಿಗೆ ಒಪ್ಪಿಸಿಬಿಡು. ಅವನೊಬ್ಬ
ಪ್ರವಾದಿ. ನಿನ್ನ ಪರವಾಗಿ ನನ್ನನ್ನು ಪ್ರಾರ್ಥಿಸುವನು, ನೀನು ಬದುಕುವೆ. ಆಕೆಯನ್ನು ಒಪ್ಪಿಸಲು
ನಿರಾಕರಿಸಿದೆಯಾದರೆ ನೀನೂ ನಿನ್ನವರೆಲ್ಲರೂ ಸತ್ತೇ ಸಾಯುವಿರೆಂದು ತಿಳಿದುಕೊ,” ಎಂದು ಕನಸಿನಲ್ಲಿ
ಹೇಳಿದರು.

8 ಅಬೀಮೆಲೆಕನು ಬೆಳಿಗ್ಗೆ ಬೇಗನೆ ಎದ್ದು ತನ್ನ ಪರಿವಾರವನ್ನೆಲ್ಲಾ ಕೂಡಿಸಿದನು. ನಡೆದ
ಸಂಗತಿಗಳನ್ನೆಲ್ಲ ತಿಳಿಸಿದಾಗ ಅವರಿಗೆ ಬಹಳ ಭಯವುಂಟಾಯಿತು. 9ಅನಂತರ ಅವನು ಅಬ್ರಹಾಮನನ್ನು
ಕರೆಸಿ, "ನೀನು ನನಗೆ ಮಾಡಿದ್ದೇನು? ಯಾವ ತಪ್ಪಿಗಾಗಿ ನೀನು ನನ್ನನ್ನೂ ನನ್ನ ರಾಜ್ಯವನ್ನೂ ಈ
ಮಹಾಪಾತಕಕ್ಕೆ ಒಳಪಡಿಸಿದೆ? ಮಾಡಬಾರದ ಕಾರ್ಯವನ್ನು ನೀನು ಮಾಡಿದೆ," ಎಂದು ಹೇಳಿದನು.
10ಅಲ್ಲದೆ, "ನೀನು ಯಾವ ಉದ್ದೇಶದಿಂದ ಹೀಗೆ ಮಾಡಿದೆ?" ಎಂದು ವಿಚಾರಿಸಿದನು.

11 ಅದಕ್ಕೆ ಅಬ್ರಹಾಮನು, "ಇಲ್ಲಿಯ ಜನರಿಗೆ ದೇವರಲ್ಲಿ ಭಯಭಕ್ತಿಯಿಲ್ಲವೆಂದೂ ನನ್ನ ಹೆಂಡತಿಯ
ನಿಮಿತ್ತ ನನ್ನನ್ನು ಕೊಂದಾರು ಎಂದೂ ಭಾವಿಸಿದೆ. 12ಅದೂ ಅಲ್ಲದೆ ಈಕೆ ನಿಜವಾಗಿಯೂ ನನ್ನ ತಂಗಿ,
ನನ್ನ ತಂದೆಯ ಮಗಳು, ಆದರೆ ನನ್ನ ತಾಯಿಯ ಮಗಳಲ್ಲ; ಎಂದೇ ನನಗೆ ಹೆಂಡತಿಯಾದಳು. 13ನಾನು
ದೇವರ ಸಂಕಲ್ಪಕ್ಕೆ ತಲೆಬಾಗಿ, ತಂದೆಯ ಮನೆಯನ್ನು ಬಿಟ್ಟು, ದೇಶಾಂತರ ಹೋಗಲು ಹೊರಟಾಗ ಈಕೆಗೆ,
'ನಿನ್ನಿಂದ ನನಗೊಂದು ಉಪಕಾರವಾಗಬೇಕು; ಅದೇನೆಂದರೆ, ನಾವು ಹೋದ ಕಡೆಯೆಲ್ಲಾ ನಾನು ನಿನಗೆ
ಅಣ್ಣನಾಗಬೇಕೆಂದು ಹೇಳು,' ಎಂದು ತಿಳಿಸಿದೆ," ಎಂದನು.

14 ಆಗ ಅಬೀಮೆಲೆಕನು ಅಬ್ರಹಾಮನಿಗೆ ದನಕುರಿಗಳನ್ನೂ ದಾಸದಾಸಿಯರನ್ನೂ ಕೊಟ್ಟು ಅವನ
ಹೆಂಡತಿ ಸಾರಳನ್ನು ಅವನಿಗೆ ಒಪ್ಪಿಸಿದನು. 15ಅದೂ ಅಲ್ಲದೆ, "ಇಗೋ, ನನ್ನ ನಾಡು ನಿನಗೆ ತೆರೆದಿದೆ;
ಇಷ್ಟಬಂದ ಕಡೆ ಹೋಗಿ ವಾಸಮಾಡು," ಎಂದನು. 16ಸಾರಳಿಗೆ ಅವನು ಹೇಳಿದ್ದೇನೆಂದರೆ, "ನಿನ್ನ ಅಣ್ಣನಿಗೆ
ಸಾವಿರ ಬೆಳ್ಳಿನಾಣ್ಯಗಳನ್ನು ಕೊಟ್ಟಿದ್ದೇನೆ. ಇದರಿಂದ ನೀನು ನಿರ್ದೋಷಿಯೆಂದು ರುಜುವಾತಾಗಲಿ; ನೀನು
ತಪ್ಪು ಮಾಡಿಲ್ಲವೆಂದು ಎಲ್ಲರಿಗೂ ಸ್ಪಷ್ಟವಾಗಲಿ."

17 ತರುವಾಯ ಅಬ್ರಹಾಮನು ಅಬೀಮೆಲೆಕನಿಗೋಸ್ಕರ ದೇವರಲ್ಲಿ ಪ್ರಾರ್ಥನೆ ಮಾಡಿದನು.
ದೇವರು ಅಬೀಮೆಲೆಕನನ್ನು, ಅವನ ಪತ್ನಿಯನ್ನು ಹಾಗೂ ದಾಸಿಯರನ್ನು ಗುಣಪಡಿಸಿದರು; ಅವರಿಗೆ
ಮಕ್ಕಳಾದರು. 18ಇದಕ್ಕೆ ಮುಂಚೆ ಅಬ್ರಹಾಮನ ಹೆಂಡತಿ ಸಾರಳ ನಿಮಿತ್ತ ಅಬೀಮೆಲೆಕನ ಮನೆಯಲ್ಲಿದ್ದ
ಮಹಿಳೆಯರೆಲ್ಲರನ್ನು ಸರ್ವೇಶ್ವರಸ್ವಾಮಿ ಬಂಜೆಯರನ್ನಾಗಿಸಿದ್ದರು.

### ಇಸಾಕನ ಜನನ

**21** ಸರ್ವೇಶ್ವರಸ್ವಾಮಿ ತಾವು ಹೇಳಿದ್ದಂತೆಯೇ ಸಾರಳಿಗೆ ನೆರವಾದರು. ಆಕೆಗೆ ಕೊಟ್ಟ ಮಾತನ್ನು
ನೆರವೇರಿಸಿದರು. 2ಆಕೆ ಗರ್ಭಿಣಿಯಾಗಿ ಅಬ್ರಹಾಮನಿಂದ ಒಬ್ಬ ಮಗನನ್ನು ಹೆತ್ತಳು. ಅದೂ ಅಬ್ರಹಾಮನು
ಮುದುಕನಾಗಿದ್ದಾಗ, ದೇವರು ಮೊದಲೇ ನಿರ್ಧರಿಸಿದ್ದ ಕಾಲಕ್ಕೆ ಹೆತ್ತಳು. 3ತನ್ನಿಂದ ಸಾರಳಲ್ಲಿ ಹುಟ್ಟಿದ ಆ
ಮಗನಿಗೆ ಅಬ್ರಹಾಮನು 'ಇಸಾಕ್' ಎಂದು ಹೆಸರಿಟ್ಟನು. 4ಎಂಟನೆಯ ದಿನದಲ್ಲಿ ದೇವರ ಅಪ್ಪಣೆಯ
ಮೇರೆಗೆ ಅವನಿಗೆ ಸುನ್ನತಿಮಾಡಿದನು. 5ಇಸಾಕನು ಹುಟ್ಟಿದಾಗ ಅಬ್ರಹಾಮನಿಗೆ ನೂರು ವರ್ಷವಾಗಿತ್ತು.
6ಸಾರಳು ಇಂತೆಂದುಕೊಂಡಳು:

"ತಂದಿಹನಿದೋ ಎನಗೊಂದು 'ನಗು'ವನು
ಆ ದೇವನು,
ನಕ್ಕು ನಲಿವರೆನ್ನೊಡನೆ ಇದನ್ನು
ಕೇಳುವವರೆಲ್ಲರು."

7 ಅದೂ ಅಲ್ಲದೆ:

"ಈಪರಿ ಪೇಳುತ್ತಿದ್ದರಾರು
ಅಬ್ರಹಾಮನಿಗೆ?
'ಕುಡಿಸುವಳು ಸಾರಳೂ
ಮೊಲೆ ಹಾಲನ್ನು ಮಕ್ಕಳಿಗೆ'?
ಹೆತ್ತಿರುವೆ ನೋಡಿ ಮಗನನು
ಮುಪ್ಪಿನಲು ಆತನಿಗೆ!"

8 ಕ್ರಮೇಣ ಆ ಮಗು ಬೆಳೆದು ಹಾಲು ಕುಡಿಯುವುದನ್ನು ಬಿಟ್ಟಿತು. ಇಸಾಕನು ಮೊಲೆ ಬಿಟ್ಟ ಆ ದಿನದಂದು ಅಬ್ರಹಾಮನು ದೊಡ್ಡ ಔತಣವನ್ನು ಏರ್ಪಡಿಸಿದ್ದನು.

**ಹಾಗರ ಮತ್ತು ಇಷ್ಮಾಯೇಲರ ಉಚ್ಛಾಟನೆ**

9 ಈಜಿಪ್ಟಿನ ಹಾಗರಳಿಂದ ಅಬ್ರಹಾಮನಿಗೆ ಹುಟ್ಟಿದ ಹುಡುಗನು ತನ್ನ ಮಗ ಇಸಾಕನೊಡನೆ ನಕ್ಕುನಲಿದಾಡುವುದನ್ನು ಸಾರಳು ಕಂಡಳು. [10]ಆಕೆ ಅಬ್ರಹಾಮನಿಗೆ, "ಈ ದಾಸಿಯನ್ನೂ ಅವಳ ಮಗನನ್ನೂ ಮನೆಯಿಂದ ಕಳುಹಿಸಿಬಿಡಿ. ದಾಸಿಯ ಮಗನು ನನ್ನ ಮಗನೊಂದಿಗೆ ಹಕ್ಕು ಬಾಧ್ಯಸ್ಥನಾಗಬಾರದು," ಎಂದು ಹೇಳಿದಳು. [11]ಈ ಮಾತನ್ನು ಕೇಳಿ ಅಬ್ರಹಾಮನಿಗೆ ಬಹು ದುಃಖವಾಯಿತು. ಕಾರಣ – ಆ ದಾಸಿಯ ಮಗನೂ ಅವನ ಸ್ವಂತ ಮಗನಾಗಿದ್ದನು. [12]ಆದರೆ ದೇವರು, ಅಬ್ರಹಾಮನಿಗೆ, "ನಿನ್ನ ಮಗನ ಹಾಗೂ ದಾಸಿಯ ಬಗ್ಗೆ ನಿನಗೆ ಚಿಂತೆಬೇಡ; ಸಾರಳು ಹೇಳಿದಂತೆಯೇ ಮಾಡು, ಏಕೆಂದರೆ ಇಸಾಕನಿಂದ ಹುಟ್ಟುವವರೇ ನಿನ್ನ ಸಂತತಿ ಎನಿಸಿಕೊಳ್ಳುವರು. [13]ಈ ದಾಸಿಯ ಮಗನು ನಿನ್ನಿಂದ ಹುಟ್ಟಿದವನಾದ್ದರಿಂದ ಅವನಿಂದಲೂ ಒಂದು ರಾಷ್ಟ್ರ ಉತ್ಪತ್ತಿಯಾಗುವಂತೆ ಮಾಡುತ್ತೇನೆ," ಎಂದು ಹೇಳಿದರು.

14 ಮಾರನೆಯ ದಿನ ಬೆಳಿಗ್ಗೆ ಅಬ್ರಹಾಮನು ಹಾಗರಳಿಗೆ ಬುತ್ತಿಯನ್ನೂ ನೀರಿನ ತಿತ್ತಿಯನ್ನೂ ಕೊಟ್ಟು, ಹೆಗಲ ಮೇಲೆ ಮಗುವನ್ನು ಕೂರಿಸಿ ಕಳುಹಿಸಿಬಿಟ್ಟನು. ಅವಳು ಹೊರಟು ಬೇರ್ಷೆಬದ ಕಾಡಿನಲ್ಲಿ ಅಲೆಯುತ್ತಿದ್ದಳು. [15]ತಿತ್ತಿಯಲ್ಲಿದ್ದ ನೀರು ಮುಗಿದುಹೋಯಿತು. ಮಗು ಸಾಯುವುದನ್ನು ನಾನು ನೋಡಲಾರೆ ಎಂದುಕೊಂಡು, [16]ಅವಳು ಆ ಮಗುವನ್ನು ಒಂದು ಗಿಡದ ನೆರಳಿನಲ್ಲಿ ಬಿಟ್ಟು ಒಂದು ಬಾಣವನ್ನೆಸೆಯುವಷ್ಟು ದೂರ ಹೋಗಿ ಕುಳಿತುಕೊಂಡು ಗಟ್ಟಿಯಾಗಿ ಅತ್ತಳು.

17 ಇತ್ತ ಆ ಹುಡುಗನ ಕೂಗು ದೇವರಿಗೆ ಕೇಳಿಸಿತು. ದೇವದೂತನು ಆಕಾಶದಿಂದ ಹಾಗರಳನ್ನು ಕರೆದು, "ಹಾಗರಳೇ, ನಿನಗೇನು ಆಯಿತು? ಅಂಜಬೇಡ; ಆ ಹುಡುಗನು ಬಿದ್ದು ಇರುವ ಸ್ಥಳದಿಂದಲೇ ಅವನ ಕೂಗು ದೇವರನ್ನು ಮುಟ್ಟಿತು; [18]ನೀನೆದ್ದು ಹೋಗಿ ಅವನನ್ನು ಎತ್ತಿಕೊ; ಅವನನ್ನು ಕೈ ಬಿಡಬೇಡ; ಅವನಿಂದ ಒಂದು ದೊಡ್ಡ ರಾಷ್ಟ್ರ ಉತ್ಪತ್ತಿಯಾಗುವಂತೆ ಮಾಡುತ್ತೇನೆ," ಎಂದು ಹೇಳಿದನು. [19]ಇದಲ್ಲದೆ ದೇವರು ಅವಳ ಕಣ್ಣನ್ನು ತೆರೆದರು; ನೀರಿನ ಬಾವಿಯೊಂದು ಅವಳಿಗೆ ಕಾಣಿಸಿತು; ತಿತ್ತಿಯಲ್ಲಿ ನೀರನ್ನು ತುಂಬಿಸಿಕೊಂಡು ಹೋಗಿ ಆ ಹುಡುಗನಿಗೆ ಕುಡಿಸಿದಳು. [20]ಹುಡುಗನ ಸಂಗಡ ದೇವರಿದ್ದರು. [21]ಪಾರಾನಿನ ಅರಣ್ಯ ಅವನ ವಾಸಸ್ಥಳವಾಯಿತು. ಅವನ ತಾಯಿ ಈಜಿಪ್ಟಿನಿಂದ ಒಬ್ಬ ಹೆಣ್ಣನ್ನು ತರಿಸಿ ಮದುವೆಮಾಡಿಸಿದಳು.

**ಅಬ್ರಹಾಮನಿಗೂ ಅಬೀಮೆಲೆಕನಿಗೂ ಆದ ಒಪ್ಪಂದ**

22 ಆ ದಿನಗಳಲ್ಲಿ ಅಬೀಮೆಲೆಕನು ತನ್ನ ಸೇನಾಪತಿಯಾದ ಫೀಕೋಲನ ಸಮೇತ ಅಬ್ರಹಾಮನ ಬಳಿಗೆ ಬಂದು, "ನೀನು ಮಾಡುವ ಕೆಲಸಕಾರ್ಯಗಳಲ್ಲೆಲ್ಲಾ ದೇವರು ನಿನ್ನ ಸಂಗಡ ಇದ್ದಾರೆ. [23]ಆದುದರಿಂದ ನೀನು ಈ ಸ್ಥಳದಲ್ಲಿ ನನ್ನೊಂದಿಗೆ ಒಂದು ಒಪ್ಪಂದಕ್ಕೆ ಬರಬೇಕು: ಅದೇನೆಂದರೆ – ನನಗಾಗಲಿ ನನ್ನ ಪುತ್ರ ಪೌತ್ರರಿಗಾಗಲಿ ಏನೂ ಅನ್ಯಾಯ ಮಾಡಬಾರದು; ನಾನು ನಿನಗೆ ಒಳ್ಳೆಯದನ್ನೇ ಮಾಡಿದಂತೆ ನನಗೂ, ನೀನು ವಾಸಮಾಡುತ್ತಿರುವ ಈ ನಾಡಿಗೂ ಒಳ್ಳೆಯದನ್ನೇ ಮಾಡಬೇಕು. ಹೀಗೆ ಮಾಡುವುದಾಗಿ ದೇವರ ಮೇಲೆ ಪ್ರಮಾಣಮಾಡಬೇಕು," ಎಂದು ಕೇಳಿಕೊಂಡನು.

24 ಅದಕ್ಕೆ ಅಬ್ರಹಾಮನು, "ಹಾಗೆಯೇ ಪ್ರಮಾಣಮಾಡುತ್ತೇನೆ," ಎಂದನು.

25 ಅಬೀಮೆಲೆಕನ ಆಳುಗಳು ಒಂದು ಬಾವಿಯನ್ನು ಬಲಾತ್ಕಾರದಿಂದ ಸ್ವಾಧೀನಪಡಿಸಿಕೊಂಡಿದ್ದರು. [26]ಅಬೀಮೆಲೆಕನು, "ಈ ಕೃತ್ಯವನ್ನು ಮಾಡಿದವರು ಯಾರೆಂದು ನಾನರಿಯೆ; ನೀನೂ ನನಗೆ ತಿಳಿಸಲಿಲ್ಲ; ಇಲ್ಲಿಯವರೆಗೆ ನಾನು ಈ ಸಂಗತಿಯನ್ನು ಕೇಳಿಯೂ ಇಲ್ಲ," ಎಂದನು. [27]ಆಗ ಅಬ್ರಹಾಮನು ಅಬೀಮೆಲೆಕನಿಗೆ ದನಕುರಿಗಳನ್ನು ದಾನ ಮಾಡಿದನು. ಹೀಗೆ ಅವರಿಬ್ಬರು ಒಂದು ಒಪ್ಪಂದ ಮಾಡಿಕೊಂಡರು. [28]ಆದರೆ ಅಬ್ರಹಾಮನು ಹಿಂಡಿನ ಏಳು ಕುರಿಮರಿಗಳನ್ನು ಪ್ರತ್ಯೇಕವಾಗಿ ಇರಿಸಿದನು. [29]ಅಬೀಮೆಲೆಕನು, "ನೀನು ಪ್ರತ್ಯೇಕವಾಗಿರಿಸಿರುವ ಈ ಏಳು ಕುರಿಮರಿಗಳು ಏತಕ್ಕೆ?" ಎಂದು

ವಿಚಾರಿಸಿದನು. [30]ಅದಕ್ಕೆ ಅಬ್ರಹಾಮನು, “ಬಾವಿಯನ್ನು ತೋಡಿಸಿದವನು ನಾನೇ ಎಂಬುದಕ್ಕೆ ಸಾಕ್ಷಿಯಾಗಿ
ಈ ಏಳು ಕುರಿಮರಿಗಳನ್ನು ನನ್ನ ಕೈಯಿಂದ ನೀನು ಸ್ವೀಕರಿಸಬೇಕು,” ಎಂದನು. [31]ಹೀಗೆ ಅವರಿಬ್ಬರು ಅಲ್ಲಿ
ಪ್ರಮಾಣಮಾಡಿದ್ದ ಕಾರಣ, ಆ ಸ್ಥಳಕ್ಕೆ ‘ಬೇರ್ಷೆಬ’ ಎಂದು ಹೆಸರಾಯಿತು.

32 ಬೇರ್ಷೆಬದಲ್ಲಿ ಅವರು ಒಪ್ಪಂದಮಾಡಿಕೊಂಡ ತರುವಾಯ ಅಬೀಮೆಲೆಕನೂ ಅವನ
ಸೇನಾಪತಿ ಫೀಕೋಲನು ಫಿಲಿಷ್ಟಿಯಕ್ಕೆ ಹಿಂದಿರುಗಿದರು. [33]ಅಬ್ರಹಾಮನು ಆ ಬೇರ್ಷೆಬದಲ್ಲೇ ಒಂದು
ಪಿಚುಲ ವೃಕ್ಷವನ್ನು ನೆಟ್ಟು ನಿತ್ಯದೇವರಾದ ಸರ್ವೇಶ್ವರಸ್ವಾಮಿಯ ನಾಮಸ್ಮರಣೆ ಮಾಡಿ, ಅಲ್ಲಿ ಆರಾಧನೆ
ಮಾಡಿದನು. [34]ಅಬ್ರಹಾಮನು ಫಿಲಿಷ್ಟಿಯರ ಆ ಪ್ರಾಂತ್ಯದಲ್ಲಿ ಬಹುಕಾಲ ಪ್ರವಾಸಿಯಾಗಿದ್ದನು.

## ಅಬ್ರಹಾಮನ ಅಗ್ನಿಪರೀಕ್ಷೆ

**22** ಈ ಘಟನೆಗಳಾದ ಬಳಿಕ ದೇವರು ಅಬ್ರಹಾಮನನ್ನು ಪರೀಕ್ಷಿಸುವುದಕ್ಕೋಸ್ಕರ, “ಅಬ್ರಹಾಮನೇ,”
ಎಂದು ಕರೆದರು. ಅವನು “ಇಗೋ, ಸಿದ್ಧನಿದ್ದೇನೆ” ಎಂದನು. [2]ಆಗ ದೇವರು, “ನಿನಗೆ ಒಬ್ಬನೇ ಒಬ್ಬನೂ
ಮುದ್ದು ಮಗನೂ ಆದ ಇಸಾಕನನ್ನು ಕರೆದುಕೊಂಡು ಮೋರೀಯ ಪ್ರಾಂತಕ್ಕೆ ಹೋಗು. ಅಲ್ಲಿ ನಾನು
ತೋರಿಸುವ ಬೆಟ್ಟದ ಮೇಲೆ ಅವನನ್ನು ದಹನ ಬಲಿಯಾಗಿ ಅರ್ಪಿಸು” ಎಂದರು.

3 ಅಬ್ರಹಾಮನು ಮುಂಜಾನೆಯೇ ಎದ್ದು ತನ್ನ ಹೇಸರಗತ್ತೆಗೆ ತಡಿಹಾಕಿಸಿ ಹೋಮಬಲಿಗೆ ಬೇಕಾದ
ಕಟ್ಟಿಗೆಯನ್ನು ಸಿಗಿದು ಸಿದ್ಧಮಾಡಿಕೊಂಡು ಸೇವಕರಿಬ್ಬರನ್ನು ಹಾಗೂ ತನ್ನ ಮಗ ಇಸಾಕನನ್ನು
ಕರೆದುಕೊಂಡು ದೇವರು ಹೇಳಿದ ಸ್ಥಳಕ್ಕೆ ಹೊರಟನು. [4]ಮೂರನೆಯ ದಿನ ಅಬ್ರಹಾಮನು ಕಣ್ಣೆತ್ತಿ
ನೋಡಿದಾಗ ದೂರದಲ್ಲಿ ಆ ಸ್ಥಳ ಕಾಣಿಸಿತು. [5]ಅವನು ತನ್ನ ಸೇವಕರಿಗೆ, “ನೀವು ಇಲ್ಲೇ ಕತ್ತೆಯನ್ನು
ನೋಡಿಕೊಂಡಿರಿ; ನಾನೂ ನನ್ನ ಮಗನೂ ಅಲ್ಲಿಗೆ ಹೋಗಿ ದೇವಾರಾಧನೆ ಮಾಡಿಕೊಂಡು ಪುನಃ ಇಲ್ಲಿಗೆ
ಬರುತ್ತೇವೆ,” ಎಂದು ಹೇಳಿದನು.

6 ಅಬ್ರಹಾಮನು ದಹನಬಲಿಗೆ ಬೇಕಾದ ಕಟ್ಟಿಗೆಯನ್ನು ತನ್ನ ಮಗ ಇಸಾಕನ ಮೇಲೆ ಹೊರಿಸಿದನು;
ಬೆಂಕಿಯನ್ನು ಹಾಗೂ ಕತ್ತಿಯನ್ನು ತನ್ನ ಕೈಯಲ್ಲೇ ತೆಗೆದುಕೊಂಡನು. ಇಬ್ಬರೂ ಅಲ್ಲಿಂದ ಮುಂದಕ್ಕೆ
ಹೊರಟರು. [7]ಹೋಗುತ್ತಾ ಇದ್ದಾಗ ಇಸಾಕನು ತಂದೆ ಅಬ್ರಹಾಮನನ್ನು, “ಅಪ್ಪಾ” ಎಂದು ಕರೆದ; “ಏನು
ಮಗನೇ?” ಎಂದ ಅಬ್ರಹಾಮ. ಇಸಾಕನು, “ಬೆಂಕಿ-ಕಟ್ಟಿಗೆಯೇನೋ ಇವೆ; ಆದರೆ ದಹನಬಲಿಗೆ ಬೇಕಾದ
ಕುರಿಮರಿ ಎಲ್ಲಿ?” ಎಂದು ಕೇಳಿದ. [8]ಅದಕ್ಕೆ ಅಬ್ರಹಾಮನು, “ಬಲಿಗೆ ಬೇಕಾದ ಕುರಿಮರಿಯನ್ನು ದೇವರೇ
ಒದಗಿಸುತ್ತಾರೆ, ಮಗನೇ,” ಎಂದು ಉತ್ತರಕೊಟ್ಟ. ಅವರಿಬ್ಬರೂ ಹಾಗೇ ಮುಂದಕ್ಕೆ ಸಾಗಿದರು.

9 ದೇವರು ಹೇಳಿದ ಸ್ಥಳಕ್ಕೆ ಬಂದು ಸೇರಿದಾಗ ಅಬ್ರಹಾಮನು ಅಲ್ಲಿ ಒಂದು ಬಲಿಪೀಠವನ್ನು
ಕಟ್ಟಿದ. ಕಟ್ಟಿಗೆಯನ್ನು ಅದರ ಮೇಲೆ ಒಟ್ಟಿ, ಮಗ ಇಸಾಕನ ಕೈಕಾಲುಗಳನ್ನು ಬಿಗಿದು, ಕಟ್ಟಿಗೆಗಳ ಮೇಲೆ
ಅವನನ್ನು ಕೆಡವಿದ. [10]ಬಳಿಕ ಮಗನನ್ನು ವಧಿಸಲು ಕೈಚಾಚಿ ಕತ್ತಿಯನ್ನು ಎತ್ತಿದ. [11]ಆದರೆ ಸರ್ವೇಶ್ವರನ
ದೂತನು ಆಕಾಶದಿಂದ, “ಅಬ್ರಹಾಮನೇ, ಹೇ ಅಬ್ರಹಾಮನೇ” ಎಂದು ಕರೆದನು. ಅದಕ್ಕೆ ಅಬ್ರಹಾಮನು,
“ಇಗೋ ಸಿದ್ಧನಿದ್ದೇನೆ” ಎಂದ. [12]ದೂತನು ಅವನಿಗೆ, “ಹುಡುಗನ ಮೇಲೆ ಕೈಯೆತ್ತಬೇಡ; ಅವನಿಗೆ ಯಾವ
ಹಾನಿಯನ್ನೂ ಮಾಡಬೇಡ; ನೀನು ನಿನ್ನ ಒಬ್ಬನೇ ಮಗನನ್ನು ನನಗೆ ಬಲಿಕೊಡಲು ಹಿಂತೆಗೆಯಲಿಲ್ಲ;
ಎಂತಲೇ, ನೀನು ದೇವರಲ್ಲಿ ಭಯಭಕ್ತಿಯುಳ್ಳವನೆಂದು ಈಗ ನನಗೆ ಚೆನ್ನಾಗಿ ಗೊತ್ತಾಯಿತು,” ಎಂದು
ಹೇಳಿದನು.

13 ಅಬ್ರಹಾಮನು ಕಣ್ಣೆತ್ತಿನೋಡಿದ. ತನ್ನ ಹಿಂದುಗಡೆ ಒಂದು ಟಗರು ಪೊದೆಯಲ್ಲಿ
ಕೊಂಬುಗಳಿಂದ ಸಿಕ್ಕಿಕೊಂಡಿತ್ತು. ಅವನು ಹೋಗಿ ಅದನ್ನು ಹಿಡಿದು ತಂದು ತನ್ನ ಮಗನಿಗೆ ಬದಲಾಗಿ
ಅದನ್ನು ದಹನಬಲಿಯನ್ನಾಗಿ ಅರ್ಪಿಸಿದ. [14]ಆ ಸ್ಥಳಕ್ಕೆ “ಯೆಹೋವ ಯಿರೆ” ಎಂದು ಹೆಸರಿಟ್ಟ. [15]“ಬೆಟ್ಟದ
ಮೇಲೆ ಸರ್ವೇಶ್ವರಸ್ವಾಮಿಯೇ ಒದಗಿಸುತ್ತಾರೆ” ಎಂಬ ಹೇಳಿಕೆ ಇಂದಿಗೂ ರೂಢಿಯಲ್ಲಿದೆ.
ಸರ್ವೇಶ್ವರಸ್ವಾಮಿಯ ದೂತನು ಆಕಾಶದಿಂದ ಮತ್ತೊಮ್ಮೆ ಅಬ್ರಹಾಮನನ್ನು ಕರೆದು, [16]“ಸರ್ವೇಶ್ವರನ
ವಾಕ್ಯವನ್ನು ಕೇಳು: ನೀನು ನಿನ್ನ ಒಬ್ಬನೇ ಮಗನನ್ನು ಬಲಿಕೊಡಲು ಹಿಂತೆಗೆಯದೆ ಹೋದುದರಿಂದ ನಾನು

ನಿನ್ನನ್ನು ತಪ್ಪದೆ ಆಶೀರ್ವದಿಸುತ್ತೇನೆ; [17]ನಿನ್ನ ಸಂತತಿಯನ್ನು ಹೆಚ್ಚಿಸಿಯೇ ಹೆಚ್ಚಿಸುತ್ತೇನೆ; ಅದನ್ನು ಆಕಾಶದ ನಕ್ಷತ್ರಗಳಂತೆಯೂ ಸಮುದ್ರ ತೀರದ ಮರಳಿನಂತೆಯೂ ಅಸಂಖ್ಯವಾಗಿ ಮಾಡುತ್ತೇನೆ. ಅವರು ಶತ್ರುಗಳ ಪಟ್ಟಣಗಳನ್ನು ಸ್ವಾಧೀನ ಪಡಿಸಿಕೊಳ್ಳುವರು. [18]ನೀನು ನನ್ನ ಮಾತನ್ನು ಕೇಳಿದ್ದರಿಂದ ವಿಶ್ವದ ಎಲ್ಲ ರಾಷ್ಟ್ರಗಳಿಗೂ ನಿನ್ನ ಸಂತತಿಯ ಮೂಲಕ ಆಶೀರ್ವಾದವುಂಟಾಗುವುದು ಎಂಬುದಾಗಿ ಸರ್ವೇಶ್ವರನೇ ಆಣೆಯಿಟ್ಟು ಹೇಳಿದ್ದಾರೆ," ಎಂದನು.

19 ತರುವಾಯ ಅಬ್ರಹಾಮನು ತನ್ನ ಸೇವಕರ ಬಳಿಗೆ ಮರಳಿ ಬಂದನು. ಅವರೆಲ್ಲರೂ ಜೊತೆಯಾಗಿ ಬೇರ್ಷೆಬಕ್ಕೆ ಹೋದರು. ಅಲ್ಲೇ ಅಬ್ರಹಾಮನು ವಾಸಮಾಡುತ್ತಿದ್ದನು.

### ನಾಹೋರನ ಸಂತಾನ

20 ಕೆಲವು ಕಾಲವಾದ ಮೇಲೆ ಅಬ್ರಹಾಮನಿಗೆ ತನ್ನ ತಮ್ಮನಾದ ನಾಹೋರನಿಗೆ ಮಿಲ್ಕಳಿಂದ ಮಕ್ಕಳಾದುವೆಂಬ ಸಮಾಚಾರ ಮುಟ್ಟಿತು. [21]ಅವರುಗಳ ಹೆಸರು ಇವು – ಚೊಚ್ಚಲನಾದ ಊಚ್, ಇವನ ತಮ್ಮ ಬೂಚ್, (ಅರಾಮನ ತಂದೆಯಾದ) ಕೆಮೂವೇಲ್, [22]ಕೆಸೆದ್, ಹಜೋ, ಪಿಲ್ದಾಷ್, ಇದ್ಲಾಫ್ ಮತ್ತು ಬೆತೂವೇಲ್. [23]ಬೆತೂವೇಲನು ರೆಬೆಕ್ಕಳ ತಂದೆ. ಈ ಎಂಟು ಮಂದಿಯನ್ನು ಮಿಲ್ಕಳು ಅಬ್ರಹಾಮನ ತಮ್ಮನಾದ ನಾಹೋರನಿಗೆ ಹೆತ್ತಳು. [24]ಇದೂ ಅಲ್ಲದೆ ಅವನ ಉಪಪತ್ನಿಯಾದ ರೂಮಳೆಂಬವಳು ಟೆಬಹ, ಗಹಮ್, ತಹಷ್, ಮಾಕಾ ಎಂಬುವರನ್ನು ಹೆತ್ತಳು.

### ಸಾರಳ ಮರಣ ಮತ್ತು ಸಮಾಧಿ

**23** ಸಾರಳು ನೂರಿಪ್ಪತ್ತೇಳು ವರ್ಷ ಬದುಕಿದ್ದಳು. [2]ಇಷ್ಟು ವರ್ಷಗಳಾದ ಮೇಲೆ ಆಕೆ ಕಾನಾನ್ ನಾಡಿನ ಹೆಬ್ರೋನೆಂಬ ಕಿರ್ಯತರ್ಬದಲ್ಲಿ ಕಾಲವಾದಳು. ಅಬ್ರಹಾಮನು ಅಲ್ಲಿಗೆ ಬಂದು ಅವಳಿಗಾಗಿ ಕಣ್ಣೀರಿಟ್ಟು ಗೋಳಾಡಿದನು.

3 ಅನಂತರ ಅವನು ಶವದ ಬಳಿಯಿಂದ ಎದ್ದು ಹಿತ್ತಿಯರ ಬಳಿಗೆ ಬಂದು, [4]"ನಿಮ್ಮ ಮಧ್ಯೆ ನಾನೊಬ್ಬ ಹೊರನಾಡಿಗ, ಒಬ್ಬ ಪ್ರವಾಸಿ, ಮೃತಳಾಗಿರುವ ನನ್ನ ಪತ್ನಿಯನ್ನು ಸಮಾಧಿ ಮಾಡಲು ಸ್ವಲ್ಪ ಜಮೀನನ್ನು ನನ್ನ ಸ್ವಂತಕ್ಕೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ," ಎಂದನು. [5–6]ಆ ಹಿತ್ತಿಯರು, "ಒಡೆಯಾ, ಇತ್ತ ಕೇಳಿ. ನೀವು ನಮಗೆ ಒಬ್ಬ ಮಹಾರಾಜರಂತೆ ಇದ್ದೀರಿ. ಮೃತಳಾದ ನಿಮ್ಮ ಪತ್ನಿಯ ಶವವನ್ನು ನಮ್ಮಲ್ಲಿರುವ ಶ್ರೇಷ್ಠ ಸಮಾಧಿಗಳೊಂದರಲ್ಲಿ ಭೂಸ್ಥಾಪನೆ ಮಾಡಬಹುದು. ನಮ್ಮಲ್ಲಿ ಸ್ಮಶಾನ ಭೂಮಿಯಿರುವ ಯಾರೂ ನಿಮಗೆ ಕೊಡುವುದಕ್ಕೆ ಹಿಂಜರಿಯುವುದಿಲ್ಲ," ಎಂದು ಉತ್ತರಕೊಟ್ಟರು. [7]ಅಬ್ರಹಾಮನು ಎದ್ದು ನಿಂತು ಆ ಹಿತ್ತಿಯ ನಾಡಿಗರಿಗೆ ಬಾಗಿ ನಮಸ್ಕರಿಸಿದನು. [8]ಅವರೊಡನೆ ಮಾತನ್ನು ಮುಂದುವರಿಸುತ್ತಾ ಅವನು, "ನನ್ನ ಪತ್ನಿಯ ಶವವನ್ನು ಇಲ್ಲಿ ಸಮಾಧಿ ಮಾಡುವುದು ನಿಮಗೆ ಒಪ್ಪಿಗೆಯಾದರೆ ನನ್ನ ವಿಜ್ಞಾಪನೆ ಇದು: ನೀವು ಜೋಹರನ ಮಗನಾದ ಎಫ್ರೋನನ ಸಂಗಡ ನನ್ನ ಪರವಾಗಿ ಮಾತಾಡಿ, [9]ಅವನ ಜಮೀನಿನ ಅಂಚಿನಲ್ಲಿರುವ ಮಕ್ಪೇಲದ ಗವಿಯನ್ನು ನನಗೆ ಕೊಡಿಸಬೇಕೆಂದು ವಿನಂತಿಸುತ್ತೇನೆ. ಅವನು ಆ ಸಮಾಧಿಯ ಸ್ಥಳವನ್ನು ನನ್ನ ಸ್ವಂತಕ್ಕೆ ನಿಮ್ಮ ಎದುರಿಗೇ ಬಿಟ್ಟುಕೊಟ್ಟರೆ ಪೂರ್ಣ ಕ್ರಯವನ್ನು ಕೊಟ್ಟುಬಿಡುತ್ತೇನೆ," ಎಂದನು.

10 ಸದ್ಯಕ್ಕೆ ಎಫ್ರೋನನೇ ಅಲ್ಲಿ ಆ ಹಿತ್ತಿಯರ ನಡುವೆ ಕುಳಿತಿದ್ದನು. ಅವನೂ ಒಬ್ಬ ಹಿತ್ತಿಯನಾಗಿದ್ದನು. ಹಿತ್ತಿಯರಾಗಿದ್ದ ಆ ಊರಿನವರೆಲ್ಲರ ಮುಂದೆ ಅವನು ಅಬ್ರಹಾಮನಿಗೆ, [11]"ಒಡೆಯಾ, ನನ್ನ ಮಾತಿಗೆ ಸ್ವಲ್ಪ ಕಿವಿಗೊಡಿ; ಆ ಜಮೀನನ್ನೂ ಅದರಲ್ಲಿರುವ ಗವಿಯನ್ನೂ ನಿಮಗೆ ದಾನಮಾಡಿ ಬಿಡುತ್ತೇನೆ; ನನ್ನ ಈ ಜನರ ಮುಂದೆಯೇ ದಾನ ಕೊಡುತ್ತೇನೆ; ಮೃತಳಾದ ನಿಮ್ಮ ಪತ್ನಿಯನ್ನು ಅದರಲ್ಲಿ ಸಮಾಧಿ ಮಾಡಬಹುದು," ಎಂದು ಹೇಳಿದನು. [12]ಅಬ್ರಹಾಮನು ಆ ನಾಡಿಗರಿಗೆ ಬಾಗಿ ವಂದಿಸಿದನು. [13]ಅವರೆಲ್ಲರ ಮುಂದೆ ಎಫ್ರೋನನನ್ನು ಉದ್ದೇಶಿಸಿ, "ಕೊಡಲು ಇಷ್ಟವಿದ್ದರೆ ದಯವಿಟ್ಟು ನಾನು ಅರಿಕೆ ಮಾಡುವುದನ್ನು ಕೇಳು: ಆ ಜಮೀನಿಗೆ ಕ್ರಯ ಕೊಡುತ್ತೇನೆ: ಆ ಕ್ರಯವನ್ನು ತೆಗೆದುಕೊಳ್ಳಲು ಸಮ್ಮತಿಸಿದರೆ

ನನ್ನ ಪತ್ನಿಯನ್ನು ಅಲ್ಲಿ ಸಮಾಧಿ ಮಾಡುತ್ತೇನೆ," ಎಂದು ಹೇಳಿದನು. 14–15ಅದಕ್ಕೆ ಎಫ್ರೋನನು, "ಒಡೆಯಾ,
ನನ್ನ ಮಾತನ್ನು ಆಲಿಸು: ಕೇವಲ ನಾನೂರು ಬೆಳ್ಳಿನಾಣ್ಯ ಬಾಳುವ ಆ ಜಮೀನಿನ ವಿಷಯದಲ್ಲಿ ನಿಮಗೂ
ನನಗೂ ವಾದವೇತಕ್ಕೆ? ಸಮಾಧಿ ಮಾಡಬಹುದು," ಎಂದನು. 16ಅಬ್ರಹಾಮನು ಎಫ್ರೋನನ ಮಾತಿಗೆ
ಒಪ್ಪಿ, ಅವನು ಆ ಹಿತ್ತಿಯರ ಮುಂದೆ ಸೂಚಿಸಿದ ನಾನೂರು ಬೆಳ್ಳಿ ನಾಣ್ಯಗಳನ್ನು, ವ್ಯಾಪಾರಿಗಳಲ್ಲಿ
ಪ್ರಚಲಿತವಾಗಿದ್ದ ಬೆಳ್ಳಿಯಿಂದ ತೂಕಮಾಡಿ ಕೊಟ್ಟನು.

17 ಹೀಗೆ ಮಮ್ರೆಗೆ ಎದುರಾಗಿರುವ ಮಕ್ಪೇಲಕ್ಕೆ ಸೇರಿದ ಎಫ್ರೋನನ ಜಮೀನು, ಅದಕ್ಕೆ ಸೇರಿದ
ಗವಿ, ಅದರಲ್ಲಿ ಮತ್ತು ಅದರ ಸುತ್ತಣ ಅಂಚಿನಲ್ಲಿದ್ದ ಮರಗಳು, ಇವೆಲ್ಲವೂ 18ಅಬ್ರಹಾಮನಿಗೆ ಸ್ವಂತವೆಂದು
ಹಿತ್ತಿಯರಾಗಿದ್ದ ಆ ಊರಿನವರೆಲ್ಲರ ಮುಂದೆಯೇ ತೀರ್ಮಾನವಾಯಿತು. 19ಇದಾದ ಮೇಲೆ ಹೆಬ್ರೋನೆಂಬ
ಮಮ್ರೆಗೆ ಎದುರಾಗಿರುವ ಮಕ್ಪೇಲದ ಜಮೀನಿನಲ್ಲಿರುವ ಗವಿಯೊಳಗೆ ಸಮಾಧಿ ಮಾಡಿದನು. 20ಆ
ಜಮೀನನ್ನೂ ಅದರಲ್ಲಿರುವ ಗವಿಯನ್ನೂ ಅಬ್ರಹಾಮನಿಗೆ ಸ್ವಂತ ಸ್ಮಶಾನ ಭೂಮಿಯಾಗಲೆಂದು
ಸ್ವಾಧೀನಗೊಳಿಸಿದವರು ಆ ಹಿತ್ತಿಯರೇ.

### ಇಸಾಕ – ರೆಬೆಕ್ಕ ಇವರ ವಿವಾಹ

**24** ಅಬ್ರಹಾಮನು ಆಗ ತುಂಬು ವಯಸ್ಸಿನ ಮುದುಕ. ಸರ್ವೇಶ್ವರಸ್ವಾಮಿ ಅವನ ಎಲ್ಲ ಕೆಲಸಕಾರ್ಯಗಳನ್ನು
ಆಶೀರ್ವದಿಸಿದ್ದರು. 2ಒಮ್ಮೆ ಅವನು, ತನ್ನ ಆಸ್ತಿಯನ್ನು ನೋಡಿಕೊಳ್ಳುತ್ತಿದ್ದ ಹಿರಿಯ ಸೇವಕನಿಗೆ, 3"ನನ್ನ
ಮಗ ಇಸಾಕನಿಗೆ ಹೆಣ್ಣನ್ನು ನಾನು ವಾಸಮಾಡುತ್ತಿರುವ ಕಾನಾನ್ಯರಿಂದ ತರಬಾರದು; 4ನನ್ನ ಸ್ವಂತ ನಾಡಿಗೂ
ನನ್ನ ಬಂಧುಬಳಗದವರ ಬಳಿಗೂ ಹೋಗಿ ಅವರಿಂದಲೇ ಅವನಿಗೆ ಹೆಣ್ಣು ತರಬೇಕು. ಹಾಗೆ
ಮಾಡುತ್ತೇನೆಂದು ನೀನು ನನ್ನ ತೊಡೆಯ ಕೆಳಗೆ ಕೈಯಿಟ್ಟು ಇಹಪರಲೋಕಗಳ ಸರ್ವೇಶ್ವರನಾದ ದೇವರ
ಮೇಲೆ ಪ್ರಮಾಣ ಮಾಡಬೇಕು," ಎಂದು ಹೇಳಿದನು.

5 ಅದಕ್ಕೆ ಆ ಸೇವಕ, "ಒಂದು ವೇಳೆ ಆ ಕನ್ಯೆಗೆ ಈ ನಾಡಿಗೆ ನನ್ನೊಡನೆ ಬರಲು ಇಷ್ಟ ಇಲ್ಲದೆ
ಹೋದೀತು. ಆಗ, ನೀವು ಬಿಟ್ಟುಬಂದ ನಾಡಿಗೆ ನಿಮ್ಮ ಮಗನನ್ನು ಮರಳಿ ಕರೆದುಕೊಂಡು
ಹೋಗಬಹುದೆ?" ಎಂದು ವಿಚಾರಿಸಿದ. 6ಅಬ್ರಹಾಮನು ಅವನಿಗೆ, "ಅದೆಂದಿಗೂ ಕೂಡದು; ಅಲ್ಲಿಗೆ ನನ್ನ
ಮಗನನ್ನು ಕರೆದುಕೊಂಡು ಹೋಗಲೇಬಾರದು. 7ನನ್ನ ತಂದೆಯ ಮನೆಯಿಂದಲೂ ನಾನು ಹುಟ್ಟಿದ
ನಾಡಿನಿಂದಲೂ ನನ್ನನ್ನು ಇಲ್ಲಿಗೆ ಕರೆತಂದು, 'ನಿನ್ನ ಸಂತತಿಗೆ ಈ ನಾಡನ್ನು ಕೊಡುತ್ತೇನೆ,' ಎಂದು
ಪರಲೋಕ ದೇವರಾದ ಸರ್ವೇಶ್ವರಸ್ವಾಮಿ ಪ್ರಮಾಣ ಮಾಡಿ ಹೇಳಿದ್ದಾರೆ. ಅವರೇ ತಮ್ಮ ದೂತನನ್ನು ನಿನ್ನ
ಮುಂದೆ ಕಳುಹಿಸಿ, ನೀನು ಅಲ್ಲಿಂದ ನನ್ನ ಮಗನಿಗೆ ಹೆಣ್ಣು ತರುವುದಕ್ಕೆ ಅನುಕೂಲ ಮಾಡಿ ಕೊಡುವರು.
8ಇಲ್ಲಿಗೆ ನಿನ್ನ ಸಂಗಡ ಬರಲು ಆ ಕನ್ಯೆಗೆ ಇಷ್ಟವಿಲ್ಲದೆ ಹೋದರೆ, ನಾನು ಮಾಡಿಸಿದ ಪ್ರಮಾಣದಿಂದ ನೀನು
ಬಿಡುಗಡೆಯಾಗಿರುವೆ. ಹೇಗೂ ನನ್ನ ಮಗನನ್ನು ಮರಳಿ ಅಲ್ಲಿಗೆ ಕರೆದುಕೊಂಡು ಹೋಗಕೂಡದು," ಎಂದು
ಮತ್ತೊಮ್ಮೆ ಒತ್ತಿ ಹೇಳಿದನು. 9ಆಗ ಆ ಸೇವಕ ತನ್ನ ಒಡೆಯನಾದ ಅಬ್ರಹಾಮನ ತೊಡೆಯ ಕೆಳಗೆ ಕೈಯಿಟ್ಟು
ಅವನು ಹೇಳಿದಂತೆಯೇ ಪ್ರಮಾಣ ಮಾಡಿದನು.

10 ತರುವಾಯ ಆ ಸೇವಕ ತನ್ನ ಒಡೆಯನ ಒಂಟೆಗಳಲ್ಲಿ ಹತ್ತನ್ನು ಸಿದ್ಧಮಾಡಿಕೊಂಡು, ಅವನ
ಆಸ್ತಿಯಿಂದ ಶ್ರೇಷ್ಠವಾದ ಒಡವೆಗಳನ್ನು ತೆಗೆದುಕೊಂಡು ಹೊರಟನು. ಎರಡು ನದಿಗಳ ಮಧ್ಯೆ ಇರುವ
ಉತ್ತರ ಮೆಸಪೊಟೇಮಿಯಾ ನಾಡಿಗೆ ಬಂದನು. ಅಲ್ಲಿಂದ ನಾಹೋರನು ವಾಸಿಸಿದ್ದ ಊರನ್ನು ಮುಟ್ಟಿದನು.
11ಸಂಜೆ, ಹೆಣ್ಣುಮಕ್ಕಳು ನೀರು ಹೊರುವುದಕ್ಕೆ ಬರುವ ವೇಳೆಗೆ, ಅವನು ಊರ ಹೊರಗಡೆ ಬಾವಿಯ ಬಳಿ
ಒಂಟೆಗಳನ್ನು ಮಲಗಿಸಿದನು. 12"ನನ್ನೊಡೆಯ ಅಬ್ರಹಾಮನ ದೇವರಾಗಿರುವ ಸರ್ವೇಶ್ವರಾ, ಈ ದಿನ ನಾನು
ಬಂದ ಕಾರ್ಯವನ್ನು ಕೈಗೂಡಿಸಿ, ನನ್ನೊಡೆಯ ಅಬ್ರಹಾಮನಿಗೆ ಉಪಕಾರಮಾಡಬೇಕೆಂದು
ಪ್ರಾರ್ಥಿಸುತ್ತೇನೆ. 13ಇಗೋ, ನೀರಿನ ಬುಗ್ಗೆಯ ಬಳಿಯಲ್ಲೇ ನಿಂತಿದ್ದೇನೆ; ಈ ಊರಿನ ಹೆಣ್ಣು ಮಕ್ಕಳು ನೀರಿಗೆ
ಬರುತ್ತಾರೆ. 14ನಾನು ಯಾವ ಹುಡುಗಿಗೆ 'ದಯವಿಟ್ಟು ನಿನ್ನ ಕೊಡವನ್ನು ಇಳಿಸಿ ಕುಡಿಯುವುದಕ್ಕೆ ಕೊಡು'
ಎಂದು ಹೇಳುವಾಗ 'ನೀನೂ ಕುಡಿ, ನಿನ್ನ ಒಂಟೆಗಳಿಗೂ ಕುಡಿಯಕೊಡುತ್ತೇನೆ' ಎನ್ನುತ್ತಾಳೋ ಅವಳೇ

ನಿಮ್ಮ ದಾಸ ಇಸಾಕನಿಗೆ ನೀವು ಚುನಾಯಿಸಿರುವ ಕನ್ಯೆಯಾಗಲಿ. ನನ್ನೊಡೆಯನ ಮೇಲೆ ನಿಮ್ಮ ದಯೆಯಿದೆ ಎಂದು ಇದರಿಂದ ಗೊತ್ತಾಗುವುದು," ಎಂದುಕೊಂಡನು.

15 ಅವನು ಹೀಗೆ ಹೇಳಿಕೊಳ್ಳುತ್ತಿರುವಾಗಲೇ ರೆಬೆಕ್ಕಳು ಹೆಗಲ ಮೇಲೆ ಕೊಡವನ್ನಿಟ್ಟುಕೊಂಡು ಊರ ಹೊರಗೆ ಬರುವುದನ್ನು ಕಂಡನು. ಆಕೆ, ಅಬ್ರಹಾಮನ ತಮ್ಮನಾದ ನಾಹೋರನಿಗೆ ಹೆಂಡತಿಯಾಗಿದ್ದ ಮಿಲ್ಕಳ ಮಗ ಬೆತೂವೇಲನ ಮಗಳು. [16]ಬಲು ಚೆಲುವೆ; ಯಾವ ಪುರುಷನ ಸಂಸರ್ಗವೂ ಇಲ್ಲದ ಕನ್ನಿಕೆ. ಬುಗ್ಗೆಯ ಬಳಿಗೆ ಇಳಿದು ಕೊಡದಲ್ಲಿ ನೀರು ತುಂಬಿಸಿಕೊಂಡು ಮೇಲಕ್ಕೆ ಬಂದಳು. [17]ಆ ಸೇವಕನು ಅವಳಿಗೆದುರಾಗಿ ಓಡಿಬಂದು, "ಅಮ್ಮಾ, ದಯಮಾಡಿ ಕೊಡದಿಂದ ಸ್ವಲ್ಪ ನೀರನ್ನು ಕುಡಿಯುವುದಕ್ಕೆ ಕೊಡು," ಎಂದು ಕೇಳಿದನು. [18]ಆಕೆ, "ಕುಡಿಯಪ್ಪಾ" ಎಂದು ಹೇಳಿ ಕೂಡಲೆ ಕೊಡವನ್ನು ಕೈಗಿಳಿಸಿ ಕುಡಿಯಕೊಟ್ಟಳು. [19]ಅವನು ಕುಡಿದಾದ ಮೇಲೆ, "ನಿನ್ನ ಒಂಟೆಗಳಿಗೂ ಬೇಕಾದಷ್ಟು ನೀರು ತಂದುಕೊಡುತ್ತೇನೆ," ಎಂದು ಹೇಳಿ, [20]ಕೊಡದ ನೀರನ್ನು ತೊಟ್ಟಿಗೆ ಹೊಯ್ದು ಮತ್ತೆ ನೀರು ತರುವುದಕ್ಕೆ ಬಾವಿಗೆ ಓಡಿದಳು. ಹೀಗೆ ಅವನ ಎಲ್ಲ ಒಂಟೆಗಳಿಗೂ ತಂದುಕೊಟ್ಟಳು. [21]ಆ ಮನುಷ್ಯ, ತನ್ನ ಪ್ರಯಾಣವನ್ನು ಸರ್ವೇಶ್ವರ ಸಫಲಗೊಳಿಸಿದರೋ ಇಲ್ಲವೋ ಎಂದು ಯೋಚಿಸುತ್ತಾ ಏನೂ ಮಾತಾಡದೆ ಆಕೆಯನ್ನೇ ದೃಷ್ಟಿಸಿ ನೋಡುತ್ತಿದ್ದನು.

22 ಒಂಟೆಗಳು ಕುಡಿದಾದನಂತರ ಅವನು ಆಕೆಯ ಮೂಗಿಗೆ ಅರ್ಧ ತೊಲೆಯ ತೂಕವುಳ್ಳ ಒಂದು ಚಿನ್ನದ ಮೂಗುತಿಯನ್ನೂ ಕೈಗಳಿಗೆ ಹತ್ತು ತೊಲೆಯ ತೂಕವುಳ್ಳ ಎರಡು ಚಿನ್ನದ ಬಳೆಗಳನ್ನೂ ತೊಡಿಸಿದನು. [23]"ನೀನು ಯಾರ ಮಗಳು? ದಯವಿಟ್ಟು ಹೇಳು: ನಿನ್ನ ತಂದೆಯ ಮನೆಯಲ್ಲಿ ತಂಗುವುದಕ್ಕೆ ಸ್ಥಳವಿದೆಯೇ?" ಎಂದು ಕೇಳಿದನು.

24 ಅದಕ್ಕೆ ಆಕೆ, "ನಾನು ನಾಹೋರನಿಗೆ ಮಿಲ್ಕಳಲ್ಲಿ ಹುಟ್ಟಿದ ಬೆತೂವೇಲನ ಮಗಳು. [25]ಹುಲ್ಲು, ಮೇವು ನಮ್ಮಲ್ಲಿ ಬಹಳ ಉಂಟು; ತಂಗುವುದಕ್ಕೆ ಸ್ಥಳವಿದೆ," ಎಂದು ಉತ್ತರಕೊಟ್ಟಳು.

26 ಇದನ್ನು ಕೇಳಿದ ಆ ಮನುಷ್ಯ ತಲೆಬಾಗಿ ಸರ್ವೇಶ್ವರನನ್ನು ಆರಾಧಿಸಿದನು. [27]"ನನ್ನೊಡೆಯ ಅಬ್ರಹಾಮನ ದೇವರಾಗಿರುವ ಸರ್ವೇಶ್ವರಸ್ವಾಮಿಗೆ ಸ್ತೋತ್ರ ಸಲ್ಲಲಿ! ಅವರು ನನ್ನೊಡೆಯನ ಮೇಲಿಟ್ಟಿದ್ದ ಅಚಲ ಪ್ರೀತಿ ಪ್ರಾಮಾಣಿಕತೆಯನ್ನು ಕೈಬಿಟ್ಟಿಲ್ಲ. ನನ್ನೊಡೆಯನ ಬಂಧುಬಳಗದವರ ಮನೆಗೆ ನನ್ನನ್ನು ನೆಟ್ಟಗೆ ಕರೆತಂದಿದ್ದಾರೆ," ಎಂದನು.

28 ಆ ಹುಡುಗಿ ಓಡಿಹೋಗಿ ನಡೆದ ಸಂಗತಿಯನ್ನು ತಾಯಿಯ ಮನೆಯಲ್ಲಿದ್ದ ಎಲ್ಲರಿಗೂ ತಿಳಿಸಿದಳು. [29]ರೆಬೆಕ್ಕಳಿಗೆ ಲಾಬಾನ್ ಎಂಬ ಅಣ್ಣ ಇದ್ದನು. [30]ಅವನು ತನ್ನ ತಂಗಿಯ ಮೇಲಿದ್ದ ಮೂಗುತಿಯನ್ನೂ ಬಳೆಗಳನ್ನೂ ನೋಡಿದನು. ಆ ಮನುಷ್ಯ ಆಕೆಗೆ ಹೇಳಿದ ಮಾತುಗಳನ್ನು ಆಕೆಯಿಂದಲೇ ಕೇಳಿ ತಿಳಿದುಕೊಂಡನು. ಬಳಿಕ ಬುಗ್ಗೆಯ ಬಳಿ ಒಂಟೆಗಳೊಂದಿಗೆ ನಿಂತಿದ್ದ ಈ ಮನುಷ್ಯನ ಬಳಿಗೆ ಓಡಿಬಂದನು. [31]"ಸರ್ವೇಶ್ವರಸ್ವಾಮಿಯಿಂದ ಆಶೀರ್ವಾದ ಪಡೆದವನೇ, ಮನೆಗೆ ಬಾ; ಇಲ್ಲಿ ಹೊರಗೇಕೆ ನಿಂತಿರುವೆ? ನಿನಗೆ ಮನೆ ಸಿದ್ಧವಾಗಿದೆ; ಒಂಟೆಗಳಿಗೆ ಬೇಕಾದ ಸ್ಥಳವಿದೆ," ಎಂದು ಕರೆದನು.

32 ಆ ಮನುಷ್ಯ ಮನೆಗೆ ಬಂದಾಗ ಲಾಬಾನನು ಒಂಟೆಗಳ ಹೊರೆಗಳನ್ನು ಇಳಿಸಿ, ಅವುಗಳಿಗೆ ಹುಲ್ಲು ಮೇವನ್ನು ಕೊಡಿಸಿದನು. ಆ ಮನುಷ್ಯನ ಮತ್ತು ಅವನ ಸಂಗಡಿಗರ ಕಾಲುಗಳನ್ನು ತೊಳೆಯುವುದಕ್ಕೆ ನೀರನ್ನು ತರಿಸಿದನು. [33]ಅನಂತರ ಊಟ ಬಡಿಸಲಾಯಿತು. ಆದರೆ ಆ ಮನುಷ್ಯ, "ನಾನು ಬಂದ ಕೆಲಸವನ್ನು ಹೇಳದೆ ಊಟ ಮಾಡುವುದಿಲ್ಲ," ಎಂದುಬಿಟ್ಟನು. ಆಗ ಲಾಬಾನನು, "ಅದೇನು ಹೇಳು," ಎಂದನು.

34 ಅವನು, "ನಾನು ಅಬ್ರಹಾಮನ ಸೇವಕ. [35]ಸರ್ವೇಶ್ವರ ನನ್ನೊಡೆಯನನ್ನು ಯಥೇಚ್ಛವಾಗಿ ಆಶೀರ್ವದಿಸಿದ್ದಾರೆ; ದನಕುರಿಗಳನ್ನೂ ಬೆಳ್ಳಿ ಬಂಗಾರವನ್ನೂ ದಾಸದಾಸಿಯರನ್ನೂ ಒಂಟೆಗಳನ್ನೂ ಹೇಸರಗತ್ತೆಗಳನ್ನೂ ಕೊಟ್ಟಿದ್ದಾರೆ. ನನ್ನೊಡೆಯ ಐಶ್ವರ್ಯವಂತ. [36]ಆತನ ಪತ್ನಿಯಾದ ಸಾರಳು, ವೃದ್ಧಾಪ್ಯದಲ್ಲಿ ಆತನಿಗೆ ಒಬ್ಬ ಮಗನನ್ನು ಹೆತ್ತಳು; ಆ ಮಗನಿಗೆ ನನ್ನೊಡೆಯ ತನಗಿರುವ ಸಮಸ್ತವನ್ನೂ ಕೊಟ್ಟಿದ್ದಾರೆ. [37]ಅವರು ನನಗೆ, 'ನಾನು ವಾಸವಾಗಿರುವ ಕಾನಾನ್ ನಾಡಿನಿಂದ ನನ್ನ ಮಗನಿಗೆ ಹೆಣ್ಣನ್ನು ತರಬೇಡ; [38]ನನ್ನ ತಂದೆಯ ಮನೆಗೂ ನನ್ನ ಬಂಧುಬಳಗದವರ ಬಳಿಗೂ ಹೋಗಿ ಅವರಿಂದಲೇ ಹೆಣ್ಣನ್ನು ತರಬೇಕು' ಎಂದು ಹೇಳಿ ನನ್ನಿಂದ ಪ್ರಮಾಣ ಮಾಡಿಸಿಕೊಂಡಿದ್ದಾರೆ. [39]ನಾನು ಅವರಿಗೆ, 'ಒಂದು ವೇಳೆ ಇಲ್ಲಿಗೆ ನನ್ನೊಡನೆ ಬರಲು ಆ ಕನ್ಯೆಗೆ ಮನಸ್ಸಿಲ್ಲದೆ ಹೋದೀತು' ಎಂದು ಹೇಳಿದೆ. [40]ಅದಕ್ಕೆ ಅವರು, 'ಯಾವ

ಸರ್ವೇಶ್ವರಸ್ವಾಮಿಗೆ ನಾನು ವಿಧೇಯನಾಗಿ ನಡೆದುಕೊಂಡೆನೋ ಅವರು ತಮ್ಮ ದೂತನನ್ನು ನಿನ್ನೊಂದಿಗೆ
ಕಳುಹಿಸುವರು. ನನ್ನ ತಂದೆಯ ಮನೆತನಕ್ಕೆ ಸೇರಿದ ಬಂಧುಬಳಗದವರಿಂದಲೇ ನನ್ನ ಮಗನಿಗೆ ಹೆಣ್ಣು
ತರಲು ನಿನಗೆ ಅನುಕೂಲ ಮಾಡಿಕೊಡುವರು. 41ನಾನು ಮಾಡಿಸಿದ ಪ್ರಮಾಣದಿಂದ ನೀನು
ಬಿಡುಗಡೆಯಾಗಬೇಕಾದರೆ – ನೀನು ನನ್ನ ಜನರ ಬಳಿಗೆ ಹೋಗಬೇಕು, ಅವರು ಹೆಣ್ಣನ್ನು ಕೊಡುವುದಿಲ್ಲ
ಎನ್ನಬೇಕು, ಆಗ ಮಾತ್ರ ನಾನು ಮಾಡಿಸಿದ ಪ್ರಮಾಣದಿಂದ ಬಿಡುಗಡೆಯಾಗಿರುವೆ; ಎಂದು ಹೇಳಿದರು.

42 “ನಾನು ಇಂದು ಈ ಊರಿನ ಬುಗ್ಗೆಯ ಬಳಿಗೆ ಬಂದೆ. ‘ನನ್ನೊಡೆಯ ಅಬ್ರಹಾಮನ
ದೇವರಾಗಿರುವ ಸರ್ವೇಶ್ವರಾ, ಇಗೋ, ನೀರಿನ ಬುಗ್ಗೆಯ ಬಳಿಯಲ್ಲೇ ನಿಂತಿದ್ದೇನೆ. ನೀವು ನನ್ನ
ಪ್ರಯಾಣವನ್ನು ಸಫಲಮಾಡಿದ್ದಾದರೆ 43ನೀರಿಗೆ ಬರುವ ಯಾವ ಹುಡುಗಿಗೆ ‘ದಯವಿಟ್ಟು ನಿನ್ನ ಕೊಡದಿಂದ
ಸ್ವಲ್ಪ ನೀರನ್ನು ಕುಡಿಯುವುದಕ್ಕೆ ನನಗೆ ಕೊಡು’ ಎಂದು ನಾನು ಹೇಳುವಾಗ ಅವಳು, 44‘ಕುಡಿಯಪ್ಪಾ,
ಮತ್ತು ನಿನ್ನ ಒಂಟೆಗಳಿಗೂ ನೀರು ತಂದುಕೊಡುತ್ತೇನೆ’ ಎನ್ನುವಳೋ ಅವಳೇ ಸರ್ವೇಶ್ವರಸ್ವಾಮಿಯಿಂದ
ನನ್ನೊಡೆಯನ ಮಗನಿಗೆ ಚುನಾಯಿತಳಾದ ಕನ್ನಿಕೆಯಾಗಿರಲಿ’ ಎಂದೆ. 45ನಾನು ಹೀಗೆ ಮನಸ್ಸಿನಲ್ಲಿ
ಹೇಳಿಕೊಳ್ಳುತ್ತಿರುವಾಗಲೇ ರೆಬೆಕ್ಕಳು ಹೆಗಲಿನ ಮೇಲೆ ಕೊಡವನ್ನು ಹೊತ್ತುಕೊಂಡು ಬರುವುದನ್ನು ಕಂಡೆ.
ಆಕೆ ಬುಗ್ಗೆಗೆ ಇಳಿದು ನೀರನ್ನು ತೆಗೆದುಕೊಂಡು ಬಂದಾಗ ನಾನು ಆಕೆಗೆ, ‘ನನಗೆ ಕುಡಿಯುವುದಕ್ಕೆ ನೀರನ್ನು
ಕೊಡಬೇಕಮ್ಮಾ’ ಎಂದು ಹೇಳಿದೆ. 46ಕೂಡಲೆ ಆಕೆ ಕೊಡವನ್ನು ಹೆಗಲಿನಿಂದ ಇಳಿಸಿ, ‘ಕುಡಿಯಪ್ಪಾ, ನಿನ್ನ
ಒಂಟೆಗಳಿಗೂ ನೀರು ತಂದುಕೊಡುತ್ತೇನೆ,’ ಎಂದಳು. ನಾನು ಕುಡಿದ ಮೇಲೆ ಆಕೆ ಒಂಟೆಗಳಿಗೂ ನೀರನ್ನು
ತಂದುಕೊಟ್ಟಳು. 47ನೀನು ಯಾರ ಮಗಳೆಂದು ಕೇಳಿದ್ದಕ್ಕೆ, ‘ನಾಹೋರನಿಗೆ ಮಿಲ್ಕಳಲ್ಲಿ ಹುಟ್ಟಿದ ಬೆತೂವೇಲನ
ಮಗಳು’ ಎಂದಳು. ಅದನ್ನು ಕೇಳಿ ನಾನು ಆಕೆಗೆ ಮೂಗುತಿಯನ್ನೂ ಕೈಗಳಿಗೆ ಬಳೆಗಳನ್ನೂ ತೊಡಿಸಿ,
48ನನ್ನೊಡೆಯ ಅಬ್ರಹಾಮನ ಸರ್ವೇಶ್ವರನಾದ ದೇವರಿಗೆ ತಲೆಬಾಗಿ ಆರಾಧಿಸಿದೆ. ಅವರು ನನ್ನೊಡೆಯ
ಅಬ್ರಹಾಮನ ಮಗನಿಗೆ ಅವರ ತಮ್ಮನ ಮಗಳನ್ನೇ ಆರಿಸಿಕೊಳ್ಳುವಂತೆ ನನ್ನನ್ನು ನೆಟ್ಟಗೆ ಇಲ್ಲಿಗೆ
ಕರೆದುಕೊಂಡು ಬಂದುದಕ್ಕಾಗಿ ಅವರನ್ನು ಕೊಂಡಾಡಿದೆ. 49ಹೀಗಿರುವಲ್ಲಿ ನೀವು ನನ್ನೊಡೆಯನಿಗೆ ಪ್ರತಿ
ಪ್ರೀತಿಯನ್ನೂ ಪ್ರಾಮಾಣಿಕತೆಯನ್ನೂ ತೋರಲು ಒಪ್ಪಿದರೆ ನನಗೆ ಹೇಳಿ; ಇಲ್ಲವಾದರೆ ಇಲ್ಲವೆನ್ನಿ; ಆಗ
ಯಾವ ಕಡೆ ತಿರುಗಬೇಕೆಂದು ನನಗೆ ಗೊತ್ತಾಗುತ್ತದೆ,” ಎಂದು ವಿವರಿಸಿದನು.

50 ಅದಕ್ಕೆ ಲಾಬಾನನು ಮತ್ತು ಬೆತೂವೇಲನು, “ಇದು ಸರ್ವೇಶ್ವರಸ್ವಾಮಿಯಿಂದಲೇ ಬಂದ
ಸೂಚನೆ, ಇದಕ್ಕೆ ನಾವು ನಿನಗೆ ‘ಹೌದು – ಇಲ್ಲ’ ಎಂದು ಹೇಳಲಾಗದು. 51ರೆಬೆಕ್ಕಳನ್ನು ಇಗೋ ನಿನ್ನ ವಶಕ್ಕೆ
ಒಪ್ಪಿಸುತ್ತಿದ್ದೇವೆ: ಕರೆದುಕೊಂಡು ಹೋಗಬಹುದು. ಸರ್ವೇಶ್ವರ ಹೇಳಿದಂತೆಯೇ ಆಕೆ ನಿನ್ನೊಡೆಯನ
ಮಗನಿಗೆ ಪತ್ನಿ ಆಗಲಿ,” ಎಂದರು. 52ಅಬ್ರಹಾಮನ ಸೇವಕನು ಅವರ ಮಾತನ್ನು ಕೇಳಿ ಸಾಷ್ಟಾಂಗವೆರಗಿ
ಸರ್ವೇಶ್ವರ ಸ್ವಾಮಿಯನ್ನು ವಂದಿಸಿದನು. 53ಬಳಿಕ ತಾನು ತಂದಿದ್ದ ಬೆಳ್ಳಿಬಂಗಾರದ ಒಡವೆಗಳನ್ನು ಹಾಗು
ವಸ್ತ್ರಗಳನ್ನು ತೆಗೆದು ರೆಬೆಕ್ಕಳಿಗೆ ಕೊಟ್ಟನು. ಆಕೆಯ ಅಣ್ಣನಿಗೂ ತಾಯಿಗೂ ಬೆಲೆಬಾಳುವ ಉಡುಗೊರೆಗಳನ್ನು
ಕೊಟ್ಟನು. 54ಅವನು ಮತ್ತು ಅವನ ಸಂಗಡ ಬಂದಿದ್ದವರು ಊಟ ಉಪಚಾರಗಳನ್ನು ಮುಗಿಸಿಕೊಂಡು
ರಾತ್ರಿಯನ್ನು ಅಲ್ಲೇ ಕಳೆದರು. ಬೆಳಿಗ್ಗೆ ಎದ್ದು, “ನನ್ನೊಡೆಯನ ಬಳಿಗೆ ಹೋಗಲು ಅಪ್ಪಣೆಯಾಗಬೇಕು,”
ಎಂದ ಆ ಸೇವಕ. 55ಅದಕ್ಕೆ ರೆಬೆಕ್ಕಳ ಅಣ್ಣ ಹಾಗು ತಾಯಿ, “ಹುಡುಗಿ ಇನ್ನೂ ಎಂಟು ಹತ್ತು ದಿನವಾದರೂ
ನಮ್ಮಲ್ಲಿರಲಿ; ಆಮೇಲೆ ಆಕೆ ಹೋಗಬಹುದು,” ಎಂದು ಹೇಳಿದರು.

56 ಅವನು ಅವರಿಗೆ, “ಸರ್ವೇಶ್ವರ ನನ್ನ ಪ್ರಯಾಣವನ್ನು ಸಫಲಮಾಡಿದ್ದಾರೆ. ನನ್ನನ್ನು
ತಡೆಯಬೇಡಿ; ನನ್ನ ಒಡೆಯನ ಬಳಿಗೆ ಹೋಗಲು ಅಪ್ಪಣೆಯಾಗಬೇಕು,” ಎಂದನು. 57ಅವರು, “ನಾವು
ಹುಡುಗಿಯನ್ನು ಕರೆದು ಆಕೆಯ ಅಭಿಪ್ರಾಯವನ್ನು ತಿಳಿದುಕೊಳ್ಳುತ್ತೇವೆ,” ಎಂದು ಹೇಳಿ ರೆಬೆಕ್ಕಳನ್ನು
ಕರೆದರು. 58“ಈ ಮನುಷ್ಯನ ಜೊತೆಯಲ್ಲಿ ಹೋಗುತ್ತೀಯಾ?” ಎಂದು ಕೇಳಿದರು. ಆಕೆ, “ಹೋಗುತ್ತೇನೆ,”
ಎಂದಳು.

59 ಆಗ ಅವರು ತಂಗಿ ರೆಬೆಕ್ಕಳನ್ನೂ ಆಕೆಯ ದಾದಿಯನ್ನೂ ಅಬ್ರಹಾಮನ ಸೇವಕನ ಮತ್ತು
ಅವನ ಸಂಗಡಿಗರ ಜೊತೆಗೆ ಸಾಗಕಳುಹಿಸಿದರು, ಅಲ್ಲದೆ ರೆಬೆಕ್ಕಳನ್ನು ಹೀಗೆಂದು ಹರಸಿದರು:

60 “ಸಾವಿರ, ಹತ್ತು ಸಾವಿರ

ಸಂತತಿಯಾಗಲಿ,
ಎಲೆ ತಂಗಿ ನಿನಗೆ;
ವೈರಿಗಳ ನಗರಗಳು ಸ್ವಾಧೀನವಾಗಲಿ
ನಿನ್ನ ಸಂತತಿಗೆ!"

61 ರೆಬೆಕ್ಕಳು ಮತ್ತು ಆಕೆಯ ದಾದಿಯರು ಒಂಟೆಗಳ ಮೇಲೆ ಅಬ್ರಹಾಮನ ಸೇವಕನನ್ನು
ಹಿಂಬಾಲಿಸಿ ಹೋದರು. ಹೀಗೆ ಆ ಸೇವಕನು ರೆಬೆಕ್ಕಳನ್ನು ಕರೆದುಕೊಂಡು ಹೋದನು.

62 ಇತ್ತ ಇಸಾಕನು 'ಲಹೈರೋಯಿ' ಎಂಬಲ್ಲಿಗೆ ಹೋಗಿಬಂದು ಕಾನಾನ್ ನಾಡಿನ ದಕ್ಷಿಣ
ಪ್ರಾಂತದಲ್ಲಿ ವಾಸಮಾಡುತ್ತಿದ್ದನು. [63]ಸಂಜೆ ವೇಳೆಯಲ್ಲಿ ಅವನು ವಿಶ್ರಾಂತಿಗಾಗಿ ತಿರುಗಾಡಲು ಹೋಗಿದ್ದನು.
ಕಣ್ಣೆತ್ತಿ ನೋಡಿದಾಗ ಒಂಟೆಗಳು ಬರುತ್ತಿರುವುದು ಅವನಿಗೆ ಕಾಣಿಸಿತು. [64]ರೆಬೆಕ್ಕಳೂ ಕಣ್ಣೆತ್ತಿ ಇಸಾಕನನ್ನು
ನೋಡಿ ಒಂಟೆಯಿಂದ ಕೆಳಗಿಳಿದಳು. [65]"ನಮ್ಮ ಕಡೆ ಹೊಲದಲ್ಲಿ ನಡೆದು ಬರುತ್ತಿರುವ ಆ ಮನುಷ್ಯ
ಯಾರು?" ಎಂದು ಆ ಸೇವಕನನ್ನು ಕೇಳಿದಳು. "ಅವನೇ ನನ್ನೊಡೆಯ" ಎಂದು ಹೇಳಿದಾಗ ಆಕೆ ಮುಸಕು
ಹಾಕಿಕೊಂಡಳು.

66 ಆ ಸೇವಕನು ತಾನು ಮಾಡಿದ ಕಾರ್ಯಗಳನ್ನೆಲ್ಲ ಇಸಾಕನಿಗೆ ವರದಿ ಮಾಡಿದನು. [67]ಇಸಾಕನು
ಆಕೆಯನ್ನು ತನ್ನ ತಾಯಿ ಸಾರಳ ಗುಡಾರಕ್ಕೆ ಕರೆದುಕೊಂಡು ಹೋದನು. ಹೀಗೆ ಅವನು ರೆಬೆಕ್ಕಳನ್ನು
ವರಿಸಿದನು; ಆಕೆ ಅವನಿಗೆ ಪತ್ನಿಯಾದಳು. ಆಕೆಯ ಮೇಲಿನ ಪ್ರೀತಿ, ತನ್ನ ತಾಯಿ ಸಾರಳನ್ನು
ಕಳೆದುಕೊಂಡಿದ್ದ ಅವನಿಗೆ ಸಾಂತ್ವನ ತಂದಿತು.

### ಕೆಟೂರಳ ಸಂತತಿ

(1 ಪೂರ್ವ. 1.32–33)

**25** ಅಬ್ರಹಾಮನು ಕೆಟೂರಳೆಂಬ ಇನ್ನೊಬ್ಬ ಹೆಂಡತಿಯನ್ನು ಮದುವೆ ಮಾಡಿಕೊಂಡನು. [2]ಆಕೆ ಅವನಿಗೆ
ಜಿಮ್ರಾನ್, ಯೊಕ್ಷಾನ್, ಮೆದಾನ್, ಮಿದ್ಯಾನ್, ಇಷ್ಬಾಕ್, ಶೂಹ ಇವರನ್ನು ಹೆತ್ತಳು. [3]ಯೊಕ್ಷಾನನು ಶೆಬಾ,
ದೆದಾನ್ ಎಂಬವರನ್ನು ಪಡೆದನು. ಅಶ್ಶೂರ್ಯರು, ಲೆಟೂಶ್ಯರು, ಲೆಯುಮ್ಯರು ದೆದಾನನಿಂದ ಹುಟ್ಟಿದರು.
[4]ಗೇಫಾ, ಗೇಫೆರ್, ಹನೋಕ್ ಅಬೀದಾ, ಎಲ್ದಾಗ ಎಂಬವರು ಮಿದ್ಯಾನನಿಂದ ಹುಟ್ಟಿದರು. ಇವರೆಲ್ಲರು
ಕೆಟೂರಳ ಸಂತತಿ ಅವರು.

5 ಅಬ್ರಹಾಮನು ತನಗಿದ್ದ ಆಸ್ತಿಪಾಸ್ತಿಯನ್ನೆಲ್ಲ ಇಸಾಕನಿಗೆ ಕೊಟ್ಟನು. [6]ತನ್ನ ಉಪಪತ್ನಿಯರ
ಮಕ್ಕಳಿಗೆ ಕೆಲವು ಸೊತ್ತುಗಳನ್ನು ದಾನಮಾಡಿ ತಾನು ಇನ್ನೂ ಜೀವದಿಂದಿರುವಾಗಲೇ ಅವರನ್ನು ತನ್ನ ಮಗ
ಇಸಾಕನ ಬಳಿಯಿಂದ ದೂರಕ್ಕೆ ಪೂರ್ವದಿಕ್ಕಿನಲ್ಲಿದ್ದ ಕೆದೆಮ್ ನಾಡಿಗೆ, ಕಳಿಸಿಬಿಟ್ಟನು.

### ಅಬ್ರಹಾಮನ ಮರಣ

7 ಅಬ್ರಹಾಮನು ನೂರೆಪ್ಪತ್ತೈದು ವರ್ಷ ಬದುಕಿದ್ದನು. [8]ಪೂರ್ಣ ಆಯುಷ್ಯವನ್ನು ಕಳೆದು,
ಹಣ್ಣುಹಣ್ಣು ಮುದುಕನಾಗಿ ಪ್ರಾಣಬಿಟ್ಟು ಅವನು ತನ್ನ ಪಿತೃಗಳ ಬಳಿಗೆ ಸೇರಿದನು. [9]ಅವನ ಮಕ್ಕಳಾದ
ಇಸಾಕ್ – ಇಷ್ಮಾಯೇಲರು ಅವನನ್ನು ಹಿತ್ತಿಯನಾದ ಚೋಹರನ ಮಗ ಎಫ್ರೋನನ ಹೊಲದಲ್ಲಿದ್ದ
ಮಕ್ಪೇಲದ ಗವಿಯಲ್ಲಿ ಸಮಾಧಿ ಮಾಡಿದರು. ಅದು ಮಮ್ರೆಗೆ ಪೂರ್ವದಿಕ್ಕಿನಲ್ಲಿದೆ. [10]ಅಬ್ರಹಾಮನೇ
ಹಿತ್ತಿಯರಿಂದ ಕೊಂಡುಕೊಂಡ ಹೊಲ ಅದು. ಅದರಲ್ಲೇ ಅವನಿಗೂ ಅವನ ಹೆಂಡತಿ ಸಾರಳಿಗೂ ಸಮಾಧಿ
ಆಯಿತು. [11]ಅಬ್ರಹಾಮನು ಕಾಲವಾದ ಬಳಿಕ ಮಗ ಇಸಾಕನನ್ನು ದೇವರು ಆಶೀರ್ವದಿಸಿದರು. ಇಸಾಕನು
'ಲಹೈರೋಯಿ' ಎಂಬ ಬಾವಿಯ ಹತ್ತಿರ ವಾಸವಾಗಿದ್ದನು.

### ಇಷ್ಮಾಯೇಲನ ಸಂತಾನ

(1 ಪೂರ್ವ. 1.28–31)

12 ಅಬ್ರಹಾಮನಿಗೆ ಸಾರಳ ದಾಸಿಯೂ ಈಜಿಪ್ಟಿನವಳೂ ಆದ ಹಾಗರಳಲ್ಲಿ ಹುಟ್ಟಿದ ಇಷ್ಮಾಯೇಲನ
ವಂಶಾವಳಿ: [13]ಇಷ್ಮಾಯೇಲನ ಮಕ್ಕಳಿಗೂ ಅವರಿಂದ ಹುಟ್ಟಿದ ಕುಲಗಳಿಗೂ ಇಡಲಾಗಿದ್ದ ಹೆಸರುಗಳು ಇವು
– ಮೊದಲು ಹುಟ್ಟಿದವನು ನೆಬಾಯೋತ್, ಆಮೇಲೆ ಹುಟ್ಟಿದವರು ಕೇದಾರ್, ಅದ್ಬಯೇಲ್, [14]ಮಿಬ್ಸಾಮ್,
ಮಿಷ್ಮಾ, ದೂಮಾ, ಮಸ್ಸಾ, [15]ಹದದ್, ತೇಮಾ, ಯಟೂರ್, ನಾಫೀಷ್ ಹಾಗೂ ಕೇದ್ಮಾ. [16]ಇವರೇ ಆ
ಹನ್ನೆರಡು ಕುಲದ ಮೂಲಪುರುಷರು. ಈ ಹೆಸರುಗಳನ್ನು ಅವರು ವಾಸಿಸಿದ್ದ ಊರುಗಳಿಗೂ
ಪಾಳೆಯಗಳಿಗೂ ಇಡಲಾಗಿತ್ತು. [17]ಇಷ್ಮಾಯೇಲನು ನೂರ ಮೂವತ್ತೇಳು ವರ್ಷ ಬದುಕಿದ್ದನು. ಅನಂತರ
ಸತ್ತು ತನ್ನ ಪಿತೃಗಳ ಬಳಿಗೆ ಸೇರಿದನು. [18]ಇಷ್ಮಾಯೇಲ್ಯರು ಹವೀಲ ಹಾಗು ಶೂರಿನ ಮಧ್ಯೆಯಿರುವ
ಪ್ರದೇಶದಲ್ಲಿ ವಾಸಮಾಡಿದರು. ಶೂರ್ ಈಜಿಪ್ಟಿನ ಪೂರ್ವಕ್ಕೆ ಅಸ್ಸೀರಿಯಗೆ ಹೋಗುವ ಹಾದಿಯಲ್ಲಿದೆ.
ಹೀಗೆ ಇಷ್ಮಾಯೇಲ್ಯರು ತಮ್ಮ ಸಂಬಂಧಿಕರಿಗೆ ಎದುರು ಬದುರಿನಲ್ಲೇ ವಾಸಮಾಡಿದರು.

## ಏಸಾವ ಮತ್ತು ಯಕೋಬನ ಜನನ

19 ಅಬ್ರಹಾಮನ ಮಗ ಇಸಾಕನ ವಂಶಾವಳಿ: ಅಬ್ರಹಾಮನು ಇಸಾಕನನ್ನು ಪಡೆದನು. [20]ಇಸಾಕನು
ನಲವತ್ತು ವರ್ಷದವನಾಗಿದ್ದಾಗ ಅರಾಮ್ಯರಾದ ಬೆತುವೇಲನ ಮಗಳೂ ಲಾಬಾನನ ತಂಗಿಯೂ ಆಗಿದ್ದ
ರೆಬೆಕ್ಕಳನ್ನು ಮೆಸಪೊಟೇಮಿಯಾದಿಂದ ಬರಮಾಡಿಸಿಕೊಂಡು ಮದುವೆಯಾದನು. [21]ರೆಬೆಕ್ಕಳಿಗೆ
ಮಕ್ಕಳಾಗಲಿಲ್ಲ. ಸರ್ವೇಶ್ವರ ಅವನ ವಿಜ್ಞಾಪನೆಯನ್ನು ಆಲಿಸಿದರು. ರೆಬೆಕ್ಕಳು ಗರ್ಭವತಿಯಾದಳು. [22]ಆಕೆಯ
ಗರ್ಭದಲ್ಲಿದ್ದ ಅವಳಿಮಕ್ಕಳು ಒಂದನ್ನೊಂದು ಒತ್ತರಿಸಿದಾಗ ಆಕೆ, "ನನಗೇತಕ್ಕೆ ಹೀಗಾಗುತ್ತಿದೆ?"
ಎಂದುಕೊಂಡು ಸರ್ವೇಶ್ವರಸ್ವಾಮಿಯನ್ನು ವಿಚಾರಿಸಲು ಹೋದಳು. [23]ಸರ್ವೇಶ್ವರ ಆಕೆಗೆ ಇಂತೆಂದರು:

ನಿನ್ನ ಉದರದೊಳಿವೆ ಜನಾಂಗಗಳೆರಡು
ಹುಟ್ಟಿನಿಂದ ವೈರಿಗಳಾ ರಾಷ್ಟ್ರಗಳೆರಡು
ಬಲಿಷ್ಠವಿರುವುದು ಒಂದು ಮತ್ತೊಂದಕೆ
ಜ್ಯೇಷ್ಠನೇ ದಾಸನಾಗುವನು ಕನಿಷ್ಠನಿಗೆ.

24 ದಿನ ತುಂಬಿದಾಗ ರೆಬೆಕ್ಕಳು ಅವಳಿ ಮಕ್ಕಳನ್ನು ಹೆತ್ತಳು. [25]ಮೊದಲು ಹುಟ್ಟಿದ ಮಗು ಕೆಂಚಗೂ
ಮೈಯೆಲ್ಲ ರೋಮಮಯವಾಗೂ ಇತ್ತು. ಎಂತಲೇ ಅದಕ್ಕೆ ಏಸಾವ ಎಂದು ಹೆಸರಿಟ್ಟರು. [26]ಎರಡನೆಯ
ಮಗು ಏಸಾವನ ಹಿಮ್ಮಡಿಯನ್ನು ಹಿಡಿದುಕೊಂಡು ಹುಟ್ಟಿದ್ದರಿಂದ ಅದಕ್ಕೆ ಯಕೋಬ ಎಂದು ಹೆಸರಿಟ್ಟರು.
ಇವರು ಹುಟ್ಟಿದಾಗ ಇಸಾಕನಿಗೆ ಅರವತ್ತು ವರ್ಷವಾಗಿತ್ತು.

## ಜ್ಯೇಷ್ಠತನದ ಮಾರಾಟ

27 ಆ ಹುಡುಗರಿಬ್ಬರು ಬೆಳೆದರು. ಏಸಾವನು ಚೂಟಿಯಾದ ಬೇಟೆಗಾರನಾದ, ವನವಾಸಿಯಾದ.
ಯಕೋಬನು ಸಾಧು ಮನುಷ್ಯ, ಅವನದು ಗುಡಾರಗಳಲ್ಲಿ ವಾಸ. [28]ಇಸಾಕನಿಗೆ ಬೇಟೆಯ ಮಾಂಸ ಇಷ್ಟ;
ಎಂದೇ ಏಸಾವನ ಮೇಲೆ ಹೆಚ್ಚು ಪ್ರೀತಿ, ರೆಬೆಕ್ಕಳಿಗಾದರೋ ಯಕೋಬನ ಮೇಲೆ ಹೆಚ್ಚು ಪ್ರೀತಿ.

29 ಒಮ್ಮೆ ಯಕೋಬನು ಅಡಿಗೆ ಮಾಡುತ್ತಿದ್ದ. ಏಸಾವನು ಕಾಡಿನಿಂದ ದಣಿದು ಬಂದು, [30]'ನಾನು
ಬಹಳವಾಗಿ ದಣಿದು ಬಂದಿದ್ದೇನೆ, ಆ ಕೆಂಪು ಪದಾರ್ಥವನ್ನು ತಿನ್ನಲು ಕೊಡು', ಎಂದು ಕೇಳಿದ. (ಈ
ಕಾರಣದಿಂದಲೇ ಏಸಾವನಿಗೆ ಎದೋಮ್ ಎಂದು ಹೆಸರಾಯಿತು.)

31 ಅದಕ್ಕೆ ಯಕೋಬ, 'ನಿನ್ನದಾಗಿರುವ ಜ್ಯೇಷ್ಠಪುತ್ರನ ಹಕ್ಕನ್ನು ನನಗೆ ಮೊದಲು ಮಾರಿಬಿಡು,'
ಎಂದು ಹೇಳಿದ. [32]ಏಸಾವನು, 'ಆಗಲಿ, ಮಾರುತ್ತೇನೆ, ಸಾಯುತ್ತಿರುವ ನನಗೆ ಜ್ಯೇಷ್ಠತನದಿಂದ
ಪ್ರಯೋಜನವೇನು?' ಎಂದ. [33]ಯಕೋಬನು 'ಮಾರಿರುವುದಾಗಿ ನನಗೆ ಪ್ರಮಾಣ ಮಾಡು', ಎಂದಾಗ
ಏಸಾವನು ಪ್ರಮಾಣಮಾಡಿ ತನ್ನ ಜ್ಯೇಷ್ಠತನದ ಹಕ್ಕನ್ನು ಮಾರಿಬಿಟ್ಟ. [34]ಆಗ ಯಕೋಬನು ಏಸಾವನಿಗೆ
ರೊಟ್ಟಿಯನ್ನೂ ಅಲಸಂದಿ ಗುಗ್ಗರಿಯನ್ನೂ ಕೊಟ್ಟ. ಏಸಾವನು ತಿಂದು, ಕುಡಿದು, ಎದ್ದು ಹೋದ.
ಜ್ಯೇಷ್ಠತನದ ಹಕ್ಕುಬಾಧ್ಯತೆಗೆ ಏಸಾವನು ಕೊಟ್ಟ ಮರ್ಯಾದೆ ಇಷ್ಟೇ!

## ಇಸಾಕ ಮತ್ತು ಅಬೀಮೆಲೆಕ

**26** ಹಿಂದೆ ಅಬ್ರಹಾಮನ ಕಾಲದಲ್ಲಿ ಬಂದಿದ್ದ ಬರಗಾಲವು ಮತ್ತೊಮ್ಮೆ ಕಾನಾನ್ ನಾಡಿಗೆ ಬಂದಿತು.
ಇಸಾಕನು ಫಿಲಿಷ್ಟಿಯರ ಅರಸ ಅಬೀಮೆಲೆಕನನ್ನು ಕಾಣಲು ಗೆರಾರಿಗೆ ಹೋದನು. 2ಅಲ್ಲಿ ಸರ್ವೇಶ್ವರಸ್ವಾಮಿ
ಇಸಾಕನಿಗೆ ದರ್ಶನಕೊಟ್ಟು ಇಂತೆಂದರು: "ನೀನು ಈಜಿಪ್ಟಿಗೆ ಹೋಗಬೇಡ; 3ನಾನು ಹೇಳುವ ನಾಡಿನಲ್ಲಿ
ಇದ್ದು ಪ್ರವಾಸ ಮಾಡುತ್ತಿರು. ನಾನು ನಿನ್ನ ಸಂಗಡವಿದ್ದು ನೀನು ಏಳಿಗೆಯಾಗುವಂತೆ ಮಾಡುತ್ತೇನೆ: ಈ
ನಾಡೆಲ್ಲವನ್ನು ನಿನಗೂ ನಿನ್ನ ಸಂತತಿಗೂ ಕೊಡುತ್ತೇನೆ. 4ನಿನ್ನ ತಂದೆ ಅಬ್ರಹಾಮನು ನನ್ನ ಮಾತನ್ನು ಕೇಳಿ
ನಾನು ಹೇಳಿದಂತೆ ಮಾಡಿದನು; ನನ್ನ ಆಜ್ಞಾವಿಧಿಗಳನ್ನೂ ನೇಮನಿಯಮಗಳನ್ನೂ ಕೈಗೊಂಡು ನಡೆದನು.
ಆದುದರಿಂದ ನಾನು ಅವನಿಗೆ ಮಾಡಿದ ಪ್ರಮಾಣವನ್ನು ನೆರವೇರಿಸುತ್ತೇನೆ. 5ನಿನ್ನ ಸಂತತಿಯನ್ನು
ಆಕಾಶದಲ್ಲಿರುವ ನಕ್ಷತ್ರಗಳಂತೆ ಅಸಂಖ್ಯಾತವಾಗಿಸುತ್ತೇನೆ; ಅವರಿಗೆ ಈ ನಾಡೆಲ್ಲವನ್ನು ಕೊಡುತ್ತೇನೆ. ಜಗದ
ಜನಾಂಗಗಳಿಗೆಲ್ಲ ನಿನ್ನ ಸಂತತಿಯ ಮುಖಾಂತರ ಆಶೀರ್ವಾದ ದೊರಕುವುದು."

6 ಅಂತೆಯೇ ಇಸಾಕನು ಗೆರಾರಿನಲ್ಲಿ ವಾಸವಾಗಿದ್ದನು. 7ಅಲ್ಲಿಯ ಜನರು ಅವನ ಹೆಂಡತಿಯ
ವಿಷಯವಾಗಿ ವಿಚಾರಿಸಿದರು. "ಅವಳು ನನ್ನ ತಂಗಿ", ಎಂದು ಇಸಾಕನು ಹೇಳಿದನು. ರೆಬೆಕ್ಕಳು ಬಲು
ಚೆಲುವೆಯಾಗಿದ್ದರಿಂದ ಆಕೆಯ ನಿಮಿತ್ತ ತನ್ನನ್ನು ಕೊಂದಾರು ಎಂದು ಹೆದರಿ ಹಾಗೆ ಹೇಳಿದನು. 8ಅವನು,
ಆ ಸ್ಥಳದಲ್ಲಿ ಬಹಳ ದಿವಸ ತಂಗಿದ್ದನು. ಒಂದು ದಿನ ಫಿಲಿಷ್ಟಿಯ ಅರಸನಾದ ಅಬೀಮೆಲೆಕನು ಕಿಟಕಿಯಿಂದ
ನೋಡಿದಾಗ ಇಸಾಕನು ತನ್ನ ಹೆಂಡತಿ ರೆಬೆಕ್ಕಳ ಸಂಗಡ ಸರಸವಾಡುವುದನ್ನು ಕಂಡನು. 9ಕೂಡಲೆ ಅವನು
ಇಸಾಕನನ್ನು ಕರೆಯಿಸಿ, "ಖಂಡಿತವಾಗಿ ಈಕೆ ನಿನ್ನ ಹೆಂಡತಿ; ಮತ್ತೆ ಆಕೆ ನಿನ್ನ ತಂಗಿ ಎಂದು ಏಕೆ ಹೇಳಿದೆ?"
ಎಂದು ಕೇಳಿದನು. ಇಸಾಕನು, "ಈಕೆಯ ನಿಮಿತ್ತ ಜನರು ನನ್ನನ್ನು ಕೊಂದಾರೆಂದು ಹಾಗೆ ಹೇಳಿದೆ,"
ಎಂದನು. 10ಅದಕ್ಕೆ ಅಬೀಮೆಲೆಕನು, "ನೀನು ನಮಗೆ ಹೀಗೆ ಮಾಡಬಹುದೆ? ನಮ್ಮಲ್ಲಿ ಯಾರಾದರೊಬ್ಬನು
ನಿನ್ನ ಹೆಂಡತಿಯನ್ನು ಕೂಡಿರಬಹುದಿತ್ತಲ್ಲವೆ? ಆಗ ನಿನ್ನಿಂದ ನನಗೆ ದೋಷ ಪ್ರಾಪ್ತವಾಗುತ್ತಿತ್ತಲ್ಲವೆ?" ಎಂದು
ಹೇಳಿದನು. 11ಬಳಿಕ ತನ್ನ ಪ್ರಜೆಗಳಿಗೆ ಈ ಆಜ್ಞೆಯನ್ನು ಹೊರಡಿಸಿದನು: "ಈ ಮನುಷ್ಯನಿಗಾಗಲಿ ಇವನ
ಹೆಂಡತಿಗಾಗಲಿ ಕೇಡುಮಾಡುವವನಿಗೆ ಮರಣದಂಡನೆ ತಪ್ಪದು."

12 ಇಸಾಕನು ಆ ನಾಡಿನಲ್ಲಿ ವ್ಯವಸಾಯ ಮಾಡಿ ಅದೇ ವರ್ಷದಲ್ಲಿ ನೂರ್ಮಡಿ ಬೆಳೆ ಎತ್ತಿದನು.
ಸರ್ವೇಶ್ವರಸ್ವಾಮಿಯ ಆಶೀರ್ವಾದ ಅವನ ಮೇಲಿತ್ತು. 13ಅವನು ದಿನದಿಂದ ದಿನಕ್ಕೆ ಹೆಚ್ಚು ಆಸ್ತಿವಂತನಾಗಿ
ದೊಡ್ಡ ಧನವಂತನಾದನು. 14ಅವನಿಗೆ ದನಕುರಿಗಳೂ ಆಳುಕಾಳುಗಳೂ ಹೇರಳವಾಗಿದ್ದುದನ್ನು ನೋಡಿ
ಫಿಲಿಷ್ಟಿಯರು ಹೊಟ್ಟೆಕಿಚ್ಚುಪಟ್ಟರು. 15ಅವನ ತಂದೆ ಅಬ್ರಹಾಮನ ಕಾಲದಲ್ಲೇ ತೋಡಲಾಗಿದ್ದ ಬಾವಿಯನ್ನು
ಮಣ್ಣು ಹಾಕಿ ಮುಚ್ಚಿಬಿಟ್ಟರು.

16ಹೀಗಿರಲಾಗಿ ಅಬೀಮೆಲೆಕನು ಇಸಾಕನಿಗೆ, "ನೀನು ನಮಗಿಂತ ಅಧಿಕ ಬಲಿಷ್ಠನಾಗಿಬಿಟ್ಟೆ;
ಆದುದರಿಂದ ನಮ್ಮನ್ನು ಬಿಟ್ಟು ಹೊರಟು ಹೋಗಬೇಕು" ಎಂದು ಹೇಳಿದನು. 17ಅಂತೆಯೇ ಇಸಾಕನು
ಅಲ್ಲಿಂದ ಹೊರಟು ಗೆರಾರ್ ತಗ್ಗಿನ ಬಯಲಿನಲ್ಲಿ ಗುಡಾರ ಹಾಕಿಕೊಂಡು ವಾಸಮಾಡಿದನು.
18ಅಬ್ರಹಾಮನು ತೋಡಿಸಿದ್ದ ಬಾವಿಗಳನ್ನು ಅವನು ಸತ್ತಮೇಲೆ ಫಿಲಿಷ್ಟಿಯರು ಮುಚ್ಚಿಹಾಕಿದ್ದರಿಂದ
ಇಸಾಕನು ಅವುಗಳನ್ನು ಮರಳಿತೆಗೆಸಿ ತಂದೆ ಇಟ್ಟಿದ್ದ ಹೆಸರುಗಳನ್ನೇ ಇಟ್ಟನು.

19 ಇಸಾಕನ ಕೆಲಸಗಾರರು ಆ ತಗ್ಗಿನಲ್ಲಿ ಅಗೆಯುತ್ತಿದ್ದಾಗ ಅವರಿಗೆ ಸೆಲೆ ನೀರಿನ ಬಾವಿಯೊಂದು
ಸಿಕ್ಕಿತು. 20ಗೆರಾರಿನ ದನ ಕಾಯುವವರು ಬಂದು ಆ ನೀರು ತಮ್ಮದು ಎಂದು ಹೇಳಿ ಇಸಾಕನ
ದನಕಾಯುವವರ ಸಂಗಡ ಜಗಳವಾಡಿದರು. ಆದುದರಿಂದ ಇಸಾಕನು ಆ ಬಾವಿಗೆ "ಏಸೆಕ್" ಎಂದು
ಹೆಸರಿಟ್ಟರು.

21 ತರುವಾಯ ಅವನ ಜನರು ಬೇರೊಂದು ಬಾವಿಯನ್ನು ತೋಡಿದರು. ಆ ನಾಡಿಗರು
ಅದಕ್ಕಾಗಿಯೂ ಜಗಳವಾಡಿದ್ದರಿಂದ ಅದಕ್ಕೆ 'ಸಿಟ್ನಾ' ಎಂದು ಹೆಸರಿಟ್ಟನು. 22ಅವನು ಅಲ್ಲಿಂದ ಮುಂದಕ್ಕೆ
ತೆರಳಿ ಮತ್ತೊಂದು ಬಾವಿಯನ್ನು ಅಗೆಸಿದನು. ಅದರ ಬಗ್ಗೆ ಯಾರೂ ಜಗಳಕ್ಕೆ ಬರಲಿಲ್ಲ. ಈ ಕಾರಣ

ಅವನು, "ಸರ್ವೇಶ್ವರ ನಮಗೀಗ ಸ್ಥಳಾವಕಾಶ ಮಾಡಿಕೊಟ್ಟಿದ್ದಾರೆ; ನಾವು ಅಭಿವೃದ್ಧಿಯಾಗುತ್ತೇವೆ," ಎಂದು ಹೇಳಿ ಆ ಬಾವಿಗೆ 'ರೆಹೋಬೋತ್' ಎಂದು ಹೆಸರಿಟ್ಟನು.

23 ಇಸಾಕನು ಅಲ್ಲಿಂದ ಹೊರಟು ಬೇರ್ಷೆಬಕ್ಕೆ ಬಂದನು. 24ಆ ರಾತ್ರಿ ಸರ್ವೇಶ್ವರ ಅವನಿಗೆ ದರ್ಶನವಿತ್ತು.

"ನಿನ್ನ ತಂದೆ ಅಬ್ರಹಾಮನ ದೇವರು ನಾನೇ
ಅಂಜಬೇಡ, ನಿನ್ನ ಸಂಗಡ ನಾನಿರುವೆ.
ಆ ನನ್ನ ದಾಸ ಅಬ್ರಹಾಮನ ನಿಮಿತ್ತ
ನಿನ್ನ ಹರಸಿ ನಾ ಹೆಚ್ಚಿಸುವೆ ನಿನ್ನ
ಸಂತಾನವ" ಎಂದರು.

25 ಇಸಾಕನು ಒಂದು ಬಲಿಪೀಠವನ್ನು ಕಟ್ಟಿಸಿ ಸರ್ವೇಶ್ವರಸ್ವಾಮಿಯ ನಾಮಸ್ಮರಣೆ ಮಾಡಿ ಆರಾಧಿಸಿ, ಅಲ್ಲಿ ಗುಡಾರ ಹಾಕಿಸಿಕೊಂಡನು. ಅವನ ಕೆಲಸಗಾರರು ಅಲ್ಲಿಯೂ ಒಂದು ಬಾವಿಯನ್ನು ತೋಡಿದರು.

## ಇಸಾಕನಿಗೂ ಅಬೀಮೆಲೆಕನಿಗೂ ಆದ ಒಪ್ಪಂದ

26 ಇದಾದ ಬಳಿಕ ಅಬೀಮೆಲೆಕನು ತನ್ನ ಮಂತ್ರಿ ಅಹುಜ್ಜತನನ್ನೂ ಸೇನಾಪತಿ ಫೀಕೋಲನನ್ನೂ
ಕರೆದುಕೊಂಡು ಗೆರಾರಿನಿಂದ ಇಸಾಕನ ಬಳಿಗೆ ಬಂದನು. 27ಇಸಾಕನು, "ನೀವು ನನ್ನ ಮೇಲೆ ಹಗೆತನ
ತಾಳಿ ನಿಮ್ಮ ಬಳಿಯಿಂದ ಕಳುಹಿಸಿಬಿಟ್ಟಿರಲ್ಲವೆ? ಈಗ ನನ್ನ ಬಳಿಗೆ ಏಕೆ ಬಂದಿರಿ?" ಎಂದು ಕೇಳಿದನು.
28ಅದಕ್ಕೆ ಅವರು, "ಸರ್ವೇಶ್ವರ ನಿನ್ನ ಸಂಗಡ ಇದ್ದಾರೆಂಬುದು ನಮಗೆ ಚೆನ್ನಾಗಿ ಕಂಡುಬಂದಿದೆ. ನೀನೂ
ನಾವೂ ಒಬ್ಬರಿಗೊಬ್ಬರು ಪ್ರಮಾಣಪೂರ್ವಕವಾದ ಒಪ್ಪಂದ ಮಾಡಿಕೊಳ್ಳಬೇಕೆಂದು ತೀರ್ಮಾನಿಸಿದ್ದೇವೆ.
29ನಾವು ನಿನಗೆ ಯಾವ ಕೇಡನ್ನು ಮಾಡದೆ ಒಳ್ಳೆಯದನ್ನೇ ಮಾಡಿ ಸಮಾಧಾನದಿಂದ ಕಳುಹಿಸಿಕೊಟ್ಟಿಲ್ಲವೆ?
ಅದರಂತೆಯೆ ಸರ್ವೇಶ್ವರ ಸ್ವಾಮಿಯಿಂದ ಆಶೀರ್ವಾದ ಪಡೆದ ನೀನು ನಮಗೆ ಕೇಡುಮಾಡುವುದಿಲ್ಲವೆಂದು
ಪ್ರಮಾಣ ಮಾಡಬೇಕು," ಎಂದು ಹೇಳಿದರು. 30ಆಗ ಇಸಾಕನು ಅವರಿಗೆ ಔತಣವನ್ನು ಏರ್ಪಡಿಸಿದನು;
ಅವರೆಲ್ಲರು ತಿಂದು ಕುಡಿದರು. 31ಬೆಳಿಗ್ಗೆ ಎದ್ದು ಒಬ್ಬರಿಗೊಬ್ಬರು ಪ್ರಮಾಣ ಮಾಡಿಕೊಂಡರು. ಇಸಾಕನು
ಅವರನ್ನು ಬೀಳ್ಕೊಡಲು ಅವರು ಸಮಾಧಾನದಿಂದ ಹೊರಟುಹೋದರು.

32ಅದೇ ದಿನ ಇಸಾಕನ ಕೆಲಸಗಾರರು ತಾವು ತೋಡಿದ್ದ ಬಾವಿಯ ಸಮಾಚಾರದೊಂದಿಗೆ ಬಂದು,
"ನಮಗೆ ನೀರು ಸಿಕ್ಕಿತು," ಎಂದು ವರದಿ ಮಾಡಿದರು. 33ಇಸಾಕನು ಆ ಬಾವಿಗೆ, 'ಷೆಬಾ' ಎಂದು
ಹೆಸರಿಟ್ಟನು. ಈ ಕಾರಣ ಅಲ್ಲಿರುವ ಊರಿಗೆ 'ಬೇರ್ಷೆಬ' ಎಂದು ಹೆಸರಾಯಿತು. 34ಏಸಾವನು ನಲವತ್ತು
ವರ್ಷದವನಾದಾಗ ಹಿತ್ತಿಯನಾದ ಬೇರಿಯನ ಮಗಳು ಯೆಹುದೀತಳನ್ನು ಮತ್ತು ಹಿತ್ತಿಯನಾದ ಎಲೋನನ
ಮಗಳು ಬಾಸೆಮತಳನ್ನು ಮದುವೆ ಮಾಡಿಕೊಂಡನು. 35ಈ ಪತ್ನಿಗಳ ನಿಮಿತ್ತ ಇಸಾಕನು ಮತ್ತು ರೆಬೆಕ್ಕಳು
ದುಃಖಪಡಬೇಕಾಯಿತು.

## ಯಕೋಬನಿಗೆ ಇಸಾಕನ ಆಶೀರ್ವಾದ

**27** ಇಸಾಕನಿಗೆ ಮುಪ್ಪಿನಿಂದ ಕಣ್ಣು ಕಾಣಲಾರದಷ್ಟು ಮಬ್ಬಾಯಿತು. ಅವನು ತನ್ನ ಹಿರಿಯ ಮಗ
ಏಸಾವನನ್ನು ಕರೆದು, "ಮಗನೇ," ಎನ್ನಲು ಏಸಾವನು, "ಇಗೋ, ಇಲ್ಲೇ ಇದ್ದೇನೆ," ಎಂದನು.

2 ಇಸಾಕನು ಅವನಿಗೆ, "ನೋಡು, ನಾನು ಮುದುಕನಾಗಿಬಿಟ್ಟೆ. ಯಾವಾಗ ಸಾಯುತ್ತೇನೋ
ಗೊತ್ತಿಲ್ಲ; 3ಆದುದರಿಂದ ನಿನ್ನ ಆಯುಧಗಳನ್ನೂ ಬಿಲ್ಲುಬತ್ತಳಿಕೆಗಳನ್ನೂ ತೆಗೆದುಕೊಂಡು ಕಾಡಿಗೆ ಹೋಗು;
ಬೇಟೆಯಾಡಿ ಬೇಟೆಯ ಮಾಂಸವನ್ನು ತೆಗೆದುಕೊಂಡು ಬಾ; 4ಅದರಿಂದ ನನಗಿಷ್ಟವಾಗಿರುವ

ಸವಿಯೂಟವನ್ನೂ ಅಣಿಮಾಡಿ ಬಡಿಸು. ಸಾವು ಬರುವುದಕ್ಕೆ ಮುಂಚೆ ನಾನು ನಿನ್ನನ್ನು ಮನಸಾರೆ
ಆಶೀರ್ವದಿಸುತ್ತೇನೆ," ಎಂದು ಹೇಳಿದನು.

5 ಇಸಾಕನು ತನ್ನ ಮಗ ಏಸಾವನಿಗೆ ಹೇಳಿದ ಮಾತು ರೆಬೆಕ್ಕಳ ಕಿವಿಗೆ ಬಿದ್ದಿತು. ಏಸಾವನು
ಬೇಟೆಯಾಡಲು ಕಾಡಿಗೆ ಹೋಗಿದ್ದಾಗ, 6ಆಕೆ ತನ್ನ ಮಗ ಯಕೋಬನಿಗೆ, "ನಿನ್ನ ತಂದೆ ನಿನ್ನಣ್ಣ ಏಸಾವನ
ಸಂಗಡ ಮಾತನಾಡುತ್ತಾ, 7'ನೀನು ಹೋಗಿ ಬೇಟೆಯಾಡಿ ಬೇಟೆಯ ಮಾಂಸವನ್ನು ತೆಗೆದುಕೊಂಡು ಬಾ,
ಅದರಿಂದ ನನಗೆ ಸವಿ ಊಟವನ್ನು ಅಣಿಮಾಡಿ ಬಡಿಸು; ಸಾವು ಬರುವುದಕ್ಕೆ ಮುಂಚೆ ನಾನು ನಿನ್ನನ್ನು
ಸರ್ವೇಶ್ವರಸ್ವಾಮಿಯ ಸನ್ನಿಧಿಯಲ್ಲಿ ಮನಸಾರೆ ಆಶೀರ್ವದಿಸುತ್ತೇನೆ,' ಎಂದು ಹೇಳಿದ್ದನ್ನು ಕೇಳಿದ್ದೇನೆ.
8ಆದುದರಿಂದ ಮಗನೇ, ನೀನು ನನ್ನ ಮಾತಿಗೆ ಕಿವಿಗೊಟ್ಟು ನಾನು ಹೇಳುವಂತೆ ಮಾಡು: 9ಮೇಕೆ
ಮಂದೆಯ ಬಳಿಗೆ ಹೋಗಿ ಎರಡು ಒಳ್ಳೆಯ ಮೇಕೆಮರಿಗಳನ್ನು ಬೇಗನೆ ತೆಗೆದುಕೊಂಡು ಬಾ; ಅವುಗಳಿಂದ
ನಿನ್ನ ತಂದೆಗೆ ಇಷ್ಟವಾಗಿರುವ ಸವಿಯೂಟವನ್ನು ನಾನೇ ಅಣಿಮಾಡುತ್ತೇನೆ. 10ನೀನು ಅದನ್ನು ಅವರ ಬಳಿಗೆ
ತೆಗೆದುಕೊಂಡು ಹೋಗಿ ಬಡಿಸಬೇಕು; ಹಾಗೆ ಮಾಡಿದರೆ ಅವರು ಸಾಯುವುದಕ್ಕೆ ಮುಂಚೆ ನಿನ್ನನ್ನೇ
ಮನಸಾರೆ ಆಶೀರ್ವದಿಸುವರು," ಎಂದಳು.

11 ಅದಕ್ಕೆ ಯಕೋಬನು, "ನನ್ನ ಅಣ್ಣನ ಮೈತುಂಬ ರೋಮಗಳಿಗೆ. ನನ್ನ ಮೈ ಆದರೋ ನುಣ್ಣಗಿದೆ;
12ಒಂದು ವೇಳೆ ತಂದೆ ನನ್ನನ್ನು ಮುಟ್ಟಿನೋಡಿಯಾರು; ನಾನು ಅವರಿಗೆ ವಂಚಕನಾಗಿ ತೋರಿ ಬಂದರೆ
ಆಶೀರ್ವಾದಕ್ಕೆ ಬದಲಾಗಿ ಶಾಪ ಬರಮಾಡಿಕೊಳ್ಳುತ್ತೇನೆ," ಎಂದನು.

13 ಆಗ ಅವನ ತಾಯಿ, "ಮಗನೇ, ಅವರು ನಿನಗೆ ಶಾಪಕೊಟ್ಟರೆ ಆ ಶಾಪ ನನಗಿರಲಿ; ನೀನು
ನನ್ನ ಮಾತನ್ನು ಕೇಳಿ ಆ ಮರಿಗಳನ್ನು ತೆಗೆದುಕೊಂಡು ಬಾ," ಎಂದಳು. 14ಅವನು ಹೋಗಿ ಅವುಗಳನ್ನು
ತಂದು ತಾಯಿಗೆ ಕೊಟ್ಟನು. ರೆಬೆಕ್ಕಳು ಅವನ ತಂದೆಗೆ ಇಷ್ಟವಾದ ಸವಿ ಊಟವನ್ನು ಸಿದ್ಧಪಡಿಸಿದಳು. 15ತನ್ನ
ಹಿರಿಯ ಮಗ ಏಸಾವನ ಬಟ್ಟೆಗಳಲ್ಲಿ ಶ್ರೇಷ್ಠವಾದವು ಮನೆಯಲ್ಲಿ ಆಕೆಯ ವಶದಲ್ಲಿದ್ದವು. ಅವುಗಳನ್ನು
ತೆಗೆದು ಕಿರಿಯ ಮಗ ಯಕೋಬನಿಗೆ ತೊಡಿಸಿದಳು. 16ಮೇಕೆಮರಿಗಳ ಚರ್ಮವನ್ನು ಅವನ ಕೈಗಳಿಗೂ
ನುಣುಪಾದ ಕೊರಳಿಗೂ ಸುತ್ತಿದಳು. 17ತಾನು ಸಿದ್ಧ ಮಾಡಿದ್ದ ಸವಿಯೂಟವನ್ನು ಸುಟ್ಟಿದ್ದ ರೊಟ್ಟಿಯನ್ನೂ
ತನ್ನ ಮಗ ಯಕೋಬನ ಕೈಗೆ ಕೊಟ್ಟಳು.

18 ಯಕೋಬನು ತಂದೆಯ ಬಳಿಗೆ ಹೋಗಿ, "ಅಪ್ಪಾ" ಎಂದು ಕರೆದನು. ತಂದೆಯು, "ಏನು
ಮಗನೇ, ನೀನು ಯಾವ ಮಗನು?" ಎಂದು ಕೇಳಿದನು. 19ಯಕೋಬನು; "ನಾನೇ ನಿಮ್ಮ ಹಿರಿಯ ಮಗ
ಏಸಾವನು; ನಿಮ್ಮ ಅಪ್ಪಣೆಯಂತೆ ಮಾಡಿಕೊಂಡು ಬಂದಿದ್ದೇನೆ. ಎದ್ದು ಕುಳಿತುಕೊಂಡು ನಾನು ತಂದಿರುವ
ಬೇಟೆಮಾಂಸವನ್ನು ಊಟಮಾಡಿ ನನ್ನನ್ನು ಆಶೀರ್ವದಿಸಿ," ಎಂದು ಹೇಳಿದನು.

20 ಇಸಾಕನು, "ಏನು ಮಗನೇ, ಇಷ್ಟು ಬೇಗನೆ ಬೇಟೆ ಹೇಗೆ ಸಿಕ್ಕಿತು?" ಎಂದು ಕೇಳಿದನು.
ಯಕೋಬನು, "ನಿಮ್ಮ ದೇವರಾದ ಸರ್ವೇಶ್ವರ ಅದನ್ನು ನನ್ನೆದುರಿಗೆ ಬರಮಾಡಿದರು," ಎಂದನು.

21 ಆಗ ಇಸಾಕನು ಅವನಿಗೆ, "ಮಗನೇ, ಹತ್ತಿರಕ್ಕೆ ಬಾ; ನೀನು ನನ್ನ ಮಗನೋ ಅಲ್ಲವೋ, ಎಂದು
ಮುಟ್ಟಿ ತಿಳಿದುಕೊಳ್ಳಬೇಕು," ಎಂದನು. 22ಯಕೋಬನು ಹತ್ತಿರಕ್ಕೆ ಬಂದಾಗ ತಂದೆ ಇಸಾಕನು ಅವನನ್ನು
ಮುಟ್ಟಿ ನೋಡಿ, "ಸ್ವರವೇನೋ ಯಕೋಬನ ಸ್ವರ; ಆದರೆ ಕೈ ಏಸಾವನ ಕೈ", ಎಂದುಕೊಂಡನು.
23ಯಕೋಬನ ಕೈಗಳು ಅವನ ಅಣ್ಣನ ಕೈಗಳಂತೆ ರೋಮಮಯವಾಗಿ ಇದ್ದುದರಿಂದ ಇಸಾಕನು ಅವನ
ಗುರುತನ್ನು ತಿಳಿಯಲಾರದೆ ಅವನನ್ನು ಆಶೀರ್ವದಿಸಿದನು. 24ಆದರೂ ಮರಳಿ, "ನೀನು ನಿಶ್ಚಯವಾಗಿ ನನ್ನ
ಮಗ ಏಸಾವನೋ" ಎಂದು ಕೇಳಿದನು. ಯಕೋಬನು "ಹೌದು," ಎಂದು ಉತ್ತರ ಕೊಟ್ಟನು.

25 ಆಗ ಇಸಾಕನು, "ಊಟಮಾಡಲು ಆ ಬೇಟೆ ಮಾಂಸವನ್ನು ತಂದು ಬಡಿಸು. ಆಮೇಲೆ
ನಿನ್ನನ್ನು ಆಶೀರ್ವದಿಸುತ್ತೇನೆ," ಎಂದನು. ಅಂತೆಯೇ ಯಕೋಬನು ಹತ್ತಿರಕ್ಕೆ ತಂದು ಬಡಿಸಿದಾಗ
ಇಸಾಕನು ಊಟಮಾಡಿದನು; ಕೊಟ್ಟ ದ್ರಾಕ್ಷಾರಸವನ್ನು ಕುಡಿದನು. 26ಬಳಿಕ ಅವನ ತಂದೆ ಇಸಾಕನು,
"ಮಗನೇ, ಹತ್ತಿರ ಬಂದು ನನಗೆ ಮುತ್ತು ಕೊಡು," ಎಂದನು. ಅವನು ಹತ್ತಿರ ಬಂದು ಮುದ್ದಿಟ್ಟಾಗ
27ಇಸಾಕನು ಅವನ ಉಡುಗೆತೊಡಿಗೆಗಳ ಸುವಾಸನೆಯನ್ನು ಮೂಸಿ ನೋಡಿ, ಅವನಿಗೆ ಹೀಗೆಂದು
ಆಶೀರ್ವಾದ ಮಾಡಿದನು –

"ನನ್ನ ಸುಕುಮಾರನಿಂದೇಳುವ ಸುವಾಸನೆ
ಸರ್ವೇಶ್ವರನಾಶೀರ್ವದಿಸಿದ ಮೊಗೆನೆಲದ
ಸುವಾಸನೆಯಂತಿದೆ.
[28]ದಯಪಾಲಿಸಲಿ ದೇವ ನಿನಗೆ ಆಗಸದ
ಮಂಜನು, ಸಾರವುಳ್ಳ ಹೊಲವನು
ಅನುಗ್ರಹಿಸಲಿ ಹೇರಳ ದವಸ
ಧಾನ್ಯವನು, ದ್ರಾಕ್ಷಾರಸವನು.
[29]ಸೇವೆಗೈಯಲಿ ನಿನಗೆ ಹೊರನಾಡುಗಳು
ಅಡ್ಡಬೀಳಲಿ ನಿನಗೆ ಹೊರಜನಾಂಗಗಳು.
ಒಡೆಯನಾಗು ಸೋದರರಿಗೆ
ಅಡ್ಡಬೀಳಲಿ ತಾಯಕುಡಿ ನಿನಗೆ
ಶಾಪವಿರಲಿ ನಿನ್ನನ್ನು ಶಪಿಸುವವರಿಗೆ
ಆಶೀರ್ವಾದವು ನಿನ್ನನ್ನು
ಹರಸುವವರಿಗೆ!"

**ಇಸಾಕನಲ್ಲಿ ಏಸಾವನ ಮನವಿ**

30 ಯಕೋಬನು ತಂದೆ ಇಸಾಕನಿಂದ ಆಶೀರ್ವಾದ ಪಡೆದು ಹೊರಟು ಹೋದನು. ಕೂಡಲೆ
ಅವನ ಅಣ್ಣ ಏಸಾವನು ಬೇಟೆಯಿಂದ ಹಿಂದಿರುಗಿ ಬಂದನು. [31]ಅವನು ಕೂಡ ಸವಿ ಊಟವನ್ನು
ಅಣಿಮಾಡಿ ತಂದೆಯ ಬಳಿಗೆ ತಂದು, "ಅಪ್ಪಾ, ಏಳಿ; ನಿನ್ನ ಮಗನಾದ ನಾನು ತಂದಿರುವ ಬೇಟೆಯ
ಮಾಂಸವನ್ನು ಊಟಮಾಡಿ ನನ್ನನ್ನು ಆಶೀರ್ವದಿಸಿ," ಎಂದು ಕೇಳಿಕೊಂಡನು.

32 "ನೀನು ಯಾರು?" ಎಂದು ತಂದೆ ಇಸಾಕನು ವಿಚಾರಿಸಲು, "ನಾನೇ ನಿಮ್ಮ ಜ್ಯೇಷ್ಠಪುತ್ರ
ಏಸಾವನು" ಎಂದು ಉತ್ತರ ಕೊಟ್ಟನು. [33]ಆಗ ಇಸಾಕನು ಗಡಗಡನೆ ನಡುಗುತ್ತಾ, "ಹಾಗಾದರೆ ಬೇಟೆಯಾಡಿ
ನನಗೆ ಊಟ ತಂದು ಕೊಟ್ಟವನಾರು? ನೀನು ಬರುವುದಕ್ಕೆ ಮುಂಚೆ ಅವನು ತಂದುದನ್ನು ಊಟಮಾಡಿ
ಅವನನ್ನೇ ಅಂತಿಮವಾಗಿ ಆಶೀರ್ವದಿಸಿಬಿಟ್ಟೆನು; ಅವನಿಗೆ ಮಾಡಿದ ಆಶೀರ್ವಾದ ಇನ್ನು ತಪ್ಪಲಾರದು,"
ಎಂದನು.

34 ತಂದೆಯ ಈ ಮಾತುಗಳನ್ನು ಕೇಳಿ ಏಸಾವನು ದುಃಖಕ್ರಾಂತನಾದನು. ಬಹಳವಾಗಿ ಅತ್ತನು.
"ಅಪ್ಪಾ, ತಂದೆಯೇ ನನ್ನನ್ನು, ನನ್ನನ್ನು ಕೂಡ ಆಶೀರ್ವದಿಸು," ಎಂದು ಬೇಡಿಕೊಂಡನು.

35 ಇಸಾಕನು, "ನಿನ್ನ ತಮ್ಮ ಮೋಸದಿಂದ ಬಂದು ನಿನಗಾಗಬೇಕಿದ್ದ ಆಶೀರ್ವಾದವನ್ನು
ಪಡೆದುಕೊಂಡು ಹೋದನು," ಎಂದನು.

36 ಅದಕ್ಕೆ ಏಸಾವನು, 'ಯಕೋಬ' ಎಂಬ ಹೆಸರು ಅವನಿಗೆ ತಕ್ಕುದಾಗಿದೆ; ಎರಡು ಸಾರಿ ಅವನು
ನನ್ನನ್ನು ವಂಚಿಸಿದ್ದಾನೆ. ಹಿಂದೆ ನನ್ನ ಜ್ಯೇಷ್ಠತನದ ಹಕ್ಕನ್ನು ಅಪಹರಿಸಿದ; ಈಗ ನನಗೆ ಬರಬೇಕಾಗಿದ್ದ
ಆಶೀರ್ವಾದವನ್ನು ಕಿತ್ತುಕೊಂಡಿದ್ದಾನೆ," ಎಂದು ಹೇಳಿ ತನ್ನ ತಂದೆಯನ್ನು ನೋಡಿ, "ನನಗೆಂದೇ ನಿಮ್ಮಲ್ಲಿ
ಯಾವ ಆಶೀರ್ವಾದವೂ ಉಳಿದಿಲ್ಲವೆ?" ಎಂದು ಕೇಳಿದನು.

37 ಆಗ ಇಸಾಕನು, "ಅವನನ್ನು ನಿನಗೆ ಒಡೆಯನನ್ನಾಗಿ ನೇಮಿಸಿದ್ದೇನೆ; ಸಹೋದರರನ್ನೇ ಅವನಿಗೆ
ಕೆಲಸಗಾರರನ್ನಾಗಿ ಕೊಟ್ಟಿದ್ದೇನೆ; ದವಸ ಧಾನ್ಯಗಳನ್ನೂ ದ್ರಾಕ್ಷಾರಸವನ್ನೂ ಅವನಿಗೆ ಬಿಟ್ಟಿದ್ದೇನೆ. ಹೀಗಿರಲು
ಮಗನೇ, ನಾನು ನಿನಗೇನು ತಾನೆ ಮಾಡಲು ಸಾಧ್ಯ?" ಎಂದನು.

38 "ಅಪ್ಪಾ, ನಿಮ್ಮಲ್ಲಿ ಒಂದೇ ಆಶೀರ್ವಾದ ಮಾತ್ರ ಇತ್ತೋ? ನನ್ನನ್ನು, ನನ್ನನ್ನು ಕೂಡ
ಆಶೀರ್ವಾದ ಮಾಡಪ್ಪಾ," ಎಂದು ಗೋಳಾಡುತ್ತಾ ಅತ್ತನು. [39]ಆಗ ಇಸಾಕನು –

"ಸಾರವತ್ತಾದ ಭೂಮಿಗೆ ದೂರ
ಆಗಸದಿಂದೇಳುವ ಮಂಜಿಗೆ ದೂರ

40 ಬಾಳ ನಡೆಸುವ ಕತ್ತಿಕಠಾರಿಯಿಂದಲೇ
ಕೂಲಿಯಾಳಾಗುವೆ ಸೋದರನಿಗೆ
ಮುರಿಯುವೆ ಅವ ಹೊರಿಸಿದ ನೊಗವ
ಸ್ವಾತಂತ್ರ್ಯಕ್ಕಾಗಿ ನೀ ಬಂಡಾಯ
ಹೂಡಿದಾಗ."

41 ತಂದೆಯಿಂದ ಯಕೋಬನು ಪಡೆದುಕೊಂಡ ಆಶೀರ್ವಾದದ ನಿಮಿತ್ತ ಏಸಾವನು ಯಕೋಬನ
ಮೇಲೆ ಹಗೆಗೊಂಡನು. "ತಂದೆಯ ಮರಣಕ್ಕಾಗಿ ದುಃಖಿಸುವ ಕಾಲ ಸಮೀಪಿಸಿತು. ಆ ಬಳಿಕ ನನ್ನ ತಮ್ಮ
ಯಕೋಬನನ್ನು ಕೊಂದುಹಾಕುತ್ತೇನೆ," ಎಂದು ತನ್ನೊಳಗೇ ನೆನೆಸಿಕೊಂಡನು.

42 ತನ್ನ ಹಿರಿಯ ಮಗ ಏಸಾವನ ಅನಿಸಿಕೆಯು ರೆಬೆಕ್ಕಳಿಗೆ ತಿಳಿದು ಬಂದಾಗ ಆಕೆ ತನ್ನ ಕಿರಿಯ
ಮಗ ಯಕೋಬನನ್ನು ಕರೆದು ಹೀಗೆಂದಳು: "ನೋಡು, ನಿನ್ನ ಅಣ್ಣ ಏಸಾವನು ನಿನ್ನನ್ನು ಕೊಂದು
ಸೇಡುತೀರಿಸಿಕೊಳ್ಳಬೇಕೆಂದಿದ್ದಾನೆ. 43ಆದುದರಿಂದ ಮಗನೇ, ನನ್ನ ಮಾತನ್ನು ಕೇಳು: ನೀನು ಎದ್ದು
ಖಾರಾನ್ ಊರಿನಲ್ಲಿರುವ ನನ್ನ ಅಣ್ಣ ಲಾಬಾನನ ಬಳಿಗೆ ಓಡಿಹೋಗು. 44ಕೆಲವು ಕಾಲ, ಅಂದರೆ ನಿನ್ನಣ್ಣನ
ಕೋಪ ಶಮನ ಆಗುವವರೆಗೂ ಅವನ ಬಳಿಯಲ್ಲೇ ಇರು. 45ನಿನ್ನ ಅಣ್ಣನು ನೀನು ಮಾಡಿರುವುದನ್ನು
ಮರೆತು ತನ್ನ ಕೋಪವನ್ನು ಬಿಟ್ಟಾಗ ನಾನು ನಿನ್ನನ್ನು ಅಲ್ಲಿಂದ ಕರೆಸಿಕೊಳ್ಳುತ್ತೇನೆ. ನಾನೇತಕ್ಕೆ ನಿಮ್ಮಿಬ್ಬರನ್ನೂ
ಒಂದೇ ದಿನದಲ್ಲಿ ಕಳೆದುಕೊಳ್ಳಬೇಕು?" ಎಂದು ಹೇಳಿದಳು.

### ಲಾಬಾನನ ಬಳಿಗೆ ಯಕೋಬನು

46 ಅನಂತರ ರೆಬೆಕ್ಕಳು ಇಸಾಕನಿಗೆ, "ಹಿತ್ತಿಯರಾದ ಈ ಹೆಣ್ಣುಗಳ ದೆಸೆಯಿಂದ ನನ್ನ ಬಾಳು
ಬೇಸರವಾಗಿದೆ. ಯಕೋಬನು ಕೂಡ ಈ ನಾಡಿನ ಹೆಣ್ಣನ್ನು ಆರಿಸಿಕೊಂಡು ಇಂಥ ಹಿತ್ತಿಯ ಹುಡುಗಿಯನ್ನೇ
ಮದುವೆಮಾಡಿಕೊಂಡರೆ ನಾನು ಇನ್ನು ಬದುಕಿ ಪ್ರಯೋಜನ ಇಲ್ಲ," ಎಂದು ಹೇಳಿದಳು.

**28** ಆಗ ಇಸಾಕನು ಯಕೋಬನನ್ನು ಕರೆದು, "ನೀನು ಕಾನಾನ್ಯರ ಹೆಣ್ಣನ್ನು ಮದುವೆಮಾಡಿಕೊಳ್ಳಬೇಡ;
2ಮೆಸಪೊಟೇಮಿಯಾ ನಾಡಿನಲ್ಲಿರುವ ನಿನ್ನ ತಾತ ಬೆತೂವೇಲನ ಮನೆಗೆ ಹೊರಟುಹೋಗು. ಅಲ್ಲಿ ನಿನ್ನ
ಸೋದರಮಾವ ಆದ ಲಾಬಾನನ ಹೆಣ್ಣು ಮಕ್ಕಳಲ್ಲಿ ಒಬ್ಬಳನ್ನು ಮದುವೆ ಮಾಡಿಕೊ," ಎಂದು ಅಪ್ಪಣೆ
ಮಾಡಿದನು. 3"ಸರ್ವಶಕ್ತ ದೇವರು ನಿನ್ನನ್ನು ಆಶೀರ್ವದಿಸಲಿ; ನಿನಗೆ ಬಹಳ ಸಂತತಿಯನ್ನು ಕೊಡಲಿ;
ನಿನ್ನಿಂದ ಅನೇಕ ಜನಾಂಗಗಳು ಹುಟ್ಟುವಂತೆ ಅನುಗ್ರಹಿಸಲಿ; 4ದೇವರು ಅಬ್ರಹಾಮನಿಗೆ ಕೊಟ್ಟ
ಆಶೀರ್ವಾದವನ್ನು ನಿನಗೂ ನಿನ್ನ ಸಂತತಿಗೂ ಕೊಡಲಿ; ನೀನು ಪ್ರವಾಸಿಯಾಗಿರುವ ಈ ನಾಡನ್ನು, ಅಂದರೆ
ಅಬ್ರಹಾಮನಿಗೆ ದೇವರು ವಾಗ್ದಾನಮಾಡಿದ್ದ ಈ ನಾಡನ್ನು, ನೀನು ಸ್ವಂತ ಸೊತ್ತಾಗಿಸಿಕೊಳ್ಳುವಂತಾಗಲಿ!"
ಎಂದು ಹರಸಿ ಕಳುಹಿಸಿ ಬಿಟ್ಟನು. 5ಯಕೋಬನು ಮೆಸಪೊಟೇಮಿಯಗೆ ಹೊರಟು, ಅರಾಮ್ಯನಾದ
ಬೆತೂವೇಲನ ಮಗನೂ ಮತ್ತು ಯಕೋಬ ಹಾಗು ಏಸಾವನಿಗೆ ತಾಯಿಯಾದ ರೆಬೆಕ್ಕಳಿಗೆ ಅಣ್ಣನೂ ಆಗಿದ್ದ
ಲಾಬಾನನ ಬಳಿಗೆ ಹೋದನು.

### ಏಸಾವನಿಗೆ ಮತ್ತೊಬ್ಬ ಹೆಂಡತಿ

6 ಇಸಾಕನು ಯಕೋಬನನ್ನು ಹರಸಿ ಮೆಸಪೊಟೇಮಿಯಾದಲ್ಲಿ ಹೆಣ್ಣನ್ನು ತೆಗೆದುಕೊಳ್ಳುವುದಕ್ಕಾಗಿ
ಕಳುಹಿಸಿದ್ದು, ಹರಸುವಾಗ ಕಾನಾನ್ಯರ ಹೆಣ್ಣನ್ನು ತೆಗೆದುಕೊಳ್ಳಬಾರದೆಂದು ಅಪ್ಪಣೆ ಮಾಡಿದ್ದು, 7ಹಾಗೂ
ಯಕೋಬನು ತನ್ನ ತಂದೆ ತಾಯಿಗಳು ಹೇಳಿದಂತೆ ಮೆಸಪೊಟೇಮಿಯಗೆ ಹೋದದ್ದು – ಇದೆಲ್ಲವನ್ನು
ಇತ್ತ ಏಸಾವನು ತಿಳಿದುಕೊಂಡನು. 8ಕಾನಾನ್ಯರ ಹೆಣ್ಣುಗಳು ತನ್ನ ತಂದೆ ಇಸಾಕನಿಗೆ ಹಿಡಿಸಲಿಲ್ಲ
ಎಂಬುದನ್ನು ಅರಿತುಕೊಂಡ ಅವನು 9ತನಗೆ ಈಗಾಗಲೇ ಇದ್ದ ಹೆಂಡತಿಯರ ಜೊತೆಗೆ ಅಬ್ರಹಾಮನ

ಮಗನಾದ ಇಷ್ಮಾಯೇಲನ ಬಳಿಗೆ ಹೋಗಿ, ಅವನ ಮಗಳೂ ನೆಬಾಯೋತನ ತಂಗಿಯೂ ಆಗಿದ್ದ
ಮಹಲತ್ ಎಂಬಾಕೆಯನ್ನು ಮದುವೆಮಾಡಿಕೊಂಡನು.

## ಯಕೋಬನು ಬೇತೇಲಿನಲ್ಲಿ ಕಂಡ ಕನಸು

10 ಯಕೋಬನು ಖಾರಾನಿಗೆ ಹೋಗಬೇಕೆಂದು ಬೇರ್ಷೆಬದಿಂದ ಹೊರಟನು. [11]ಪ್ರಯಾಣ
ಮಾಡುತ್ತಾ ಅವನು ಒಂದು ಸ್ಥಳಕ್ಕೆ ಬಂದು ಸೇರಿದನು. ಹೊತ್ತು ಮುಳುಗಿದ್ದ ಕಾರಣ ಆ ರಾತ್ರಿ ಅಲ್ಲಿಯೇ
ಇಳಿದುಕೊಂಡನು. ಅಲ್ಲಿದ್ದ ಕಲ್ಲುಗಳಲ್ಲಿ ಒಂದು ಕಲ್ಲನ್ನು ತಲೆದಿಂಬಾಗಿ ಇಟ್ಟುಕೊಂಡು ಆ ಸ್ಥಳದಲ್ಲೇ
ಮಲಗಿಕೊಂಡನು. [12]ಆ ರಾತ್ರಿ ಅವನಿಗೆ ಒಂದು ಕನಸು ಬಿತ್ತು. ಆ ಕನಸಿನಲ್ಲಿ ಒಂದು ನಿಚ್ಚಣಿಗೆ ನೆಲದ
ಮೇಲೆ ನಿಂತಿತ್ತು; ಅದರ ತುದಿ ಆಕಾಶವನ್ನು ಮುಟ್ಟಿತ್ತು. ಅದರ ಮೇಲೆ ದೇವದೂತರು ಹತ್ತುತ್ತಾ ಇಳಿಯುತ್ತಾ
ಇದ್ದರು. [13]ಇದಲ್ಲದೆ, ಸರ್ವೇಶ್ವರಸ್ವಾಮಿ ಅವನ ಬಳಿಯಲ್ಲೇ ನಿಂತು, "ನಿನ್ನ ತಂದೆಯೂ ಅಬ್ರಹಾಮನ
ದೇವರೂ ಇಸಾಕನ ದೇವರೂ ಆಗಿರುವ ಸರ್ವೇಶ್ವರ ನಾನೇ. ನೀನು ಮಲಗಿಕೊಂಡಿರುವ ಈ ನಾಡನ್ನು
ನಿನಗೂ ನಿನ್ನ ಸಂತತಿಗೂ ಕೊಡುತ್ತೇನೆ. [14]ನಿನ್ನ ಸಂತತಿ ಭೂಮಿಯ ಧೂಳಿನಂತೆ ಅಸಂಖ್ಯ ಆಗುವುದು;
ನೀನು ಪೂರ್ವಪಶ್ಚಿಮ – ದಕ್ಷಿಣೋತ್ತರ ದಿಕ್ಕುಗಳಿಗೆ ಹರಡಿಕೊಳ್ಳುವೆ. ನಿನ್ನ ಮುಖಾಂತರ ಹಾಗೂ ನಿನ್ನ
ಸಂತತಿಯ ಮುಖಾಂತರ ಜಗದ ಎಲ್ಲ ರಾಷ್ಟ್ರಗಳೂ ಆಶೀರ್ವಾದ ಪಡೆಯುವುವು. [15]ಗಮನಿಸು, ನಾನು
ನಿನ್ನೊಂದಿಗೆ ಇರುತ್ತೇನೆ. ನೀನು ಎಲ್ಲಿಗೆ ಹೋದರೂ ನಿನ್ನನ್ನು ಕಾಪಾಡಿ ಈ ನಾಡಿಗೆ ಮರಳಿ
ಬರಮಾಡುತ್ತೇನೆ. ನಾನು ನಿನಗೆ ಹೇಳಿದ್ದನ್ನೆಲ್ಲ ನೆರವೇರಿಸದೆ ಬಿಡುವುದಿಲ್ಲ," ಎಂದರು.

16 ಯಕೋಬನು ನಿದ್ರೆಯಿಂದ ಎಚ್ಚೆತ್ತನು. "ನಿಶ್ಚಯವಾಗಿ ಸರ್ವೇಶ್ವರ ಈ ಸ್ಥಳದಲ್ಲಿದ್ದಾರೆ; ಇದು
ನನಗೆ ತಿಳಿಯದೆ ಹೋಯಿತು!" ಎಂದುಕೊಂಡನು; [17]ಅಲ್ಲದೆ ಭಯಭಕ್ತಿಯಿಂದ, "ಇದು
ಮಹಾಗಂಭೀರವಾದ ಸ್ಥಳ; ದೇವರ ಸ್ಥಾನವೇ ಹೊರತು ಬೇರೆಯಲ್ಲ, ಇದು ಪರಲೋಕದ ಬಾಗಿಲು!"
ಎಂದನು.

18 ಯಕೋಬನು ಬೆಳಗಿನ ಜಾವದಲ್ಲಿ ಎದ್ದು ತಾನು ತಲೆದಿಂಬಾಗಿ ಇಟ್ಟುಕೊಂಡಿದ್ದ ಆ ಕಲ್ಲನ್ನು
ಸ್ಮಾರಕಸ್ತಂಭವಾಗಿ ನೆಟ್ಟನು. ಅದರ ಮೇಲೆ ಎಣ್ಣೆ ಹೊಯ್ದು ಅಭ್ಯಂಗಿಸಿದನು. [19]'ಲೂಜ್' ಎಂದು ಹೆಸರು
ಪಡೆದಿದ್ದ ಆ ಊರಿಗೆ 'ಬೇತೇಲ್' ಎಂದು ನಾಮಕರಣ ಮಾಡಿದನು. [20]ಅದೂ ಅಲ್ಲದೆ ಅವನು ಹೀಗೆಂದು
ಹರಕೆ ಮಾಡಿಕೊಂಡನು: "ದೇವರು ನನ್ನ ಸಂಗಡವಿದ್ದು ನಾನು ಕೈಗೊಂಡ ಪ್ರಯಾಣದಲ್ಲಿ ನನ್ನನ್ನು
ಕಾಪಾಡಿ, ಹೊಟ್ಟೆಗೆ ಊಟವನ್ನೂ ಮೈಗೆ ಬಟ್ಟೆಯನ್ನೂ ಕೊಟ್ಟು, [21]ನನ್ನ ತಂದೆಯ ಮನೆಗೆ ಸುರಕ್ಷಿತವಾಗಿ
ಮರಳಿ ಬರಮಾಡಿದರೆ ಸರ್ವೇಶ್ವರಸ್ವಾಮಿಯೇ ನನಗೆ ದೇವರು ಆಗುವರು. [22]ನಾನು ಸ್ಮಾರಕಸ್ತಂಭವಾಗಿ
ನೆಟ್ಟಿರುವ ಈ ಕಲ್ಲು ದೇವರ ಮನೆಯಾಗುವುದು; ಅದು ಮಾತ್ರವಲ್ಲ, ನೀವು ನನಗೆ ಕೊಡುವ ಎಲ್ಲ
ಆಸ್ತಿಪಾಸ್ತಿಯಲ್ಲಿ ಹತ್ತರಲ್ಲಿ ಒಂದು ಪಾಲನ್ನು ನಿಮಗೆ ಸಮರ್ಪಿಸುತ್ತೇನೆಂದು ಮಾತುಕೊಡುತ್ತೇನೆ."

## ಲಾಬಾನನ ಮನೆಯಲ್ಲಿ ಯಕೋಬನು

**29** ಬಳಿಕ ಯಕೋಬನು ಪ್ರಯಾಣವನ್ನು ಮುಂದುವರಿಸುತ್ತಾ ಮೂಡಣದವರ ನಾಡಿಗೆ ಬಂದನು.
[2]ಕೂಡಲೆ ಅವನಿಗೆ ಆ ಅಡವಿಯಲ್ಲಿ ಬಾವಿಯೊಂದು ಕಾಣಿಸಿತು. ಅದರ ಬಳಿ ಮೂರು ಕುರಿಹಿಂಡು
ಮಲಗಿದ್ದವು. ಕುರಿಗಳನ್ನು ನೀರು ಕುಡಿಸುವುದಕ್ಕಾಗಿ ಆ ಬಾವಿಗೆ ಹೊಡೆದುಕೊಂಡು ಬರುವುದು ವಾಡಿಕೆ.
ಬಾವಿಯ ಮೇಲೆ ಮುಚ್ಚಿದ್ದ ಕಲ್ಲು ದೊಡ್ಡದಾಗಿತ್ತು. [3]ಹಿಂಡುಗಳೆಲ್ಲ ಅಲ್ಲಿ ಕೂಡಿದ್ದಾಗ ಕಾಯುವವರು
ಬಾವಿಯ ಮೇಲೆ ಮುಚ್ಚಿದ್ದ ಕಲ್ಲನ್ನು ಸರಿಸಿ ಕುರಿಗಳಿಗೆ ನೀರುಕುಡಿಸಿ ಮತ್ತೆ ಕಲ್ಲನ್ನು ಬಾವಿಯ ಮೇಲೆ
ಮುಚ್ಚುತ್ತಿದ್ದರು.

4 ಯಕೋಬನು ಅವರಿಗೆ, "ಏನಪ್ಪ, ನೀವು ಯಾವ ಊರಿನವರು?" ಎಂದು ವಿಚಾರಿಸಿದನು.
ಅವರು, "ನಾವು ಖಾರಾನ್ ಊರಿನವರು," ಎಂದರು. [5]"ನಾಹೋರನ ಮಗ–ಲಾಬಾನರನ್ನು ಬಲ್ಲಿರಾ?"
ಎಂದು ಕೇಳಿದ್ದಕ್ಕೆ "ಬಲ್ಲೆವು" ಎಂದು ಉತ್ತರ ಕೊಟ್ಟರು. [6]"ಅವರು ಆರೋಗ್ಯವೇ?" ಎಂದು ಕೇಳಲು

ಅವರು, “ಹೌದು ಆರೋಗ್ಯ; ಅಗೋ, ಅವರ ಮಗಳು ರಾಖೇಲಳು ಕುರಿಗಳ ಸಂಗಡ ಬರುತ್ತಿದ್ದಾಳೆ,”
ಎಂದರು.
7 ಯಕೋಬನು, “ಇನ್ನೂ ಬಹಳ ಹೊತ್ತು ಇದೆ; ಕುರಿಗಳನ್ನು ಒಟ್ಟುಗೂಡಿಸುವ ಸಮಯ ಆಗಿಲ್ಲ;
ನೀರು ಕುಡಿಸಿ ಅವುಗಳನ್ನು ಮೇಯಿಸಬಾರದೇಕೆ?” ಎಂದನು. 8ಅವರು, “ಇಲ್ಲ, ಕುರಿಗಾಹಿಗಳೆಲ್ಲ
ಒಂದುಗೂಡಿ ಬಾವಿಯ ಮೇಲೆ ಮುಚ್ಚಿರುವ ಕಲ್ಲನ್ನು ತೆಗೆಯುವ ತನಕ ಕುಡಿಸಕೂಡದು, ಅನಂತರ
ಕುರಿಗಳಿಗೆ ನೀರು ಕುಡಿಸುತ್ತೇವೆ,” ಎಂದರು.
9ಯಕೋಬನು ಅವರೊಂದಿಗೆ ಮಾತಾಡುತ್ತಾ ಇರುವಾಗಲೆ ಕುರಿಗಾಹಿ ರಾಖೇಲಳು ತನ್ನ ತಂದೆಯ
ಕುರಿಗಳನ್ನು ಹೊಡೆದುಕೊಂಡು ಅಲ್ಲಿಗೆ ಬಂದಳು. 10ತನ್ನ ಸೋದರಮಾವ ಲಾಬಾನನ ಮಗಳಾದ ಆ
ರಾಖೇಲಳನ್ನೂ ಅವನ ಕುರಿಗಳನ್ನೂ ಕಂಡ ಕೂಡಲೆ ಯಕೋಬನು ಬಾವಿಯ ಹತ್ತಿರಕ್ಕೆ ಹೋಗಿ ಅದರ
ಮೇಲಿದ್ದ ಕಲ್ಲನ್ನು ಸರಿಸಿ ಸೋದರಮಾವನ ಆ ಕುರಿಗಳಿಗೆ ನೀರು ಕುಡಿಸಿದನು. 11ಅನಂತರ ರಾಖೇಲಳಿಗೆ
ಮುದ್ದಿಟ್ಟನು; ಸಂತೋಷ ಉಕ್ಕಿಬಂದು ಗಟ್ಟಿಯಾಗಿ ಅತ್ತನು. 12ತಾನು ಆಕೆಯ ತಂದೆಗೆ ಸೋದರಳಿಯ,
ರೆಬೆಕ್ಕಳ ಮಗ ಎಂದು ತಿಳಿಸಿದನು. ರಾಖೇಲಳು ಕೂಡಲೆ ಓಡಿ ಹೋಗಿ ತನ್ನ ತಂದೆಗೆ ಸಮಾಚಾರ
ಮುಟ್ಟಿಸಿದಳು. 13ಲಾಬಾನನು ತನ್ನ ಸೋದರಳಿಯ ಬಂದ ಸುದ್ದಿಯನ್ನು ಕೇಳಿ ಅವನನ್ನು ಎದುರುಗೊಳ್ಳಲು
ಓಡಿ ಬಂದನು. ಯಕೋಬನನ್ನು ಅಪ್ಪಿಕೊಂಡು ಮುದ್ದಿಟ್ಟು, ಮನೆಗೆ ಕರೆದುಕೊಂಡು ಹೋದನು. ನಡೆದ
ಸಂಗತಿಗಳನ್ನೆಲ್ಲ ಯಕೋಬನು ಲಾಬಾನನಿಗೆ ತಿಳಿಸಿದನು. 14ಲಾಬಾನನು, “ನಿಜವಾಗಿಯೂ ನೀನು ನನ್ನ
ರಕ್ತ ಸಂಬಂಧಿ,” ಎಂದನು. ಅವನೊಂದಿಗೆ ಯಕೋಬನು ಒಂದು ತಿಂಗಳವರೆಗೂ ವಾಸಮಾಡಿದನು.

## ಯಕೋಬನ ವಿವಾಹ

15 ಆ ಬಳಿಕ ಲಾಬಾನನು ಯಕೋಬನಿಗೆ, “ನೀನು ನನ್ನ ಸಂಬಂಧಿಯೆಂದ ಮಾತ್ರಕ್ಕೆ ಬಿಟ್ಟಿ ಸೇವೆ
ಮಾಡಿಸಿಕೊಳ್ಳುವುದು ಸರಿಯಲ್ಲ; ನಿನ್ನ ಕೆಲಸಕ್ಕೆ ಏನು ಸಂಬಳ ಕೊಡಲಿ, ಹೇಳು?” ಎಂದು ಕೇಳಿದನು.
16ಲಾಬಾನನಿಗೆ ಇಬ್ಬರು ಹೆಣ್ಣು ಮಕ್ಕಳಿದ್ದರು. ದೊಡ್ಡವಳ ಹೆಸರು ಲೇಯಾ, ಚಿಕ್ಕವಳ ಹೆಸರು ರಾಖೇಲ್.
17ಲೇಯಾ ಹೊಳಪಿನ ಕಣ್ಣಿನವಳು. ರಾಖೇಲಳಾದರೋ ರೂಪವತಿ, ಲಾವಣ್ಯವತಿ.
18 ಯಕೋಬನಿಗೆ ರಾಖೇಲಳ ಮೇಲೆ ಪ್ರೀತಿ. ಎಂತಲೇ, “ನಿಮ್ಮ ಕಿರಿಯ ಮಗಳು
ರಾಖೇಲಳಿಗೋಸ್ಕರ ನಿಮ್ಮಲ್ಲಿ ಏಳು ವರುಷ ಸೇವೆ ಮಾಡುತ್ತೇನೆ,” ಎಂದು ಹೇಳಿದನು.
19 ಲಾಬಾನನು, “ಆಕೆಯನ್ನು ಬೇರೆ ಒಬ್ಬನಿಗೆ ಕೊಡುವುದಕ್ಕಿಂತ ನಿನಗೆ ಕೊಡುವುದೇ ಲೇಸು,
ನನ್ನಲ್ಲೇ ತಂಗಿರು,” ಎಂದನು. 20ಅಂತೆಯೇ ಯಕೋಬನು ರಾಖೇಲಳಿಗಾಗಿ ಏಳು ವರ್ಷಕಾಲ ಸೇವೆ
ಮಾಡಿದನು. ಆಕೆಯ ಮೇಲೆ ಅವನಿಗೆ ಬಹಳ ಪ್ರೀತಿಯಿದ್ದುದರಿಂದ ಅದು ಅವನಿಗೆ ಕೇವಲ ಕೆಲವೇ
ದಿನಗಳಂತೆ ಕಾಣಿಸಿತು.
21 ತರುವಾಯ ಯಕೋಬನು ಲಾಬಾನನಿಗೆ, “ನನ್ನ ಸೇವಾವಧಿ ಮುಗಿಯಿತು. ಆಕೆ ನನ್ನ
ಹೆಂಡತಿಯಾಗುವಂತೆ ನನ್ನ ಸ್ವಾಧೀನಕ್ಕೆ ಕೊಡಿ,” ಎಂದು ಕೇಳಿದನು. 22ಆಗ ಲಾಬಾನನು ಊರಿನವರನ್ನೆಲ್ಲ
ಕರೆಯಿಸಿ ಔತಣವನ್ನು ಏರ್ಪಡಿಸಿದನು. 23ರಾತ್ರಿಯಾದಾಗ ತನ್ನ ಹಿರಿಯ ಮಗಳು ಲೇಯಳನ್ನೇ
ಯಕೋಬನ ಬಳಿಗೆ ಕರೆತಂದನು. ಯಕೋಬನು ಆಕೆಯನ್ನು ಕೂಡಿದನು. (24ಲಾಬಾನನು ತನ್ನ ಮಗಳು
ಲೇಯಳಿಗೆ ಜಿಲ್ಪಾ ಎಂಬ ಒಬ್ಬ ದಾಸಿಯನ್ನು ಕೊಟ್ಟನು.) 25ಆ ಹೆಣ್ಣು ಲೇಯಳೆಂದು ಯಕೋಬನಿಗೆ ಬೆಳಿಗ್ಗೆ
ತಿಳಿಯಿತು. ಅವನು ಲಾಬಾನನಿಗೆ, “ನೀವು ನನಗೇಕೆ ಹೀಗೆ ಮಾಡಿದಿರಿ? ರಾಖೇಲಳಿಗಾಗಿ ಅಲ್ಲವೆ ನಾನು
ನಿಮಗೆ ಸೇವೆ ಮಾಡಿದ್ದು? ನನಗೆ ಮೋಸ ಮಾಡಿದ್ದೇಕೆ?” ಎಂದು ಕೇಳಿದನು.
26 ಅದಕ್ಕೆ ಲಾಬಾನನು, “ಹಿರಿಯ ಮಗಳನ್ನು ಇರಿಸಿಕೊಂಡು ಕಿರಿಯ ಮಗಳನ್ನು ಮದುವೆ
ಮಾಡಿಕೊಡುವುದು ನಮ್ಮ ನಾಡಿನ ಪದ್ಧತಿಯಲ್ಲ. 27ಹಿರಿಯಳೊಡನೆ ಮದುವೆಯ ವಾರವನ್ನು ಕಳೆದುಬಿಡು;
ಅನಂತರ ಕಿರಿಯ ಮಗಳನ್ನೂ ನಿನಗೆ ಕೊಡುತ್ತೇನೆ. ಅವಳಿಗೋಸ್ಕರ ನೀನು ಇನ್ನೂ ಏಳು ವರ್ಷ ಸೇವೆ
ಮಾಡುವೆಯಂತೆ,” ಎಂದನು.

28 ಯಕೋಬನು ಅದಕ್ಕೆ ಒಪ್ಪಿ ಹಿರಿಯವಳೊಂದಿಗೆ ಮದುವೆಯ ವಾರವನ್ನು ಕಳೆದನು. ಬಳಿಕ ಲಾಬಾನನು ತನ್ನ ಮಗಳು ರಾಖೇಲಳನ್ನು ಯಕೋಬನಿಗೆ ಹೆಂಡತಿಯಾಗಿ ಕೊಟ್ಟನು. 29(ಆಕೆಗೆ ಬಿಲ್ಹಾ ಎಂಬ ಒಬ್ಬ ದಾಸಿಯನ್ನು ಕೊಟ್ಟನು.) 30ಯಕೋಬನು ರಾಖೇಲಳನ್ನು ಕೂಡಿದನು. ಆಕೆಯನ್ನು ಲೇಯಳಿಗಿಂತ ಹೆಚ್ಚಾಗಿ ಪ್ರೀತಿಸಿದನು. ಆಕೆಗೋಸ್ಕರ ಲಾಬಾನನ ಬಳಿ ಇನ್ನೂ ಏಳು ವರ್ಷ ಸೇವೆಮಾಡಿದನು.

### ಯಕೋಬನಿಗೆ ಹುಟ್ಟಿದ ಮಕ್ಕಳು

31 ಹೀಗಿರಲು ಲೇಯಳ ಬಗ್ಗೆ ಯಕೋಬನಿಗೆ ಉದಾಸೀನ ಉಂಟಾಯಿತು. ಇದನ್ನು ಕಂಡು ಸರ್ವೇಶ್ವರಸ್ವಾಮಿ ಆಕೆಗೆ ತಾಯ್ತನವನ್ನು ಅನುಗ್ರಹಿಸಿದರು; ರಾಖೇಲಳು ಬಂಜೆಯಾಗೇ ಉಳಿದಳು. 32ಲೇಯಳು ಗರ್ಭಿಣಿಯಾಗಿ ಗಂಡು ಮಗುವನ್ನು ಹೆತ್ತಳು. "ಸರ್ವೇಶ್ವರ ನನ್ನ ದೀನ ಸ್ಥಿತಿಯನ್ನು ನೋಡಿದ್ದಾರೆ, ಇನ್ನು ಮುಂದೆ ಗಂಡ ನನ್ನನ್ನು ಪ್ರೀತಿಸುತ್ತಾನೆ," ಎಂದುಕೊಂಡು ಆ ಮಗುವಿಗೆ 'ರೂಬೇನ್' ಎಂದು ಹೆಸರಿಟ್ಟಳು. 33ಆಕೆ, ಇನ್ನೊಮ್ಮೆ ಗರ್ಭಿಣಿಯಾಗಿ ಗಂಡು ಮಗುವನ್ನೇ ಹೆತ್ತಳು. "ನಾನು ಗಂಡನ ಅಲಕ್ಷ್ಯಕ್ಕೆ ಗುರಿಯಾದೆ, ಇದನ್ನು ತಿಳಿದೇ ಸರ್ವೇಶ್ವರ ನನಗೆ ಈ ಮಗನನ್ನು ದಯಪಾಲಿಸಿದರು," ಎಂದು ಹೇಳಿ ಆ ಮಗನಿಗೆ 'ಸಿಮೆಯೋನ್' ಎಂದು ಹೆಸರಿಟ್ಟಳು. 34ಮತ್ತೊಮ್ಮೆ ಗರ್ಭಧರಿಸಿ ಗಂಡು ಮಗುವನ್ನೇ ಹೆತ್ತಳು. "ಈಗಲಾದರೂ ನನ್ನ ಗಂಡನೂ ನಾನೂ ಒಂದಾಗುತ್ತೇವೆ. ಅವರಿಗೆ ಮೂರು ಮಂದಿ ಗಂಡು ಮಕ್ಕಳನ್ನು ಹೆತ್ತಿದ್ದೇನಲ್ಲವೆ," ಎಂದುಕೊಂಡು ಆ ಮಗುವಿಗೆ 'ಲೇವಿ' ಎಂದು ಹೆಸರಿಟ್ಟಳು. 35ಮಗದೊಮ್ಮೆ ಗರ್ಭಧರಿಸಿ ಈ ಸಾರಿಯೂ ಗಂಡು ಮಗುವನ್ನೇ ಹೆತ್ತಳು. "ಈಗ ಸರ್ವೇಶ್ವರಸ್ವಾಮಿಯ ಸ್ತುತಿ ಮಾಡುತ್ತೇನೆ," ಎಂದು ಹೇಳಿ ಆ ಮಗುವಿಗೆ "ಯೆಹೂದಾ" ಎಂದು ನಾಮಕರಣ ಮಾಡಿದಳು. ಆ ಮೇಲೆ ಆಕೆಗೆ ಗರ್ಭಧಾರಣೆ ಆಗುವುದು ನಿಂತುಹೋಯಿತು.

**30** ರಾಖೇಲಳು ತಾನು ಯಕೋಬನಿಗೆ ಮಕ್ಕಳನ್ನು ಹೆರಲಿಲ್ಲವೆಂದುಕೊಂಡು ತನ್ನ ಅಕ್ಕನ ಮೇಲೆ ಹೊಟ್ಟೆಕಿಚ್ಚು ಪಟ್ಟಳು. ಅಲ್ಲದೆ ಯಕೋಬನಿಗೆ, "ನನಗೆ ಮಕ್ಕಳನ್ನು ಕೊಡು; ಇಲ್ಲದಿದ್ದರೆ ಸಾಯುತ್ತೇನೆ," ಎಂದು ಹೇಳಿದಳು.

2 ಯಕೋಬನು ಆಕೆಯ ಮೇಲೆ ಸಿಟ್ಟುಗೊಂಡು, "ನಾನೇನು ದೇವರೋ? ಅವರೇ ಅಲ್ಲವೆ ನಿನಗೆ ಮಕ್ಕಳನ್ನು ಕೊಡದೆ ಇರುವುದು?" ಎಂದು ಉತ್ತರ ಕೊಟ್ಟನು.

3 ಅದಕ್ಕೆ ರಾಖೇಲಳು, "ನನ್ನ ದಾಸಿ ಬಿಲ್ಹಾ ಇದ್ದಾಳಲ್ಲವೆ? ಅವಳನ್ನು ಕೂಡಿ, ಅವಳು ನನಗಾಗಿ ಒಂದು ಮಗುವನ್ನು ಹೆತ್ತು ನನ್ನ ಮಡಿಲಲ್ಲಿ ಇಡಲಿ; ಆಗ ಅವಳ ಮುಖಾಂತರ ನನಗೆ ಸಂತಾನ ಪ್ರಾಪ್ತಿಯಾಗುವುದು," ಎಂದಳು. 4ಅಂತೆಯೇ ದಾಸಿ ಬಿಲ್ಹಾಳನ್ನು ತನ್ನ ಗಂಡನಿಗೆ ಒಪ್ಪಿಸಿದಳು. 5ಅವನು ಬಿಲ್ಹಾಳನ್ನು ಕೂಡಲು ಅವಳು ಗರ್ಭಿಣಿಯಾಗಿ ಒಂದು ಗಂಡು ಮಗುವನ್ನು ಹೆತ್ತಳು. 6ಆಗ ರಾಖೇಲಳು, "ದೇವರು ನನಗೆ ನ್ಯಾಯ ದೊರಕಿಸಿದ್ದಾರೆ, ನನ್ನ ಮೊರೆಯನ್ನು ಕೇಳಿ ನನಗೆ ಮಗನನ್ನು ಅನುಗ್ರಹಿಸಿದ್ದಾರೆ," ಎಂದು ಹೇಳಿ ಆ ಮಗುವಿಗೆ 'ದಾನ್' ಎಂದು ಹೆಸರಿಟ್ಟಳು. 7ಆ ದಾಸಿ ಬಿಲ್ಹಾಳು ಮತ್ತೆ ಗರ್ಭವತಿಯಾಗಿ ಯಕೋಬನಿಗೆ ಎರಡನೆಯ ಗಂಡು ಮಗುವನ್ನು ಹೆತ್ತಳು. 8ಆಗ ರಾಖೇಲಳು, "ನನ್ನ ಅಕ್ಕನ ಸಂಗಡ ಬಹಳವಾಗಿ ಹೋರಾಡಿ ಗೆದ್ದಿದ್ದೇನೆ," ಎಂದು ಹೇಳಿ ಆ ಮಗುವನ್ನು 'ನಫ್ತಾಲಿ' ಎಂದು ಹೆಸರಿಸಿದಳು.

9 ಲೇಯಳು ತನಗೆ ಹೆರಿಗೆ ನಿಂತು ಹೋಗಿ ಇರುವುದನ್ನು ತಿಳಿದು ತನ್ನ ದಾಸಿ ಜಿಲ್ಪಳನ್ನು ಯಕೋಬನಿಗೆ ಹೆಂಡತಿಯಾಗಿ ಒಪ್ಪಿಸಿದಳು. 10ದಾಸಿ ಜಿಲ್ಪಳೂ ಯಕೋಬನಿಗೆ ಒಂದು ಗಂಡು ಮಗುವನ್ನು ಹೆತ್ತಳು. 11ಲೇಯಳು, "ನನಗೆ ಶುಭವಾಯಿತು," ಎಂದುಕೊಂಡು ಆ ಮಗುವಿಗೆ 'ಗಾದ್' ಎಂದು ಹೆಸರಿಟ್ಟಳು. 12ಲೇಯಳ ದಾಸಿ ಆ ಜಿಲ್ಪಳು ಯಕೋಬನಿಗೆ ಇನ್ನೂ ಒಂದು ಗಂಡು ಮಗುವನ್ನು ಹೆತ್ತಳು. 13ಆಗ ಲೇಯಳು, "ನಾನು ಧನ್ಯಳಾದೆ, ಮಹಿಳೆಯರು ನನ್ನನ್ನು ಧನ್ಯಳೆಂದು ಹೊಗಳುವರು," ಎಂದುಕೊಂಡು ಆ ಮಗುವಿಗೆ 'ಆಶೇರ್' ಎಂದು ಹೆಸರಿಟ್ಟಳು.

14 ಗೋದಿಯ ಸುಗ್ಗಿ ಕಾಲದಲ್ಲಿ ರೂಬೇನನು ಹೊಲದ ಕಡೆ ಹೋಗುತ್ತಿದ್ದಾಗ ಕಾಮೋದ್ದೀಪಕ ಹಣ್ಣುಗಳನ್ನು ಕಂಡನು. ಅವನ್ನು ತಂದು ತನ್ನ ತಾಯಿ ಲೇಯಳಿಗೆ ಕೊಟ್ಟನು. ರಾಖೇಲಳು ಆಕೆಗೆ, "ನಿನ್ನ ಮಗ ತಂದಿರುವ ಕಾಮೋದ್ದೀಪಕ ಫಲಗಳಲ್ಲಿ ಕೆಲವನ್ನು ನನಗೆ ಕೊಡಕ್ಕಾ," ಎಂದು ಕೇಳಿಕೊಂಡಳು.

15 ಅದಕ್ಕೆ ಲೇಯಳು, "ನೀನು ನನ್ನ ಗಂಡನನ್ನು ಅಪಹರಿಸಿದ್ದು ಸಾಲದೆಂದು ನನ್ನ ಮಗ ತಂದ ಕಾಮೋದ್ದೀಪಕ ಹಣ್ಣುಗಳನ್ನೂ ತೆಗೆದುಕೊಳ್ಳಬೇಕೆಂದಿರುವೆಯಾ?" ಎಂದು ಬದಲಿತ್ತಳು.

ಆಗ ರಾಖೇಲಳು, "ಸರಿ, ನೀನು ನಿನ್ನ ಮಗನು ತಂದ ಕಾಮೋದ್ದೀಪಕ ಹಣ್ಣುಗಳನ್ನು ನನಗೆ ಕೊಟ್ಟೆಯಾದರೆ ಇಂದಿನ ರಾತ್ರಿ ಅವರು ನಿನ್ನೊಡನೆ ಮಲಗಬಹುದು," ಎಂದಳು.

16 ಸಂಜೆ ಯಕೋಬನು ಹೊರಗಡೆಯಿಂದ ಬಂದಾಗ ಲೇಯಳು ಅವನೆದುರಿಗೆ ಹೋಗಿ, "ನೀವು ನನ್ನೊಡನೆ ಕೂಡಬೇಕು. ನಾನು ನನ್ನ ಮಗ ತಂದ ಕಾಮೋದ್ದೀಪಕ ಹಣ್ಣುಗಳನ್ನು ಕೊಟ್ಟು ನಿಮ್ಮನ್ನು ಕೊಂಡುಕೊಂಡಿದ್ದೇನೆ," ಎಂದಳು. ಅಂದಿನ ರಾತ್ರಿ ಯಕೋಬನು ಆಕೆಯೊಡನೆ ಕೂಡಿದನು.

17 ದೇವರು ಲೇಯಳ ಪ್ರಾರ್ಥನೆಯನ್ನು ಕೇಳಿದರು. ಆಕೆ ಗರ್ಭಿಣಿಯಾಗಿ ಯಕೋಬನಿಗೆ
ಐದನೆಯ ಗಂಡು ಮಗುವನ್ನು ಹೆತ್ತಳು. [18]"ನಾನು ನನ್ನ ದಾಸಿಯನ್ನು ಗಂಡನಿಗೆ ಒಪ್ಪಿಸಿದ್ದರಿಂದ ದೇವರು
ನನಗೆ ಪ್ರತಿಫಲವನ್ನು ಕೊಟ್ಟಿದ್ದಾರೆ," ಎಂದು ಹೇಳಿ ಆಕೆ ಆ ಮಗುವಿಗೆ 'ಇಸ್ಸಾಕಾರ್' ಎಂದು ಹೆಸರಿಟ್ಟಳು.
[19]ಲೇಯಳು ಮತ್ತೊಮ್ಮೆ ಗರ್ಭಧರಿಸಿ ಯಕೋಬನಿಗೆ ಆರನೆಯ ಗಂಡು ಮಗುವನ್ನು ಹೆತ್ತಳು. [20]"ದೇವರು
ನನಗೆ ಒಳ್ಳೆಯ ವರದಾನವನ್ನು ಕೊಟ್ಟಿದ್ದಾರೆ. ನಾನು ನನ್ನ ಗಂಡನಿಗೆ ಆರು ಮಂದಿ ಗಂಡು ಮಕ್ಕಳನ್ನು
ಹೆತ್ತಿದ್ದೇನೆ. ಆದುದರಿಂದ ಅವರು ನನ್ನೊಡನೆಯೇ ವಾಸಿಸುವರು," ಎಂದು ಹೇಳಿಕೊಂಡು ಆ ಮಗುವಿಗೆ
'ಜೆಬುಲೂನ್' ಎಂದು ಹೆಸರಿಟ್ಟಳು. [21]ತರುವಾಯ ಆಕೆ ಒಂದು ಹೆಣ್ಣು ಮಗುವನ್ನು ಹೆತ್ತು ಅದಕ್ಕೆ 'ದೀನಾ'
ಎಂದು ನಾಮಕರಣ ಮಾಡಿದಳು.

22 ಇದಾದ ಬಳಿಕ ದೇವರು ರಾಖೇಲಳನ್ನು ನೆನೆಸಿಕೊಂಡರು. ಆಕೆಯ ಮೊರೆಯನ್ನು ಕೇಳಿ
ಆಕೆಗೂ ಮಕ್ಕಳಾಗುವಂತೆ ಅನುಗ್ರಹಿಸಿದರು. [23]ಆಕೆ ಗರ್ಭಧರಿಸಿ ಒಂದು ಗಂಡು ಮಗುವನ್ನು ಹೆತ್ತಳು.
"ದೇವರು ನನಗಿದ್ದ ಅವಮಾನವನ್ನು ಪರಿಹರಿಸಿದ್ದಾರೆ; [24]ಸರ್ವೇಶ್ವರ ನನಗೆ ಇನ್ನೂ ಒಂದು ಗಂಡು
ಮಗುವನ್ನು ಅನುಗ್ರಹಿಸಲಿ," ಎಂದುಕೊಂಡು ಆ ಮಗುವಿಗೆ 'ಜೋಸೆಫ್' ಎಂದು ನಾಮಕರಣ ಮಾಡಿದಳು.

### ಯಕೋಬನು ಗಳಿಸಿಕೊಂಡ ಆಸ್ತಿಪಾಸ್ತಿ

25 ರಾಖೇಲಳು ಜೋಸೆಫನನ್ನು ಹೆತ್ತ ಬಳಿಕ ಯಕೋಬನು ಲಾಬಾನನಿಗೆ, "ನನಗೆ ಅಪ್ಪಣೆ
ಆಗಬೇಕು, ನಾನು ಸ್ವಂತ ಊರಿಗೂ ನಾಡಿಗೂ ಹಿಂದಿರುಗಬೇಕಾಗಿದೆ. [26]ನಾನು ದುಡಿದು ಪಡೆದ
ಹೆಂಡತಿಯರನ್ನೂ ಮಕ್ಕಳನ್ನೂ ಕಳಿಸಿಕೊಡಿ, ನಾನು ಹೊರಡುತ್ತೇನೆ. ನಿಮಗೆ ನಾನು ಮಾಡಿದ ಸೇವೆ
ಎಷ್ಟೆಂದು ನಿಮಗೇ ತಿಳಿದಿದೆ," ಎಂದು ಹೇಳಿದನು.

27 ಅದಕ್ಕೆ ಲಾಬಾನನು, "ನನ್ನ ಮೇಲೆ ದಯವಿಟ್ಟು ನನ್ನ ಬಳಿಯಲ್ಲೇ ತಂಗಿರು. ಸರ್ವೇಶ್ವರಸ್ವಾಮಿ
ನಿನ್ನ ನಿಮಿತ್ತ ನನ್ನನ್ನು ಅಭಿವೃದ್ಧಿಗೊಳಿಸಿದ್ದಾರೆಂದು ಶಾಸ್ತ್ರೋಕ್ತವಾಗಿ ತಿಳಿದುಕೊಂಡಿದ್ದೇನೆ. [28]ನಿನಗೆ ಏನು
ಕೂಲಿ ಕೊಡಬೇಕು ಹೇಳು, ಕೊಡುತ್ತೇನೆ," ಎಂದು ಉತ್ತರಕೊಟ್ಟನು.

29 ಅದಕ್ಕೆ ಯಕೋಬನು, "ನಾನು ನಿಮಗೆ ಎಷ್ಟು ಸೇವೆ ಮಾಡಿದ್ದೇನೆಂಬುದೂ ನನ್ನ ವಶದಲ್ಲಿದ್ದ
ನಿಮ್ಮ ಪಶುಪ್ರಾಣಿಗಳು ಹೇಗೆ ಅಭಿವೃದ್ಧಿ ಆಗಿವೆ ಎಂಬುದನ್ನೂ ನೀವೇ ಬಲ್ಲಿರಿ. [30]ನಾನು ಬರುವುದಕ್ಕೆ
ಮೊದಲು ನಿಮಗಿದ್ದ ಕೆಲವು ಈಗ ಬಹಳವಾಗಿ ಹೆಚ್ಚಿವೆ. ನಾನು ಹೋದ ಕಡೆಗಳಲ್ಲೆಲ್ಲ ಸರ್ವೇಶ್ವರ ನಿಮ್ಮನ್ನು
ಆಶೀರ್ವದಿಸಿದ್ದಾರೆ. ಆದರೆ ನಾನು ನನ್ನ ಸ್ವಂತ ಮನೆತನಕ್ಕಾಗಿ ಸಂಪಾದಿಸುವುದು ಯಾವಾಗ?" ಎಂದನು.

31 ಆಗ ಲಾಬಾನನು, "ನಿನಗೆ ನಾನೇನು ಕೊಡಬೇಕು ಹೇಳು?" ಎಂದನು. ಯಕೋಬನು,
"ನನಗೇನೂ ಕೊಡಬೇಕಾಗಿಲ್ಲ; ಒಂದೇ ಒಂದು ಕಾರ್ಯಕ್ಕೆ ಒಪ್ಪಿಗೆ ನೀಡಿದರೆ, ನಾನು ಮತ್ತೆ ನಿಮ್ಮ
ಮಂದೆಯನ್ನು ಮೇಯಿಸಿಕೊಂಡು ಬರುತ್ತೇನೆ; [32]ಅದೇನೆಂದರೆ, ಈ ದಿನ ನಾನು ನಿಮ್ಮ ಮಂದೆಗಳಿಗೆ
ಹೋಗಿ ವಿಕಾರ ಬಣ್ಣವುಳ್ಳವುಗಳನ್ನೆಲ್ಲ ಅಂದರೆ, ಕುರಿಮರಿಗಳಲ್ಲಿ ಕಪ್ಪಾಗಿರುವವುಗಳನ್ನೂ ಆಡುಮರಿಗಳಲ್ಲಿ
ಚುಕ್ಕೆ ಅಥವಾ ಮಚ್ಚೆವುಳ್ಳವುಗಳನ್ನೂ ವಿಂಗಡಿಸುತ್ತೇನೆ. ಅವೇ ನನ್ನ ಸಂಬಳ ಎಂದು ನೀವು ಭಾವಿಸಬೇಕು.

33ಇನ್ನು ಮೇಲೆ ನೀವು ಬಂದು ನನ್ನವುಗಳನ್ನು ಪರೀಕ್ಷಿಸುವಾಗ ನಾನು ಪ್ರಾಮಾಣಿಕನೋ ಇಲ್ಲವೋ
ಎಂಬುದು ಪ್ರತ್ಯಕ್ಷವಾಗುವುದು. ಆಡುಗಳಲ್ಲಿ ಚುಕ್ಕೆ ಮಚ್ಚೆ ಇಲ್ಲದ್ದೂ ಕುರಿಗಳಲ್ಲಿ ಕಪ್ಪಲ್ಲದ್ದೂ ನನ್ನವುಗಳಲ್ಲಿ
ಸಿಕ್ಕಿದರೆ, ಅದನ್ನು ಕದ್ದು ತಂದದ್ದೆಂದು ಎಣಿಸಬಹುದು," ಎಂದನು.

34 ಅದಕ್ಕೆ ಲಾಬಾನನು, "ಒಳ್ಳೆಯದು, ನೀನು ಹೇಳಿದಂತೆಯೇ ಆಗಲಿ," ಎಂದನು. 35ಆದರೆ ಅದೇ
ದಿನ ಲಾಬಾನನು ಹೋತಗಳಲ್ಲಿ ರೇಖೆ, ಮಚ್ಚೆ ಇದ್ದವುಗಳನ್ನೂ, ಮೇಕೆಗಳಲ್ಲಿ ಚುಕ್ಕೆ, ಮಚ್ಚೆ ಇದ್ದವುಗಳನ್ನೂ
ಅಂದರೆ, ಸ್ವಲ್ಪ ಬಿಳುಪಾದ ಬಣ್ಣತೋರಿದ ಎಲ್ಲವುಗಳನ್ನೂ, ಕುರಿಗಳಲ್ಲಿ ಕಪ್ಪಾಗಿದ್ದವುಗಳನ್ನೂ ವಿಂಗಡಿಸಿ ತನ್ನ
ಮಕ್ಕಳ ವಶಕ್ಕೆ ಒಪ್ಪಿಸಿಬಿಟ್ಟನು. 36ಅಲ್ಲದೆ, ತನಗೂ ತನ್ನ ಉಳಿದ ಮಂದೆಯನ್ನು ಮೇಯಿಸುತ್ತಿದ್ದ
ಯಕೋಬನಿಗೂ ಮಧ್ಯೆ ಮೂರು ದಿನದ ಪ್ರಯಾಣದಷ್ಟು ದೂರದ ಅಂತರವಿರುವಂತೆ ಮಾಡಿಬಿಟ್ಟನು.

37 ಹೀಗಿರುವಲ್ಲಿ ಯಕೋಬನು ಚಿನಾರು, ಬಾದಾಮಿ, ಆರ್ಮೋನ್ ಎಂಬ ಮರಗಳಿಂದ
ಹಸಿಕೋಲುಗಳನ್ನು ತೆಗೆದುಕೊಂಡು ಪಟ್ಟಿ ಪಟ್ಟಿಯಾಗಿ ತೊಗಟೆಯನ್ನು ಸುಲಿದು ಅವುಗಳಲ್ಲಿ ಇರುವ
ಬಿಳಿಯ ಬಣ್ಣವು ಕಾಣಿಸುವಂತೆ ಮಾಡಿ 38ಅವುಗಳನ್ನು ಆಡುಕುರಿಗಳ ಹಿಂಡು, ನೀರು ಕುಡಿಯುವ
ತೊಟ್ಟಿಗಳಲ್ಲಿ ಇಟ್ಟನು. ಆಡುಕುರಿಗಳಿಗೆ ನೀರು ಕುಡಿಯುವ ಸಮಯ, ಸಂಗಮ ಸಮಯ. 39ಅವು ಆ
ಕೋಲುಗಳನ್ನು ನೋಡುತ್ತಾ ಸಂಗಮ ಮಾಡಿದ್ದರಿಂದ ರೇಖೆ, ಚುಕ್ಕೆ, ಮಚ್ಚೆಗಳುಳ್ಳ ಮರಿಗಳನ್ನು ಈದುವು.

40 ಯಕೋಬನು ಆ ಮರಿಗಳನ್ನು ಲಾಬಾನನ ಹಿಂಡಿಗೆ ಸೇರಿಸದೆ ತನ್ನವೆಂದೇ ಬೇರ್ಪಡಿಸಿದನು;
ಲಾಬಾನನ ಆಡುಕುರಿಗಳ ಮುಖವನ್ನು ರೇಖೆಯುಳ್ಳ ಆ ಅಡುಗಳ ಮತ್ತು ಕಪ್ಪಾದ ಆ ಕುರಿಗಳ ಕಡೆಗೆ
ತಿರುಗಿಸಿದನು. 41ಇದಲ್ಲದೆ ಬಲಿಷ್ಠವಾದ ಆಡುಕುರಿಗಳು ಸಂಗಮ ಮಾಡುವಾಗ ಆ ಕೋಲುಗಳನ್ನು
ನೋಡುತ್ತಾ ಸಂಗಮ ಮಾಡಲಿ ಎಂದು ಯಾಕೋಬನು ನೀರಿನ ತೊಟ್ಟಿಯಲ್ಲಿ ಆ ಕೋಲುಗಳನ್ನಿಟ್ಟನು.
ಬಲಹೀನ ಆಡುಕುರಿಗಳ ಮುಂದೆ ಹಾಗೆ ಇಡಲಿಲ್ಲ. 42ಹೀಗೆ ಬಲವಿಲ್ಲದವುಗಳು ಲಾಬಾನನ ಪಾಲಿಗೆ,
ಬಲಿಷ್ಠವಾದವುಗಳು ಯಕೋಬನ ಪಾಲಿಗೆ ಬಂದವು.

43 ಈ ಪ್ರಕಾರ ಯಕೋಬನು ಬಹಳ ಸಂಪತ್ತುಳ್ಳವನಾದನು; ಅವನಿಗೆ ದೊಡ್ಡ ಹಿಂಡುಗಳು
ಮಾತ್ರವಲ್ಲ ದಾಸದಾಸಿಯರೂ ಒಂಟೆ ಕತ್ತೆಗಳೂ ಹೇರಳವಾಗಿದ್ದವು.

### ಲಾಬಾನನ ಮನೆಯಿಂದ ಯಕೋಬನ ಪಲಾಯನ

**31** ಲಾಬಾನನ ಮಕ್ಕಳು, "ನಮ್ಮ ತಂದೆಯ ಆಸ್ತಿಪಾಸ್ತಿಯೆಲ್ಲ ಯಕೋಬನ ಪಾಲಾಯಿತು. ನಮ್ಮ ತಂದೆಯ
ಆಸ್ತಿಯಿಂದಲೇ ಅವನು ಇಷ್ಟು ಐಶ್ವರ್ಯವನ್ನು ಶೇಖರಿಸಿದ್ದು," ಎಂದು ಆಡಿಕೊಂಡರು. 2ಇದಲ್ಲದೆ,
ಯಕೋಬನ ಕಣ್ಣಿಗೆ ಲಾಬಾನನ ಮನೋಭಾವವು ಮೊದಲಿದ್ದಂತೆ ತೋರಲಿಲ್ಲ. 3ಆಗ ಸರ್ವೇಶ್ವರಸ್ವಾಮಿ
ಅವನಿಗೆ, "ನಿನ್ನ ತಂದೆ ತಾತಂದಿರ ನಾಡಿಗೂ ನಿನ್ನ ಬಂಧು ಬಳಗದವರ ಬಳಿಗೂ ಹಿಂದಿರುಗು. ನಾನು
ನಿನ್ನೊಂದಿಗೆ ಇರುತ್ತೇನೆ," ಎಂದು ಹೇಳಿದರು.

4 ಆದುದರಿಂದ ಯಕೋಬನು ರಾಖೇಲಳನ್ನು ಮತ್ತು ಲೇಯಳನ್ನು ತಾನು ಆಡುಕುರಿ
ಮೇಯಿಸುತ್ತಿದ್ದ ಅಡವಿಗೆ ಕರೆಸಿದನು. 5ಅಲ್ಲಿ ಅವರಿಗೆ, "ನನ್ನ ವಿಷಯದಲ್ಲಿ ನಿಮ್ಮ ತಂದೆಯ ಮನೋಭಾವ
ಮೊದಲಿದ್ದಂತೆ ಇಲ್ಲವೆಂದು ಕಂಡು ಬಂದಿದೆ. ಆದರೂ ನನ್ನ ತಂದೆಯ ದೇವರು ನನ್ನೊಂದಿಗೆ ಇದ್ದಾರೆ.
6ನಿಮಗೆ ತಿಳಿದಿರುವಂತೆ ನಾನು ನಿಮ್ಮ ತಂದೆಗೆ ಶಕ್ತಿಮೀರಿ ಸೇವೆಸಲ್ಲಿಸಿದ್ದೇನೆ. 7ನಿಮ್ಮ ತಂದೆಯಾದರೋ
ನನಗೆ ಮೋಸಮಾಡಿ ಹತ್ತು ಸಾರಿ ನನ್ನ ಸಂಬಳವನ್ನು ಬದಲಾಯಿಸಿದ್ದಾರೆ. ಅವರಿಂದ ನನಗೆ ಕೇಡಾಗದಂತೆ
ದೇವರೇ ನೋಡಿಕೊಂಡರು. 8'ಚುಕ್ಕೆಯುಳ್ಳವುಗಳನ್ನು ಮಾತ್ರ ನಿನ್ನ ಸಂಬಳಕ್ಕೆ ತೆಗೆದುಕೊ', ಎಂದು ನಿಮ್ಮ
ತಂದೆ ಹೇಳುವಾಗ ಹಿಂಡಿನ ಆಡುಕುರಿಗಳೆಲ್ಲ ಚುಕ್ಕೆಯುಳ್ಳ ಮರಿಗಳನ್ನೇ ಈದುವು. 'ರೇಖೆಗಳಿರುವುವುಗಳನ್ನು
ಮಾತ್ರ ಸಂಬಳಕ್ಕೆ ತೆಗೆದುಕೊ', ಎಂದು ಹೇಳಿದಾಗ ಆಡುಕುರಿಗಳೆಲ್ಲವು ರೇಖೆಯುಳ್ಳ ಮರಿಗಳನ್ನೇ ಈದುವು.
9ಹೀಗೆ ದೇವರು ನಿಮ್ಮ ತಂದೆಯ ಆಡುಕುರಿಗಳನ್ನು ತೆಗೆದು ನನಗೆ ಕೊಟ್ಟರು.

10 “ಆಡುಕುರಿಗಳು ಸಂಗಮ ಮಾಡುವ ಕಾಲದಲ್ಲಿ ನಾನೊಂದು ಕನಸನ್ನು ಕಂಡೆ. ಅದರಲ್ಲಿ ಕಣ್ಣೆತ್ತಿ ನೋಡುತ್ತಿದ್ದ ನನಗೆ ಮೇಕೆಗಳ ಮೇಲೆ ಹಾರಿದ ಹೋತಗಳೆಲ್ಲವು ರೇಖೆ, ಚುಕ್ಕೆ, ಮಚ್ಚೆಗಳುಳ್ಳವುಗಳಾಗಿಯೆ ಕಾಣಿಸಿದವು. [11]ಆ ಕನಸಿನಲ್ಲಿ ದೇವದೂತನು, ‘ಯಕೋಬನೇ’ ಎಂದು ಕರೆದನು. ನಾನು, ‘ಇಗೋ, ಇದ್ದೇನೆ’, ಎಂದು ಹೇಳಿದೆ. [12]ಆತ ನನಗೆ, ‘ಲಾಬಾನನು ನಿನ್ನ ವಿಷಯದಲ್ಲಿ ನಡೆದುಕೊಂಡ ರೀತಿಯನ್ನು ನಾನು ನೋಡಿದ್ದೇನೆ. ಆದುದರಿಂದಲೇ ಮೇಕೆಗಳ ಮೇಲೆ ಹಾರುವ ಹೋತಗಳೆಲ್ಲವು ರೇಖೆ, ಚುಕ್ಕೆ, ಮಚ್ಚೆಗಳುಳ್ಳವುಗಳಾಗಿವೆ, ಕಣ್ಣೆತ್ತಿನೋಡು. [13]ಬೇತೇಲಿನಲ್ಲಿ ನಿನಗೆ ಕಾಣಿಸಿದ ದೇವರು ನಾನೇ. ಅಲ್ಲಿ ನೀನು ಕಲ್ಲಿನ ಮೇಲೆ ಎಣ್ಣೆ ಹೊಯ್ದು ಅಭ್ಯಂಗಿಸಿ, ನನಗೆ ಹರಕೆ ಮಾಡಿಕೊಂಡೆಯಲ್ಲವೆ? ಈಗ ಎದ್ದು ಈ ನಾಡನ್ನು ಬಿಟ್ಟು ನೀನು ಹುಟ್ಟಿದ ನಾಡಿಗೆ ಹಿಂದಿರುಗಿ ಹೋಗು’ ಎಂದು ತಿಳಿಸಿದನು”, ಎಂದನು.

14 ಅದಕ್ಕೆ ರಾಖೇಲಳು ಮತ್ತು ಲೇಯಳು, “ನಮ್ಮ ತಂದೆಯ ಮನೆಯಲ್ಲಿ ಇನ್ನು ನಮಗೆ ಪಾಲಾಗಲಿ, ಹಕ್ಕುಬಾಧ್ಯತೆಯಾಗಲಿ ಏನಿದೆ? [15]ಅವರು ನಮ್ಮನ್ನು ಅನ್ಯರೆಂದೇ ಎಣಿಸುತ್ತಾರೆ; ನಮ್ಮನ್ನು ಮಾರಿ, ನಮ್ಮ ಮೂಲಕ ದೊರಕಿದ ಹಣವನ್ನು ಅವರೇ ನುಂಗಿಬಿಟ್ಟಿದ್ದಾರೆ. [16]ದೇವರು ನಮ್ಮ ತಂದೆಯಿಂದ ಕಿತ್ತುಕೊಂಡ ಈ ಆಸ್ತಿಯೆಲ್ಲ ನಮ್ಮದಾಗಿದೆ, ನಮ್ಮ ಮಕ್ಕಳದಾಗಿದೆ. ಆದುದರಿಂದ ದೇವರು ನಿಮಗೆ ಹೇಳಿದಂತೆಯೇ ಮಾಡಿ,” ಎಂದು ಉತ್ತರಕೊಟ್ಟರು.

17 ಅಂತೆಯೇ ಯಕೋಬನು ತನ್ನ ಮಕ್ಕಳನ್ನೂ ಹೆಂಡತಿಯರನ್ನೂ ಒಂಟೆಗಳ ಮೇಲೆ ಹತ್ತಿಸಿ ಹೊರಡಲು ಅಣಿಯಾದನು. [18]ಮೆಸಪೊಟೇಮಿಯಾದಲ್ಲಿ ತಾನು ಗಳಿಸಿಕೊಂಡಿದ್ದ ಆಸ್ತಿಯನ್ನೆಲ್ಲ ತೆಗೆದುಕೊಂಡು, ಜಾನುವಾರುಗಳನ್ನೆಲ್ಲ ಅಟ್ಟಿಕೊಂಡು ಕಾನಾನ್ ನಾಡಿಗೆ, ತನ್ನ ತಂದೆ ಇಸಾಕನ ಬಳಿಗೆ ಹೊರಟನು. [19]ಇತ್ತ ಲಾಬಾನನು ತನ್ನ ಕುರಿಗಳ ಉಣ್ಣೆಯನ್ನು ಕತ್ತರಿಸಲು ಹೋಗಿದ್ದನು. ಅದೇ ಸಮಯದಲ್ಲಿ ರಾಖೇಲಳು ತನ್ನ ತಂದೆಯ ಮನೆಯಲ್ಲಿದ್ದ ಕುಲದೈವಗಳ ವಿಗ್ರಹಗಳನ್ನು ಕದ್ದುಕೊಂಡಳು. [20]ಯಕೋಬನೂ ಆರಾಮ್ಯನಾದ ಆ ಲಾಬಾನನಿಗೆ ತಾನು ಹೋಗುತ್ತಿದ್ದೇನೆಂದು ತಿಳಿಸದೆ ವಂಚಿಸಿ ಓಡಿಹೋದನು. [21]ಹೀಗೆ ಅವನು ತನ್ನ ಆಸ್ತಿಪಾಸ್ತಿಯೊಂದಿಗೆ ಓಡಿಹೋಗಿ ಯೂಫ್ರೆಟಿಸ್ ಮಹಾನದಿಯನ್ನು ದಾಟಿ ಗಿಲ್ಯಾದ್ ಎಂಬ ಗುಡ್ಡಗಾಡಿನ ದಾರಿಯನ್ನು ಹಿಡಿದನು.

## ಯಕೋಬನನ್ನು ಬೆನ್ನಟ್ಟಿಬಂದ ಲಾಬಾನನು

22 ಯಕೋಬನು ಓಡಿಹೋದ ಸುದ್ದಿ ಲಾಬಾನನಿಗೆ ಮೂರನೆಯ ದಿನ ತಿಳಿಯಿತು. [23]ಅವನು ಕೂಡಲೆ ತನ್ನ ಬಂಧುಬಳಗದವರನ್ನು ಕರೆದುಕೊಂಡು, ಏಳುದಿನ ಪ್ರಯಾಣ ಮಾಡಿ ಯಕೋಬನನ್ನು ಹಿಂದಟ್ಟಿ ಗಿಲ್ಯಾದ್ ಗುಡ್ಡಗಾಡಿನಲ್ಲಿ ಸಂಧಿಸಿದನು. [24]ಆ ರಾತ್ರಿಯಲ್ಲಿ ದೇವರು ಆರಾಮ್ಯನಾದ ಲಾಬಾನನಿಗೆ ಕನಸಿನಲ್ಲಿ ಕಾಣಿಸಿಕೊಂಡು, “ಎಚ್ಚರಿಕೆ, ಯಕೋಬನಿಗೆ ನೀನು ಯಾವ ಬೆದರಿಕೆಯನ್ನೂ ಹಾಕಬೇಡ!” ಎಂದು ಇದ್ದರು. [25]ಲಾಬಾನನು, ಯಕೋಬನನ್ನು ಎದುರುಗೊಂಡಾಗ ಯಕೋಬನು ಬೆಟ್ಟದಲ್ಲಿ ಗುಡಾರವನ್ನು ಹಾಕಿಕೊಂಡಿದ್ದನು. ಲಾಬಾನನು ಕೂಡ ತನ್ನವರೊಡನೆ ಅದೇ ಗಿಲ್ಯಾದ್ ಬೆಟ್ಟದಲ್ಲಿ ಗುಡಾರ ಹಾಕಿಸಿದನು.

26 ಲಾಬಾನನು ಯಕೋಬನಿಗೆ, “ನೀನು ಹೀಗೆ ಮಾಡಬಹುದೆ? ನನ್ನ ಹೆಣ್ಣು ಮಕ್ಕಳನ್ನು ಯುದ್ಧದಲ್ಲಿ ಸೆರೆಹಿಡಿದ ಕೈದಿಗಳಂತೆ ಎಳೆದುಕೊಂಡು ಓಡಿಬಂದಿರುವೆಯಲ್ಲಾ; [27]ನನಗೆ ಏನೂ ಹೇಳದೆ ವಂಚಿಸಿ ಏಕೆ ಓಡಿ ಬಂದೆ? ನನಗೆ ತಿಳಿಸಿದ್ದರೆ ಸಂಗೀತ ಸಂಭ್ರಮದೊಂದಿಗೆ, ತಾಳ ಮೇಳ ವಾದ್ಯಗಳೊಂದಿಗೆ ನಿನ್ನನ್ನು ಸಾಗಕಳುಹಿಸುತ್ತಿದ್ದೆ. [28]ನನ್ನ ಹೆಣ್ಣುಮಕ್ಕಳಿಗೂ ಮೊಮ್ಮಕ್ಕಳಿಗೂ ಮುದ್ದಿಟ್ಟು ಬೀಳ್ಕೊಡಲೂ ಆಗದಂತೆ ಮಾಡಿದೆ. ನೀನು ಮಾಡಿದ್ದು ಎಂಥ ಹುಚ್ಚು ಕೆಲಸ. [29]ನಿಮಗೆ ಹಾನಿಮಾಡುವ ಸಾಮರ್ಥ್ಯ ನನಗಿದೆ. ಆದರೆ ಕಳೆದ ರಾತ್ರಿ ನಿಮ್ಮ ತಂದೆಯ ದೇವರು, “ಯಕೋಬನಿಗೆ ಯಾವ ಬೆದರಿಕೆಯನ್ನೂ ಹಾಕಬೇಡ, ಎಚ್ಚರಿಕೆ!” ಎಂದು ತಿಳಿಸಿದರು. [30]ತಂದೆಯ ಮನೆಗೆ ಹಿಂದಿರುಗುವ ಅಭಿಲಾಶೆಯಿಂದ ನೀನು ಹೀಗೆ ಬಂದು ಬಿಟ್ಟಿದ್ದೇನೋ ಸರಿ. ಆದರೆ ನನ್ನ ಕುಲ ದೇವರುಗಳನ್ನು ಕದ್ದದ್ದು ಏಕೆ?” ಎಂದು ಕೇಳಿದನು.

31 ಅದಕ್ಕೆ ಪ್ರತ್ಯುತ್ತರವಾಗಿ ಯಕೋಬನು, “ನೀವು ನಿಮ್ಮ ಹೆಣ್ಣುಮಕ್ಕಳನ್ನು ಬಲಾತ್ಕಾರದಿಂದ ಕಿತ್ತುಕೊಳ್ಳುವಿರಿ ಎಂದು ಭಯಪಟ್ಟು ಹೀಗೆ ಹೊರಟು ಬಂದೆ. [32]ಆದರೆ ನಿಮ್ಮ ಕುಲ ದೇವರುಗಳ ವಿಗ್ರಹಗಳು

ಯಾರ ಬಳಿಯಲ್ಲಿ ಸಿಕ್ಕುತ್ತವೆಯೋ ಅವನು ಸಾಯಲಿ. ನಮ್ಮ ಬಂಧು ಬಳಗದವರ ಎದುರಿನಲ್ಲೇ ನನ್ನ ಸೊತ್ತನ್ನು ಪರೀಕ್ಷಿಸಬಹುದು. ಅದರಲ್ಲಿ ನಿಮ್ಮದೇನಾದರೂ ಸಿಕ್ಕಿದರೆ ಅದನ್ನು ತೆಗೆದುಕೊಳ್ಳಬಹುದು," ಎಂದು ಹೇಳಿದನು. ಆ ಕುಲದೇವರುಗಳ ವಿಗ್ರಹಗಳನ್ನು ಕದ್ದವಳು ರಾಖೇಲಳೆಂದು ಯಕೋಬನಿಗೆ ತಿಳಿದಿರಲಿಲ್ಲ.

33 ಲಾಬಾನನು ಯಕೋಬನ ಗುಡಾರದಲ್ಲೂ, ಲೇಯಳ ಗುಡಾರದಲ್ಲೂ ಹಾಗು ಆ ಇಬ್ಬರು ದಾಸಿಯರ ಗುಡಾರದಲ್ಲೂ ಹುಡುಕಿದನು. ಏನೂ ಸಿಕ್ಕಲಿಲ್ಲ. ಲೇಯಳ ಗುಡಾರವನ್ನು ಬಿಟ್ಟು ರಾಖೇಲಳ ಗುಡಾರಕ್ಕೆ ಬಂದನು. [34]ರಾಖೇಲಳು ಆ ವಿಗ್ರಹಗಳನ್ನು ತೆಗೆದುಕೊಂಡು ಒಂಟೆಯ ಸಬರದೊಳಗಿಟ್ಟು, ಅವುಗಳ ಮೇಲೆ ಕುಳಿತಿದ್ದಳು. ಲಾಬಾನನು ಗುಡಾರದಲ್ಲಿದ್ದ ಸಾಮಾನುಗಳನ್ನೆಲ್ಲ ಮುಟ್ಟಿ ಮುಟ್ಟಿ ನೋಡಿದನು. ವಿಗ್ರಹಗಳು ಕಾಣಲಿಲ್ಲ. [35]ರಾಖೇಲಳು ತನ್ನ ತಂದೆಗೆ, "ಅಪ್ಪಾ, ನಾನು ನಿಮ್ಮ ಮುಂದೆ ಎದ್ದು ನಿಂತುಕೊಳ್ಳಲಾಗದೆ ಇದ್ದೇನೆ, ಕೋಪಿಸಿಕೊಳ್ಳಬೇಡಿ, ನಾನು ಮುಟ್ಟಾಗಿದ್ದೇನೆ," ಎಂದು ಹೇಳಿದಳು. ಎಂದೇ ಲಾಬಾನನು ಎಷ್ಟು ಹುಡುಕಿ ನೋಡಿದರೂ ಆ ವಿಗ್ರಹಗಳನ್ನು ಕಂಡುಹಿಡಿಯಲಾಗಲಿಲ್ಲ.

36 ಆಗ ಯಕೋಬನಿಗೆ ಸಿಟ್ಟು ಬಂದಿತು. ಅವನು ಲಾಬಾನನೊಡನೆ ಹೀಗೆಂದು ವಾಗ್ವಾದ ಮಾಡಿದನು – "ನೀವು ಇಷ್ಟು ಆತುರಪಟ್ಟು ನನ್ನನ್ನು ಹಿಂದಟ್ಟಿ ಬರಲು ನಾನು ಮಾಡಿದ ತಪ್ಪೇನು? [37]ನಾನು ಮಾಡಿದ ದ್ರೋಹವಾದರೂ ಏನು? ನೀವು ನನ್ನ ಸಾಮಾನುಗಳನ್ನೆಲ್ಲಾ ಪರೀಕ್ಷಿಸಿ ನೋಡಿದ್ದಾಯಿತು; ನಿಮ್ಮ ಸೊತ್ತೇನಾದರೂ ಸಿಕ್ಕಿದೆಯೇ? ಸಿಕ್ಕಿದ್ದರೆ ನನ್ನವರ ಮುಂದೆಯೂ ನಿಮ್ಮವರ ಮುಂದೆಯೂ ತಂದಿಡಿ, ನೋಡೋಣ. ಅವರೇ ನಮ್ಮಿಬ್ಬರ ನ್ಯಾಯವನ್ನು ತೀರಿಸಲಿ. [38]ಇದಕ್ಕಾಗಿಯೇ ನಾನು ಇಪ್ಪತ್ತು ವರ್ಷ ನಿಮ್ಮ ಬಳಿ ಇದ್ದುದು? ನಿಮ್ಮ ಆಡುಕುರಿಗಳು ಕಂದು ಹಾಕಲಿಲ್ಲ; ನಿಮ್ಮ ಹಿಂಡಿನ ಟಗರುಗಳನ್ನು ನಾನೇನೂ ತಿಂದುಬಿಡಲಿಲ್ಲ; [39]ಕಾಡುಮೃಗಗಳು ಕೊಂದ ಆಡುಕುರಿಗಳ ಅಳಿದುಳಿಕೆಗಳನ್ನು ನಿಮಗೆ ತಂದುತೋರಿಸದೆ, ನಾನೇ ಈಡು ತೆತ್ತಿದ್ದೇನೆ. ಹಗಲಲ್ಲಾಗಲಿ, ರಾತ್ರಿಯಲ್ಲಾಗಲಿ ಕದ್ದುಹೋದ ಜಾನುವಾರುಗಳಿಗೆ ಪರಿಹಾರವನ್ನು ನನ್ನ ಕೈಯಿಂದಲೆ ಕಿತ್ತುಕೊಂಡಿದ್ದೀರಿ. [40]ಹಗಲಿನ ಬೇಗೆಯಿಂದಲೂ ಇರುಳಿನ ಚಳಿಯಿಂದಲೂ ಕರಗಿ ಹೋಗಿದ್ದೆ; ಕಣ್ಣುಗಳಿಗೆ ನಿದ್ರೆ ದೂರವಾಗಿತ್ತು. [41]ಇಂಥ ಪರಿಸ್ಥಿತಿಯಲ್ಲೂ ಇಪ್ಪತ್ತು ವರ್ಷ ನಿಮ್ಮ ಮನೆಯಲ್ಲಿದ್ದು ನಿಮ್ಮಿಬ್ಬರ ಹೆಣ್ಣು ಮಕ್ಕಳಿಗಾಗಿ ಹದಿನಾಲ್ಕು ವರ್ಷ ಹಾಗೂ ನಿಮ್ಮ ಆಡುಕುರಿಗಳಿಗಾಗಿ ಆರು ವರ್ಷ ದುಡಿದಿದ್ದೇನೆ. ಹೀಗಿದ್ದರೂ ಹತ್ತು ಸಾರಿ ನೀವು ನನ್ನ ಸಂಬಳವನ್ನು ಬದಲಾಯಿಸಿದಿರಿ. [42]ನನ್ನ ತಂದೆಯ ದೇವರು, ಅಬ್ರಹಾಮನ ದೇವರು, ಇಸಾಕನು ಭಯಭಕ್ತಿಯಿಂದ ಸೇವಿಸಿದ ದೇವರು ಆಗಿರುವಂಥವರು ನನ್ನ ಕಡೆ ಇಲ್ಲದೆ ಹೋಗಿದ್ದರೆ, ನಿಶ್ಚಯವಾಗಿ ನೀವು ನನ್ನನ್ನು ಬರಿಗೈಯಾಗಿ ಕಳುಹಿಸುತ್ತಿದ್ದಿರಿ. ದೇವರು ನನ್ನ ಕಷ್ಟದುಃಖವನ್ನೂ ನಾನು ಪಟ್ಟ ಪ್ರಯಾಸವನ್ನೂ ಗಮನಿಸಿದ್ದಾರೆ. ಆದ್ದರಿಂದಲೇ ನಿನ್ನೆಯ ರಾತ್ರಿ ನಿಮಗೆ ಎಚ್ಚರಿಕೆ ನೀಡಿದ್ದಾರೆ," ಎಂದನು.

## ಯಕೋಬನಿಗೂ ಲಾಬಾನನಿಗೂ ಆದ ಒಪ್ಪಂದ

43 ಆಗ ಲಾಬಾನನು ಯಕೋಬನಿಗೆ, "ಈ ಮಹಿಳೆಯರು ನನ್ನ ಪುತ್ರಿಯರು, ಈ ಮಕ್ಕಳು ನನ್ನ ಮೊಮ್ಮಕ್ಕಳು, ಈ ಹಿಂಡುಗಳು ನನಗೆ ಸೇರಿದವು; ನಿನ್ನ ಕಣ್ಮುಂದೆ ಇರುವುದೆಲ್ಲವೂ ನನ್ನವೇ ಇಂತಿರುವಲ್ಲಿ ಈ ನನ್ನ ಪುತ್ರಿಯರಿಗೇ ಆಗಲಿ, ಇವರು ಹೆತ್ತ ಮಕ್ಕಳಿಗೇ ಆಗಲಿ, ನಾನೀಗ ಏನೂ ಹಾನಿ ಮಾಡಹೋಗುವುದಿಲ್ಲ. [44]ಬಾ, ನಾನೂ ನೀನೂ ಒಂದು ಒಪ್ಪಂದ ಮಾಡಿಕೊಳ್ಳೋಣ; ಅದು ನನಗೂ ನಿನಗೂ ಸಾಕ್ಷಿಯಾಗಿರಲಿ," ಎಂದು ಹೇಳಿದನು.

45 ಆಗ ಯಕೋಬನು ಒಂದು ಕಲ್ಲನ್ನು ತೆಗೆದುಕೊಂಡು ಸ್ಮಾರಕಸ್ತಂಭವಾಗಿ ನಿಲ್ಲಿಸಿದನು. [46]ಅದಲ್ಲದೆ, ತನ್ನ ಕಡೆಯವರಿಗೆ, "ಕಲ್ಲುಗಳನ್ನು ಒಟ್ಟುಗೂಡಿಸಿರಿ", ಎನ್ನಲು, ಅವರು ಕಲ್ಲುಗಳನ್ನು ತಂದು ಒಂದು ಕುಪ್ಪೆ ಮಾಡಿದರು; ಅದರ ಬಳಿಯಲ್ಲೆ ಕುಳಿತು ಸಹಭೋಜನ ಮಾಡಿದರು. [47]ಆ ಕುಪ್ಪೆಗೆ ಲಾಬಾನನು 'ಯಗರಸಾಹದೂತ' ಎಂದೂ ಯಕೋಬನು 'ಗೆಲೇದ್' ಎಂದೂ ಹೆಸರಿಟ್ಟರು. [48]ಲಾಬಾನನು ಯಕೋಬನಿಗೆ, "ಈ ದಿನ ನಿನಗೂ ನನಗೂ ಆದ ಒಪ್ಪಂದಕ್ಕೆ ಈ ಕುಪ್ಪೆಯೇ ಸಾಕ್ಷಿ" ಎಂದು ಹೇಳಿದ ಕಾರಣ ಅದಕ್ಕೆ 'ಗೆಲೇದ್' ಎಂದು ಹೆಸರಾಯಿತು. [49]ಅಂತೆಯೇ ಲಾಬಾನನು, "ನಾವು ಒಬ್ಬರನ್ನೊಬ್ಬರು ಬಿಟ್ಟು ಅಗಲಿದಾಗಲು ಸರ್ವೇಶ್ವರ ನಮ್ಮಿಬ್ಬರನ್ನೂ ನೋಡಿಕೊಳ್ಳುತ್ತಾ ಇರಲಿ" ಎಂದು ಹೇಳಿದ್ದರಿಂದ ಆ

ಸ್ಥಳಕ್ಕೆ 'ಮಿಚ್ಪಾ' ಎಂದು ಹೆಸರಾಯಿತು. [50]ಲಾಬಾನನು ಮುಂದುವರೆದು, "ನೀನು ನನ್ನ ಹೆಣ್ಣುಮಕ್ಕಳನ್ನು ನೋಯಿಸಿದರೆ ಅಥವಾ ಬೇರೆ ಹೆಣ್ಣುಗಳನ್ನು ಮದುವೆಮಾಡಿಕೊಂಡರೆ ವಿಚಾರಿಸುವವರು ನಮ್ಮಲ್ಲಿ ಯಾರು ಇಲ್ಲದಿದ್ದರೂ ದೇವರೇ ನಮ್ಮ ಒಪ್ಪಂದಕ್ಕೆ ಸಾಕ್ಷಿಯೆಂಬುದನ್ನು ಮರೆಯಬೇಡ," ಎಂದನು. [51]ಅವನು ಮತ್ತೆ ಯಕೋಬನಿಗೆ, "ಇಗೋ, ನೋಡು ನನಗೂ ನಿನಗೂ ನಡುವೆ ನಿಂತಿರುವ ಕುಪ್ಪೆ ಮತ್ತು ಸ್ಮಾರಕಸ್ತಂಭ. [52]ಕೇಡು ಮಾಡುವ ಉದ್ದೇಶದಿಂದ ನಾನು ಈ ಕುಪ್ಪೆಯನ್ನು ದಾಟಿ ನಿನ್ನ ಬಳಿಗೆ ಬರಕೂಡದು. ಹಾಗೆಯೇ ನೀನು ಈ ಕುಪ್ಪೆಯನ್ನಾಗಲಿ ಸ್ತಂಭವನ್ನಾಗಲಿ ದಾಟಿ ನನ್ನ ಬಳಿಗೆ ಬರಕೂಡದು. ಇದಕ್ಕೆ ಈ ಕುಪ್ಪೆ ಹಾಗೂ ಈ ಸ್ತಂಭವೇ ಸಾಕ್ಷಿ. [53]ಅಬ್ರಹಾಮನ ದೇವರು, ನಾಹೋರನ ದೇವರು, ಅವರ ತಂದೆಗಳ ದೇವರು ನಿನಗೂ ನನಗೂ ನ್ಯಾಯ ತೀರಿಸಲಿ," ಎಂದನು. ಅದೇ ಮೇರೆಗೆ ಯಕೋಬನು, ತನ್ನ ತಂದೆಯಾದ ಇಸಾಕನು ಭಯಭಕ್ತಿಯಿಂದ ಆರಾಧಿಸುವ ದೇವರ ಮೇಲೆ ಆಣೆಯಿಟ್ಟು ಪ್ರಮಾಣ ಮಾಡಿದನು. [54]ಅಲ್ಲದೆ, ಯಕೋಬನು ಆ ಬೆಟ್ಟದ ಮೇಲೆ ಬಲಿಯನ್ನರ್ಪಿಸಿ ಬಂಧುಗಳನ್ನು ತನ್ನೊಡನೆ ಸಹಭೋಜನಕ್ಕೆ ಕರೆಸಿದನು. ಅವರು ಸಹಭೋಜನ ಮಾಡಿ ಆ ರಾತ್ರಿಯೆಲ್ಲಾ ಬೆಟ್ಟದ ಮೇಲಿದ್ದರು. [55]ಬೆಳಿಗ್ಗೆ ಲಾಬಾನನು ಎದ್ದು, ತನ್ನ ಪುತ್ರಿಯರಿಗೂ ಮೊಮ್ಮಕ್ಕಳಿಗೂ ಮುದ್ದಿಟ್ಟು, ಆಶೀರ್ವದಿಸಿ, ತನ್ನ ಊರಿಗೆ ಹೊರಟು ಹೋದನು.

### ಏಸಾವನ ಭೇಟಿಗೆ ಸಿದ್ಧತೆ

**32** ಇತ್ತ ಯಕೋಬನು ತನ್ನ ಪ್ರಯಾಣವನ್ನು ಮುಂದುವರೆಸಿದನು. [2]ದೇವದೂತರು ಅವನೆದುರಿಗೆ ಬಂದರು. ಯಕೋಬನು ಅವರನ್ನು ನೋಡಿ, "ಇದು ದೇವರ ಪಾಳೆಯ" ಎಂದು ಹೇಳಿ ಆ ಸ್ಥಳಕ್ಕೆ 'ಮಹನಯಿಮ್' ಎಂದು ಹೆಸರಿಟ್ಟನು.

3 ಬಳಿಕ ಯಕೋಬನು ಎದೋಮ್ಯರ ನಾಡಿನ 'ಸೇಯೀರ್' ಎಂಬಲ್ಲಿ ವಾಸವಾಗಿದ್ದ ತನ್ನ ಅಣ್ಣ ಏಸಾವನ ಬಳಿಗೆ ಮುಂದಾಳುಗಳನ್ನು ಕಳಿಸಿದನು. [4]ಕಳುಹಿಸುವಾಗ ಅವರಿಗೆ, "ನೀವು ನನ್ನೊಡೆಯ ಏಸಾವನ ಬಳಿಗೆ ಹೋಗಿ ಈ ಸಮಾಚಾರವನ್ನು ಕೊಡಿ: 'ನಿಮ್ಮ ದಾಸ ಯಕೋಬನಾದ ನಾನು ಇಷ್ಟು ದಿನ ಲಾಬಾನನ ಬಳಿ ವಾಸಮಾಡಬೇಕಾಗಿ ಬಂದಿತು. [5]ನನಗೆ ಎತ್ತು – ಕತ್ತೆ, ಆಡು – ಕುರಿ, ದಾಸ–ದಾಸಿಯರು ಇದ್ದಾರೆ. ನನ್ನೊಡೆಯರಾದ ನೀವು ನನ್ನ ಬಗ್ಗೆ ದಯದಾಕ್ಷಿಣ್ಯವುಳ್ಳವರಾಗಿರಬೇಕೆಂಬ ಕೋರಿಕೆಯಿಂದ ನಮ್ಮನ್ನು ನಿಮ್ಮ ಬಳಿಗೆ ಕಳಿಸಿದ್ದಾರೆ' ಎಂದು ತಿಳಿಸಿರಿ" ಎಂದನು.

6 ಆ ಆಳುಗಳು ಹೋಗಿ ಯಕೋಬನ ಬಳಿಗೆ ಹಿಂದಿರುಗಿ ಬಂದು, "ನಾವು ನಿಮ್ಮ ಅಣ್ಣ ಏಸಾವನ ಬಳಿಗೆ ಹೋಗಿದ್ದೆವು. ಅವರು ನಾನೂರು ಜನರ ಸಮೇತ ನಿಮ್ಮನ್ನು ಎದುರುಗೊಳ್ಳಲು ಬರುತ್ತಿದ್ದಾರೆ," ಎಂದು ತಿಳಿಸಿದರು. [7]ಆಗ ಯಕೋಬನು ಬಹಳ ದಿಗಿಲುಗೊಂಡನು, ಕಳವಳಗೊಂಡನು; ತನ್ನ ಜನರನ್ನೂ ಕುರಿ, ದನ, ಒಂಟೆಗಳನ್ನೂ ಎರಡು ಪರಿವಾರಗಳಾಗಿ ವಿಂಗಡಿಸಿದನು. [8]ಏಸಾವನು ಒಂದು ಪರಿವಾರದ ಮೇಲೆ ಬಿದ್ದರೆ ಇನ್ನೊಂದು ತಪ್ಪಿಸಿಕೊಳ್ಳಬಹುದೆಂಬುದು ಅವನ ಯೋಚನೆಯಾಗಿತ್ತು.

9 ಇದಲ್ಲದೆ ಯಕೋಬನು ದೇವರನ್ನು ಹೀಗೆಂದು ಪ್ರಾರ್ಥಿಸಿದನು: "ಸ್ವಾಮಿ ಸರ್ವೇಶ್ವರಾ, ನನ್ನ ತಂದೆ ತಾತಂದಿರಾದ ಇಸಾಕ, ಅಬ್ರಹಾಮರ ದೇವರೇ, ಸ್ವಂತ ನಾಡಿಗೆ, ಬಂಧುಬಳಗದವರ ಬಳಿಗೆ ಹಿಂದಿರುಗಬೇಕೆಂದು ನನಗೆ ನೀವೇ ಆಜ್ಞಾಪಿಸಿದಿರಿ; 'ನಿನಗೆ ಒಳ್ಳೆಯದನ್ನೇ ಮಾಡುತ್ತೇನೆ' ಎಂದು ವಾಗ್ದಾನ ಮಾಡಿದವರು ನೀವೇ ಅಲ್ಲವೆ? [10]ದಾಸನಾದ ನನ್ನ ಮೇಲೆ ಎಷ್ಟೋ ಪ್ರೀತಿಯನ್ನಿಟ್ಟು ನಿಮ್ಮ ವಾಗ್ದಾನವನ್ನು ನೆರವೇರಿಸಿದ್ದೀರಿ. ನಾನು ಅದಕ್ಕೆ ಕೇವಲ ಅಪಾತ್ರನು. ನಾನು ಮೊದಲು ಈ ಜೋರ್ಡನ್ ನದಿಯನ್ನು ದಾಟಿದಾಗ ನನಗಿದ್ದುದು ಒಂದು ಊರುಗೋಲು ಮಾತ್ರ. ಈಗ ಎರಡು ಪರಿವಾರಗಳಿಗೆ ಒಡೆಯನಾಗಿದ್ದೇನೆ. [11]ನನ್ನ ಅಣ್ಣ ಏಸಾವನು ಬಂದು ನನ್ನನ್ನೂ ನನ್ನ ಮಕ್ಕಳನ್ನೂ ಅವರ ತಾಯಂದಿರನ್ನೂ ಕೊಲ್ಲುವನೋ ಏನೋ ಎಂಬ ಭಯ ನನಗಿದೆ. ಅವನ ಕೈಗೆ ಸಿಕ್ಕದಂತೆ ನಮ್ಮನ್ನು ಕಾಪಾಡಬೇಕೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ. [12]'ನಿನಗೆ ಒಳ್ಳೆಯದನ್ನೇ ಮಾಡಿ ನಿನ್ನ ಸಂತತಿಯನ್ನು ಎಣಿಸಲಾಗದ ಕಡಲ ತೀರದ ಮರಳಿನಂತೆ ಹೆಚ್ಚಿಸುವೆನು,' ಎಂದು ಹೇಳಿದವರು ನೀವೇ ಅಲ್ಲವೇ?"

13–15ಯಕೋಬನು ಆ ರಾತ್ರಿಯನ್ನು ಅಲ್ಲೇ ಕಳೆದನು. ಇನ್ನೂರು ಆಡು, ಇಪ್ಪತ್ತು ಹೋತ, ಇನ್ನೂರು
ಕುರಿ, ಇಪ್ಪತ್ತು ಟಗರು, ಹಾಲು ಕರೆಯುವ ಮೂವತ್ತು ಒಂಟೆ ಮತ್ತು ಅವುಗಳ ಮರಿ, ನಲವತ್ತು ಆಕಳು,
ಹತ್ತು ಹೋರಿ, ಇಪ್ಪತ್ತು ಹೆಣ್ಣುಕತ್ತೆ, ಹತ್ತು ಗಂಡುಕತ್ತೆ ಇವುಗಳನ್ನು ತನ್ನ ಅಣ್ಣ ಏಸಾವನಿಗೆ ಕಾಣಿಕೆಯಾಗಿ
ತೆಗೆದುಕೊಂಡನು. 16ಇವುಗಳನ್ನು ಹಿಂಡುಹಿಂಡಾಗಿ ವಿಂಗಡಿಸಿ ತನ್ನ ಆಳುಗಳ ವಶಕ್ಕೆ ಒಪ್ಪಿಸಿದನು. "ನೀವು
ನನಗಿಂತ ಮುಂಚಿತವಾಗಿ ಹೋಗಿರಿ; ಹಿಂಡು ಹಿಂಡಿಗೂ ಮಧ್ಯೆ ಸ್ಥಳವಿರಲಿ," ಎಂದು ಆ ಆಳುಗಳಿಗೆ
ಹೇಳಿದನು. 17ಮೊದಲನೆಯ ಹಿಂಡಿನ ಆಳಿಗೆ, "ನನ್ನ ಅಣ್ಣ ಏಸಾವನು ನಿನ್ನೆದುರಿಗೆ ಬಂದು, "ನೀನು
ಯಾರ ಆಳು? ಎಲ್ಲಿಗೆ ಹೋಗುತ್ತಿರುವೆ? ನಿನ್ನ ಮುಂದೆ ಇರುವ ಇವೆಲ್ಲ ಯಾರವು?" ಎಂದು ಕೇಳಿದರೆ
ನೀನು, 18'ಇವು ನಿಮ್ಮ ದಾಸ ಯಕೋಬನವು; ಒಡೆಯರಾದ ನಿಮಗೆ ಇವುಗಳನ್ನು ಕಾಣಿಕೆಯಾಗಿ
ಕಳಿಸಿಕೊಟ್ಟಿದ್ದಾರೆ; ಅವರೂ ನಮ್ಮ ಹಿಂದೆ ಬರುತ್ತಿದ್ದಾರೆ' ಎಂದು ಉತ್ತರ ಕೊಡಬೇಕು," ಎಂಬುದಾಗಿ
ಅಪ್ಪಣೆ ಕೊಟ್ಟನು. 19ಹಾಗೆಯೇ ಎರಡನೆಯವನಿಗೂ ಮೂರನೆಯವನಿಗೂ ಹಿಂಡುಗಳ ಹಿಂದೆ
ಹೋದವರೆಲ್ಲರಿಗೂ, "ನೀವು ಏಸಾವನನ್ನು ಕಾಣುವಾಗ ಇದೇ ರೀತಿಯಾಗಿ ಮಾತನಾಡಬೇಕು. 20'ನಿಮ್ಮ
ದಾಸ ಯಕೋಬನು ನಮ್ಮ ಹಿಂದೆ ಬರುತ್ತಿದ್ದಾರೆ,' ಎನ್ನಿರಿ" ಎಂದು ಆಜ್ಞಾಪಿಸಿದನು. ಯಕೋಬನು
ತನ್ನೊಳಗೆ, "ನನಗೆ ಮುಂಚಿತವಾಗಿ ಹೋಗುವ ಈ ಕಾಣಿಕೆಯಿಂದ ಏಸಾವನನ್ನು ಸಮಾಧಾನ ಪಡಿಸಿದ
ಮೇಲೆ ನಾನು ಅವನನ್ನು ಭೇಟಿ ಆಗುತ್ತೇನೆ. ಆಗ ಒಂದು ವೇಳೆ ನನ್ನನ್ನು ಪ್ರೀತಿಯಿಂದ ಅಂಗೀಕರಿಸುವನು,"
ಎಂದುಕೊಂಡನು. 21ಆದಕಾರಣ ಅವನು ಆ ಕಾಣಿಕೆಯನ್ನು ಮುಂಚಿತವಾಗಿ ಕಳಿಸಿ, ತಾನು ಆ ರಾತ್ರಿ ಆ
ತನ್ನ ಪಾಳೆಯದೊಳಗೇ ಇದ್ದನು.

## ದೇವದೂತನೊಡನೆ ಮಲ್ಲಯುದ್ಧ

22 ಆ ರಾತ್ರಿ ಯಕೋಬನು ತನ್ನ ಇಬ್ಬರು ಹೆಂಡತಿಯರನ್ನೂ ಇಬ್ಬರು ದಾಸಿಯರನ್ನೂ ಹನ್ನೊಂದು
ಮಂದಿ ಮಕ್ಕಳನ್ನೂ ಕರೆದುಕೊಂಡು 'ಯಬ್ಬೋಕ್' ಹೊಳೆಯನ್ನು ದಾಟುವ ಸ್ಥಳದಲ್ಲಿ ದಾಟಿದನು.
23ಅವರನ್ನೂ ತನ್ನ ಆಸ್ತಿ ಪಾಸ್ತಿಯನ್ನೂ ದಾಟಿಸಿದ ಮೇಲೆ 24ಯಕೋಬನು ಒಂಟಿಗನಾಗಿ ಹಿಂದೆ ನಿಂತಿದ್ದನು.
ಯಾರೋ ಒಬ್ಬ ಪುರುಷ ಬೆಳಗಾಗುವ ತನಕ ಅವನ ಸಂಗಡ ಹೋರಾಡಿದನು.

25 ಆ ಪುರುಷ ತಾನು ಗೆಲ್ಲದೆ ಇರುವುದನ್ನು ಕಂಡು ಯಕೋಬನ ತೊಡೆಯ ಕೀಲನ್ನು
ಮುಟ್ಟಿದ್ದರಿಂದ ಹೋರಾಡುತ್ತಿರುವಾಗಲೆ ಯಕೋಬನ ತೊಡೆಯ ಕೀಲು ತಪ್ಪಿತು. 26ಆ ಪುರುಷ, "ನನ್ನನ್ನು,
ಹೋಗಬಿಡು, ಬೆಳಗು ಆಗುತ್ತಿದೆ," ಎನ್ನಲು ಯಕೋಬನು, "ನೀವು ನನ್ನನ್ನು ಆಶೀರ್ವದಿಸಿದ ಹೊರತು,
ನಿಮ್ಮನ್ನು ಹೋಗಬಿಡುವುದಿಲ್ಲ," ಎಂದನು.

27 ಆ ಪುರುಷ, "ನಿನ್ನ ಹೆಸರೇನು?" ಎಂದು ಕೇಳಿದ್ದಕ್ಕೆ ಯಕೋಬನು, "ನನ್ನ ಹೆಸರು
ಯಕೋಬ" ಎಂದನು.

28 ಅವನು ಯಕೋಬನಿಗೆ, "ಇನ್ನು ಮೇಲೆ ನೀನು ಯಕೋಬ ಎನಿಸಿಕೊಳ್ಳುವುದಿಲ್ಲ; ದೇವರ
ಸಂಗಡ ಹಾಗು ಮನುಷ್ಯರ ಸಂಗಡ ಹೋರಾಡಿ ಗೆದ್ದವನಾದ್ದರಿಂದ ನಿನಗೆ 'ಇಸ್ರಯೇಲ್' ಎಂದು
ಹೆಸರುಂಟಾಗುವುದು," ಎಂದು ಹೇಳಿದನು.

29 ಯಕೋಬನು, "ನಿಮ್ಮ ಹೆಸರನ್ನು ದಯವಿಟ್ಟು ನನಗೆ ತಿಳಿಸಬೇಕು", ಎಂದಾಗ ಆ ಪುರುಷ,
"ನನ್ನ ಹೆಸರನ್ನು ವಿಚಾರಿಸುವುದೇಕೆ?" ಎಂದು ಹೇಳಿ ಅಲ್ಲೇ ಅವನನ್ನು ಆಶೀರ್ವದಿಸಿದನು.

30 ಯಕೋಬನು, "ನಾನು ದೇವರನ್ನು ಮುಖಾಮುಖಿಯಾಗಿ ಕಂಡಿದ್ದರೂ ಪ್ರಾಣಸಹಿತ
ಉಳಿದಿದ್ದೇನಲ್ಲಾ!" ಎಂದುಕೊಂಡು ಆ ಸ್ಥಳಕ್ಕೆ 'ಪೆನೀಯೇಲ್' ಎಂದು ಹೆಸರಿಟ್ಟನು. 31ಅವನು
ಪೆನೂವೇಲನ್ನು ದಾಟುತ್ತಿರುವಾಗ ಸೂರ್ಯೋದಯ ಆಯಿತು; ಕೀಲುಕಳಚಿದ ತೊಡೆಯ ನಿಮಿತ್ತ ಅವನು
ಕುಂಟಿಕೊಂಡೇ ನಡೆದನು. 32ಆ ಪುರುಷನು ಯಕೋಬನ ತೊಡೆಯ ಕೀಲನ್ನು ಮುಟ್ಟಿದ್ದರಿಂದ
ಇಸ್ರಯೇಲರು ಇಂದಿನವರೆಗೂ ತೊಡೆಯ ಕೀಲಿನ ಮೇಲಿರುವ ಮಾಂಸವನ್ನು ತಿನ್ನುವುದಿಲ್ಲ.

## ಯಕೋಬ – ಏಸಾವರ ಭೇಟಿ

**33** ಯಕೋಬನು ಕಣ್ಣೆತ್ತಿ ನೋಡಿದಾಗ ಏಸಾವನು ನಾನೂರು ಮಂದಿ ಜನರ ಸಮೇತ ಬರುತ್ತಿದ್ದನು.
ಕೂಡಲೆ ಅವನು ಲೇಯಳಿಗೂ ರಾಖೇಲಳಿಗೂ ಇಬ್ಬರು ದಾಸಿಯರಿಗೂ ಅವರವರ ಮಕ್ಕಳನ್ನು ಒಪ್ಪಿಸಿದನು.
[2]ಅವರನ್ನು ಬೇರೆ ಬೇರೆ ಮಾಡಿ ಮುಂದುಗಡೆಯಲ್ಲಿ ದಾಸಿಯರನ್ನೂ ಅವರ ಮಕ್ಕಳನ್ನೂ, ಅವರ ಹಿಂದೆ
ಲೇಯಳನ್ನೂ ಆಕೆಯ ಮಕ್ಕಳನ್ನೂ, ಕಡೆಯಲ್ಲಿ ರಾಖೇಲಳನ್ನೂ ಜೋಸೆಫನನ್ನೂ ನಿಲ್ಲಿಸಿದನು. [3]ತಾನೇ
ಅವರ ಮುಂದಾಗಿ ನಡೆದನು. ತನ್ನ ಅಣ್ಣನನ್ನು ಸಮೀಪಿಸುತ್ತಿರುವಾಗ ಏಳು ಸಾರಿ ನೆಲದ ತನಕ ಬಗ್ಗಿ
ನಮಸ್ಕರಿಸಿದನು. [4]ಆದರೆ ಏಸಾವನು ಅವನನ್ನು ಎದುರುಗೊಳ್ಳಲು ಓಡಿ ಬಂದು ಅವನ ಕೊರಳನ್ನು
ಅಪ್ಪಿಕೊಂಡು ಮುದ್ದಿಟ್ಟನು. [5]ಅವರಿಬ್ಬರ ಕಣ್ಣಲ್ಲೂ ನೀರು ಹರಿಯಿತು. ಬಳಿಕ ಏಸಾವನು ಕಣ್ಣೆತ್ತಿ ಆ
ಮಹಿಳೆಯರನ್ನೂ ಮಕ್ಕಳನ್ನೂ ನೋಡಿ, "ನಿನ್ನ ಜೊತೆಯಲ್ಲಿರುವ ಇವರು ಯಾರು?" ಎಂದು
ವಿಚಾರಿಸಿದನು.

ಯಕೋಬನು, "ದೇವರು ನಿಮ್ಮ ದಾಸನಾದ ನನಗೆ ಅನುಗ್ರಹಿಸಿದ ಮಕ್ಕಳು ಇವರೇ" ಎಂದು
ಹೇಳಿದನು. [6]ಆಗ ಅವನ ದಾಸಿಯರಿಬ್ಬರೂ ತಮ್ಮ ಮಕ್ಕಳನ್ನು ಕರೆದುಕೊಂಡು ಹತ್ತಿರಕ್ಕೆ ಬಂದು ನಮಸ್ಕಾರ
ಮಾಡಿದರು. [7]ಆಮೇಲೆ ಲೇಯಳು ತನ್ನ ಮಕ್ಕಳೊಡನೆ ಬಂದು ಅಡ್ಡಬಿದ್ದಳು; ಕಡೆಯಲ್ಲಿ ಜೋಸೆಫನೂ
ರಾಖೇಲಳೂ ಬಂದು ಎರಗಿದರು.

8 ಏಸಾವನು, "ನಾನು ದಾರಿಯಲ್ಲಿ ಕಂಡ ಆ ಪರಿವಾರ ಏತಕ್ಕೆ?" ಎಂದು ಕೇಳಿದನು.
ಯಕೋಬನು, "ಒಡೆಯನ ದಯೆ ನನಗೆ ದೊರಕಲೆಂದು ನಾನು ತಮಗೆ ಅದನ್ನು ಕಳಿಸಿ ಕೊಟ್ಟೆ," ಎಂದನು.

9 ಏಸಾವನು, "ತಮ್ಮಾ, ನನಗೆ ಬೇಕಾದಷ್ಟು ಆಸ್ತಿಯುಂಟು; ನಿನ್ನದು ನಿನಗೇ ಇರಲಿ," ಎಂದನು.

10 ಅದಕ್ಕೆ ಯಕೋಬನು, "ಇಲ್ಲ, ಹಾಗೆನ್ನಬಾರದು. ನಿಮಗೆ ನನ್ನ ಮೇಲೆ ದಯೆಯಿರುವುದು
ನಿಜವಾಗಿದ್ದಲ್ಲಿ ನಾನು ಸಮರ್ಪಿಸುವ ಕಾಣಿಕೆಯನ್ನು ಅಂಗೀಕರಿಸಲೇಬೇಕು. ನಿಮ್ಮನ್ನು ನೋಡಿದ್ದು
ದೇವರನ್ನು ನೋಡಿದ ಹಾಗಾಯಿತು. ನನ್ನನ್ನು ಪ್ರೀತಿಯಿಂದ ಸ್ವಾಗತಿಸಿದ್ದೇ ಸಾಕು. [11]ದೇವರ ಕೃಪೆಯಿಂದ
ನನಗೆ ಬೇಕಾದುದೆಲ್ಲ ಇದೆ; ಆದಕಾರಣ ನಾನು ಸಮರ್ಪಿಸುವ ಕಾಣಿಕೆಯನ್ನು ತಾವು ದಯವಿಟ್ಟು
ಅಂಗೀಕರಿಸಬೇಕು," ಎಂದು ಹೇಳಿ ಒತ್ತಾಯಪಡಿಸಿದ್ದರಿಂದ ಏಸಾವನು ಆ ಕಾಣಿಕೆಯನ್ನು
ತೆಗೆದುಕೊಂಡನು.

12 ತರುವಾಯ ಏಸಾವನು, "ಗುಡಾರಗಳನ್ನು ಬಿಟ್ಟು ಮುಂದಕ್ಕೆ ಪ್ರಯಾಣ ಬೆಳೆಸೋಣ; ನಾನೂ
ನಿನ್ನ ಸಂಗಡ ಬರುತ್ತೇನೆ," ಎಂದನು. [13]ಅದಕ್ಕೆ ಯಕೋಬನು, "ನನ್ನೊಡೆಯರಾದ ನಿಮಗೆ ತಿಳಿದಿರುವಂತೆ
ನನ್ನ ಮಕ್ಕಳು ಎಳೆಯಪ್ರಾಯದವರು; ಈದಿರುವ ದನಕುರಿಗಳೂ ನನಗಿವೆ; ಒಂದೇ ದಿನ ಹೆಚ್ಚಾಗಿ ದಾರಿ
ನಡೆಸಿದೆನಾದರೆ ಆಡುಕುರಿಗಳೆಲ್ಲವೂ ಸತ್ತು ಹೋದಾವು. [14]ತಾವು ದಯವಿಟ್ಟು ದಾಸನಿಗಿಂತಲೂ ಮುಂಚೆ
ಹೊರಡಬಹುದು. ನಾನು ನನ್ನ ಮುಂದಿರುವ ಆಡುಕುರಿಗಳ ಹಾಗೂ ಮಕ್ಕಳ ನಡಿಗೆಗೆ ತಕ್ಕ ಹಾಗೆ
ಮೆಲ್ಲಮೆಲ್ಲನೆ ನಡೆದು ನನ್ನೊಡೆಯರ ನಾಡಾದ ಎದೋಮಿಗೆ ಬರುತ್ತೇನೆ," ಎಂದನು.

15 ಏಸಾವನು, "ಹಾಗಾದರೆ, ನನ್ನ ಆಳುಗಳಲ್ಲಿ ಕೆಲವರನ್ನು ನಿನ್ನ ಸಂಗಡ ಬಿಟ್ಟು ಹೋಗುತ್ತೇನೆ,"
ಎಂದನು. ಯಾಕೋಬನು, "ಏತಕ್ಕೆ, ಬೇಡಿ. ನನ್ನೊಡೆಯರ ದಯೆ ನನ್ನ ಮೇಲಿದ್ದರೆ ಸಾಕು," ಎಂದು
ಹೇಳಿದನು. [16]ಏಸಾವನು ಆ ದಿನವೇ ಎದೋಮ್ ನಾಡಿಗೆ ಹೊರಟು ಹೋದನು. [17]ಇತ್ತ ಯಾಕೋಬನು
ಪ್ರಯಾಣ ಬೆಳೆಸುತ್ತಾ ಸುಕ್ಕೋತಿಗೆ ಬಂದನು. ಅಲ್ಲಿ ತನಗೋಸ್ಕರ ಮನೆಯನ್ನೂ ಮಂದೆಗಳಿಗೋಸ್ಕರ
ಕೊಟ್ಟಿಗೆಗಳನ್ನೂ ಕಟ್ಟಿಸಿದನು. ಈ ಕಾರಣ ಆ ಸ್ಥಳಕ್ಕೆ 'ಸುಕ್ಕೋತ್' ಎಂದು ಹೆಸರಾಯಿತು.

18 ಯಕೋಬನು ಮೆಸಪೊಟೇಮಿಯಾದಿಂದ ಹಿಂದಿರುಗಿ ಬಂದು ಕಾನಾನ್ ನಾಡಿನ ಶೆಕೆಮ್
ಪಟ್ಟಣಕ್ಕೆ ಸುರಕ್ಷಿತವಾಗಿ ಸೇರಿದನು. ಆ ಪಟ್ಟಣದ ಮುಂದೆಯೇ ತನ್ನ ಗುಡಾರಗಳನ್ನು ಹಾಕಿಸಿಕೊಂಡನು.
[19]ಗುಡಾರಹಾಕಿಸಿದ ಭೂಮಿಯನ್ನು ಶೆಕೆಮಿನ ತಂದೆಯಾದ ಹಮೋರನ ಮಕ್ಕಳಿಗೆ ನೂರು ವರಹಗಳನ್ನು
ಕೊಟ್ಟು ಅವರಿಂದ ಕೊಂಡುಕೊಂಡನು. [20]ಅಲ್ಲೇ ಒಂದು ಬಲಿಪೀಠವನ್ನು ಕಟ್ಟಿಸಿ ಅದಕ್ಕೆ 'ಏಲ್–ಏಲೋಹೆ–
ಇಸ್ರಯೇಲ್' ಎಂದು ಹೆಸರಿಟ್ಟನು.

## ದೀನಳಿಗಾದ ಮಾನಭಂಗ

**34** ಯಕೋಬನಿಗೆ ಲೇಯಳಲ್ಲಿ ಹುಟ್ಟಿದ ದೀನಳು ಒಂದು ದಿನ ಆ ನಾಡಿನ ಮಹಿಳೆಯರನ್ನು ನೋಡಲು
ಹೊರಗೆ ಹೋಗಿ ಇದ್ದಳು. 2ಹಿವ್ವಿಯನಾದ ಹಮೋರನ ಮಗನೂ ಆ ನಾಡಿಗೆ ಒಡೆಯನೂ ಆದ ಶೆಕೆಮನು
ಆಕೆಯನ್ನು ನೋಡಿ, ಎತ್ತಿಕೊಂಡು ಹೋಗಿ, ಆಕೆಯನ್ನು ಜತೆಗೂಡಿ ಮಾನಭಂಗ ಮಾಡಿದನು. 3ಅವನ
ಮನಸ್ಸು ಯಕೋಬನ ಮಗಳಾದ ಆ ದೀನಳ ಮೇಲೆಯೇ ತಲ್ಲೀನಗೊಂಡಿತ್ತು. ಆಕೆಯನ್ನು ಮೋಹಿಸಿ
ಅವಳ ಮನವೊಲಿಸುವಂಥ ಮಾತುಗಳನ್ನಾಡಿದನು. 4ತನ್ನ ತಂದೆ ಹಮೋರನನ್ನು, "ಆ ಹುಡುಗಿಯನ್ನು
ನನಗೆ ಮದುವೆ ಮಾಡಿಸಬೇಕು," ಎಂದು ಕೇಳಿಕೊಂಡನು.

5 ತನ್ನ ಮಗಳಾದ ದೀನಳಿಗೆ ಶೆಕೆಮನಿಂದ ಮಾನಭಂಗವಾಯಿತೆಂಬ ಸಮಾಚಾರ ಯಕೋಬನಿಗೆ
ಮುಟ್ಟಿದಾಗ ಅವನ ಗಂಡು ಮಕ್ಕಳು ಅಡವಿಯಲ್ಲಿ ದನಕಾಯುತ್ತಿದ್ದರು. ಅವರು ಬರುವ ತನಕ
ಯಕೋಬನು ಸುಮ್ಮನೆ ಇದ್ದನು. 6ಅಷ್ಟರಲ್ಲಿ, ಶೆಕೆಮನ ತಂದೆ ಹಮೋರನು ಯಕೋಬನ ಸಂಗಡ
ಮಾತನಾಡಲು ಊರಿಂದ ಹೊರಟುಬಂದನು. 7ಇತ್ತ ಯಕೋಬನ ಗಂಡು ಮಕ್ಕಳು ತಂಗಿಯ
ಸಂಗತಿಯನ್ನು ಕೇಳಿ ಅಡವಿಯಿಂದ ಬಂದರು. ಶೆಕೆಮನು ತಮ್ಮ ತಂಗಿಯನ್ನು ಬಲಾತ್ಕಾರದಿಂದ ಕೂಡಿ,
ಮಾಡಬಾರದನ್ನು ಮಾಡಿ, ಇಸ್ರಯೇಲರಿಗೆ ಘನ ಅವಮಾನವನ್ನು ಮಾಡಿದ್ದರಿಂದ ಅವರು
ತಳಮಳಗೊಂಡು ಕಡುಕೋಪದಿಂದ ಇದ್ದರು.

8 ಹಮೋರನು ಅವರಿಗೆ, "ನನ್ನ ಮಗ ಶೆಕೆಮನು ನಿಮ್ಮ ಹುಡುಗಿಯನ್ನು ಬಹಳ ಆಶೆಯಿಂದ
ಮೋಹಿಸಿದ್ದಾನೆ; ದಯವಿಟ್ಟು ಆಕೆಯನ್ನು ಅವನಿಗೆ ಮದುವೆ ಮಾಡಿಕೊಡಬೇಕು; 9ಅಲ್ಲದೆ ನೀವು ನಮ್ಮಲ್ಲೇ
ವಾಸವಾಗಿರಬಹುದು; ನಿಮ್ಮ ಹೆಣ್ಣುಮಕ್ಕಳನ್ನು ನಮಗೆ ಕೊಡಬೇಕು; ನಮ್ಮ ಹೆಣ್ಣುಮಕ್ಕಳನ್ನು ನೀವು
ತೆಗೆದುಕೊಳ್ಳಬೇಕು; ನಾವು ಬೀಗರಾಗಿ ಬಾಳಬೇಕು, ನಾಡೆಲ್ಲಾ ನಿಮ್ಮ ಮುಂದೆ ಇದೆ. 10ಇದರಲ್ಲಿ ವಾಸಿಸಿ,
ವ್ಯಾಪಾರಮಾಡಿ, ನೀವು ಆಸ್ತಿಯನ್ನು ಸಂಪಾದಿಸಿಕೊಳ್ಳಬಹುದು," ಎಂದು ಹೇಳಿದನು.

11 ಬಳಿಕ ಶೆಕೆಮನು ಆ ಹುಡುಗಿಯ ತಂದೆ ಮತ್ತು ಸಹೋದರರಿಗೆ, "ನನ್ನ ಮೇಲೆ ನಿಮಗೆ
ಕೃಪೆಯಿರಲಿ; ನೀವು ಹೇಳುವಷ್ಟನ್ನು ಕೊಡುತ್ತೇನೆ. 12ಹೆಣ್ಣಿಗಾಗಿ ತೆರವನ್ನೂ ಕಾಣಿಕೆಯನ್ನೂ ನೀವು ಹೇಳುವ
ಮೇರೆಗೆ ಎಷ್ಟಾದರೂ ಕೊಡುತ್ತೇನೆ. ಹೇಗೂ ಆ ಹುಡುಗಿಯನ್ನು ನನಗೆ ಮದುವೆ ಮಾಡಿಕೊಡಿ," ಎಂದು
ಕೇಳಿಕೊಂಡನು.

13 ಶೆಕೆಮನು ತಮ್ಮ ತಂಗಿ ದೀನಳನ್ನು ಕೆಡಿಸಿದ್ದರಿಂದ ಯಕೋಬನ ಮಕ್ಕಳು ಅವನಿಗೂ ಅವನ
ತಂದೆ ಹಮೋರನಿಗೂ ಕಪಟದಿಂದ ಈ ಉತ್ತರ ಕೊಟ್ಟರು: 14"ಸುನ್ನತಿ ಇಲ್ಲದವರಿಗೆ ನಮ್ಮ ತಂಗಿಯನ್ನು
ಕೊಡುವುದಕ್ಕೆ ಆಗುವುದಿಲ್ಲ. ಹಾಗೆ ಕೊಡುವುದು ನಮಗೆ ಅವಮಾನಕರ. 15ನಿಮ್ಮಲ್ಲಿ ಗಂಡಸರೆಲ್ಲರು
ಸುನ್ನತಿಮಾಡಿಸಿಕೊಂಡು ನಮ್ಮಂತೆ ಆಗಬೇಕು. 16ಹಾಗೆ ಮಾಡಿಸಿಕೊಂಡರೆ ಮಾತ್ರ ನಾವು ನಿಮ್ಮ ಮಾತಿನಂತೆ
ನಮ್ಮ ಹೆಣ್ಣು ಮಕ್ಕಳನ್ನು ನಿಮಗೆ ಕೊಡಬಹುದು, ನಿಮ್ಮ ಹೆಣ್ಣು ಮಕ್ಕಳನ್ನು ನಾವು ತೆಗೆದುಕೊಳ್ಳಬಹುದು;
ನಿಮ್ಮಲ್ಲಿ ವಾಸಮಾಡಿ, ನಿಮ್ಮೊಡನೆ ಒಂದೇ ಕುಲವಾಗಿರಬಹುದು. 17ನೀವು ನಮ್ಮ ಮಾತಿಗೆ ಒಪ್ಪಿ ಸುನ್ನತಿ
ಮಾಡಿಸಿಕೊಳ್ಳದೆ ಹೋದರೆ ನಾವು ನಮ್ಮ ಹುಡುಗಿಯನ್ನು ಕರೆದುಕೊಂಡು ಹೊರಟು ಹೋಗುತ್ತೇವೆ,"
ಎಂದರು.

18 ಅವರು ಹೇಳಿದ್ದು ಹಮೋರನಿಗೂ ಅವನ ಮಗ ಶೆಕೆಮನಿಗೂ ಉಚಿತವೆಂದೇ ತೋಚಿತು. 19ಆ
ಯುವಕನು ಯಕೋಬನ ಮಗಳಲ್ಲಿ ಅನುರಕ್ತನಾಗಿದ್ದುದರಿಂದ ಅವರು ಹೇಳಿದಂತೆ ಮಾಡಲು
ಹಿಂಜರಿಯಲಿಲ್ಲ; ಅಪ್ಪನ ಮನೆಗೆ ಅವನೇ ಮುಖ್ಯಸ್ಥನಾಗಿದ್ದನು.

20 ಎಂತಲೆ ಹಮೋರನು ಮತ್ತು ಅವನ ಮಗ ಶೆಕೆಮನು ಊರಬಾಗಿಲಿಗೆ ಬಂದರು.
ಊರಿನವರನ್ನೆಲ್ಲಾ ಸಂಬೋಧಿಸುತ್ತಾ, ಹೀಗೆ ಎಂದರು: 21"ಈ ಜನರು ನಮ್ಮೊಡನೆ ಶಾಂತಿ
ಸಮಾಧಾನದಿಂದಿದ್ದಾರೆ; ಇವರು ನಮ್ಮ ನಾಡಿನಲ್ಲೇ ವಾಸಮಾಡಿಕೊಂಡು ವ್ಯಾಪಾರ ಮಾಡಲಿ; ಈ ನಾಡು

ಅವರಿಗೂ ನಮಗೂ ಸಾಕಾಗುವಷ್ಟು ವಿಸ್ತಾರವಾಗಿದೆ. ನಾವು ಅವರ ಹೆಣ್ಣು ಮಕ್ಕಳನ್ನು
ಮದುವೆಮಾಡಿಕೊಳ್ಳೋಣ, ನಮ್ಮ ಹೆಣ್ಣುಮಕ್ಕಳನ್ನು ಅವರಿಗೆ ಕೊಡೋಣ. [22]ಆದರೆ ಅವರು ಸುನ್ನತಿ
ಮಾಡಿಕೊಂಡವರು. ಆದ್ದರಿಂದ ನಮ್ಮಲ್ಲಿಯೂ ಗಂಡಸರೆಲ್ಲರು ಸುನ್ನತಿಮಾಡಿಸಿಕೊಳ್ಳಬೇಕು ಎನ್ನುತ್ತಾರೆ.
ಹಾಗೆ ಮಾಡಿಸಿಕೊಂಡರೆ ಮಾತ್ರ ಇವರು ನಮ್ಮಲ್ಲಿ ವಾಸಮಾಡುವುದಕ್ಕೂ ನಮ್ಮ ಸಂಗಡ ಒಂದೇ
ಕುಲವಾಗುವುದಕ್ಕೂ ಒಪ್ಪುತ್ತಾರೆ. [23]ಅವರ ಕುರಿದನಗಳೂ ಆಸ್ತಿಪಾಸ್ತಿಯೂ ಪಶುಪ್ರಾಣಿಗಳೂ ನಮ್ಮವುಗಳೇ
ಆಗುತ್ತವಲ್ಲವೆ? ಆದ್ದರಿಂದ ಅವರು ನಮ್ಮಲ್ಲಿ ವಾಸಮಾಡುವಂತೆ ನಾವು ಅವರ ಮಾತಿಗೆ ಒಪ್ಪಿಕೊಳ್ಳೋಣ".
[24]ಹಮೋರನ ಮತ್ತು ಅವನ ಮಗ ಶೆಕೆಮನ ಈ ಮಾತಿಗೆ ಊರಿನವರೆಲ್ಲರು ಸಮ್ಮತಿಸಿದರು. ಅಂತೆಯೇ
ಅವರಲ್ಲಿದ್ದ ಗಂಡಸರೆಲ್ಲರು ಸುನ್ನತಿಮಾಡಿಸಿ ಕೊಂಡರು.

25 ಮೂರನೆಯ ದಿನ ಆ ಗಂಡಸರೆಲ್ಲರು ಗಾಯದಿಂದ ಇನ್ನು ಬಹಳ ಬಾಧೆಪಡುತ್ತಿದ್ದರು. ಆಗ,
ಯಕೋಬನ ಮಕ್ಕಳಲ್ಲಿ ದೀನಳ ಸಹೋದರರಾದ ಸಿಮೆಯೋನ್ ಮತ್ತು ಲೇವಿ ಎಂಬ ಇಬ್ಬರು ಕೈಯಲ್ಲಿ
ಕತ್ತಿಹಿಡಿದು ನಿಶ್ಚಿಂತೆ ಇಂದಿದ್ದ ಆ ಊರಿನವರ ಮೇಲೆ ಬಿದ್ದರು. ದಯೆ ದಾಕ್ಷಿಣ್ಯವಿಲ್ಲದೆ ಗಂಡಸರೆಲ್ಲರನ್ನು
ಕೊಂದರು. [26]ಹಮೋರ್ ಮತ್ತು ಅವನ ಮಗ ಶೆಕೆಮನನ್ನು ಕೊಂದು ದೀನಳನ್ನು ಅವನ ಮನೆಯಿಂದ
ಕರೆದುಕೊಂಡು ಹೊರಟುಹೋದರು. [27]ಯಕೋಬನ ಇತರ ಮಕ್ಕಳು ಹತರಾದವರ ಬಳಿಗೆ ಬಂದು,
'ತಂಗಿಯನ್ನು ಅವಮಾನ ಪಡಿಸಿದವರು ಇವರೇ ಅಲ್ಲವೆ', ಎಂದುಕೊಂಡು ಆ ಊರನ್ನೇ
ಸೂರೆಮಾಡಿಬಿಟ್ಟರು. [28]ಊರ ಒಳಗೂ ಹೊರಗೂ ಇದ್ದ ಕುರಿ, ದನ, ಕತ್ತೆಗಳನ್ನು ಕಿತ್ತುಕೊಂಡರು. [29]ಮಡದಿ
ಮಕ್ಕಳನ್ನೆಲ್ಲ ಸೆರೆಹಿಡಿದರು, ಅವರ ಮನೆಗಳಲ್ಲಿ ಇದ್ದುದನ್ನೆಲ್ಲ ದೋಚಿಕೊಂಡರು.

30 ಆಗ ಯಕೋಬನು, ಸಿಮೆಯೋನ್ ಮತ್ತು ಲೇವಿಯರಿಗೆ, "ನೀವು ನನ್ನ ಹೆಸರನ್ನು ಈ ನಾಡಿನ
ನಿವಾಸಿಗಳಾದ ಕಾನಾನ್ಯರಿಗೂ ಪೆರಿಜೀಯರಿಗೂ ಅಸಹ್ಯಮಾಡಿಬಿಟ್ಟಿರಿ; ನನ್ನನ್ನು ಅಪಾಯಕ್ಕೆ
ಗುರಿಮಾಡಿದ್ದೀರಿ. ನನಗಿರುವ ಜನರು ಕೆಲವರೇ. ಈ ನಾಡಿನವರೆಲ್ಲರು ಒಟ್ಟಿಗೆ ಬಂದು ನನ್ನ ಮೇಲೆ ಬಿದ್ದರೆ
ನಾನು ಮಾತ್ರವಲ್ಲ ನನ್ನ ಮನೆಯವರೆಲ್ಲರೂ ನಿರ್ಮೂಲವಾಗುತ್ತೇವೆ ಅಲ್ಲವೇ?" ಎಂದನು.

31 ಅದಕ್ಕೆ ಅವರು, "ಅವನು ಮಾತ್ರ ನಮ್ಮ ತಂಗಿಯನ್ನು ಒಬ್ಬ ಬೀದಿಯ ಸೂಳೆಯಂತೆ
ನಡೆಸಿಕೊಳ್ಳಬಹುದೋ?" ಎಂದು ಪ್ರಶ್ನಿಸಿದರು.

### ಬೇತೇಲಿನಲ್ಲಿ ದೇವರು ಯಕೋಬನಿಗೆ ಕೊಟ್ಟ ಆಶೀರ್ವಾದ

**35** ದೇವರು ಯಕೋಬನಿಗೆ, "ನೀನು ಈ ಸ್ಥಳವನ್ನು ಬಿಟ್ಟು ಬೇತೇಲಿಗೆ ಹೋಗಿ ಅಲ್ಲೇ ವಾಸಮಾಡು.
ನೀನು ನಿನ್ನ ಅಣ್ಣ ಏಸಾವನ ಬಳಿಯಿಂದ ಓಡಿಹೋಗುವಾಗ ನಿನಗಲ್ಲಿ ದರ್ಶನ ಇತ್ತ ದೇವರು ನಾನೇ.
ನನಗೊಂದು ಬಲಿಪೀಠವನ್ನು ಅಲ್ಲಿ ಕಟ್ಟಿಸು," ಎಂದು ಹೇಳಿದರು.

2 ಆಗ ಯಕೋಬನು ತನ್ನ ಮನೆಯವರಿಗೂ ಹಾಗು ತನ್ನ ಸಂಗಡ ಇದ್ದ ಎಲ್ಲರಿಗೂ, "ನಿಮ್ಮಲ್ಲಿ
ಇರುವ ಅನ್ಯ ದೇವರುಗಳನ್ನು ತೊರೆದುಬಿಡಿ; ನಿಮ್ಮನ್ನೇ ಶುದ್ಧೀಕರಿಸಿಕೊಂಡು ಮಡಿವಸ್ತ್ರಗಳನ್ನು ಹಾಕಿಕೊಳ್ಳಿ;
ನಾವು ಬೇತೇಲಿಗೆ ಹೊರಟು ಹೋಗೋಣ. [3]ಕಷ್ಟಕಾಲದಲ್ಲಿ ನನ್ನ ವಿಜ್ಞಾಪನೆಯನ್ನು ಆಲಿಸಿ, ನಾನು ಹೋದ
ಕಡೆಯೆಲ್ಲ ನನ್ನೊಂದಿಗಿದ್ದ ದೇವರಿಗೆ ಅಲ್ಲೊಂದು ಬಲಿಪೀಠವನ್ನು ಕಟ್ಟಿಸುತ್ತೇನೆ," ಎಂದು ಹೇಳಿದನು.
[4]ಅಂತೆಯೆ ಅವರು ತಮ್ಮಲ್ಲಿದ್ದ ಎಲ್ಲ ಅನ್ಯ ದೇವರುಗಳನ್ನೂ ತಮ್ಮ ಕಿವಿಗಳಲ್ಲಿದ್ದ ಮುರುವುಗಳನ್ನೂ
ಯಕೋಬನಿಗೆ ಒಪ್ಪಿಸಿ ಬಿಟ್ಟರು. ಅವನು ಅವುಗಳನ್ನು ಶೆಕೆಮ್ ಪಟ್ಟಣದ ಹತ್ತಿರ ಇದ್ದ ಒಂದು ಓಕ್ ಮರದ
ಬುಡದಡಿಯಲ್ಲಿ ಹೂಳಿಬಿಟ್ಟನು.

5 ಅವರು ಪ್ರಯಾಣಮಾಡುತ್ತಿದ್ದಾಗ ದೇವರು ಸುತ್ತಮುತ್ತಣದ ಊರಿನವರಲ್ಲಿ ಭಯ ಹುಟ್ಟಿಸಿದರು.
ಇದರಿಂದಾಗಿ ಈ ಊರಿನವರಾರೂ ಯಕೋಬನ ಮಕ್ಕಳನ್ನು ಹಿಂದಟ್ಟಿ ಬರಲಿಲ್ಲ. [6]ಯಕೋಬನೂ ಅವನ
ಸಂಗಡವಿದ್ದ ಜನರೆಲ್ಲರೂ ಕಾನಾನ್ ನಾಡಿನಲ್ಲಿದ್ದ ಬೇತೇಲೆಂಬ ಊರಿಗೆ ಬಂದು ಸೇರಿದರು. [7]ಯಕೋಬನು
ತನ್ನ ಅಣ್ಣನ ಬಳಿಯಿಂದ ಓಡಿಹೋಗುವಾಗ ದೇವರು ಅವನಿಗೆ ಪ್ರತ್ಯಕ್ಷವಾದುದು ಅಲ್ಲಿಯೇ. ಎಂದೇ ಅವನು

ಅಲ್ಲಿ ಒಂದು ಬಲಿಪೀಠವನ್ನು ಕಟ್ಟಿಸಿ, ಆ ಸ್ಥಳಕ್ಕೆ 'ಏಲ್ ಬೇತೇಲ್' ಎಂದು ಹೆಸರಿಟ್ಟನು. 8ಅಲ್ಲಿರುವಾಗ
ರೆಬೆಕ್ಕಳ ದಾದಿ ದೆಬೋರಳು ಸತ್ತುಹೋದಳು. ಆಕೆಯನ್ನು ಬೇತೇಲಿನ ಕಣಿವೆಯಲ್ಲಿರುವ ಮತ್ತೊಂದು ಓಕ್
ಮರದ ಬುಡದಲ್ಲಿ ಸಮಾಧಿಮಾಡಿ ಅದಕ್ಕೆ "ಅಲ್ಲೋನ್ ಬಾಕೂತ್' ಎಂದು ಹೆಸರಿಟ್ಟರು.
9 ಯಕೋಬನು ಮೆಸಪೊಟೇಮಿಯಾದಿಂದ ಹಿಂದಿರುಗಿ ಬಂದಾಗ ದೇವರು ಮತ್ತೆ ಅವನಿಗೆ
ದರ್ಶನಕೊಟ್ಟು ಅವನನ್ನು ಆಶೀರ್ವದಿಸಿದರು. 10ಅವನಿಗೆ ದೇವರು, "ನಿನ್ನ ಹೆಸರು; ಯಕೋಬ ಅಲ್ಲವೆ?
ಇನ್ನು ಮೇಲೆ ನೀನು ಯಕೋಬನೆನಿಸಿಕೊಳ್ಳದೆ 'ಇಸ್ರಯೇಲ್' ಎನಿಸಿಕೊಳ್ಳಬೇಕು" ಎಂದು ಹೇಳಿದರು. ಹೀಗೆ
ಅವನ ಹೆಸರು ಇಸ್ರಯೇಲ್ ಆಯಿತು. 11ಇದಲ್ಲದೆ ಅವನಿಗೆ ದೇವರು, "ನಾನೇ ಸರ್ವವಲ್ಲಭನಾದ ದೇವರು;
ನೀನು ವೃದ್ಧಿಯಾಗಿ ಬಹುಸಂತಾನವುಳ್ಳವನಾಗು. ನಿನ್ನಿಂದ ರಾಷ್ಟ್ರವೊಂದು ಉಂಟಾಗುವುದು, ಅನೇಕ
ರಾಷ್ಟ್ರಗಳೂ ರಾಜರುಗಳೂ ನಿನ್ನಿಂದ ಹುಟ್ಟುವರು. 12ನಾನು ಅಬ್ರಹಾಮ್, ಇಸಾಕರಿಗೆ ವಾಗ್ದಾನ ಮಾಡಿದ
ನಾಡನ್ನು ನಿನಗೂ ನಿನ್ನ ತರುವಾಯ ಬರುವ ನಿನ್ನ ಸಂತತಿಗೂ ಕೊಡುವೆನು," ಎಂದು ಹೇಳಿದರು. 13ಬಳಿಕ
ಅವನ ಸಂಗಡ ಮಾತನಾಡಿದ ಆ ಸ್ಥಳದಿಂದ ಮೇಲಕ್ಕೇರಿ ಹೋದರು. 14ಯಕೋಬನು ತನ್ನೊಡನೆ ದೇವರು
ಮಾತನಾಡಿದ ಆ ಸ್ಥಳದಲ್ಲಿ ಕಲ್ಲಿನ ಸ್ತಂಭವೊಂದನ್ನು ನಿಲ್ಲಿಸಿ, ಅದರ ಮೇಲೆ ಪಾನಕಾ ಅಭಿಷೇಕಮಾಡಿ,
ಎಣ್ಣೆ ಹೊಯ್ದು ಅಭ್ಯಂಗಿಸಿದನು. 15ಆ ಸ್ಥಳವನ್ನು 'ಬೇತೇಲ್' ಎಂದು ಹೆಸರಿಸಿದನು.

### ರಾಖೇಲಳ ನಿಧನ

16 ಆ ಬಳಿಕ ಅವರು ಬೇತೇಲನ್ನು ಬಿಟ್ಟು ಹೊರಟರು. ಎಫ್ರಾತೂರಿಗೆ ಸೇರುವುದಕ್ಕೆ ಇನ್ನು ಸ್ವಲ್ಪ
ದೂರವಿದ್ದಾಗ ರಾಖೇಲಳಿಗೆ ಹೆರಿಗೆಯ ಕಾಲ ಬಂದಿತು. 17ಆಕೆ ಪ್ರಸವವೇದನೆಯಿಂದ ಬಹಳ
ಕಷ್ಟಪಡುತ್ತಿದ್ದಾಗ ಸೂಲಗಿತ್ತಿಯು ಆಕೆಗೆ, "ಅಂಜಬೇಡ, ನಿನಗೆ ಇನ್ನೊಬ್ಬ ಮಗ ಹುಟ್ಟಿದ್ದಾನೆ," ಎಂದು
ಹೇಳಿದಳು. 18ಆದರೆ ರಾಖೇಲಳು ಸತ್ತುಹೋದಳು. ಪ್ರಾಣ ಹೋಗುತ್ತಿದ್ದಾಗ ಆಕೆ ಆ ಮಗುವಿಗೆ 'ಬೆನೋನಿ'
ಎಂದು ಹೆಸರಿಟ್ಟಳು. ಅದರ ತಂದೆಯಾದರೋ ಅದಕ್ಕೆ ಬೆನ್ಯಾಮಿನ್ ಎಂದು ಹೆಸರಿಟ್ಟನು.
19 ಹೀಗೆ ರಾಖೇಲಳು ಸತ್ತುಹೋದಳು. ಆಕೆಯನ್ನು ಬೆತ್ಲೆಹೇಮೆಂಬ ಎಫ್ರಾತಿಗೆ ಹೋಗುವ
ದಾರಿಪಕ್ಕದಲ್ಲಿ ಸಮಾಧಿ ಮಾಡಿದರು. 20ಯಕೋಬನು ಆಕೆಯ ಸಮಾಧಿಯ ಮೇಲೆ ಸ್ಮಾರಕಸ್ತಂಭವನ್ನು
ನಿಲ್ಲಿಸಿದನು. ಅದು ಇಂದಿನವರೆಗೂ ರಾಖೇಲಳ ಸಮಾಧಿಸ್ತಂಭ ಎನಿಸಿಕೊಳ್ಳುತ್ತದೆ. 21ಅಲ್ಲಿಂದ ಇಸ್ರಯೇಲನು
ಪ್ರಯಾಣ ಬೆಳೆಸಿ ಮಿಗ್ದಲದ ಏದನ ಆಚೆಕಡೆಯಲ್ಲಿ ತನ್ನ ಗುಡಾರವನ್ನು ಹಾಕಿಸಿದನು.

### ಯಕೋಬನ ಹನ್ನೆರಡು ಮಕ್ಕಳು

22 ಇಸ್ರಯೇಲನು ಆ ನಾಡಿನಲ್ಲಿ ವಾಸವಾಗಿದ್ದಾಗ ರೂಬೇನ್ ತನ್ನ ತಂದೆಯ ಉಪಪತ್ನಿಯಾದ
ಬಿಲ್ಹಳಲ್ಲಿ ಸಂಗಮಿಸಿದನು. ಈ ಸಂಗತಿ ತಿಳಿದು ಬಂದಾಗ ಇಸ್ರಯೇಲನಿಗೆ ಕಡುಕೋಪವಾಯಿತು.
23 ಯಕೋಬನ ಹನ್ನೆರಡು ಗಂಡುಮಕ್ಕಳ ಹೆಸರು ಇವು: ಯಕೋಬನ ಚೊಚ್ಚಲಮಗ ರೂಬೇನ್,
ಸಿಮೆಯೋನ್, ಲೇವಿ, ಯೆಹೂದಾ, ಇಸ್ಸಾಕಾರ್, ಜೆಬುಲೂನ್ – ಇವರು ಲೇಯಳಲ್ಲಿ ಹುಟ್ಟಿದವರು.
24ಜೋಸೆಫ್, ಬೆನ್ಯಾಮಿನ್ ಇವರಿಬ್ಬರು ರಾಖೇಲಳಲ್ಲಿ ಹುಟ್ಟಿದವರು. 25ದಾನ್, ನಫ್ತಾಲಿ – ಇವರು
ರಾಖೇಲಳ ದಾಸಿ ಬಿಲ್ಹಾಳಲ್ಲಿ ಹುಟ್ಟಿದವರು. 26ಗಾದ್, ಆಶೇರ್ – ಇವರಿಬ್ಬರು ಲೇಯಳ ದಾಸಿ ಜಿಲ್ಪಳಲ್ಲಿ
ಹುಟ್ಟಿದವರು. ಮೆಸಪೊಟೇಮಿಯಾದಲ್ಲಿ ಯಕೋಬನಿಗೆ ಹುಟ್ಟಿದ ಮಕ್ಕಳು ಇವರೇ.
27ಯಕೋಬನು ತನ್ನ ತಂದೆ ಇಸಾಕನ ಬಳಿಗೆ ಮಮ್ರೆಗೆ ಬಂದನು. ಮಮ್ರೆಯು ಹೆಬ್ರೋನೆಂಬ
ಕಿರ್ಯತರ್ಬಕ್ಕೆ ಸೇರಿದುದು. ಅದೇ ಅಬ್ರಹಾಮ್ ಹಾಗು ಇಸಾಕನು ಪರದೇಶಸ್ಥರಾಗಿ ವಾಸವಾಗಿದ್ದ ಸ್ಥಳ.

### ಇಸಾಕನ ಮರಣ

28 ಇಸಾಕನು ಹಣ್ಣುಹಣ್ಣು ಮುದುಕನಾಗಿದ್ದು ನೂರ ಎಂಬತ್ತನೆಯ ವರ್ಷದಲ್ಲಿ ತೀರಿಕೊಂಡು
ತನ್ನ ಪಿತೃಗಳ ಬಳಿಗೆ ಸೇರಿಕೊಂಡನು. ಅವನ ಮಕ್ಕಳಾದ ಏಸಾವ ಮತ್ತು ಯಕೋಬರು ಅವನನ್ನು
ಸಮಾಧಿ ಮಾಡಿದರು.

## ಏಸಾವನ ವಂಶವೃಕ್ಷ

(1 ಪೂರ್ವ. 1.34–37)

**36** ಎತೋಮನೆಂಬ ಏಸಾವನ ವಂಶಾವಳಿ ಇದು: [2]ಏಸಾವನು ಕಾನಾನ್ಯರ ಮಹಿಳೆಯರಲ್ಲಿ ಹಿತ್ತಿಯನಾದ
ಏಲೋನನ ಮಗಳಾದ ಆದಾಳನ್ನು, ಹಿವ್ವಿಯನಾದ ಸಿಬೆಯೋನನ ಮಗಳಾದ ಅನಾಹಳ ಮಗಳು
ಒಹೊಲೀಬಾಮಳನ್ನು ಮತ್ತು [3]ಇಷ್ಮಾಯೇಲನ ಮಗಳು ಹಾಗು ನೆಬಾಯೋತನ ಸಹೋದರಿ
ಬಾಸೆಮತಳನ್ನೂ ಮದುವೆ ಆಗಿದ್ದನು.

4 ಏಸಾವನಿಗೆ ಆದಾಳು ಎಲೀಫಜನನ್ನು ಹೆತ್ತಳು. ಬಾಸೆಮತಳು ರೆಗೂವೇಲನನ್ನು ಹೆತ್ತಳು.
[5]ಒಹೊಲೀಬಾಮಳು ಯೆಗೂಷನನ್ನು, ಯಳಾಮನನ್ನು ಹಾಗು ಕೋರಹನನ್ನು ಹೆತ್ತಳು. ಇವರೆಲ್ಲರು
ಏಸಾವನು ಕಾನಾನ್ ನಾಡಿನಲ್ಲಿ ಇದ್ದಾಗ ಹುಟ್ಟಿದರು.

6 ಏಸಾವನು ತನ್ನ ಹೆಂಡತಿಯರನ್ನೂ ಗಂಡು ಹೆಣ್ಣುಮಕ್ಕಳನ್ನೂ ತನ್ನ ಮನೆಗೆ ಸೇರಿದ ಎಲ್ಲರನ್ನೂ,
ತನಗಿದ್ದ ಪಶುಪ್ರಾಣಿಗಳನ್ನೂ ಕಾನಾನ್ ನಾಡಿನಲ್ಲಿ ತಾನು ಸಂಪಾದಿಸಿದ್ದ ಆಸ್ತಿಪಾಸ್ತಿ ಎಲ್ಲವನ್ನೂ
ತೆಗೆದುಕೊಂಡು ತನ್ನ ತಮ್ಮ ಯಕೋಬನ ಬಳಿಯಿಂದ ಹೊರನಾಡಿಗೆ ಹೊರಟು ಹೋದನು. [7]ಸಿರಿಸಂಪತ್ತು
ಹೆಚ್ಚಾಗಿ ಇದ್ದುದರಿಂದ ಅವರಿಬ್ಬರೂ ಒಂದೇ ಸ್ಥಳದಲ್ಲಿ ವಾಸಮಾಡಲು ಅನುಕೂಲವಾಗಿರಲಿಲ್ಲ;
ಪಶುಪ್ರಾಣಿಗಳು ಬಹಳ ಆಗಿದ್ದುದರಿಂದ ಅವರು ತಂಗಿದ್ದ ನಾಡು ಅವರಿಗೆ ಸಾಲದೆ ಹೋಯಿತು. [8]ಈ
ಕಾರಣ ಏದೊಮನೆಂಬ ಏಸಾವನು ಸೇಯಿರ್ ಮಲೆನಾಡಿಗೆ ಹೋಗಿ ಅಲ್ಲೇ ವಾಸವಾಗಿದ್ದನು.

9 ಸೇಯಿರ್ ಮಲೆನಾಡಿನಲ್ಲಿದ್ದ ಎದೋಮ್ಯರ ಮೂಲಪುರುಷನಾದ ಏಸಾವನ ವಂಶಾವಳಿ
ಹೀಗಿದೆ: [10]ಏಸಾವನಿಗೆ ಹೆಂಡತಿ ಆದಾಳಲ್ಲಿ ಮಗ ಎಲೀಫಜನು ಹುಟ್ಟಿದನು; ಹೆಂಡತಿ ಬಾಸೆಮತಳಲ್ಲಿ ಮಗ
ರೆಗೂವೇಲನು ಹುಟ್ಟಿದನು. [11]ಎಲೀಫಜನಿಗೆ ತೇಮಾನ್, ಓಮಾರ್, ಚೆಫೋ, ಗತಾಮ್, ಕೆನಜ್, ಎಂಬ
ಐದು ಮಕ್ಕಳು. [12]ಏಸಾವನ ಮಗನಾದ ಈ ಎಲೀಫಜನಿಗೆ ತಿಮ್ನ ಎಂಬ ಉಪಪತ್ನಿ ಇದ್ದಳು. ಇವಳು
ಅವನಿಗೆ ಅಮಾಲೇಕನನ್ನು ಹೆತ್ತಳು. ಇವರೇ ಏಸಾವನ ಹೆಂಡತಿ ಆದಾಳ ಮೊಮ್ಮಕ್ಕಳು.

13 ರೆಗೂವೇಲನಿಗೆ ನಹತ್, ಜೆರಹ, ಶಮ್ಮಾ, ಮಿಜ್ಜಾ ಎಂಬ ನಾಲ್ಕು ಮಕ್ಕಳು. ಇವರು ಏಸಾವನ
ಹೆಂಡತಿ ಬಾಸೆಮತಳ ಮೊಮ್ಮಕ್ಕಳು.

14 ಏಸಾವನ ಹೆಂಡತಿಯೂ ಸಿಬೆಯೋನನ ಮಗ ಅನಾಹನ ಮಗಳೂ ಆಗಿದ್ದ
ಒಹೊಲೀಬಾಮಳಿಗೆ ಯೆಗೂಷ್, ಯಳಾಮ್ ಮತ್ತು ಕೋರಹ ಎಂಬ ಮೂರು ಮಕ್ಕಳಿದ್ದರು.

15 ಏಸಾವನ ವಂಶದ ಕುಲನಾಯಕರು: ಏಸಾವನ ಜೇಷ್ಠಪುತ್ರನಾದ ಎಲೀಫಜನಿಂದ ತೇಮಾನ,
ಏಮಾರ, ಚೆಫೋ, ಕೆನೆಜ್, [16]ಕೊರಹ, ಗತಾಮ, ಅಮಾಲೇಕ ಎಂಬ ಕುಲನಾಯಕರು ಹುಟ್ಟಿದರು. ಈ
ಅಧಿಪತಿಗಳು ಎದೋಮ್ಯರ ನಾಡಿನಲ್ಲಿ ಆದಾಳ ಸಂತತಿಯಲ್ಲಿ ಹುಟ್ಟಿದರು.

17 ಏಸಾವನ ಮಗ ರೆಗೂವೇಲನಿಗೆ ನಹತ, ಜೆರಹ, ಶಮ್ಮಾ, ಮಿಜ್ಜಾ ಎಂಬ ಕುಲನಾಯಕರು
ಹುಟ್ಟಿದರು. ಇವರು ಎದೋಮ್ಯರ ನಾಡಿನಲ್ಲಿ ಏಸಾವನ ಹೆಂಡತಿ ಬಾಸೆಮತಳ ಸಂತತಿಯಲ್ಲಿ ಹುಟ್ಟಿದವರು.

18 ಏಸಾವನ ಹೆಂಡತಿ ಒಹೊಲೀಬಾಮಳ ಸಂತಾನದಲ್ಲಿ ಹುಟ್ಟಿದ ಕುಲನಾಯಕರು ಯಾರೆಂದರೆ
– ಯೆಗೂಷ್, ಯಳಾಮ ಮತ್ತು ಕೊರಹ. ಇವರೇ ಅನಾಹನ ಮಗಳೂ ಏಸಾವನ ಹೆಂಡತಿಯೂ ಆಗಿದ್ದ
ಒಹೊಲೀಬಾಮಳ ಸಂತಾನದವರು. [19]ಎದೋಮನೆನಿಸಿಕೊಳ್ಳುವ ಏಸಾವನಿಂದ ಹುಟ್ಟಿದ ಕುಲಗಳಿಗೆ ಇವರೇ
ನಾಯಕರು.

## ಸೇಯಿರನ ಸಂತಾನ

(1 ಪೂರ್ವ. 1.38–42)

20 ಆ ನಾಡಿನ ಮೂಲನಿವಾಸಿಗಳು ಹೋರಿಯನಾದ ಸೇಯೀರನಿಂದ ಹುಟ್ಟಿದವರು. ಲೋಟಾನ್, ಶೋಬಾಲ್, ಸಿಬೆಯೋನ್, ಅನಾಹ, [21]ದೀಶೋನ್, ಏಚೆರ್, ದೀಶಾನ್ ಎಂದು ಅವರನ್ನು ಹೆಸರಿಸಲಾಗಿತ್ತು. ಅವರು ಎದೋಮ್ಯರ ನಾಡಿನಲ್ಲಿ ಸೇಯೀರನ ಸಂತತಿಯವರಾದ ಹೋರಿಯರಲ್ಲಿ ಹುಟ್ಟಿದ ಕುಲನಾಯಕರು.

22 ಲೋಟಾನನಿಗೆ ಹೋರಿ ಮತ್ತು ಹೇಮಾಮ್ ಎಂಬ ಮಕ್ಕಳಿದ್ದರು. ತಿಮ್ನಾ ಎಂಬ ತಂಗಿಯೂ ಇದ್ದಳು.

23 ಶೋಬಾಲನ ಮಕ್ಕಳು – ಅಲ್ವಾನ್, ಮಾನಹತ್, ಗೇಬಾಲ್, ಶೆಫೋ ಮತ್ತು ಓನಾಮ್ ಎಂಬುವರು.

24 ಸಿಬೆಯೋನನಿಗೆ ಅಯ್ಯಾ ಮತ್ತು ಅನಾಹ ಎಂಬ ಇಬ್ಬರು ಮಕ್ಕಳು. ಈ ಅನಾಹನೇ ತನ್ನ ತಂದೆ ಸಿಬೆಯೋನನ ಕತ್ತೆಗಳನ್ನು ಮೇಯಿಸುತ್ತಿದ್ದಾಗ ಕಾಡಿನಲ್ಲಿ ಬಿಸಿ ನೀರಿನ ಒರತೆಗಳನ್ನು ಕಂಡುಹಿಡಿದವನು. [25]ಅನಾಹನ ಮಕ್ಕಳು ದೀಶೋನ್ ಮತ್ತು ಅನಾಹನ ಮಗಳಾದ ಒಹೊಲೀಬಾಮ. [26]ದೀಶೋನನ ಮಕ್ಕಳು – ಹೆಮ್ದಾನ್, ಎಷ್ಬಾನ್, ಇತ್ರಾನ್ ಮತ್ತು ಕೆರಾನ್.

27 ಏಚೆರನ ಮಕ್ಕಳು – ಬಿಲ್ಹಾನ್, ಜಾವಾನ್ ಮತ್ತು ಅಕಾನ್.

28 ದೀಶಾನನ ಮಕ್ಕಳು ಊಚ್ ಮತ್ತು ಅರಾನ್.

29 ಹೋರಿಯರಿಂದ ಹುಟ್ಟಿದ ಕುಲನಾಯಕರು ಇವರು – ಲೋಟಾನ್, ಶೋಬಾಲ್, ಸಿಬೆಯೋನ್, ಅನಾಹ, [30]ದೀಶೋನ, ಏಚೆರ್ ಮತ್ತು ದೀಶಾನ್, ಹೋರಿಯರಿಂದ ಹುಟ್ಟಿದವರಾಗಿ ಸೇಯೀರ್ ನಾಡಿನಲ್ಲಿ ಅಧಿಪತ್ಯ ನಡೆಸಿದ ಕುಲನಾಯಕರು ಇವರೇ.

### ಎದೋಮಿನ ಅರಸರು

(1 ಪೂರ್ವ. 1.43–54)

31 ಇಸ್ರಯೇಲರ ಅರಸರು ಆಳುವುದಕ್ಕೆ ಮುಂಚೆ ಎದೋಮ್ಯರ ನಾಡಲ್ಲಿ ಆಳುತ್ತಿದ್ದ ಅರಸರ ಹೆಸರುಗಳು ಹೀಗಿವೆ: [32]ಬೆಯೋರನ ಮಗ ಬಿಲಗನು ಎದೋಮ್ಯರಲ್ಲಿ ಆಳಿದನು. ಅವನ ರಾಜಧಾನಿಯ ಹೆಸರು ದಿನ್ಹಾಬಾ. [33]ಬೆಲಗನು ಸತ್ತಮೇಲೆ ಬೊಚ್ರದವನಾದ ಜೆರಹನ ಮಗ ಯೋಬಾನನು ಆಧಿಪತ್ಯಕ್ಕೆ ಬಂದನು. [34]ಯೋಬಾಬನು ಸತ್ತಮೇಲೆ ತೇಮಾನೀಯರ ನಾಡಿನವನಾದ ಹುಷಾಮನು ಅವನಿಗೆ ಬದಲಾಗಿ ಆಳಿದನು. [35]ಹುಷಾಮನು ಸತ್ತಮೇಲೆ ಮೊವಾಬ್ಯರ ಬಯಲಿನಲ್ಲಿ ಮಿದ್ಯಾನರನ್ನು ಸೋಲಿಸಿದ ಬೆದದನ ಮಗನಾದ ಹದದನು ಅರಸನಾದನು. ಅವನ ರಾಜಧಾನಿಯ ಹೆಸರು ಅವೀತ್. [36]ಹದದನು ಸತ್ತಮೇಲೆ ಮಸ್ರೇಕದವನಾದ ಸಮ್ಲಾಹನು ಪಟ್ಟಕ್ಕೆ ಬಂದನು. [37]ಸಮ್ಲಾಹನು ಸತ್ತಮೇಲೆ ನದೀತೀರದಲ್ಲಿನ ರೆಹೋಬೋತೂರಿನ ಸೌಲನು ಅರಸನಾದನು. [38]ಸೌಲನು ಸತ್ತಮೇಲೆ ಅಕ್ಬೋರನ ಮಗ ಬಾಳ್ಹಾನಾನನು ಅರಸನಾದನು. [39]ಅಕ್ಬೋರನ ಮಗ ಬಾಳ್ಹಾನಾನನು ಸತ್ತಾದನಂತರ ಹದದನು ಅರಸನಾದನು; ಅವನ ರಾಜಧಾನಿಯ ಹೆಸರು ಪಾಗು. ಅವನ ಹೆಂಡತಿಯ ಹೆಸರು ಮಹೇಟಬೇಲ್; ಆಕೆ ಮೇಜಾಹಾಬನ ಮಗಳಾದ ಮಟ್ರೇದಳ ಮಗಳು.

40 ಸ್ಥಳ – ಕುಲ ನಾಮಗಳ ಪ್ರಕಾರ ಏಸಾವನಿಂದ ಹುಟ್ಟಿದ ಕುಲನಾಯಕರ ಹೆಸರುಗಳು ಇವು: ತಿಮ್ನ, ಅಲ್ವಾ, ಯತೇತ, [41]ಒಹೋಲೀಬಾಮಾ, ಏಲಾ, ಪೀನೋನ್, [42]ಕೆನಜ್, ತೇಮಾನ್, ಮಿಪ್ಚಾರ, ಮಗ್ದೀಯೇಲ್, ಗೀರಾಮ್, ಇವರೇ ತಮ್ಮ ನಾಡಿನ ನಿವಾಸಸ್ಥಳಗಳ ಪ್ರಕಾರ ಎದೋಮ್ಯರ ಕುಲನಾಯಕರು. ಈ ಎದೋಮ್ಯರ ಮೂಲಪುರುಷನೇ ಏಸಾವ್.

### ಜೋಸೆಫ್ ಮತ್ತು ಸೋದರರು

**37** ಯಕೋಬನು ತನ್ನ ತಂದೆ ಪ್ರವಾಸಿ ಆಗಿದ್ದ ಕಾನಾನ್ ನಾಡಿನಲ್ಲಿ ವಾಸ ಆಗಿದ್ದನು. ಅವನ ಮಕ್ಕಳ ಚರಿತ್ರೆ ಇದು:

2 ಆಗ ಜೋಸೆಫನಿಗೆ ಹದಿನೇಳು ವರ್ಷ, ಇನ್ನೂ ಯುವಕ. ತನ್ನ ಅಣ್ಣಂದಿರ ಜೊತೆಯಲ್ಲಿ, ಅಂದರೆ ತನ್ನ ಮಲತಾಯಿಯರಾದ ಬಿಲ್ಹಾ, ಜಿಲ್ಪ ಎಂಬುವರ ಮಕ್ಕಳ ಜೊತೆಯಲ್ಲಿ, ಆಡುಕುರಿಗಳನ್ನು ಮೇಯಿಸುತ್ತಿದ್ದ. ಅಣ್ಣಂದಿರು ಏನಾದರೂ ತಪ್ಪಿ ನಡೆದರೆ ತಂದೆಗೆ ವರದಿ ಮಾಡುತ್ತಿದ್ದ.

3 ಜೋಸೆಫನು ಯಕೋಬನಿಗೆ ಮುಪ್ಪಿನಲ್ಲಿ ಹುಟ್ಟಿದ ಮಗ. ಎಂದೇ ಯಕೋಬನಿಗೆ ಅವನ ಮೇಲೆ ಮಿಕ್ಕ ಮಕ್ಕಳಿಗಿಂತ ಮಿಗಿಲಾದ ಪ್ರೀತಿ. ಅಲಂಕೃತವಾದ ಒಂದು ನಿಲುವಂಗಿಯನ್ನೂ ಅವನಿಗೆ ಮಾಡಿಸಿಕೊಟ್ಟಿದ್ದ. 4ತಂದೆ ತನ್ನ ಎಲ್ಲ ಮಕ್ಕಳಿಗಿಂತ ಇವನನ್ನೇ ಹೆಚ್ಚಾಗಿ ಪ್ರೀತಿಸುವುದನ್ನು ಕಂಡು, ಅಣ್ಣಂದಿರು ಆ ಜೋಸೆಫನನ್ನು ಹಗೆ ಮಾಡಿದರು. ಅವನೊಡನೆ ಸ್ನೇಹಭಾವದಿಂದಲೂ ಮಾತಾಡದೆ ಹೋದರು.

5 ಒಮ್ಮೆ ಜೋಸೆಫನಿಗೆ ಒಂದು ಕನಸು ಬಿತ್ತು. ಅದನ್ನು ತನ್ನ ಅಣ್ಣಂದಿರಿಗೆ ತಿಳಿಸಿದಾಗ ಅವರು ಅವನನ್ನು ಇನ್ನೂ ಹೆಚ್ಚಾಗಿ ದ್ವೇಷಿಸಿದರು. 6ಅವನು ಅವರಿಗೆ, "ನಾನು ಕನಸಿನಲ್ಲಿ ಕಂಡದ್ದನ್ನು ಹೇಳುತ್ತೇನೆ ಕೇಳಿ: 7ಈ ಕನಸಿನಲ್ಲಿ ನಾವು ಹೊಲದಲ್ಲಿ ಬೆಳೆಕೊಯ್ದು ಕಂತೆಗಳನ್ನು ಕಟ್ಟುತ್ತಾ ಇದ್ದೆವು. ಆಗ ನನ್ನ ಕಂತೆ ಎದ್ದು ನಿಂತಿತು. ನಿಮ್ಮ ಕಂತೆಗಳು ಸುತ್ತಲೂ ಬಂದು ನನ್ನ ಕಂತೆಗೆ ಅಡ್ಡಬಿದ್ದುದನ್ನು ಕಂಡೆ," ಎಂದು ಹೇಳಿದ.

8ಅದಕ್ಕೆ ಅವನ ಅಣ್ಣಂದಿರು, "ಏನು, ನೀನು ನಿಜವಾಗಿ ನಮ್ಮನ್ನು ಆಳುವೆಯಾ? ನಮ್ಮ ಮೇಲೆ ದೊರೆತನ ಮಾಡುವೆಯಾ?" ಎಂದು ಪ್ರಶ್ನಿಸಿದರು. ಅವನ ಕನಸುಗಳು, ಅವನ ಮಾತುಗಳು ಅವರನ್ನು ಮತ್ತಷ್ಟು ಹಗೆಗಳನ್ನಾಗಿ ಮಾಡಿದವು.

9 ಜೋಸೆಫನಿಗೆ ಇನ್ನೊಂದು ಕನಸು ಬಿತ್ತು. ಅದನ್ನೂ ಅವನು ಅಣ್ಣಂದಿರಿಗೆ ತಿಳಿಸಿದ: "ನಾನು ಇನ್ನೊಂದು ಕನಸುಕಂಡಿದ್ದೇನೆ. ಅದರಲ್ಲಿ ಸೂರ್ಯ, ಚಂದ್ರ ಹಾಗೂ ಹನ್ನೊಂದು ನಕ್ಷತ್ರಗಳೂ ನನಗೆ ಅಡ್ಡಬಿದ್ದವು," ಎಂದು ಹೇಳಿದ. 10ಈ ಕನಸನ್ನು ಅಣ್ಣಂದಿರಿಗೆ ಮಾತ್ರವಲ್ಲ, ತಂದೆಗೂ ತಿಳಿಸಿದ. ತಂದೆ ಅವನಿಗೆ, "ಇದೆಂಥ ಕನಸು, ನೀನು ಕಂಡದ್ದು! ನಾನು, ನಿನ್ನ ತಾಯಿ, ಹಾಗೂ ಅಣ್ಣತಮ್ಮಂದಿರು ನಿನ್ನ ಅಡ್ಡಬೀಳಲು ಬರುತ್ತೇವೋ?" ಎಂದು ಹೇಳಿ ಅವನನ್ನು ಗದರಿಸಿದ. 11ಅಣ್ಣಂದಿರೋ ಅವನ ಮೇಲೆ ಹೊಟ್ಟೆಕಿಚ್ಚುಪಟ್ಟರು. ಆದರೆ ತಂದೆ ಈ ವಿಷಯವನ್ನು ಮನಸ್ಸಿನಲ್ಲೇ ಮೆಲುಕುಹಾಕಿದ.

### ಈಜಿಪ್ಟಿಗೆ ಜೋಸೆಫನ ಮಾರಾಟ

12 ಒಮ್ಮೆ ಜೋಸೆಫನ ಅಣ್ಣಂದಿರು ತಂದೆಯ ಆಡುಕುರಿಗಳನ್ನು ಮೇಯಿಸಲು ಶೆಕೆಮಿಗೆ ಹೋಗಿದ್ದರು. 13ಯಕೋಬನು ಜೋಸೆಫನಿಗೆ, "ನಿನ್ನ ಅಣ್ಣಂದಿರು ಶೆಕೆಮಿನಲ್ಲಿ ಆಡುಕುರಿಗಳನ್ನು ಮೇಯಿಸುತ್ತಿದ್ದಾರೆ, ಅಲ್ಲವೇ? ಅವರ ಬಳಿಗೆ ನಿನ್ನನ್ನು ಕಳಿಸಬೇಕೆಂದಿದ್ದೇನೆ," ಎನ್ನಲು 14ಅವನು, "ಇಗೋ ಸಿದ್ಧನಿದ್ದೇನೆ," ಎಂದ.

ಯಕೋಬನು ಅವನಿಗೆ, "ನೀನು ಹೋಗಿ ನಿನ್ನ ಅಣ್ಣಂದಿರ ಹಾಗೂ ಆಡುಕುರಿಗಳ ಯೋಗಕ್ಷೇಮವನ್ನು ವಿಚಾರಿಸಿಕೊಂಡು ಬಾ," ಎಂದು ಅಪ್ಪಣೆಕೊಟ್ಟು ಅವನನ್ನು ಹೆಬ್ರೋನ್ ಕಣಿವೆಯಿಂದ ಕಳಿಸಿಕೊಟ್ಟ. 15ಜೋಸೆಫನು ಹೊರಟ. ಶೆಕೆಮ್‌ಗೆ ಬಂದು ಅಡವಿಯೊಳಗೆ ತಿರುಗಾಡುತ್ತಿರುವಾಗ ಒಬ್ಬ ಮನುಷ್ಯನನ್ನು ಕಂಡ. ಆ ಮನುಷ್ಯ, "ಏನು ಹುಡುಕುತ್ತಾ ಇದ್ದೀಯಾ?" ಎಂದು ವಿಚಾರಿಸಿದ. 16ಜೋಸೆಫನು, "ನನ್ನ ಅಣ್ಣಂದಿರನ್ನು ಹುಡುಕುತ್ತಾ ಇದ್ದೇನೆ; ಅವರು ಆಡುಕುರಿಗಳನ್ನು ಎಲ್ಲಿ ಮೇಯಿಸುತ್ತಿದ್ದಾರೆ, ದಯವಿಟ್ಟು ಹೇಳು" ಎಂದ. 17ಅದಕ್ಕೆ ಆ ಮನುಷ್ಯ, "ಅವರು ಇಲ್ಲಿಂದ ಹೊರಟುಹೋದರು; 'ದೋತಾನಿಗೆ ಹೋಗೋಣ' ಎಂದು ಮಾತಾಡುವುದನ್ನು ಕೇಳಿದೆ," ಎಂದ. ಜೋಸೆಫನು ಅವರನ್ನು ಹುಡುಕುತ್ತಾ ಹೋಗಿ, ದೋತಾನಿನಲ್ಲಿ ಅವರನ್ನು ಕಂಡ.

18 ಅಣ್ಣಂದಿರು ಅವನನ್ನು ದೂರದಿಂದಲೇ ನೋಡಿದರು. ಅವನು ತಮ್ಮ ಬಳಿಗೆ ಬರುವಷ್ಟರೊಳಗೆ ಅವನನ್ನು ಕೊಲ್ಲಲು ಒಳಸಂಚು ಮಾಡಿಕೊಂಡರು. 19"ಅಗೋ ಆ ಕನಸುಗಾರ ಬರುತ್ತಾ ಇದ್ದಾನೆ! 20ನಾವು ಅವನನ್ನು ಕೊಂದು ಈ ಬಾವಿಯೊಂದರಲ್ಲಿ ಹಾಕಿಬಿಡೋಣ. 'ಕಾಡುಮೃಗ ಅವನನ್ನು ತಿಂದುಬಿಟ್ಟಿತು';

ಎಂದು ಹೇಳಿದರೆ ಆಯಿತು, ಬನ್ನಿ. ಆಗ ಅವನ ಕನಸುಗಳು ಏನಾಗುತ್ತವೋ ನೋಡೋಣ," ಎಂದು
ಒಬ್ಬರಿಗೊಬ್ಬರು ಮಾತಾಡಿಕೊಂಡರು.

21 ರೂಬೇನನು ಈ ಮಾತನ್ನು ಕೇಳಿಸಿಕೊಂಡು, ಅವನನ್ನು ಅವರ ಕೈಯಿಂದ ತಪ್ಪಿಸುವ
ಉದ್ದೇಶದಿಂದ, "ನಾವು ಅವನ ಪ್ರಾಣತೆಗೆಯಬೇಕಾಗಿಲ್ಲ, [22]ರಕ್ತಪಾತ ಕೂಡದು. ಕಾಡಿನಲ್ಲಿರುವ ಈ ಬಾವಿ
ಒಂದರಲ್ಲಿ ಹಾಕಿಬಿಡಿ, ಅವನ ಮೇಲೆ ಕೈಹಾಕಬೇಡಿ," ಎಂದು ಅವರಿಗೆ ಹೇಳಿದ. ಅವನನ್ನು ಅವರಿಂದ
ತಪ್ಪಿಸಿ ತಂದೆಗೆ ಮತ್ತೆ ಒಪ್ಪಿಸಬೇಕೆಂಬ ಗುರಿ ರೂಬೇನನದಾಗಿತ್ತು. [23]ಜೋಸೆಫನು ತನ್ನ ಅಣ್ಣಂದಿರ ಹತ್ತಿರಕ್ಕೆ
ಬಂದಾಗ ಅವರು ಅವನ ಮೇಲಿದ್ದ ನಿಲುವಂಗಿಯನ್ನು ತೆಗೆದುಬಿಟ್ಟರು. [24]ಅವನನ್ನು ಹಿಡಿದು ಬಾವಿಯೊಳಗೆ
ಹಾಕಿದರು. ಆ ಬಾವಿ ನೀರಿಲ್ಲದೆ ಬರಿದಾಗಿತ್ತು.

25 ತರುವಾಯ ಅವರು ಊಟಕ್ಕೆ ಕುಳಿತುಕೊಂಡರು. ಅಷ್ಟರಲ್ಲಿ, ಇಷ್ಮಾಯೇಲರ ಗುಂಪೊಂದು
ಗಿಲ್ಯಾದಿನಿಂದ ಬರುವುದು ಅವರ ಕಣ್ಣಿಗೆ ಕಾಣಿಸಿತು. ಇವರು ತಮ್ಮ ಒಂಟೆಗಳ ಮೇಲೆ ಪರಿಮಳ ಪದಾರ್ಥ,
ಸುಗಂಧ ತೈಲ, ರಸಗಂಧ ಇವುಗಳನ್ನು ಹೇರಿಕೊಂಡು, ಈಜಿಪ್ಟಿಗೆ ಪ್ರಯಾಣಮಾಡುತ್ತಿದ್ದರು. [26]ಆಗ
ಯೆಹೂದನು ತನ್ನ ಅಣ್ಣತಮ್ಮಂದಿರಿಗೆ, "ನಾವು ನಮ್ಮ ತಮ್ಮನನ್ನು ಕೊಂದು ಆ ಕೊಲೆಯನ್ನು
ಮರೆಮಾಡಿದರೆ ಪ್ರಯೋಜನವೇನು? [27]ಅವನನ್ನು ಆ ಇಷ್ಮಾಯೇಲರಿಗೆ ಮಾರಿಬಿಡೋಣ, ಬನ್ನಿ; ನಾವು
ಅವನ ಮೇಲೆ ಕೈ ಹಾಕಬಾರದು, ಅವನು ನಮ್ಮ ತಮ್ಮನಲ್ಲವೆ? ರಕ್ತಸಂಬಂಧಿಯಲ್ಲವೆ?" ಎಂದು ಹೇಳಿದ.
ಅವನ ಆ ಮಾತಿಗೆ ಅಣ್ಣತಮ್ಮಂದಿರು ಒಪ್ಪಿದರು. [28]ಅಷ್ಟರಲ್ಲಿ, ಮಿದ್ಯಾನಿನ ವರ್ತಕರು ಹಾದುಹೋಗುತ್ತಿದ್ದರು.
ಅವರು ಜೋಸೆಫನನ್ನು ಬಾವಿಯೊಳಗಿಂದ ಎತ್ತಿ ಈ ಇಷ್ಮಾಯೇಲರಿಗೆ ಇಪ್ಪತ್ತು ಬೆಳ್ಳಿನಾಣ್ಯಗಳಿಗೆ
ಮಾರಿಬಿಟ್ಟರು. ಇವರು ಅವನನ್ನು ಈಜಿಪ್ಟ್ ದೇಶಕ್ಕೆ ತೆಗೆದುಕೊಂಡು ಹೋದರು.

29 ರೂಬೇನನು ಮರಳಿ ಆ ಬಾವಿಯ ಬಳಿಗೆ ಬಂದು ನೋಡಿದನು. ಅದರಲ್ಲಿ ಜೋಸೆಫನು
ಇರಲಿಲ್ಲ. [30]ದುಃಖವನ್ನು ತಾಳಲಾರದೆ ತನ್ನ ಬಟ್ಟೆಯನ್ನು ಹರಿದುಕೊಂಡನು; ತಮ್ಮಂದಿರ ಬಳಿಗೆ ಬಂದು,
"ಆ ಹುಡುಗ ಇಲ್ಲವಲ್ಲಾ! ಅಯ್ಯೋ, ನಾನೇನು ಮಾಡಲಿ?" ಎಂದು ಗೋಳಾಡಿದ.

31 ಬಳಿಕ ಅವರು ಒಂದು ಹೋತವನ್ನು ಕೊಯ್ದು, ಅದರ ರಕ್ತದಲ್ಲಿ ಜೋಸೆಫನ ನಿಲುವಂಗಿಯನ್ನು
ಅದ್ದಿ [32]ಆ ಅಂಗಿಯನ್ನು ತಮ್ಮ ತಂದೆಗೆ ಕಳಿಸಿದರು. ಅದನ್ನು ತಂದವರು, "ಇದು ನಮಗೆ ಸಿಕ್ಕಿತು; ಇದು
ನಿಮ್ಮ ಮಗನ ಅಂಗಿಯೋ ಅಲ್ಲವೋ ನೋಡಿ," ಎಂದು ಹೇಳಿದರು.

33 ಯಕೋಬನು ಅದರ ಗುರುತನ್ನು ಹಿಡಿದು, "ಈ ಅಂಗಿ ನಿಶ್ಚಯವಾಗಿ ನನ್ನ ಮಗನದೇ;
ಕಾಡುಮೃಗ ಅವನನ್ನು ಕೊಂದು ತಿಂದಿರಬೇಕು, ಜೋಸೆಫನನ್ನು ಅದು ನಿಸ್ಸಂದೇಹವಾಗಿ ಸೀಳಿ
ಹಾಕಿರಬೇಕು," ಎಂದು ಹೇಳಿ, [34]ದುಃಖ ತಾಳಲಾಗದೆ ತನ್ನ ಬಟ್ಟೆಯನ್ನು ಹರಿದುಕೊಂಡ; ನಡುವಿಗೆ
ಗೋಣಿತಟ್ಟನ್ನು ಸುತ್ತಿಕೊಂಡ; ತನ್ನ ಮಗನಿಗಾಗಿ ಬಹುದಿನಗಳವರೆಗೂ ಅತ್ತು ಪ್ರಲಾಪಿಸಿದ.
[35]ದುಃಖಶಮನಮಾಡಲು ಪುತ್ರಪುತ್ರಿಯರೆಲ್ಲರು ಎಷ್ಟು ಪ್ರಯತ್ನಿಸಿದರೂ ಅವನು ಸಾಂತ್ವನಗೊಳ್ಳಲಿಲ್ಲ;
"ನಾನು ಹೀಗೆಯೇ ಹಂಬಲಿಸುತ್ತಾ ನನ್ನ ಮಗನಿರುವ ಮೃತ್ಯುಲೋಕವನ್ನು ಸೇರುತ್ತೇನೆ," ಎಂದು
ಮಗನಿಗಾಗಿ ದುಃಖಿಸುತ್ತಲೇ ಇದ್ದ.

36 ಮಿದ್ಯಾನ್ಯರು ಜೋಸೆಫನನ್ನು ಈಜಿಪ್ಟ್ ದೇಶಕ್ಕೆ ತೆಗೆದುಕೊಂಡು ಹೋಗಿ ಫರೋಹನ
ಆಸ್ಥಾನದಲ್ಲಿದ್ದ ಪೋಟೀಫರನಿಗೆ ಮಾರಿದರು; ಇವನು, ದೊಡ್ಡ ಉದ್ಯೋಗಸ್ಥನೂ ಮೈಗಾವಲಿನವರ
ದಳಪತಿಯೂ ಆಗಿದ್ದನು.

## ಯೆಹೂದ ಮತ್ತು ತಾಮಾರ್

**38** ಇತ್ತ ಯೆಹೂದನು ತನ್ನ ಅಣ್ಣ ತಮ್ಮಂದಿರನ್ನು ಬಿಟ್ಟು ಅದುಲ್ಲಾಮ್ ಊರಿನವನಾದ ಹೀರಾ ಎಂಬವನ
ಬಳಿ ವಾಸಮಾಡಲು ಹೋದನು. [2]ಅಲ್ಲಿ ಕಾನಾನ್ಯಳಾದ ಒಬ್ಬ ಮಹಿಳೆಯನ್ನು ಕಂಡು ಮದುವೆಯಾದನು.
ಅವಳ ತಂದೆಯ ಹೆಸರು ಶೂಗ. [3]ಆಕೆ ಯೆಹೂದನಿಗೆ ಒಂದು ಗಂಡುಮಗುವನ್ನು ಹೆತ್ತಳು. ಅದಕ್ಕೆ 'ಏರ'

ಎಂದು ಹೆಸರಿಡಲಾಯಿತು. 4ಆಕೆ ಗರ್ಭ ಧರಿಸಿ ಎರಡನೆಯ ಗಂಡುಮಗುವನ್ನು ಹೆರಲು ಅದಕ್ಕೆ ‘ಓನಾನ’
ಎಂದು ಹೆಸರಿಡಲಾಯಿತು. 5ಮತ್ತೊಮ್ಮೆ ಆಕೆ ಗರ್ಭಿಣಿಯಾಗಿ ಗಂಡು ಮಗುವನ್ನು ಹೆತ್ತಳು. ಅದಕ್ಕೆ ‘ಶೇಲಹ’
ಎಂದು ಹೆಸರಿಟ್ಟಳು. ಆಕೆ ಈ ಮಗುವನ್ನು ಹೆರುವಾಗ ಯೆಹೂದನು ಕೆಜೀಬ್ ಊರಿನಲ್ಲಿದ್ದನು.

6 ಯೆಹೂದನು ತನ್ನ ಜೇಷ್ಠಪುತ್ರ ಏರನಿಗೆ ‘ತಾಮಾರ್’ ಎಂಬ ಹೆಣ್ಣನ್ನು ತಂದು ಮದುವೆ
ಮಾಡಿದನು. 7ಆದರೆ ಯೆಹೂದನ ಈ ಹಿರಿಯ ಮಗ ಸರ್ವೇಶ್ವರಸ್ವಾಮಿಯ ದೃಷ್ಟಿಯಲ್ಲಿ ಕೆಟ್ಟವನಾಗಿದ್ದನು.
ಆದ್ದರಿಂದ ಸರ್ವೇಶ್ವರ ಅವನನ್ನು ಸಾವಿಗೀಡುಮಾಡಿದರು. 8ಬಳಿಕ ಯೆಹೂದನು ಓನಾನನಿಗೆ, “ನೀನು
ನಿನ್ನ ಅತ್ತಿಗೆಯನ್ನು ಮದುವೆ ಮಾಡಿಕೊಂಡು ಮೈದುನ ಧರ್ಮಕ್ಕನುಸಾರ ನಿನ್ನ ಅಣ್ಣನಿಗೆ ಸಂತತಿಯನ್ನು
ಹುಟ್ಟಿಸು,” ಎಂದನು. 9ಆದರೆ ಓನಾನನು, ಹೀಗೆ ಆಗುವ ಸಂತಾನ ತನ್ನದಾಗುವುದಿಲ್ಲವೆಂದು
ತಿಳಿದುಕೊಂಡನು. ಅಣ್ಣನಿಗೆ ಸಂತತಿ ಹುಟ್ಟಿಸಲು ಅವನು ಒಪ್ಪಲಿಲ್ಲ. ತನ್ನ ಅತ್ತಿಗೆಯಲ್ಲಿ ಸಂಭೋಗ
ಮಾಡುವಾಗಲೆಲ್ಲ ತನ್ನ ವೀರ್ಯವನ್ನು ಹಾಸಿಗೆಪಾಲು ಮಾಡುತ್ತಿದ್ದನು.

10ಈ ನಡತೆ ಸರ್ವೇಶ್ವರಸ್ವಾಮಿಯ ದೃಷ್ಟಿಯಲ್ಲಿ ಕೆಟ್ಟದಾಗಿತ್ತು. ಆದ್ದರಿಂದ ಸರ್ವೇಶ್ವರ ಅವನನ್ನೂ
ಸಾವಿಗೀಡುಮಾಡಿದರು. 11ಅನಂತರ ಯೆಹೂದನು, ಬಹುಶಃ ಶೇಲಹನು ಕೂಡ ತನ್ನ ಅಣ್ಣಂದಿರಂತೆ
ಸತ್ತಾನೆಂದು ಆಲೋಚಿಸಿ, ತನ್ನ ಸೊಸೆ ತಾಮಾರಳಿಗೆ, “ನನ್ನ ಮಗ ಶೇಲಹನು ಪ್ರಾಯಸ್ಥನಾಗುವ ತನಕ
ನೀನು ವಿಧವೆಯಾಗಿ ತೌರುಮನೆಯಲ್ಲಿರು,” ಎಂದು ನೆವಹೇಳಿದನು. ಅಂತೆಯೇ ಅವಳು ತೌರುಮನೆಗೆ
ಹೋಗಿ ಅಲ್ಲೇ ವಾಸಮಾಡಿದಳು.

12 ಬಹಳ ದಿನಗಳಾದ ಮೇಲೆ ಯೆಹೂದನ ಹೆಂಡತಿಯಾಗಿದ್ದ ಶೂಗನ ಮಗಳು ತೀರಿಹೋದಳು.
ದುಃಖಶಮನವಾದ ಮೇಲೆ ಯೆಹೂದನು, ತನ್ನ ಕುರಿಗಳಿಗೆ ಉಣ್ಣೇ ಕತ್ತರಿಸುವವರಿದ್ದ ತಿಮ್ನಾ ಊರಿಗೆ
ಹೋದನು. ಅದುಲ್ಲಾಮ್ಯದ ತನ್ನ ಗೆಳೆಯ ಹೀರಾ ಅವನ ಜೊತೆಯಲ್ಲಿ ಹೋದನು. 13ಮಾವನು ತನ್ನ
ಕುರಿಗಳ ಉಣ್ಣೇ ಕತ್ತರಿಸುವುದಕ್ಕಾಗಿ ತಿಮ್ನಾ ಊರಿಗೆ ಹೊರಟಿದ್ದಾರೆಂಬ ಸಮಾಚಾರ ತಾಮಾರಳಿಗೆ
ಮುಟ್ಟಿತು. 14ಆಗ ಆಕೆ, ‘ಶೇಲಹನು ಪ್ರಾಯಸ್ಥನಾಗಿದ್ದರು ನನ್ನನ್ನು ಅವನಿಗೆ ಮದುವೆ ಮಾಡಿಕೊಡಲಿಲ್ಲವಲ್ಲಾ’
ಎಂದುಕೊಂಡು ತನ್ನ ವಿಧವೆವಸ್ತ್ರಗಳನ್ನು ತೆಗೆದಿಟ್ಟಳು. ಮುಸುಕನ್ನು ಹಾಕಿಕೊಂಡು ತನ್ನನ್ನೇ
ಮರೆಸಿಕೊಂಡಳು. ತಿಮ್ನಾ ಊರಿನ ದಾರಿಯಲ್ಲಿ ಇರುವ ಏನಯಿಮ್ ಊರಿನ ಬಾಗಿಲ ಬಳಿಯಲ್ಲೆ
ಕುಳಿತುಕೊಂಡಳು.

15 ಯೆಹೂದನು ಆಕೆಯನ್ನು ನೋಡಿದಾಗ ಆಕೆಯ ಮುಖದಮೇಲೆ ಮುಸುಕು ಇತ್ತು; ಸೊಸೆ
ಎಂದು ತಿಳಿಯದೆ ಹೋಯಿತು. 10ಆಕೆ ವೇಶ್ಯೆ ಎಂದೇ ಭಾವಿಸಿ, ದಾರಿಯಿಂದ ಓರೆಯಾಗಿ, ಆಕೆಯ ಬಳಿಗೆ
ಹೋಗಿ, “ಸಂಭೋಗಕ್ಕೆ ಬರುತ್ತೀಯಾ?” ಎಂದು ಕರೆದನು. “ಬರಬೇಕಾದರೆ ಏನು ಕೊಡುತ್ತೀಯಾ?”
ಎಂದಳು ಆಕೆ. 17“ಹಿಂಡಿನಿಂದ ಒಂದು ಹೋತಮರಿಯನ್ನು ಕಳಿಸುತ್ತೇನೆ,” ಎಂದ ಆತ. ಆಗ ಆಕೆ, “ಅದನ್ನು
ಕಳಿಸುವ ತನಕ ನನ್ನಲ್ಲಿ ಏನಾದರು ಒತ್ತೆಯಿಡಬೇಕು,” ಎಂದಳು. 18“ಏನು ಒತ್ತೆಯಿಡಬೇಕು?” ಎಂದು
ಅವನು ಕೇಳಲು ಆಕೆ, “ನಿನ್ನ ಮುದ್ರೆ ಉಂಗುರ, ಅದರ ದಾರ ಮತ್ತು ನಿನ್ನ ಕೈಗೋಲು, ಈ ಮೂರನ್ನೂ
ಇಡು,” ಎಂದಳು. ಅವನು ಅವುಗಳನ್ನು ಕೊಟ್ಟು ಆಕೆಯನ್ನು ಸಂಭೋಗಿಸಿದನು. ಆಕೆ ಅವನಿಗೆ ಗರ್ಭವತಿ
ಆದಳು. 19ಮನೆಗೆ ಬಂದಮೇಲೆ ತಾನು ಹಾಕಿಕೊಂಡಿದ್ದ ಮುಸುಕನ್ನು ತೆಗೆದಿಟ್ಟು ವಿಧವೆಯ ವಸ್ತ್ರಗಳನ್ನು
ಮತ್ತೆ ಉಟ್ಟುಕೊಂಡಳು.

20 ಯೆಹೂದನು ತಾನು ಇಟ್ಟಿದ್ದ ಒತ್ತೆಯನ್ನು ಆ ಹೆಂಗಸಿನಿಂದ ಬಿಡಿಸಿಕೊಳ್ಳುವ ಸಲುವಾಗಿ ತನ್ನ
ಗೆಳೆಯ ಆ ಅದುಲ್ಲಾಮ್ಯನ ಸಂಗಡ ಹೋತಮರಿಯನ್ನು ಕಳಿಸಿದನು. ಆಕೆ ಅವನಿಗೆ ಸಿಕ್ಕಲಿಲ್ಲ. 21ಅವನು
ಅವಳ ಊರಿನವರನ್ನು, “ಏನಯಿಮ್ ಬಳಿ ದಾರಿಪಕ್ಕದಲ್ಲಿ ಕುಳಿತಿದ್ದ ವೇಶ್ಯೆ ಎಲ್ಲಿ?” ಎಂದು ವಿಚಾರಿಸಿದನು.
ಅವರು, “ಇಲ್ಲಿ ಯಾವ ವೇಶ್ಯೆಯೂ ಇಲ್ಲ,” ಎಂದು ಉತ್ತರಕೊಟ್ಟರು.

22 ಅವನು ಯೆಹೂದನ ಬಳಿಗೆ ಹಿಂದಿರುಗಿ ಬಂದು, “ನಾನು ಅವಳನ್ನು ಕಾಣಲಿಲ್ಲ;
ವಿಚಾರಿಸಿದಾಗ ಆ ಊರಿನವರು ಇಲ್ಲಿ ಯಾವ ವೇಶ್ಯೆಯೂ ಇಲ್ಲವೆಂದರು” ಎಂದು ವರದಿಮಾಡಿದನು.
23ಅದಕ್ಕೆ ಯೆಹೂದನು, “ಇನ್ನು ನಾವು ಪರಿಹಾಸ್ಯಕ್ಕೆ ಗುರಿಯಾದೇವು; ನಾನಿಟ್ಟ ಒತ್ತೆಯನ್ನು ಅವಳೇ

ಇಟ್ಟುಕೊಳ್ಳಲಿ; ನಾನಂತೂ ಹೋತಮರಿಯನ್ನು ಕಳಿಸಿದ್ದಾಯಿತು; ನಿನ್ನಿಂದಲು ಅವಳನ್ನು ಕಂಡುಹಿಡಿಯಲಾಗಲಿಲ್ಲ," ಎಂದು ಸುಮ್ಮನಾದನು.

24 ಸುಮಾರು ಮೂರು ತಿಂಗಳಾದ ಬಳಿಕ, ಯೆಹೂದನಿಗೆ ತನ್ನ ಸೊಸೆ ತಾಮಾರಳು ವ್ಯಭಿಚಾರದಿಂದ ಗರ್ಭವತಿಯಾಗಿದ್ದಾಳೆಂಬ ಸಮಾಚಾರ ಬಂದಿತು. ಅವನು, "ಅವಳನ್ನು ಎಳೆದು ತನ್ನಿ; ಸುಟ್ಟುಹಾಕಬೇಕು," ಎಂದನು.

25 ಅಂತೆಯೇ ಎಳೆದು ತರುವಾಗ ಆಕೆ ತನ್ನ ಮಾವನಿಗೆ ಒತ್ತೆಯ ವಸ್ತುಗಳನ್ನು ಕಳುಹಿಸುತ್ತಾ, "ಇವು ಯಾವನವೊ ಅವನಿಂದಲೇ ನಾನು ಗರ್ಭಿಣಿಯಾದುದು; ಮುದ್ರೆಯುಂಗುರ, ಅದರ ದಾರ ಮತ್ತು ಕೈಗೋಲು ಇವುಗಳನ್ನು ಗುರುತಿಸಿ ತಿಳಿದುಕೊಳ್ಳಬಹುದು," ಎಂದು ಹೇಳಿಕಳಿಸಿದಳು.

26 ಯೆಹೂದನು ಅವುಗಳ ಗುರುತುಹಚ್ಚಿದನು. "ನಾನು ನನ್ನ ಮಗ ಶೇಲಹನನ್ನು ಆಕೆಗೆ ಮದುವೆ ಮಾಡದೆಹೋದೆ. ಈ ಕಾರಣ ನನಗಿಂತ ಆಕೆಯೇ ನೀತಿವಂತಳು," ಎಂದುಕೊಂಡನು. ಇದಾದ ಬಳಿಕ ಅವನು ಆಕೆಯೊಡನೆ ಸಂಸರ್ಗವಿಲ್ಲದೆ ಇದ್ದನು.

27 ತಾಮಾರಳಿಗೆ ಹೆರಿಗೆ ಕಾಲ ಬಂದಾಗ ಆಕೆಯ ಗರ್ಭದಲ್ಲಿ ಅವಳಿಜವಳಿ ಮಕ್ಕಳಿರುವುದು ಕಂಡುಬಂದಿತು. [28]ಆಕೆ ಹೆರುವಾಗ ಒಂದು ಮಗು ಕೈಚಾಚಿತು. ಸೂಲಗಿತ್ತಿ, "ಇದು ಮೊದಲು ಬಂದದ್ದು," ಎಂದು ಹೇಳಿ ಅದರ ಕೈಗೆ ಕೆಂಪು ನೂಲನ್ನು ಕಟ್ಟಿದಳು. [29]ಆದರೆ ಅದು ಕೈಯನ್ನು ಹಿಂದಕ್ಕೆ ತೆಗೆದುಕೊಂಡಿತು. ಅದರೊಡನೆ ಇದ್ದ ಇನ್ನೊಂದು ಕೂಸು ಹೊರಗೆ ಬಂದಿತು. ಇದನ್ನು ಕಂಡ ಸೂಲಗಿತ್ತಿ, "ನೀನು ಕಿತ್ತುಕೊಂಡು ಬಂದಿರುತ್ತೀಯಲ್ಲಾ" ಎಂದಳು. ಈ ಕಾರಣ ಆ ಮಗುವಿಗೆ 'ಪೆರೆಚ್' ಎಂದು ಹೆಸರಾಯಿತು. [30]ತರುವಾಯ ಕೈಗೆ ಕೆಂಪುನೂಲು ಕಟ್ಟಿಸಿಕೊಂಡ ಕೂಸು ಹುಟ್ಟಿತು. ಅದಕ್ಕೆ 'ಜೆರಹ' ಎಂದು ಹೆಸರಾಯಿತು.

### ಜೋಸೆಫ್ ಮತ್ತು ಪೋಟೀಫರನ ಪತ್ನಿ

**39** ಅತ್ತ ಜೋಸೆಫನನ್ನು ತೆಗೆದುಕೊಂಡು ಹೋದ ಇಷ್ಮಾಯೇಲ್ಯರು ಈಜಿಪ್ಟ್ ದೇಶವನ್ನು ಸೇರಿದಾಗ ಅವನನ್ನು ಈಜಿಪ್ಟಿನ ಪೋಟೀಫರ್ ಎಂಬವನಿಗೆ ಮಾರಿಬಿಟ್ಟರು. ಪೋಟೀಫರನು ಫರೋಹನ ಆಸ್ಥಾನದ ಒಬ್ಬ ಉದ್ಯೋಗಿ ಮತ್ತು ಅಂಗರಕ್ಷಕರ ದಳಪತಿ. [2]ಸರ್ವೇಶ್ವರಸ್ವಾಮಿ ಜೋಸೆಫನ ಸಂಗಡ ಇದ್ದ ಕಾರಣ, ಅವನು ಏಳಿಗೆಯಾಗಿ ತನ್ನ ಈಜಿಪ್ಟಿನ ದಣಿಯ ಮನೆಯಲ್ಲಿ ಒಬ್ಬ ಸೇವಕನಾದ. [3]ಜೋಸೆಫನ ಸಂಗಡ ಸರ್ವೇಶ್ವರ ಇದ್ದು ಅವನು ಮಾಡುವ ಕೆಲಸವನ್ನೆಲ್ಲ ಫಲಕಾರಿಯಾಗಿ ಮಾಡುತ್ತಾರೆಂಬುದು ಅವನ ದಣಿಗೆ ತಿಳಿಯಿತು. [4]ಜೋಸೆಫ್ ಅವನ ಕೃಪೆಗೆ ಪಾತ್ರನಾದ. ದಣಿ ಅವನನ್ನು ತನ್ನ ಆಪ್ತ ಸೇವಕನನ್ನಾಗಿ ನೇಮಿಸಿಕೊಂಡ. ಅದು ಮಾತ್ರವಲ್ಲ, ತನ್ನ ಮನೆಯಲ್ಲೇ ಮೇಲ್ವಿಚಾರಕನನ್ನಾಗಿ ಮಾಡಿ, ತನ್ನ ಆಸ್ತಿಪಾಸ್ತಿಯನ್ನೆಲ್ಲ ಅವನ ವಶಕ್ಕೆ ಒಪ್ಪಿಸಿದ. [5]ಹೀಗೆ ತನ್ನ ಮನೆಮಂದಿರದ ಮೇಲೂ ಆಸ್ತಿಪಾಸ್ತಿಯ ಮೇಲೂ ಜೋಸೆಫನನ್ನೇ ಆಡಳಿತಗಾರನನ್ನಾಗಿ ನೇಮಿಸಿದ. ಜೋಸೆಫನ ಪ್ರಯುಕ್ತ ಸರ್ವೇಶ್ವರ ಆ ಈಜಿಪ್ಟಿನವನ ಮನೆತನವನ್ನು ಹರಸಿದರು. ಮನೆಯಲ್ಲೂ ಸರ್ವೇಶ್ವರಸ್ವಾಮಿಯ ಆಶೀರ್ವಾದವಿತ್ತು. [6]ಪೋಟೀಫರನು ಹೀಗೆ ತನ್ನದನ್ನೆಲ್ಲ ಜೋಸೆಫನ ವಶಕ್ಕೆ ಒಪ್ಪಿಸಿ, 'ಅವನು ಇದ್ದಾನಲ್ಲಾ' ಎಂದುಕೊಂಡು, ತಾನು ತಿನ್ನುತ್ತಿದ್ದ ಆಹಾರ ಒಂದನ್ನು ಬಿಟ್ಟು, ಬೇರೆ ಏನನ್ನೂ ಕುರಿತು ಚಿಂತಿಸದೆ ಇದ್ದ.

7 ಜೋಸೆಫನದು ಸೊಗಸಾದ ಮೈಕಟ್ಟು, ಸುಂದರವಾದ ರೂಪ. ಹೀಗಿರಲು ಅವನ ದಣಿಯ ಪತ್ನಿ ಅವನ ಮೇಲೆ ಕಣ್ಣುಹಾಕಿದಳು. "ನನ್ನೊಡನೆ ಹಾಸಿಗೆಗೆ ಬಾ," ಎಂದು ಕರೆದಳು. [8]ಜೋಸೆಫನು ಒಪ್ಪಲಿಲ್ಲ. "ನನ್ನ ಒಡೆಯ ತನ್ನ ಆಸ್ತಿಪಾಸ್ತಿಯನ್ನೆಲ್ಲ ನನ್ನ ವಶಕ್ಕೆ ಒಪ್ಪಿಸಿದ್ದಾರೆ; ನಾನಿರುವುದರಿಂದ ಮನೆಯ ಎಲ್ಲ ವಿಷಯಗಳಲ್ಲಿ ನಿಶ್ಚಿಂತರಾಗಿದ್ದಾರೆ, [9]ಈ ಮನೆಯಲ್ಲಿ ನನಗಿಂತ ಹೆಚ್ಚಿನ ಅಧಿಕಾರ ಪಡೆದವರು ಒಬ್ಬರೂ ಇಲ್ಲ; ನಿಮ್ಮನ್ನು ಬಿಟ್ಟು ಮಿಕ್ಕ ಎಲ್ಲವನ್ನು ನನಗೆ ಅಧೀನಮಾಡಿದ್ದಾರೆ. ನೀವು ಅವರ ಧರ್ಮಪತ್ನಿ ಅಲ್ಲವೆ? ಹೀಗಿರುವಲ್ಲಿ, ನಾನು ಇಂತಹ ಮಹಾದುಷ್ಕೃತ್ಯವೆಸಗಿ ದೇವರಿಗೆ ವಿರುದ್ಧ ಹೇಗೆ ಪಾಪಮಾಡಲಿ?" ಎಂದು

ಆಕೆಗೆ ಉತ್ತರಕೊಟ್ಟ. [10]ಆಕೆ ಜೋಸೆಫನ ಸಂಗಡ ದಿನದಿನವೂ ಅದೇ ಮಾತನ್ನು ಎತ್ತುತ್ತಿದ್ದಳು. ಆದರೆ ಅವನು ಅವಳಿಗೆ ಕಿವಿಗೊಡಲಿಲ್ಲ. ಇವಳ ಸಂಸರ್ಗಕ್ಕಾಗಲಿ, ಅವಳ ಬಳಿ ಇರುವುದಕ್ಕಾಗಲಿ ಒಪ್ಪಲಿಲ್ಲ.

11 ಇಂತಿರಲು, ಒಂದು ದಿನ ಜೋಸೆಫನು ತನ್ನ ಕೆಲಸದ ಮೇಲೆ ಬಂದಾಗ ಮನೆಯ ಸೇವಕರಾರೂ ಒಳಗೆ ಇರಲಿಲ್ಲ. ಆಕೆ ಅವನ ಬಟ್ಟೆಯನ್ನು ಹಿಡುಕೊಂಡು "ಹಾಸಿಗೆಗೆ ಬಾ," ಎಂದು ಕರೆದಳು. ಅವನು ತನ್ನ ಬಟ್ಟೆಯನ್ನು ಅವಳ ಕೈಯಲ್ಲೇ ಬಿಟ್ಟು ತಪ್ಪಿಸಿಕೊಂಡು ಓಡಿಹೋದ. [12]"ಬಟ್ಟೆಯನ್ನು ನನ್ನ ಕೈಯಲ್ಲಿ ಬಿಟ್ಟು ತಪ್ಪಿಸಿಕೊಂಡು ಹೋಗಿ ಬಿಟ್ಟನಲ್ಲಾ!" ಎಂದುಕೊಂಡ ಆಕೆ, [13]ಮನೆಯ ಸೇವಕರನ್ನು ಕರೆದಳು. [14]"ನೋಡಿ, ನನ್ನ ಯಜಮಾನರು ಮಾಡಿರುವ ಕೆಲಸ. ಒಬ್ಬ ಹಿಬ್ರಿಯನನ್ನು ಮನೆಗೆ ಸೇರಿಸಿಕೊಂಡು ನಮ್ಮನ್ನು ಅವಮಾನಕ್ಕೆ ಗುರಿಮಾಡಿದ್ದಾರೆ. ಅವನು ಅತ್ಯಾಚಾರಕ್ಕಾಗಿ ನನ್ನ ಹತ್ತಿರಕ್ಕೆ ಬಂದ; ನಾನು ಗಟ್ಟಿಯಾಗಿ ಕೂಗಿಕೊಂಡೆ. [15]ನಾನು ಕೂಗುವುನ್ನು ಕೇಳಿ ತನ್ನ ಬಟ್ಟೆಯನ್ನು ನನ್ನ ಬಳಿಯಲ್ಲೇ ಬಿಟ್ಟು ತಪ್ಪಿಸಿಕೊಂಡು ಓಡಿಹೋದ," ಎಂದು ಅವರಿಗೆ ಹೇಳಿದಳು.

16 ಜೋಸೆಫನ ದಣಿ ಮನೆಗೆ ಬರುವವರೆಗೂ ಆ ಬಟ್ಟೆಯನ್ನು ತನ್ನಲ್ಲೇ ಇಟ್ಟುಕೊಂಡಿದ್ದಳು. [17]ಪತಿ ಬಂದಾಗ ಆಕೆ ಅವನಿಗೆ ಅದೇ ಮಾತನ್ನು ಹೇಳುತ್ತಾ, "ನೀವು ಮನೆಗೆ ಸೇರಿಸಿಕೊಂಡ ಆ ಹಿಬ್ರಿಯ ಸೇವಕನು ನನ್ನನ್ನು ಮಾನಭಂಗಪಡಿಸುವುದಕ್ಕಾಗಿ ನನ್ನ ಬಳಿಗೆ ಬಂದ. ನಾನು ಕೂಗಿಕೊಂಡೆ. [18]ಕೂಗುತ್ತಲೇ ತನ್ನ ಬಟ್ಟೆಯನ್ನು ಬಿಟ್ಟು ತಪ್ಪಿಸಿಕೊಂಡು ಓಡಿಹೋದ," ಎಂದು ದೂರು ಇತ್ತಳು.

19 "ನಿಮ್ಮ ಸೇವಕ ನನಗೆ ಹೀಗೆ ಮಾಡಿದ," ಎಂಬ ಆಕೆಯ ಮಾತನ್ನು ಕೇಳಿ ಜೋಸೆಫನ ದಣಿ ಕಿಡಿಕಿಡಿಯಾದ. [20]ಅವನನ್ನು ಬಂಧಿಸಿದ. ರಾಜ ಖೈದಿಗಳನ್ನು ಕಟ್ಟಿಹಾಕಿಸುತ್ತಿದ್ದ ಸೆರೆಮನೆಯಲ್ಲಿ ಅವನನ್ನು ಹಾಕಿಸಿದ. ಜೋಸೆಫನು ಸೆರೆಯಲ್ಲಿ ಇರಬೇಕಾಯಿತು.

21 ಆದರೂ ಸರ್ವೇಶ್ವರ, ಜೋಸೆಫನ ಸಂಗಡ ಇದ್ದರು. ಅವನಿಗೆ ಅಪಾರ ಪ್ರೀತಿ ತೋರಿಸಿ, ಅವನಿಗೆ ಸೆರೆಯಜಮಾನನ ದಯೆ ದೊರಕುವಂತೆ ಮಾಡಿದರು. [22]ಆ ಸೆರೆಯಜಮಾನ ಸೆರೆಯಲ್ಲಿದ್ದ ಎಲ್ಲರನ್ನು ಜೋಸೆಫನ ವಶಕ್ಕೆ ಬಿಟ್ಟನು. ಅಲ್ಲಿಯ ಕೆಲಸಕಾರ್ಯವೆಲ್ಲ ಜೋಸೆಫನ ನೇತೃತ್ವದಲ್ಲಿ ನಡೆಯುವಂತಾಯಿತು. ಅವನು ಕೈಗೊಂಡ ಕೆಲಸವೆಲ್ಲ ಜಯವಾಗುವಂತೆ ಮಾಡುತ್ತಿದ್ದರು. ಈ ಕಾರಣ ಸೆರೆಮನೆಯ ಯಜಮಾನ ಅಲ್ಲಿಯ ಎಲ್ಲ ವಿಷಯದಲ್ಲೂ ನಿಶ್ಚಿಂತನಾಗಿದ್ದನು.

## ಖೈದಿಗಳ ಕನಸು – ಜೋಸೆಫನಿತ್ತ ಅರ್ಥ

**40** ಈ ಘಟನೆಗಳಾದ ಬಳಿಕ ಈಜಿಪ್ಟಿನ ಅರಸನಾದ ಫರೋಹನ ಮುಖ್ಯ ಪಾನದಾಯಕ ಮತ್ತು ಮುಖ್ಯ ಅಡಿಗೆಭಟ್ಟ ಯಾವುದೋ ವಿಷಯದಲ್ಲಿ ತಮ್ಮ ದಣಿಗೆ ದ್ರೋಹಮಾಡಿದ್ದರು. [2]ಫರೋಹನು ಆ ಇಬ್ಬರು ನೌಕರರ ಮೇಲೆ, ಅಂದರೆ ಪಾನಸೇವಕರಲ್ಲಿ ಮುಖ್ಯಸ್ಥನ ಮೇಲೆಯೂ ಅಡಿಗೆಭಟ್ಟರ ಮುಖ್ಯಸ್ಥನ ಮೇಲೆಯೂ ಕೋಪಗೊಂಡು, [3]ಅವರನ್ನು ಅಂಗರಕ್ಷಕರ ದಳಪತಿಯ ವಠಾರದಲ್ಲಿದ್ದ ಸೆರೆಯಲ್ಲಿ ಹಾಕಿಸಿದ್ದನು. [4]ದಳಪತಿ ಜೋಸೆಫನನ್ನು ಅವರ ಉಪಚಾರಕ್ಕೆ ನೇಮಿಸಿದ್ದನು. ಜೋಸೆಫನು ಅವರಿಗೆ ಸೇವೆಮಾಡಬೇಕಾಗಿತ್ತು.

5 ಕೆಲವು ಕಾಲವಾದ ಮೇಲೆ, ಆ ಇಬ್ಬರು, ನೌಕರರಿಗೂ ಅಂದರೆ, ಈಜಿಪ್ಟಿನ ಅರಸ ಸೆರೆಗೆ ಹಾಕಿಸಿದ್ದ ಪಾನಸೇವಕನಿಗೂ ಅಡಿಗೆಭಟ್ಟನಿಗೂ ಒಂದೇ ರಾತ್ರಿ ಕನಸುಬಿತ್ತು. ಅವರ ಕನಸುಗಳಿಗೆ ಬೇರೆಬೇರೆ ಅರ್ಥವಿತ್ತು. [6]ಬೆಳಿಗ್ಗೆ ಜೋಸೆಫನು ಅವರ ಬಳಿಗೆ ಬಂದಾಗ ಚಿಂತಾಕ್ರಾಂತರಾಗಿರುವುದು ಕಾಣಿಸಿತು. [7]ಅದನ್ನು ಗಮನಿಸಿದ ಜೋಸೆಫನು, "ಈ ದಿನ ನಿಮ್ಮ ಮುಖ ಕಳೆಗುಂದಿದೆ ಏಕೆ?" ಎಂದು ತನ್ನೊಂದಿಗೆ ಸೆರೆಯಲ್ಲಿದ್ದ ಆ ನೌಕರರನ್ನು ಕೇಳಿದ. [8]ಅವರು, "ನಮಗೆ ಸ್ವಪ್ನಬಿತ್ತು; ಅದರ ಅರ್ಥಹೇಳುವವರು ಯಾರೂ ಇಲ್ಲ," ಎಂದರು. ಜೋಸೆಫನು ಅವರಿಗೆ, "ಸ್ವಪ್ನಗಳ ಅರ್ಥ ದೇವರಿಂದ ದೊರಕಬಹುದಲ್ಲವೆ? ದಯವಿಟ್ಟು ನಿಮ್ಮ ಸ್ವಪ್ನಗಳನ್ನು ನನಗೆ ತಿಳಿಸಿ," ಎಂದ.

9 ಆಗ ಆ ಮುಖ್ಯ ಪಾನಸೇವಕ ಜೋಸೆಫನಿಗೆ, "ನನ್ನ ಕನಸಿನಲ್ಲಿ ಒಂದು ದ್ರಾಕ್ಷಾಲತೆ ನನ್ನೆದುರಿಗೆ ಇರುವುದನ್ನು ಕಂಡೆ. [10]ಅದಕ್ಕೆ ಮೂರು ಕವಲುಗಳಿದ್ದವು. ಅದು ಚಿಗುರುತ್ತಲೇ ಹೂಗಳನ್ನು ಬಿಟ್ಟಿತು. ಆ ಹೂಗಳು ಗೊಂಚಲುಗಳಾಗಿ ಹಣ್ಣಾದವು. [11]ಫರೋಹನ ಪಾನಪಾತ್ರೆ ನನ್ನ ಕೈಯಲ್ಲಿತ್ತು. ನಾನು ಆ ಗೊಂಚಲುಗಳನ್ನು ಕೊಯ್ದು ಪಾತ್ರೆಯಲ್ಲಿ ಹಿಂಡಿ ಆ ಪಾತ್ರೆಯನ್ನು ಫರೋಹನ ಕೈಗೆ ಒಪ್ಪಿಸಿದೆ," ಎಂದು ಹೇಳಿದ.

12 ಅದಕ್ಕೆ ಜೋಸೆಫನು, "ಆ ಕನಸಿನ ಅರ್ಥ ಇದು: ಆ ಮೂರು ಕೊಂಬೆಗಳು ಮೂರು ದಿನಗಳು; [13]ಇನ್ನು ಮೂರು ದಿನಗಳೊಳಗೆ ನೀನು ತಲೆಯೆತ್ತುವಂತೆ ಫರೋಹನು ಮಾಡುವನು; ನಿನ್ನನ್ನು ಮರಳಿ ನೌಕರಿಗೆ ಸೇರಿಸಿಕೊಳ್ಳುವನು; ನೀನು ಮುಂದಿನಂತೆಯೇ ಫರೋಹನಿಗೆ ಪಾನ ಸೇವಕನಾಗಿದ್ದು ಅವನ ಕೈಗೆ ಪಾನಪಾತ್ರೆಯನ್ನು ಒಪ್ಪಿಸುವೆ. [14]ಆದರೆ ನೀನು ಸುಖದಿಂದಿರುವಾಗ ನನ್ನನ್ನು ಮರೆಯದೆ ನನಗೊಂದು ಉಪಕಾರ ಮಾಡು. ಫರೋಹನಿಗೆ ನನ್ನ ವಿಷಯ ತಿಳಿಸಿ ನನ್ನನ್ನು ಈ ಸೆರೆಯಿಂದ ಬಿಡುಗಡೆಮಾಡು. [15]ನಾನು ಹಿಬ್ರಿಯ ದೇಶದವನು. ಕೆಲವರು ನನ್ನನ್ನು ಗುಲಾಮನನ್ನಾಗಿ ಈ ದೇಶಕ್ಕೆ ಹಿಡಿದು ತಂದರು. ಇಲ್ಲಿಯೂ ಸೆರೆಗೆ ಗುರಿಯಾಗಿಸುವಂಥ ದ್ರೋಹವನ್ನು ನಾನೇನು ಮಾಡಿಲ್ಲ," ಎಂದನು.

16 ಜೋಸೆಫನು ಹೇಳಿದ ಅರ್ಥ ಶುಭಕರ ಆದುದೆಂದು ತಿಳಿದ ಆ ಮುಖ್ಯ ಅಡಿಗೆಭಟ್ಟ ಅವನಿಗೆ, "ನಾನು ಕಂಡ ಕನಸನ್ನು ಹೇಳುತ್ತೇನೆ, ಕೇಳು: ಸೊಗಸಾದ ರೊಟ್ಟಿ ಪದಾರ್ಥಗಳು ತುಂಬಿದ್ದ ಮೂರು ಪುಟ್ಟಿಗಳು ನನ್ನ ತಲೆಯ ಮೇಲೆ ಇದ್ದವು. [17]ಮೇಲಣ ಪುಟ್ಟಿಯಲ್ಲಿ ಫರೋಹನಿಗಾಗಿಯೆ ವಿಧವಿಧವಾದ ರೊಟ್ಟಿಪದಾರ್ಥಗಳು ಇದ್ದವು. ಪಕ್ಷಿಗಳು ಬಂದು ಅವುಗಳನ್ನು ನನ್ನ ತಲೆಯ ಮೇಲಿದ್ದ ಪುಟ್ಟಿಯಿಂದಲೆ ತಿನ್ನುತ್ತಾ ಇದ್ದವು," ಎಂದು ಹೇಳಿದ. [18]ಅದಕ್ಕೆ ಜೋಸೆಫನು, "ನಿನ್ನ ಕನಸಿನ ಅರ್ಥ ಇದು: ಆ ಮೂರು ಪುಟ್ಟಿಗಳೇ ಮೂರು ದಿನಗಳು. [19]ಇನ್ನು ಮೂರು ದಿನದೊಳಗೆ ಫರೋಹನು ನಿನ್ನ ಕುತ್ತಿಗೆಗೆ ನೇಣು ಹಾಕಿಸುವನು; ಮರಕ್ಕೆ ತೂಗುಹಾಕಿಸುವನು; ಹಕ್ಕಿಗಳು ಬಂದು ನಿನ್ನ ಮಾಂಸವನ್ನು ತಿಂದುಬಿಡುವುವು," ಎಂದನು.

20 ಮೂರನೆಯ ದಿನ ಫರೋಹನು ಹುಟ್ಟಿದ ಹಬ್ಬದಿನವಾಗಿತ್ತು. ಅವನು ತನ್ನ ಪರಿವಾರದವರಿಗೆಲ್ಲ ಔತಣವನ್ನು ಏರ್ಪಡಿಸಿದ್ದ. ಮುಖ್ಯ ಪಾನಸೇವಕನನ್ನೂ ಮುಖ್ಯ ಅಡಿಗೆಭಟ್ಟನನ್ನೂ ಬಿಡಿಸಿ ಬರಮಾಡಿದ, ತನ್ನ ಪರಿವಾರದವರ ಮಧ್ಯದಲ್ಲೆ ಅವರ ತಲೆಯನ್ನು ಎತ್ತಿಸಿದ. [21]ಪಾನ ಸೇವಕರ ಮುಖ್ಯಸ್ಥನನ್ನು ಪುನಃ ಅವನ ನೌಕರಿಗೆ ಏರಿಸಿದ; ಅವನು ಪಾನಪಾತ್ರೆಯನ್ನು ಫರೋಹನ ಕೈಗೆ ಒಪ್ಪಿಸುವಂಥವನಾದ. [22]ಆದರೆ ಮುಖ್ಯ ಅಡಿಗೆ ಭಟ್ಟನನ್ನು ನೇಣು ಹಾಕಿಸಿದ. ಹೀಗೆ ಜೋಸೆಫನು ಹೇಳಿದ ಅರ್ಥ ಕಾರ್ಯಗತವಾಯಿತು. [23]ಆದರೆ ಮುಖ್ಯ ಪಾನಸೇವಕನು ಜೋಸೆಫನನ್ನು ನೆನಪಿಗೆ ತಂದುಕೊಳ್ಳಲಿಲ್ಲ. ಅವನನ್ನು ಮರೆತೇ ಬಿಟ್ಟ.

### ಫರೋಹನ ಕನಸುಗಳಿಗೆ ಜೋಸೆಫನಿತ್ತ ಅರ್ಥ

**41** ಎರಡು ವರ್ಷಗಳಾದ ಮೇಲೆ ಫರೋಹನಿಗೆ ಒಂದು ಕನಸುಬಿತ್ತು. ಆ ಕನಸಿನಲ್ಲಿ ಅವನು ನೈಲ್‌ನದಿಯ ತೀರದಲ್ಲಿ ನಿಂತಿದ್ದನು. [2]ಆಗ ಅಚ್ಚುಕಟ್ಟಾದ ಏಳು ಕೊಬ್ಬಿದ ಹಸುಗಳು ಈ ನದಿಯೊಳಗಿಂದ ಬಂದು ಜೊಂಡು ಹುಲ್ಲಿನಲ್ಲಿ ಮೇಯುತ್ತಿದ್ದವು. [3]ಅವುಗಳ ಹಿಂದೆಯೇ ಒಣಕಲಾದ ಏಳು ಬಡ ಹಸುಗಳು ನದಿಯೊಳಗಿಂದ ಬಂದು ಮೊದಲು ಕಾಣಿಸಿದ ಹಸುಗಳ ಹತ್ತಿರ ನದಿಯ ತೀರದಲ್ಲೇ ನಿಂತವು. [4]ಒಣಕಲಾದ ಈ ಬಡ ಹಸುಗಳು ಅಚ್ಚುಕಟ್ಟಾದ ಆ ಕೊಬ್ಬಿದ ಹಸುಗಳನ್ನು ತಿಂದುಬಿಟ್ಟವು. ಅಷ್ಟರಲ್ಲಿ ಫರೋಹನಿಗೆ ಎಚ್ಚರವಾಯಿತು.

5 ಫರೋಹನಿಗೆ ಮತ್ತೆ ನಿದ್ರೆ ಹತ್ತಿದಾಗ ಅವನಿಗೆ ಇನ್ನೊಂದು ಕನಸುಬಿತ್ತು. ಅದರಲ್ಲಿ ಕಾಳುತುಂಬಿದ ಏಳು ಬಲಿತ ತೆನೆಗಳು ಒಂದೇ ದಂಟಿನಲ್ಲಿ ಹುಟ್ಟಿದವು. [6]ಅವುಗಳ ಹಿಂದೆಯೇ ಮೂಡಣ ಗಾಳಿಯಿಂದ ಒಣಗಿ, ಬತ್ತಿಹೋಗಿದ್ದ ಬೇರೆ ಏಳು ತೆನೆಗಳು ಮೊಳೆತು ಬಂದವು. [7]ಬತ್ತಿ ಹೋಗಿದ್ದ ಈ ತೆನೆಗಳು,

ಕಾಳುತುಂಬಿದ್ದ ಆ ಏಳು ಬಲಿತ ತೆನೆಗಳನ್ನು ನುಂಗಿಬಿಟ್ಟವು. ಅಷ್ಟರೊಳಗೆ ಫರೋಹನು ಎಚ್ಚೆತ್ತು. ತಾನು
ಕಂಡದ್ದು ಕನಸೆಂದು ತಿಳಿದುಕೊಂಡ.
8 ಬೆಳಿಗ್ಗೆ ಅವನ ಮನಸ್ಸು ಕಳವಳಗೊಂಡು ಇತ್ತು. ಈಜಿಪ್ಟ್ ದೇಶದ ಎಲ್ಲ ಜೋಯಿಸರನ್ನೂ
ವಿದ್ವಾಂಸರನ್ನೂ ಬರಮಾಡಿದ. ಅವರಿಗೆ ತನ್ನ ಕನಸನ್ನು ವಿವರಿಸಿದ. ಅದರ ಅರ್ಥವನ್ನು ಅವನಿಗೆ
ಹೇಳಬಲ್ಲವರು ಯಾರೂ ಸಿಕ್ಕಲಿಲ್ಲ.
9 ಆಗ ಪಾನಸೇವಕರಲ್ಲಿ ಮುಖ್ಯಸ್ಥನು ಫರೋಹನಿಗೆ, “ಒಡೆಯಾ, ಈ ದಿನ ತಾನೆ ನನ್ನ ನೆನಪಿಗೆ
ಬರುತ್ತಿದೆ. [10]ತಾವು ತಮ್ಮ ಸೇವಕರ ಮೇಲೆ ಸಿಟ್ಟುಗೊಂಡು, ನನ್ನನ್ನೂ ಆ ಮುಖ್ಯ ಅಡಿಗೆಭಟ್ಟನನ್ನೂ
ದಳಪತಿಯ ವಠಾರದಲ್ಲಿ ಇರುವ ಸೆರೆಯಲ್ಲಿ ಇಟ್ಟದ್ದಿರಿ. ಅಲ್ಲಿದ್ದಾಗ ನಮ್ಮಿಬ್ಬರಿಗೂ ಒಂದೇ ರಾತ್ರಿಯಲ್ಲಿ
ಕನಸುಬಿತ್ತು. [11]ಒಬ್ಬೊಬ್ಬನ ಕನಸಿಗೂ ಬೇರೆಬೇರೆ ಅರ್ಥವಿತ್ತು. [12]ಹಿಬ್ರಿಯನಾದ ಒಬ್ಬ ಯುವಕ ನಮ್ಮ ಸಂಗಡ
ಅಲ್ಲಿದ್ದ. ಅವನು ದಳಪತಿಯವರ ಸೇವಕ. ನಾವು ನಮ್ಮ ಕನಸನ್ನು ಅವನಿಗೆ ತಿಳಿಸಿದೆವು. ಅವನು ಆ
ಕನಸುಗಳಿಗೆ ಸರಿಯಾದ ಅರ್ಥವನ್ನು ಹೇಳಿದ. [13]ಅದು ಮಾತ್ರವಲ್ಲ, ಅವನು ಹೇಳಿದ ಪ್ರಕಾರವೇ ಆಯಿತು.
ನನಗೆ ನೌಕರಿ ಮತ್ತೆ ದೊರಕಿತು. ಆ ಮುಖ್ಯ ಅಡಿಗೆಭಟ್ಟನನ್ನೋ ನೇಣುಹಾಕಲಾಯಿತು,” ಎಂದು
ಸನ್ನಿಧಿಯಲ್ಲಿ ಅರಿಕೆಮಾಡಿದ.
14 ಇದನ್ನು ಕೇಳಿದ ಫರೋಹನು ಜೋಸೆಫನನ್ನು ಕರೆತರುವಂತೆ ಆಳುಗಳನ್ನು ಕಳಿಸಿದ. ಅವರು
ಬಂದು ಅವನನ್ನು ಸೆರೆಯಿಂದ ತ್ವರೆಯಾಗಿ ಬಿಡುಗಡೆ ಮಾಡಿದರು. ಜೋಸೆಫನು ಕ್ಷೌರಮಾಡಿಕೊಂಡು,
ಬಟ್ಟೆಬದಲಾಯಿಸಿಕೊಂಡು ಫರೋಹನ ಸನ್ನಿಧಿಯಲ್ಲಿ ಹಾಜರಾದ. [15]ಫರೋಹನು ಅವನಿಗೆ, “ನಾನು ಒಂದು
ಕನಸುಕಂಡೆ, ಅದರ ಅರ್ಥ ಹೇಳಬಲ್ಲವರು ಯಾರೂ ಇಲ್ಲ. ಆದರೆ ನೀನು ಕನಸನ್ನು ಕೇಳುತ್ತಲೇ ಅದರ
ಅರ್ಥವನ್ನು ಹೇಳ ಬಲ್ಲೆ ಎಂಬ ಸಮಾಚಾರ ಕೇಳಿದ್ದೇನೆ,” ಎಂದ. [16]ಜೋಸೆಫನು, “ನನ್ನಲ್ಲಿ ಅಂಥ
ಸಾಮರ್ಥ್ಯವೇನೂ ಇಲ್ಲ; ಆದರೆ ದೇವರು, ಫರೋಹ ಆದ ನಿಮಗೆ ತೃಪ್ತಿಕರವಾದ ಉತ್ತರ ಕೊಡಬಲ್ಲರು,”
ಎಂದು ಹೇಳಿದ.
17 ಆಗ ಫರೋಹನು ಜೋಸೆಫನಿಗೆ, “ಕನಸಿನಲ್ಲಿ ನಾನು ನೈಲ್ ನದಿಯ ತೀರದಲ್ಲಿ ನಿಂತಿದ್ದೆ.
[18]ನದಿಯೊಳಗಿಂದ ಅಚ್ಚುಕಟ್ಟಾದ ಏಳು ಕೊಬ್ಬಿದ ಹಸುಗಳು ಬಂದು ಜೊಂಡುಹುಲ್ಲಿನಲ್ಲಿ ಮೇಯುತ್ತಿದ್ದವು.
[19]ಅವುಗಳ ಹಿಂದೆಯೆ ಬಹಳ ಒಣಕಲಾದ ಹಾಗೂ ಸಣಕಲಾದ, ಬೇರೆ ಏಳು ಬಡಹಸುಗಳು ಬಂದವು.
ಅಂಥ ಬಡ ಹಸುಗಳನ್ನು ನಾನು ಈಜಿಪ್ಟಿನಲ್ಲಿ ಎಲ್ಲೂ ನೋಡಿದ್ದಿಲ್ಲ. [20]ಅದಲ್ಲದೆ, ಸಣಕಲಾಗಿದ್ದ ಆ ಬಡ
ಹಸುಗಳು ಮೊದಲೇ ಕಾಣಿಸಿದ ಆ ಏಳು ಕೊಬ್ಬಿನ ಹಸುಗಳನ್ನು ತಿಂದುಬಿಟ್ಟವು. [21]ತಿಂದರೂ ತಿಂದಂತೆಯೇ
ತೋರಲಿಲ್ಲ. ಮೊದಲಿದ್ದಂತೆಯೇ ಬಡಕಲಾಗಿದ್ದವು. ಅಷ್ಟರ ಒಳಗೆ ನನಗೆ ಎಚ್ಚರವಾಯಿತು. [22]ನನಗೆ ಬಿದ್ದ
ಇನ್ನೊಂದು ಕನಸಿನೊಳಗೆ ಕಾಳು ತುಂಬಿದ್ದ ಏಳು ಬಲಿತ ತೆನೆಗಳು ಒಂದೇ ದಂಟಿನಲ್ಲಿ ಹುಟ್ಟಿ ಬಂದವು.
[23]ಅವುಗಳ ಹಿಂದೆಯೆ, ಮೂಡಣ ಗಾಳಿಯಿಂದ ಒಣಗಿ, ಬತ್ತಿ, ಕೆಟ್ಟುಹೋಗಿದ್ದ ಬೇರೆ ಏಳು ತೆನೆಗಳು
ಮೊಳೆತು ಬಂದವು. [24]ಬತ್ತಿ ಹೋಗಿದ್ದ ತೆನೆಗಳು ಕಾಳು ತುಂಬಿದ್ದ ಆ ಏಳು ತೆನೆಗಳನ್ನು ನುಂಗಿಬಿಟ್ಟವು.
ಈ ಕನಸುಗಳನ್ನು ಜೋಯಿಸರಿಗೆ ತಿಳಿಸಿದೆ; ಅವುಗಳ ಅರ್ಥವನ್ನು ವಿವರಿಸಿ ಹೇಳಲು ಅವರಲ್ಲಿ
ಯಾರಿಂದಲೂ ಆಗಲಿಲ್ಲ.”
25 ಜೋಸೆಫನು ಫರೋಹನಿಗೆ, “ತಾವು ಕಂಡ ಎರಡು ಕನಸುಗಳ ವಿಷಯ ಒಂದೇ. ದೇವರು
ಮಾಡಬೇಕೆಂದಿರುವುದನ್ನು ಇವುಗಳ ಮೂಲಕ ತಮಗೆ ತಿಳಿಸಿದ್ದಾರೆ. [26]ಆ ಏಳು ಒಳ್ಳೆಯ ಹಸುಗಳೇ ಏಳು
ವರ್ಷಗಳು; ಆ ಏಳು ಒಳ್ಳೆಯ ತೆನೆಗಳೂ ಏಳು ವರ್ಷಗಳು; ಎರಡು ಕನಸುಗಳ ಅರ್ಥ ಒಂದೇ. [27]ಒಳ್ಳೆಯ
ಹಸುಗಳ ಹಿಂದೆ ಬಂದ ಒಣಕಲಾಗಿದ್ದ ಆ ಏಳು ಬಡ ಹಸುಗಳು ಮತ್ತು ಮೂಡಣ ಗಾಳಿಯಿಂದ
ಕೆಟ್ಟುಹೋಗಿದ್ದ ಆ ಏಳು ಕಾಳಿಲ್ಲದ ತೆನೆಗಳು ಬರವುಂಟಾಗುವ ಏಳು ವರ್ಷಗಳನ್ನು ಸೂಚಿಸುತ್ತವೆ. [28]ನಾನು
ತಮಗೆ ಅರಿಕೆ ಮಾಡಿದಂತೆ ದೇವರು ಮಾಡಬೇಕೆಂದು ಇರುವುದನ್ನು ತಮಗೆ ತಿಳಿಸಿದ್ದಾರೆ. [29]ಈಜಿಪ್ಟ್
ದೇಶದಲ್ಲೆಲ್ಲ ಬಹು ವಿಶೇಷವಾದ ಏಳು ಸುಭಿಕ್ಷ ವರ್ಷಗಳೂ [30]ತರುವಾಯ ಏಳು ದುರ್ಭಿಕ್ಷ ವರ್ಷಗಳೂ
ಬರುವುವು. ಆಗ ಈಜಿಪ್ಟ್ ದೇಶದ ಅವರು ಮೊದಲಿದ್ದ ಆ ಸುಭಿಕ್ಷವನ್ನು ಮರೆತು ಬಿಡುವರು; ಆ ಬರದಿಂದ
ದೇಶವು ಹಾಳಾಗಿ ಹೋಗುವುದು. [31]ಮುಂದೆ ಬರಲಿರುವ ಕ್ಷಾಮವು ಅತ್ಯಂತ ಘೋರವಾಗಿರುವುದು;

ಮೊದಲಿದ್ದ ಸಮೃದ್ಧಿಯ ಗುರುತೇ ಇಲ್ಲದೆ ಹೋಗುವುದು. 32ದೇವರು ಈ ಕಾರ್ಯವನ್ನು ನಿರ್ಧರಿಸಿದ್ದಾರೆ;
ಇದು ಬೇಗ ಬರಲಿದೆಯೆಂದು ತಿಳಿದುಕೊಳ್ಳಬೇಕು. ಏಕೆಂದರೆ ನಿಮಗೆ ಇಮ್ಮಡಿ ಕನಸುಬಿದ್ದಿದೆ.
33 "ಆದುದರಿಂದ ತಾವು ವಿವೇಕಿಯೂ ಬುದ್ಧಿವಂತನೂ ಆದ ಒಬ್ಬನನ್ನು ಆರಿಸಿಕೊಂಡು
ಅವನನ್ನು ಈಜಿಪ್ಟ್ ದೇಶದ ಮೇಲೆ ಅಧಿಕಾರಿಯನ್ನಾಗಿ ನೇಮಿಸಬೇಕು. 34ಅದೂ ಅಲ್ಲದೆ, ದೇಶದ ಎಲ್ಲ
ಭಾಗಗಳಲ್ಲೂ ಗುಮಾಸ್ತರನ್ನು ನೇಮಿಸಿ ಅವರ ಮೂಲಕ ಸುಭಿಕ್ಷವಾದ ಏಳು ವರ್ಷಗಳಲ್ಲಿ ದೇಶದ
ಬೆಳೆಯಲ್ಲಿ ಐದನೆಯ ಒಂದು ಪಾಲನ್ನು ಕಂದಾಯವಾಗಿ ಎತ್ತಬೇಕು. 35ಮುಂದಣ ಒಳ್ಳೆಯ ವರ್ಷಗಳಲ್ಲಿ
ಆಹಾರ ಪದಾರ್ಥಗಳನ್ನೂ ದವಸ ಧಾನ್ಯಗಳನ್ನು ಶೇಖರಿಸಿ ಪಟ್ಟಣಗಳಲ್ಲಿ ಜೋಪಾನವಾಗಿಡುವಂತೆ ತಾವು
ಆಜ್ಞಾಪಿಸಬೇಕು. 36ಹೀಗೆ ಆಹಾರಪದಾರ್ಥಗಳನ್ನು ಶೇಖರಿಸುವುದರಿಂದ ಈಜಿಪ್ಟ್ ದೇಶದಲ್ಲಿ
ದುರ್ಭಿಕ್ಷವುಂಟಾಗುವ ಏಳು ವರ್ಷಗಳಲ್ಲಿ ಜನರು ಕ್ಷಾಮದಿಂದ ಸಾಯುವುದಿಲ್ಲ," ಎಂದು ಹೇಳಿದನು.

## ಜೋಸೆಫನು ಈಜಿಪ್ಟಿನ ರಾಜಪ್ರತಿನಿಧಿ

37 ಜೋಸೆಫನು ಸೂಚಿಸಿದ ಯೋಜನೆ ಫರೋಹನಿಗೂ ಅವನ ಪರಿವಾರದವರಿಗೂ
ಒಳ್ಳೆಯದೆಂದು ತೋರಿತು. 38ಫರೋಹನು ತನ್ನ ಪರಿವಾರದವರಿಗೆ, "ಈತ ದೇವರಾತ್ಮ ಪಡೆದವನು,
39ಈತನಿಗಿಂತ ಯೋಗ್ಯವಾದ ವ್ಯಕ್ತಿ ನಮಗೆ ಸಿಕ್ಕುವುದು ಸಾಧ್ಯವೆ?" ಎಂದು ಹೇಳಿ ಜೋಸೆಫನಿಗೆ, "ದೇವರೇ
ನಿನಗೆ ಇದನ್ನೆಲ್ಲ ತಿಳಿಸಿರುವುದರಿಂದ ನಿನಗೆ ಸಮಾನವಾದ ಬುದ್ಧಿ ವಿವೇಕಗಳುಳ್ಳ ವ್ಯಕ್ತಿ ಯಾವನೂ ಇಲ್ಲ.
40ನೀನೇ ಅರಮನೆಯಲ್ಲಿ ಮುಖ್ಯಾಧಿಕಾರಿಯಾಗಿರಬೇಕು; ನಿನ್ನ ಅಪ್ಪಣೆ ಮೇರೆಗೆ ಪ್ರಜೆಗಳೆಲ್ಲರು
ನಡೆದುಕೊಳ್ಳಬೇಕು; ಸಿಂಹಾಸನದ ವಿಷಯದಲ್ಲಿ ಮಾತ್ರ ನಾನು ನಿನಗಿಂತ ದೊಡ್ಡವನಾಗಿರುವೆನು," ಎಂದು
ಹೇಳಿದನು. 41ಬಳಿಕ ಫರೋಹನು ಜೋಸೆಫನಿಗೆ, "ಇದೀಗಲೆ ಈಜಿಪ್ಟ್ ದೇಶದ ಮೇಲೆಲ್ಲ ನಿನ್ನನ್ನು
ಅಧಿಕಾರಿಯನ್ನಾಗಿ ನೇಮಿಸುತ್ತಿದ್ದೇನೆ," ಎಂದು ಹೇಳಿ 42ತನ್ನ ಬೆರಳಿನಿಂದ ಮುದ್ರಿಕೆಯನ್ನು ತೆಗೆದು
ಜೋಸೆಫನ ಬೆರಳಿಗೆ ಇಟ್ಟನು. ಅವನಿಗೆ ಮೌಲ್ಯವಾದ ವಸ್ತ್ರಗಳನ್ನು ಹೊದಿಸಿದನು. ಕೊರಳಿಗೆ ಚಿನ್ನದ
ಸರವನ್ನು ಹಾಕಿಸಿದನು. 43ತನಗಿದ್ದ ಎರಡನೆಯ ರಥದಲ್ಲಿ ಕುಳ್ಳಿರಿಸಿ ಅವನ ಮುಂದೆ, "ಈತನಿಗೆ ಅಡ್ಡಬೀಳಿ,"
ಎಂದು ಪ್ರಕಟಣೆ ಮಾಡಿಸಿದನು. ಹೀಗೆ ಅವನನ್ನು ಈಜಿಪ್ಟ್ ದೇಶಕ್ಕೆ ಮುಖ್ಯಮಂತ್ರಿಯನ್ನಾಗಿ ನೇಮಿಸಿದನು.
44ಅಷ್ಟು ಮಾತ್ರವಲ್ಲ, ಫರೋಹನು ಅವನಿಗೆ, "ಫರೋಹನಾದ ನಾನು ಹೇಳುತ್ತಿದ್ದೇನೆ: ನಿನ್ನ ಅಪ್ಪಣೆಯಿಲ್ಲದೆ
ಇಡೀ ಈಜಿಪ್ಟ್ ದೇಶದಲ್ಲಿ ಯಾರೂ ಏನನ್ನೂ ಮಾಡಕೂಡದು," ಎಂದು ಹೇಳಿದನು. 45ಬಳಿಕ ಫರೋಹನು
ಜೋಸೆಫನಿಗೆ 'ಸಾಫ್ನತ್ಪನ್ನೇಹ' ಎಂಬ ಹೊಸ ಹೆಸರಿಟ್ಟನು; ಓನ್ ಎಂಬ ಗುರುಪೀಠದ ಆಚಾರ್ಯನಾಗಿದ್ದ
ಪೋಟೀಫೆರನ ಮಗಳು ಆಸನತ್ ಎಂಬಾಕೆಯನ್ನು ಅವನಿಗೆ ಮದುವೆ ಮಾಡಿಸಿದನು. ತರುವಾಯ
ಜೋಸೆಫನು ಈಜಿಪ್ಟ್ ದೇಶಸಂಚಾರ ಹೊರಟನು.
46 ಈಜಿಪ್ಟ್ ದೇಶದ ಅರಸನಾದ ಫರೋಹನ ಆಸ್ಥಾನವನ್ನು ಸೇರಿದಾಗ ಜೋಸೆಫನಿಗೆ ಮೂವತ್ತು
ವರ್ಷ ವಯಸ್ಸು. ಜೋಸೆಫನು ಫರೋಹನ ಸನ್ನಿಧಿಯಿಂದ ಹೊರಟು ಈಜಿಪ್ಟ್ ದೇಶದಲ್ಲೆಲ್ಲ ಸಂಚಾರ
ಮಾಡಿದನು. 47ಆ ದೇಶದಲ್ಲಿ ಸುಭಿಕ್ಷದ ಏಳು ವರ್ಷಗಳಲ್ಲಿ ಭೂಮಿ ಹೇರಳವಾದ ಬೆಳೆ ಕೊಟ್ಟಿತು. 48ಆ
ಏಳು ವರ್ಷದ ಬೆಳೆಯನ್ನು ಜೋಸೆಫನು ಶೇಖರಿಸಿ ಪಟ್ಟಣಗಳಲ್ಲಿ ಇಟ್ಟನು. ಆಯಾ ಪಟ್ಟಣದ ಸುತ್ತಲಿದ್ದ
ಹೊಲಗಳ ಬೆಳೆಯನ್ನು ಆಯಾ ಪಟ್ಟಣದಲ್ಲೇ ಶೇಖರಿಸಿದನು. 49ಹೀಗೆ ಕೂಡಿಸಿದ ದವಸಧಾನ್ಯ ಸಮುದ್ರದ
ಮರಳಿನಂತೆ ರಾಶಿರಾಶಿಯಾಗಿತ್ತು. ಲೆಕ್ಕ ಮಾಡುವುದಕ್ಕೂ ಆಗದೆ ಲೆಕ್ಕ ಇಡುವುದನ್ನೇ ಬಿಟ್ಟುಬಿಡಬೇಕಾಯಿತು.
50 ಬರಗಾಲ ಬರುವುದಕ್ಕೆ ಮುಂಚೆ ಜೋಸೆಫನಿಗೆ ಇಬ್ಬರು ಗಂಡು ಮಕ್ಕಳು ಹುಟ್ಟಿದರು. ಅವರ
ತಾಯಿ ಓನ್ ಪಟ್ಟಣದ ಆಚಾರ್ಯನಾಗಿದ್ದ ಪೋಟೀಫೆರನ ಮಗಳಾದ ಆಸನತ್, 51ಜ್ಯೇಷ್ಠಮಗ ಹುಟ್ಟಿದಾಗ
ಜೋಸೆಫನು, "ನಾನು ನನ್ನ ಕಷ್ಟ ದುಃಖವನ್ನೂ ತಂದೆಯ ಮನೆಯವರನ್ನೂ ಮರೆಯುವಂತೆ ದೇವರು
ಮಾಡಿದ್ದಾರಲ್ಲಾ!" ಎಂದುಕೊಂಡು ಆ ಮಗುವಿಗೆ, 'ಮನಸ್ಸೆ' ಎಂದು ಹೆಸರಿಟ್ಟನು. 52ಎರಡನೆಯ ಮಗನು
ಹುಟ್ಟಿದಾಗ, "ಯಾವ ದೇಶದಲ್ಲಿ ನನಗೆ ಸಂಕಷ್ಟವಿತ್ತೋ ಆ ದೇಶದಲ್ಲಿ ದೇವರು ನನಗೆ ಸಮೃದ್ಧಿಯನ್ನು
ದಯಪಾಲಿಸಿದ್ದಾರೆ!" ಎಂದು ಆ ಮಗನಿಗೆ 'ಎಫ್ರಯಿಮ್' ಎಂದು ನಾಮಕರಣ ಮಾಡಿದನು.

53 ಈಜಿಪ್ಟ್ ದೇಶದಲ್ಲಿ ಸುಭಿಕ್ಷದ ಏಳು ವರ್ಷಗಳು ಮುಗಿದವು. 54ಜೋಸೆಫನು ಹೇಳಿದ್ದ
ಪ್ರಕಾರವೇ ಕ್ಷಾಮದ ಏಳು ವರ್ಷಗಳು ಪ್ರಾರಂಭವಾದವು. ಬರವು ಸುತ್ತಮುತ್ತಲಿನ ಎಲ್ಲ ದೇಶಗಳಿಗೂ
ಹಬ್ಬಿತು. ಈಜಿಪ್ಟಿನಲ್ಲಿ ಮಾತ್ರ ಆಹಾರ ದೊರಕುತ್ತಿತ್ತು. 55ಕ್ರಮೇಣ ಈಜಿಪ್ಟಿಗೂ ಬರಬಂದಾಗ ಪ್ರಜೆಗಳು
ಆಹಾರಬೇಕೆಂದು ಫರೋಹನಿಗೆ ಮೊರೆಯಿಟ್ಟರು. ಆಗ ಅವನು ಅವರಿಗೆ, "ಹೋಗಿ, ಜೋಸೆಫನ ಬಳಿಗೆ,
ಅವನು ಹೇಳಿದಂತೆ ಮಾಡಿ," ಎಂದು ಉತ್ತರಕೊಟ್ಟನು. 56ಬರವು ದೇಶದಲ್ಲೆಲ್ಲ ಹರಡಿಕೊಂಡಾಗ
ಜೋಸೆಫನು ಕಣಜಗಳನ್ನೆಲ್ಲ ತೆಗೆಸಿ, ಈಜಿಪ್ಟರಿಗೆ ಧಾನ್ಯವನ್ನು ಮಾರಿಸಿದನು. ಈಜಿಪ್ಟ್ ದೇಶದಲ್ಲಿ ಬರವು
ಬಹು ಘೋರವಾಗಿತ್ತು. 57ಅಂತೆಯೇ ಲೋಕದಲ್ಲೆಲ್ಲಾ ಬರವು ಭಯಂಕರವಾಗಿತ್ತು. ಎಲ್ಲ ದೇಶದವರು
ಜೋಸೆಫನಿಂದ ಧಾನ್ಯ ಕೊಂಡುಕೊಳ್ಳಲು ಈಜಿಪ್ಟಿಗೆ ಬರುತ್ತಿದ್ದರು.

### ಈಜಿಪ್ಟಿನಲ್ಲಿ ಜೋಸೆಫನ ಸಹೋದರರು

**42** ಈಜಿಪ್ಟಿನಲ್ಲಿ ದವಸಧಾನ್ಯ ದೊರಕುತ್ತದೆ ಎಂಬ ಸಮಾಚಾರ ಯಕೋಬನಿಗೆ ಮುಟ್ಟಿತು. ಅವನು ತನ್ನ
ಮಕ್ಕಳಿಗೆ, "ನೀವು ಮುಖಮುಖ ನೋಡಿಕೊಂಡು ಸುಮ್ಮನಿರುವುದು ಸರಿಯಲ್ಲ. 2ಈಜಿಪ್ಟಿನಲ್ಲಿ ದವಸಧಾನ್ಯ
ಉಂಟೆಂದು ನಾನು ಕೇಳಿದ್ದೇನೆ. ನಾವು ಸಾಯದೆ ಬದುಕುವಂತೆ ನೀವು ಅಲ್ಲಿಗೆ ಹೋಗಿ, ಬೇಕಾದ
ದವಸವನ್ನು ಕೊಂಡುಕೊಂಡು ಬನ್ನಿ," ಎಂದು ಹೇಳಿದನು. 3ಜೋಸೆಫನ ಹತ್ತು ಮಂದಿ ಅಣ್ಣಂದಿರು
ಧಾನ್ಯವನ್ನು ತರುವುದಕ್ಕಾಗಿ ಈಜಿಪ್ಟ್ ದೇಶಕ್ಕೆ ಹೊರಟರು. 4ಆದರೆ ಜೋಸೆಫನ ಒಡಹುಟ್ಟಿದ ತಮ್ಮನಾದ
ಬೆನ್ಯಾಮೀನನನ್ನು ಯಕೋಬನು ಅವರ ಸಂಗಡ ಕಳಿಸಲಿಲ್ಲ. ಏಕೆಂದರೆ, ಅವನಿಗೆ ಏನಾದರೂ ಆಪತ್ತು
ಒದಗೀತೆಂಬ ಹೆದರಿಕೆ ಅವನದು.

5 ಕಾನಾನ್ ನಾಡಿನಲ್ಲೂ ಬರವಿತ್ತು. ಧಾನ್ಯ ಕೊಂಡುಕೊಳ್ಳಲು ಅಲ್ಲಿಂದ ಈಜಿಪ್ಟಿಗೆ ಬಂದವರಲ್ಲಿ
ಯಕೋಬನ (ಇಸ್ರಯೇಲನ) ಮಕ್ಕಳೂ ಇದ್ದರು. 6ಆಗ ಈಜಿಪ್ಟ್ ದೇಶದಲ್ಲಿ ಅಧಿಕಾರ ನಡೆಸುತ್ತಿದ್ದವನು
ಹಾಗೂ ಜನರಿಗೆ ದವಸಧಾನ್ಯ ಮಾರಾಟ ಮಾಡಿಸುತ್ತಿದ್ದವನು ಜೋಸೆಫನೇ. ಇಂತಿರಲು ಅವನ ಅಣ್ಣಂದಿರು
ಬಂದು ಅವನ ಮುಂದೆ ನೆಲದವರೆಗೂ ಬಾಗಿ ನಮಸ್ಕರಿಸಿದರು. 7ಜೋಸೆಫನು ಅವರನ್ನು ನೋಡಿದ
ಕೂಡಲೆ ಗುರುತುಹಿಡಿದನು. ಆದರೂ ಅವರ ಪರಿಚಯ ಇಲ್ಲದವನಂತೆ ಬಿರುನುಡಿಯಿಂದ, "ನೀವು
ಎಲ್ಲಿಯವರು?" ಎಂದು ಕೇಳಿದನು. ಅವರು, "ನಾವು ಧಾನ್ಯ ಕೊಂಡುಕೊಳ್ಳುವುದಕ್ಕಾಗಿ ಕಾನಾನ್
ನಾಡಿನಿಂದ ಬಂದವರು," ಎಂದು ಹೇಳಿದರು.

8 ಅಣ್ಣಂದಿರ ಗುರುತು ಜೋಸೆಫನಿಗೆ ತಿಳಿಯಿತಾದರೂ ಅವನ ಗುರುತು ಅವರಿಗೆ ತಿಳಿಯದೆ
ಹೋಯಿತು. 9ಅವರ ವಿಷಯವಾಗಿ ತಾನು ಕಂಡಿದ್ದ ಕನಸುಗಳನ್ನು ಜೋಸೆಫನು ನೆನಪಿಗೆ
ತಂದುಕೊಂಡನು. ಅವರನ್ನು ನೋಡಿ, "ನೀವು ಗೂಢಚಾರರು; ನಮ್ಮ ದೇಶದ ದುರ್ಬಲ ಸ್ಥಳಗಳನ್ನು
ಪತ್ತೆಹಚ್ಚುವುದಕ್ಕಾಗಿ ಬಂದವರು," ಎಂದನು. 10ಅದಕ್ಕೆ ಅವರು, "ಇಲ್ಲ, ಒಡೆಯಾ, ತಮ್ಮ ಸೇವಕರಾದ
ನಾವು ಆಹಾರಪದಾರ್ಥಗಳನ್ನು ಕೊಂಡುಕೊಳ್ಳುವುದಕ್ಕೆ ಬಂದಿದ್ದೇವೆ. 11ನಾವೆಲ್ಲರು ಒಬ್ಬ ತಂದೆಯ ಮಕ್ಕಳು;
ನಾವು ಸತ್ಯವಂತರೇ ಹೊರತು ಗೂಢಚಾರರಲ್ಲ," ಎಂದರು. 12ಜೋಸೆಫನು ಅವರಿಗೆ, "ಸುಳ್ಳು, ನಮ್ಮ
ದೇಶದ ದುರ್ಬಲ ಸ್ಥಳಗಳನ್ನು ತಿಳಿದುಕೊಳ್ಳುವುದಕ್ಕೆ ಬಂದಿದ್ದೀರಿ," ಎಂದನು.

13 ಅದಕ್ಕೆ ಅವರು, "ತಮ್ಮ ಸೇವಕರಾದ ನಾವು ಹನ್ನೆರಡು ಮಂದಿ ಅಣ್ಣತಮ್ಮಂದಿರು; ಕಾನಾನ್
ನಾಡಿನವರು, ಒಬ್ಬ ತಂದೆಯ ಮಕ್ಕಳು; ನಮ್ಮಲ್ಲಿ ಚಿಕ್ಕವನು ತಂದೆಯ ಬಳಿಯಲ್ಲೇ ಇದ್ದಾನೆ; ಒಬ್ಬನು
ಇಲ್ಲವಾದನು," ಎಂದರು. 14ಜೋಸೆಫನು ಅವರಿಗೆ, "ನಾನು ಈಗಾಗಲೆ ಹೇಳಿದಂತೆ ನೀವು ಗೂಢಚಾರರೇ,
15ಇದು ನಿಜವೋ ಸುಳ್ಳೋ ಎಂದು ಗೊತ್ತಾಗಬೇಕಾದರೆ ನೀವು ನಿಮ್ಮ ತಮ್ಮನನ್ನು ಬರಮಾಡಬೇಕು. ಅವನು
ಬಂದ ಹೊರತು, ಫರೋಹನ ಜೀವದಾಣೆ, ನೀವು ಇಲ್ಲಿಂದ ಹೊರಟುಹೋಗಕೂಡದು. 16ಅವನನ್ನು
ಕರೆದುಕೊಂಡು ಬರುವುದಕ್ಕೆ ನಿಮ್ಮಲ್ಲಿ ಒಬ್ಬನನ್ನು ಕಳಿಸಿರಿ. ಅವನು ಬರುವವರೆಗೂ ನಿಮ್ಮನ್ನು ಸೆರೆಯಲ್ಲಿ
ಇರಿಸುತ್ತೇನೆ. ಹೀಗೆ ನಿಮ್ಮ ಮಾತುಗಳನ್ನು ಪರೀಕ್ಷಿಸಿ ನೀವು ಸತ್ಯವಂತರೋ ಇಲ್ಲವೋ ಎಂದು

ತಿಳಿದುಕೊಳ್ಳುತ್ತೇನೆ. ನಿಮ್ಮ ತಮ್ಮನು ಬಾರದೆ ಹೋದರೆ, ಫರೋಹನ ಜೀವದಾಣೆ, ನೀವು ಗೂಢಚಾರರೇ," ಎಂದು ಹೇಳಿ, [17]ಅವರೆಲ್ಲರನ್ನು ಮೂರು ದಿನಗಳವರೆಗೆ ಕಾವಲಲ್ಲಿ ಇರಿಸಿದನು.

18 ಮೂರನೆಯ ದಿನ ಜೋಸೆಫನು ಅವರನ್ನು ಕರೆಸಿ, "ನಾನು ದೇವರಲ್ಲಿ ಭಯಭಕ್ತಿ ಯುಳ್ಳವನು; ನಿಮಗೆ ಜೀವದ ಮೇಲೆ ಆಶೆ ಇದ್ದರೆ ನಾನು ಹೇಳಿದಂತೆ ಮಾಡಿ; [19]ನೀವು ಸತ್ಯವಂತರಾದರೆ ನಿಮ್ಮಲ್ಲಿ ಒಬ್ಬನನ್ನು ಮಾತ್ರ ಸೆರೆಯಲ್ಲಿಡುತ್ತೇನೆ. ಮಿಕ್ಕವರು ಕ್ಷಾಮದಿಂದ ಬಳಲುತ್ತಿರುವ ನಿಮ್ಮ ನಿಮ್ಮ ಕುಟುಂಬಗಳಿಗೆ ಅಗತ್ಯವಾದ ಧಾನ್ಯವನ್ನು ತೆಗೆದುಕೊಂಡು ಹೋಗಿ. [20]ಆದರೆ ನಿಮ್ಮ ತಮ್ಮನನ್ನು ನನ್ನ ಬಳಿಗೆ ಕರೆದುಕೊಂಡು ಬರಬೇಕು. ಕರೆದುಕೊಂಡು ಬಂದರೆ, ನಿಮ್ಮ ಮಾತು ಸತ್ಯವೆಂದು ತಿಳಿದುಕೊಳ್ಳುತ್ತೇನೆ. ಆಗ ನೀವು ಸಾಯದೆ ಉಳಿಯುವಿರಿ," ಎಂದನು. ಅವರು ಹಾಗೆಯೇ ಮಾಡಲು ಒಪ್ಪಿಕೊಂಡರು.

21 ಆಗ ಅವರು ತಮ್ಮ ತಮ್ಮೊಳಗೆ, "ನಾವು ನಮ್ಮ ತಮ್ಮನಿಗೆ ಮಾಡಿದ ದ್ರೋಹಕ್ಕೆ ತಕ್ಕ ದಂಡನೆಯನ್ನು ಅನುಭವಿಸುತ್ತಿದ್ದೇವೆ. ಅವನು ನಮ್ಮನ್ನು ಕಳಕಳಿ ಬೇಡಿಕೊಂಡ. ಅವನ ಪ್ರಾಣ ಸಂಕಟವನ್ನು ತಿಳಿದೂ ನಾವು ಅವನ ಮೊರೆಗೆ ಕಿವಿಗೊಡಲಿಲ್ಲ. ಆದ್ದರಿಂದಲೆ ಈ ಸಂಕಟದಲ್ಲಿ ಸಿಕ್ಕಿಹಾಕಿಕೊಂಡು ಇದ್ದೇವೆ," ಎಂದು ಮಾತಾಡಿಕೊಂಡರು.

22 ಅಂತೆಯೇ ರೂಬೇನನು, "'ಆ ಹುಡುಗನಿಗೆ ಯಾವ ಕೇಡೂ ಮಾಡಬೇಡಿ' ಎಂದು ನಾನು ಹೇಳಲಿಲ್ಲವೆ? ನೀವು ಕೇಳದೆ ಹೋದಿರಿ. ಅವನ ರಕ್ತ ಈಗ ನಮ್ಮಿಂದ ಪ್ರಾಯಶ್ಚಿತ್ತ ಕೇಳುತ್ತಿದೆ," ಎಂದ. [23]ಜೋಸೆಫನು ಒಬ್ಬ ಅನುವಾದಕನ ಮುಖಾಂತರ ಅವರ ಸಂಗಡ ಮಾತಾಡುತ್ತಿದ್ದುದರಿಂದ ಅವನಿಗೆ ತಮ್ಮ ಮಾತು ಗೊತ್ತಾಗುತ್ತಿದೆ ಎಂದು ಅವರು ನೆನೆಸಲಿಲ್ಲ. [24]ಜೋಸೆಫನಾದರೋ ಅವರ ಬಳಿಯಿಂದ ಮರೆಯಾಗಿ ಹೋಗಿ ಕಣ್ಣೀರು ಸುರಿಸಿದ. ತರುವಾಯ ಅವರ ಬಳಿಗೆ ಬಂದು, ಸಂಭಾಷಣೆ ಮುಂದುವರೆಸಿ, ಸಿಮೆಯೋನನನ್ನು ಆರಿಸಿ, ಅವರ ಕಣ್ಣೆದುರಿನಲ್ಲೇ ಅವನಿಗೆ ಬೇಡಿಹಾಕಿಸಿದ.

### ಕಾನಾನಿಗೆ ಮರಳಿದ ಸಹೋದರರು

25 ಇದಾದ ಬಳಿಕ ಜೋಸೆಫನು ತನ್ನ ಆಳುಗಳಿಗೆ, "ಆ ಜನರ ಚೀಲಗಳಲ್ಲಿ ಧಾನ್ಯವನ್ನು ತುಂಬಿಸಿ ಒಬ್ಬೊಬ್ಬನ ಚೀಲದಲ್ಲಿ ಅವನವನ ಹಣವನ್ನು ಅದರಲ್ಲಿ ಇಟ್ಟುಬಿಡಿ. ಅವರ ಪ್ರಯಾಣಕ್ಕೆ ಬೇಕಾದ ಆಹಾರವನ್ನು ಕೊಟ್ಟು ಕಳಿಸಿರಿ," ಎಂದು ಅಪ್ಪಣೆ ಮಾಡಿದ. ಆಳುಗಳು ಅದರಂತೆಯೆ ಮಾಡಿದರು.

26 ಅಣ್ಣಂದಿರು ತಾವು ಕೊಂಡುಕೊಂಡ ಧಾನ್ಯವನ್ನು ಕತ್ತೆಗಳ ಮೇಲೆ ಹೇರಿಕೊಂಡು ಹೊರಟರು. [27]ರಾತ್ರಿಗೆ ಒಂದು ಚಾವಡಿಯಲ್ಲಿ ಇಳಿದುಕೊಂಡರು. ಅವರಲ್ಲಿ ಒಬ್ಬನು ತನ್ನ ಕತ್ತೆಗೆ ಧಾನ್ಯಕೊಡಬೇಕೆಂದು ತನ್ನ ಚೀಲವನ್ನು ಬಿಚ್ಚಿದನು. ತಾನು ತಂದಿದ್ದ ಹಣ ಅದರ ಬಾಯಲ್ಲೆ ಇತ್ತು. [28]"ನಾನು ಕೊಟ್ಟ ಹಣ ನನಗೆ ವಾಪಸ್ಸಾಗಿದೆ; ಇಗೋ, ನನ್ನ ಚೀಲದಲ್ಲಿದೆ," ಎಂದು ತನ್ನ ಅಣ್ಣತಮ್ಮಂದಿರಿಗೆ ಹೇಳಿದ. ಅವರು ಕಕ್ಕಾಬಿಕ್ಕಿಯಾಗಿ, ಒಬ್ಬರನ್ನೊಬ್ಬರು ಬೆರಗಿನಿಂದ ನೋಡುತ್ತಾ, "ನಮಗೇಕೆ ದೇವರು ಹೀಗೆ ಮಾಡಿದ್ದಾರೆ?" ಎಂದುಕೊಂಡರು.

29 ಕಾನಾನ್ ನಾಡನ್ನು ಅವರು ತಲುಪಿದರು. ತಮ್ಮ ತಂದೆಯ ಬಳಿಗೆ ಬಂದು ನಡೆದುದೆಲ್ಲವನ್ನು ವರದಿಮಾಡಿದರು. [30]"ಆ ದೇಶಾಧಿಪತಿ ನಮ್ಮೊಡನೆ ಗಡುಸಾಗಿ ಮಾತಾಡಿದ; ನಮ್ಮನ್ನು ಗೂಢಚಾರರೆಂದು ಕರೆದ. [31]ನಾವು ಅವನಿಗೆ, 'ನಾವು ಸತ್ಯವಂತರೇ ಹೊರತು ಗೂಢಚಾರರೇನು ಅಲ್ಲ, [32]ನಾವು ಒಬ್ಬ ತಂದೆಗೆ ಹುಟ್ಟಿದ ಹನ್ನೆರಡು ಮಂದಿ ಅಣ್ಣತಮ್ಮಂದಿರು; ನಮ್ಮಲ್ಲಿ ಒಬ್ಬನು ಇಲ್ಲವಾದ. ಚಿಕ್ಕವನೋ ಈಗ ಕಾನಾನ್ ನಾಡಿನಲ್ಲಿ ನಮ್ಮ ತಂದೆಯ ಬಳಿಯಲ್ಲಿದ್ದಾನೆ' ಎಂದು ಹೇಳಿದೆವು. [33]ಅದಕ್ಕೆ ಆ ದೇಶಾಧಿಪತಿ, 'ನೀವು ಸತ್ಯವಂತರೋ ಇಲ್ಲವೋ ಎಂಬುದು ಗೊತ್ತಾಗುವುದಕ್ಕಾಗಿ ನಿಮ್ಮಲ್ಲಿ ಒಬ್ಬನನ್ನು ನನ್ನ ಬಳಿಯಲ್ಲೆ ಬಿಟ್ಟು ಹೋಗಿ; ನಿಮ್ಮ ಕುಟುಂಬದವರ ಕ್ಷಾಮ ನಿವಾರಣೆಗೆ ಬೇಕಾದುದನ್ನು ತೆಗೆದುಕೊಂಡು ಹೋಗಬಹುದು. [34]ಆದರೆ ನಿಮ್ಮ ತಮ್ಮನನ್ನು ನನ್ನ ಬಳಿಗೆ ಕರೆದುಕೊಂಡು ಬರಬೇಕು. ಕರೆದುಕೊಂಡು ಬಂದರೆ, ನೀವು ಗೂಢಚಾರರಲ್ಲ, ಸತ್ಯವಂತರೇ ಎಂದು ತಿಳಿದುಕೊಳ್ಳುತ್ತೇನೆ; ನಿಮ್ಮ ಅಣ್ಣನನ್ನು ಬಿಡುಗಡೆ ಮಾಡುತ್ತೇನೆ ಮತ್ತು ನೀವು ಈ ದೇಶದಲ್ಲಿ ವ್ಯಾಪಾರ ನಡೆಸಬಹುದು,' ಎಂದು ಹೇಳಿದ.

35 ಅವರು ತಮ್ಮ ತಮ್ಮ ಚೀಲವನ್ನು ಬಿಚ್ಚಿನೋಡಿದಾಗ ಪ್ರತಿಯೊಬ್ಬನ ಚೀಲದಲ್ಲೂ ಅವನವನ
ಹಣದ ಗಂಟು ಸಿಕ್ಕಿತು. ಆ ಗಂಟುಗಳನ್ನು ಕಂಡಾಗ ಅವರೂ ಅವರ ತಂದೆಯೂ ಚಕಿತರಾದರು. [36]ಆಗ
ಅವರ ತಂದೆ ಯಕೋಬನು ಅವರಿಗೆ, "ನನ್ನನ್ನು ಮಕ್ಕಳಿಲ್ಲದವನಂತೆ ಮಾಡಿದ್ದೀರಿ; ಜೋಸೆಫನು ಇಲ್ಲ,
ಸಿಮೆಯೋನನೂ ಇಲ್ಲ, ಬೆನ್ಯಮೀನನನ್ನೂ ಕರೆದುಕೊಂಡು ಹೋಗಬೇಕೆಂದಿದ್ದೀರಿ. ಈ ಕಷ್ಟ ದುಃಖವೆಲ್ಲ
ನನ್ನ ತಲೆಯ ಮೇಲೆ ಬಂದೆರಗಿದೆ!" ಎಂದನು. [37]ಅದಕ್ಕೆ ರೂಬೇನನು, "ನಾನು ಈ ಹುಡುಗನನ್ನು ನಿಮಗೆ
ಪುನಃ ತಂದೊಪ್ಪಿಸುತ್ತೇನೆ; ಇಲ್ಲದೆಹೋದರೆ ನನ್ನಿಬ್ಬರು ಗಂಡು ಮಕ್ಕಳನ್ನು ಕೊಂದುಹಾಕಬಹುದು.
ಇವನನ್ನು ನನ್ನ ವಶಕ್ಕೆ ಕೊಡಿ, ನಾನು ತಪ್ಪದೆ ಇವನನ್ನು ನಿಮ್ಮ ಬಳಿಗೆ ಕರೆದುಕೊಂಡು ಬರುತ್ತೇನೆ," ಎಂದು
ಹೇಳಿದ. [38]ಯಕೋಬನು ಅವರಿಗೆ, "ನನ್ನ ಮಗ ನಿಮ್ಮ ಸಂಗಡ ಹೋಗಬಾರದು. ಇವನ ಒಡಹುಟ್ಟಿದ
ಅವನು ಸತ್ತುಹೋದ, ಇವನೊಬ್ಬನೇ ಉಳಿದು ಇದ್ದಾನೆ, ದಾರಿಯಲ್ಲಿ ಇವನಿಗೇನಾದರೂ ಆಪತ್ತು
ಸಂಭವಿಸಬಹುದು. ಆಗ, ನರೆಕೂದಲಿನ ಈ ಮುದುಕ ದುಃಖದಿಂದಲೆ ಸಮಾಧಿಸೇರಲು ನೀವೇ
ಕಾರಣರಾಗುತ್ತೀರಿ," ಎಂದು ಹೇಳಿದ.

## ಈಜಿಪ್ಟಿನಲ್ಲಿ ಬೆನ್ಯಾಮೀನನು

**43** ಬರವು ಕಾನಾನಿನಲ್ಲಿ ಘೋರವಾಗಿತ್ತು. [2]ಈಜಿಪ್ಟಿನಿಂದ ತಂದ ದವಸಧಾನ್ಯ ಮುಗಿದು ಹೋಗಿತ್ತು.
ಯಕೋಬನು ತನ್ನ ಪುತ್ರರಿಗೆ, "ನೀವು ಪುನಃ ಹೋಗಿ ಸ್ವಲ್ಪ ಧಾನ್ಯವನ್ನು ಕೊಂಡುಕೊಂಡು ಬನ್ನಿ,"
ಎಂದನು. [3]ಅದಕ್ಕೆ ಯೆಹೂದನು ಹೀಗೆಂದನು: "ಆ ಮನುಷ್ಯ ನಮಗೆ, 'ನಿಮ್ಮ ತಮ್ಮನನ್ನು ಕರೆದುಕೊಂಡು
ಬಂದಹೊರತು ನನ್ನ ದರ್ಶನಕ್ಕೆ ಬರಕೂಡದು' ಎಂದು ಕಡುಖಂಡಿತವಾಗಿ ಹೇಳಿಬಿಟ್ಟಿದ್ದಾನೆ. [4]ನೀವು ನಮ್ಮ
ತಮ್ಮನನ್ನು ಜೊತೆಯಲ್ಲಿ ಕಳಿಸಿದರೆ, ಹೋಗಿ ಧಾನ್ಯವನ್ನು ಕೊಂಡುಕೊಂಡು ಬರುತ್ತೇವೆ; [5]ಕಳಿಸಿಕೊಡದಿದ್ದರೆ,
ನಾವು ಹೋಗುವುದಿಲ್ಲ. ಆ ಮನುಷ್ಯ, 'ನಿಮ್ಮ ತಮ್ಮ ನಿಮ್ಮ ಸಂಗಡ ಇಲ್ಲದಿದ್ದರೆ ಸಮ್ಮುಖಕ್ಕೆ ಬರಲೇಕೂಡದು'
ಎಂದಿದ್ದಾನೆ".

6 ಅದಕ್ಕೆ ಯಕೋಬನು, "ನಿಮಗೆ ಇನ್ನೊಬ್ಬ ತಮ್ಮನಿದ್ದಾನೆಂದು ಆ ಮನುಷ್ಯನಿಗೆ ಹೇಳಿ ನನ್ನನ್ನೇಕೆ
ಈ ಸಂಕಟಕ್ಕೆ ಗುರಿಮಾಡಿದಿರಿ?" ಎಂದನು. [7]ಆಗ ಅವರು, "ಆ ಮನುಷ್ಯ ನಿಮ್ಮ ವಿಷಯದಲ್ಲೂ ನಮ್ಮ
ಮನೆಯವರ ವಿಷಯದಲ್ಲೂ ಸೂಕ್ಷ್ಮವಾಗಿ ವಿಚಾರಿಸಿದ: ನಿಮ್ಮ ತಂದೆ ಇನ್ನೂ ಜೀವದಿಂದ ಇದ್ದಾನೋ?
ನಿಮಗೆ ತಮ್ಮನಿದ್ದಾನೋ? ಎಂದೆಲ್ಲ ಅವನೇ ಕೇಳಿದ. ಆ ಪ್ರಶ್ನೆಗಳಿಗೆ ನಾವು ತಕ್ಕ ಉತ್ತರ ಕೊಡಬೇಕಾಯಿತು.
ಅಲ್ಲದೆ, ಅವನು 'ನಿಮ್ಮ ತಮ್ಮನನ್ನು ಕರೆದುಕೊಂಡು ಬನ್ನಿ,' ಎಂದು ಕೇಳುತ್ತಾನೆಂದು ತಿಳಿಯಲು ನಮಗೆ
ಹೇಗೆ ಸಾಧ್ಯವಿತ್ತು?" ಎಂದರು.

8 ಆಗ ಯೆಹೂದನು ತನ್ನ ತಂದೆ ಯಕೋಬನಿಗೆ "ನೀವು, ನಾವು ಮತ್ತು ನಮ್ಮ ಮಕ್ಕಳು, ಎಲ್ಲರೂ
ಸಾಯದೆ ಉಳಿಯಬೇಕಾದರೆ ಆ ಹುಡುಗನನ್ನು ನನ್ನ ಜೊತೆ ಕಳಿಸಿಕೊಡಿ, ನಾವು ಇದೀಗಲೆ ಹೊರಡುತ್ತೇವೆ.
[9]ಅವನಿಗೆ ನಾನೇ ಹೊಣೆ; ಅವನ ವಿಷಯ ನನಗೆ ಬಿಡಿ. ನಾನು ಅವನನ್ನು ಮತ್ತೆ ಕರೆದುಕೊಂಡು ಬಂದು
ನಿಮ್ಮ ಎದುರಿನಲ್ಲಿ ನಿಲ್ಲಿಸದೆ ಹೋದರೆ ಆ ದೋಷ ಸದಾಕಾಲ ನನ್ನ ಮೇಲೆ ಇರಲಿ. [10]ನಾವು ತಡಮಾಡದೆ
ಇದ್ದಿದ್ದರೆ, ಇಷ್ಟರೊಳಗೆ ಎರಡು ಸಾರಿ ಹೋಗಿ ಬರುತ್ತಿದ್ದೆವು," ಎಂದು ಹೇಳಿದನು.

11 ಇಷ್ಟಾದ ಮೇಲೆ ಅವರ ತಂದೆ ಯಕೋಬನು, "ನೀವು ಹೋಗಲೇ ಬೇಕಾದರೆ, ಒಂದು
ಕೆಲಸಮಾಡಿ: ಈ ನಾಡಿನಲ್ಲಿ ದೊರಕುವ ಶ್ರೇಷ್ಟವಾದ ವಸ್ತುಗಳಲ್ಲಿ ಕೆಲವನ್ನು ನಿಮ್ಮ ಚೀಲದಲ್ಲಿ ಹಾಕಿಕೊಂಡು
ಹೋಗಿ, ಆ ಮನುಷ್ಯನಿಗೆ ಕಾಣಿಕೆಯಾಗಿ ಕೊಡಿ. [12]ಅದೂ ಅಲ್ಲದೆ ಎರಡರಷ್ಟು ಹಣವನ್ನು ಕೈಯಲ್ಲಿ
ತೆಗೆದುಕೊಂಡು ಹೋಗಿ; ಅವರು ನಿಮ್ಮ ಚೀಲಗಳ ಬಾಯಲ್ಲಿ ಹಾಕಿ ಹಿಂದಕ್ಕೆ ಕಳಿಸಿದ ಹಣವನ್ನು
ತೆಗೆದುಕೊಂಡು ಹೋಗಿ: ಬಹುಶಃ ಅವರಿಗೆ ತಿಳಿಯದೆ ಅದು ನಿಮ್ಮ ಕೈಗೆ ಬಂದಿರಬಹುದು. [13]ನಿಮ್ಮ
ತಮ್ಮನನ್ನೂ ಕರೆದುಕೊಂಡು ಮರಳಿ ಆ ಮನುಷ್ಯನ ಬಳಿಗೆ ಹೋಗಿ, [14]ಅವನು ನಿಮ್ಮ ಮೇಲೆ ಕನಿಕರವಿಟ್ಟು

ನಿಮ್ಮ ಅಣ್ಣನನ್ನೂ ಬೆನ್ಯಾಮೀನನನ್ನೂ ನಿಮ್ಮೊಂದಿಗೆ ಕಳುಹಿಸಿಬಿಡುವಂತೆ ಸರ್ವವಲ್ಲಭರಾದ ದೇವರು
ಅನುಗ್ರಹಿಸಲಿ; ನಾನಂತೂ ಮಕ್ಕಳನ್ನು ಕಳೆದುಕೊಂಡವನಾಗಬೇಕಾದರೆ ಹಾಗೆಯೇ ಆಗಲಿ!" ಎಂದನು.

15 ಅವರು ಆ ಕಾಣಿಕೆ ವಸ್ತುಗಳನ್ನು ಸಿದ್ಧಮಾಡಿಕೊಂಡು, ಎರಡರಷ್ಟು ಹಣವನ್ನು ತೆಗೆದುಕೊಂಡು
ಹಾಗೂ ಬೆನ್ಯಾಮೀನನನ್ನು ಜೊತೆಯಲ್ಲಿ ಕರೆದುಕೊಂಡು ಹೊರಟರು. ಈಜಿಪ್ಟನ್ನು ಸೇರಿ, ಜೋಸೆಫನ
ಸಮ್ಮುಖದಲ್ಲಿ ನಿಂತುಕೊಂಡರು. 16ಬೆನ್ಯಾಮೀನನು ಅವರ ಸಂಗಡ ಇರುವುದನ್ನು ಜೋಸೆಫನು
ನೋಡಿದನು. ಕೂಡಲೆ ಗೃಹನಿರ್ವಾಹಕನನ್ನು ಕರೆದು, "ಈ ಜನರು ನನ್ನ ಸಂಗಡ ಈ ಮಧ್ಯಾಹ್ನ
ಊಟಮಾಡಬೇಕಾಗಿ ಇದೆ; ಇವರನ್ನು ಮನೆಯೊಳಗೆ ಕರೆದುಕೊಂಡು ಹೋಗು. ಮಾಂಸದ ಅಡುಗೆ ಮಾಡಿ,
ಎಲ್ಲವನ್ನು ಸಿದ್ಧ ಪಡಿಸು," ಎಂದು ಅಪ್ಪಣೆ ಮಾಡಿದನು. 17ಅದೇ ಮೇರೆಗೆ ಗೃಹನಿರ್ವಾಹಕನು ಅವರನ್ನು
ಜೋಸೆಫನ ಮನೆಗೆ ಕರೆದುಕೊಂಡು ಹೋದನು.

18 ಅಲ್ಲಿಗೆ ಹೋಗುತ್ತಿದ್ದ ಅವರಿಗೆ ಭಯವಾಯಿತು. "ಹಿಂದೆ ನಾವು ಚೀಲಗಳಲ್ಲಿ ವಾಪಸ್ಸು
ತೆಗೆದುಕೊಂಡು ಹೋದ ಹಣದ ಪ್ರಯುಕ್ತವೇ ಅವನು ನಮ್ಮನ್ನು ತನ್ನ ಮನೆಯೊಳಗೆ ಕರೆಸಿದ್ದಾನೆ; ದಿಢೀರನೆ
ನಮ್ಮ ಮೇಲೆಬಿದ್ದು ನಮ್ಮನ್ನು ಗುಲಾಮರನ್ನಾಗಿಸಿಕೊಳ್ಳಬಹುದು. ನಮ್ಮ ಕತ್ತೆಗಳನ್ನು ಹಿಡಿದುಕೊಳ್ಳಬಹುದು,"
ಎಂಬುದಾಗಿ ತಮ್ಮ ತಮ್ಮೊಳಗೆ ಮಾತನಾಡಿಕೊಂಡರು.

19 ಮನೆಯ ಬಾಗಿಲ ಬಳಿ ಗೃಹನಿರ್ವಾಹಕನಿಗೆ, 20"ಅಯ್ಯಾ, ಮೊದಲೊಂದು ಸಾರಿ ಆಹಾರ
ಪದಾರ್ಥಗಳನ್ನು ಕೊಂಡುಕೊಳ್ಳುವುದಕ್ಕೆ ಬಂದಿದ್ದೆವು. 21ನಾವು ಹೊರಟು ಹೋದ ನಂತರ
ಚಾವಡಿಯೊಂದರಲ್ಲಿ ಇಳಿದುಕೊಂಡೆವು. ಅಲ್ಲಿ ನಮ್ಮ ಚೀಲಗಳನ್ನು ಬಿಚ್ಚಿನೋಡಿದಾಗ ಪ್ರತಿ ಒಬ್ಬನ ಹಣ,
ತೂಕ ಕಿಂಚಿತ್ತೂ ಕಡಿಮೆಯಿಲ್ಲದೆ, ಅವನವನ ಚೀಲದಲ್ಲೇ ಇತ್ತು. ಅದನ್ನು ವಾಪಸ್ಸು ತಂದಿದ್ದೇವೆ.
22ದವಸವನ್ನು ಕೊಂಡುಕೊಳ್ಳುವುದಕ್ಕೆ ಬೇರೆ ಹಣ ತಂದಿದ್ದೇವೆ. ಆ ಹಣವನ್ನು ನಮ್ಮ ಚೀಲಗಳಲ್ಲಿ ಯಾರು
ಇಟ್ಟರೋ ತಿಳಿಯದು," ಎಂದು ಹೇಳಿದರು. 23ಅದಕ್ಕೆ ಆ ಗೃಹನಿರ್ವಾಹಕ, "ಸಮಾಧಾನದಿಂದಿರಿ,
ಹೆದರಬೇಡಿ. ನಿಮ್ಮ ತಂದೆಗೂ ನಿಮಗೂ ದೇವರಾದವರು ನಿಮ್ಮ ಚೀಲಗಳಲ್ಲಿಯೇ ನಿಧಿನಿಕ್ಷೇಪ
ದೊರಕುವಂತೆ ಅನುಗ್ರಹಿಸಿದ್ದಾರೆ' ನೀವು ಕೊಟ್ಟ ಹಣ ನನಗೆ ಮುಟ್ಟಿದೆ," ಎಂದು ಹೇಳಿ ಸಿಮೆಯೋನನನ್ನು
ಅವರ ಬಳಿಗೆ ಕರೆದುಕೊಂಡು ಬಂದನು.

24 ಆ ಮೇಲೆ ಗೃಹನಿರ್ವಾಹಕನು ಅವರೆಲ್ಲರನ್ನು ಜೋಸೆಫನ ಮನೆಯೊಳಗೆ ಕರೆತಂದು ಕಾಲು
ತೊಳೆದುಕೊಳ್ಳುವುದಕ್ಕೆ ನೀರನ್ನು ಕೊಡಿಸಿದನು. ಅವರ ಕತ್ತೆಗಳಿಗೆ ಮೇವು ಹಾಕಿಸಿದನು. 25ತಾವು ಅಲ್ಲೇ
ಊಟಮಾಡಬೇಕೆಂಬ ಸಂಗತಿ ಅವರಿಗೆ ತಿಳಿಯಿತು. ಆದ್ದರಿಂದ ತಾವು ತಂದಿದ್ದ ಕಾಣಿಕೆಯನ್ನು ಸಿದ್ಧವಾಗಿ
ಇಟ್ಟುಕೊಂಡರು. ಜೋಸೆಫನು ಬರುವ ತನಕ, ಮಧ್ಯಾಹ್ನದವರೆಗೆ ಕಾದುಕೊಂಡಿದ್ದರು. 26ಜೋಸೆಫನು
ಮನೆಗೆ ಬಂದಾಗ ಅವರು ಅವನಿಗೆ ಕಾಣಿಕೆಯನ್ನು ತಂದುಕೊಟ್ಟು, ಅವನ ಮುಂದೆ ನೆಲದವರೆಗೂ ಬಾಗಿ
ನಮಸ್ಕರಿಸಿದರು. 27ಅವನು ಅವರ ಯೋಗಕ್ಷೇಮವನ್ನು ವಿಚಾರಿಸಿದನು. ಬಳಿಕ, "ನೀವು ಹೇಳಿದ
ಮುಪ್ಪುವಯಸ್ಸಿನ ನಿಮ್ಮ ತಂದೆ ಕ್ಷೇಮವೊ? ಇನ್ನೂ ಬದುಕಿದ್ದಾನೋ?" ಎಂದು ಕೇಳಲು 28ಅವರು ಮತ್ತೆ
ನೆಲದವರೆಗೆ ಬಾಗಿ ನಮಸ್ಕಾರ ಮಾಡಿ, "ನಿಮ್ಮ ಸೇವಕರಾದ ನಮ್ಮ ತಂದೆ ಇಂದಿಗೂ ಕ್ಷೇಮದಿಂದ ಇದ್ದಾರೆ,"
ಎಂದರು.

29 ಅನಂತರ ಕಣ್ಣೆತ್ತಿ, ತನ್ನ ಒಡಹುಟ್ಟಿದ ತಮ್ಮನಾದ ಬೆನ್ಯಾಮೀನನನ್ನು ನೋಡಿದನು. "ನೀವು
ಹೇಳಿದ ನಿಮ್ಮ ಕಿರಿಯ ತಮ್ಮ ಇವನೇನೋ?" ಎಂದು ಕೇಳಿ ಅವನಿಗೆ, "ಮಗು, ದೇವರ ಪ್ರೀತಿ ನಿನ್ನ
ಮೇಲಿರಲಿ!" ಎಂದು ಹೇಳಿದನು. 30ಜೋಸೆಫನಿಗೆ ತಮ್ಮನನ್ನು ನೋಡಿದ ಮೇಲೆ ಕರುಳು ಕರಗಿತು.
ಕಣ್ಣೀರನ್ನು ತಡೆಯಲಾಗದೆ ಒಳ ಅರಮನೆಗೆ ತ್ವರೆಯಾಗಿ ಹೋಗಿ ಅಲ್ಲಿ ಅತ್ತನು. 31ಆ ಮೇಲೆ ಮುಖವನ್ನು
ತೊಳೆದುಕೊಂಡು, ಹೊರಗೆ ಬಂದು, ಮನಸ್ಸನ್ನು ಬಿಗಿ ಹಿಡಿದು, "ಊಟಕ್ಕೆ ಬಡಿಸಿರಿ", ಎಂದು ಅಪ್ಪಣೆ
ಕೊಟ್ಟನು. 32ಪರಿಚಾರಕರು ಅವನಿಗೆ ಬೇರೆ, ಅವನ ಅಣ್ಣ ತಮ್ಮಂದಿರಿಗೇ ಬೇರೆ, ಅವನ ಸಂಗಡವಿದ್ದ
ಈಜಿಪ್ಟಿನವರಿಗೇ ಬೇರೆ, ಹೀಗೆ ಬೇರೆಬೇರೆಯಾಗಿ ಊಟಕ್ಕೆ ಬಡಿಸಿದರು. ಈಜಿಪ್ಟಿನವರು ಹಿಬ್ರಿಯರ
ಸಹಪಂಕ್ತಿಯಲ್ಲಿ ಊಟಮಾಡುವುದಿಲ್ಲ; ಅದು ಅವರಿಗೆ ಅಸಹ್ಯ. 33ಜೋಸೆಫನು ತನ್ನ ಅಣ್ಣ ತಮ್ಮಂದಿರನ್ನು,
ಹಿರಿಯವನು ಮೊದಲ್ಗೊಂಡು ಕಿರಿಯವನವರೆಗೂ, ಅವರವರ ವಯಸ್ಸಿನ ಪ್ರಕಾರ ಕುಳ್ಳಿರಿಸಿದ್ದನು. ಇದನ್ನು

ಗಮನಿಸಿದ ಅವರು ಒಬ್ಬರನ್ನೊಬ್ಬರು ನೋಡುತ್ತಾ ಆಶ್ಚರ್ಯಪಟ್ಟರು. 34ಜೋಸೆಫನು ತನ್ನ ಮುಂದೆ ಬಡಿಸಿದ್ದ ಪದಾರ್ಥಗಳಲ್ಲಿ ಅವರಿಗೆ ಭಾಗಗಳನ್ನು ಕಳಿಸಿದನು. ಬೆನ್ಯಾಮೀನನಿಗೆ ಬಂದ ಭಾಗವಾದರೋ ಮಿಕ್ಕವರ ಭಾಗಗಳಿಗಿಂತ ಐದರಷ್ಟು ಹೆಚ್ಚಾಗಿತ್ತು. ಅವರು ಯಥೇಚ್ಛವಾಗಿ ಪಾನಮಾಡಿ ಜೋಸೆಫನ ಸಂಗಡ ಸಂಭ್ರಮದಿಂದಿದ್ದರು.

## ಕಾಣದೆಹೋದ ಬೆಳ್ಳಿಪಾತ್ರೆ

**44** ತರುವಾಯ ಜೋಸೆಫನು ತನ್ನ ಗೃಹ ನಿರ್ವಾಹಕನನ್ನು ಕರೆದು, "ಆ ಜನರ ಗೋಣಿಚೀಲಗಳಲ್ಲಿ
ಹೊರುವಷ್ಟು ಧಾನ್ಯವನ್ನು ತುಂಬಿಸಿ, ಒಬ್ಬೊಬ್ಬನ ಚೀಲದ ಬಾಯಿಯಲ್ಲಿ ಅವನವನ ಹಣದ ಗಂಟನ್ನಿಡು.
2ಕಿರಿಯವನ ಚೀಲದ ಬಾಯೊಳಗೆ ಅವನು ದವಸಕ್ಕೆ ತಂದ ಹಣವನ್ನಲ್ಲದೆ ನನ್ನ ಬೆಳ್ಳಿಯ
ಪಾನಪಾತ್ರೆಯನ್ನೂ ಇಡು," ಎಂದು ಅಪ್ಪಣೆಕೊಟ್ಟನು. ಗೃಹ ನಿರ್ವಾಹಕನು ಅದರಂತೆಯೇ ಮಾಡಿದನು.
3ಬೆಳಿಗ್ಗೆ, ಹೊತ್ತು ಮೂಡುವಾಗಲೆ, ಆ ಜನರು ಅಪ್ಪಣೆ ಪಡೆದು, ಕತ್ತೆಗಳನ್ನು ಹೊಡೆದುಕೊಂಡು ಹೊರಟು
ಹೋದರು. 4ಅವರು ಪಟ್ಟಣಗಳನ್ನು ಬಿಟ್ಟು ಸ್ವಲ್ಪದೂರ ಹೋಗುವಷ್ಟರಲ್ಲಿ, ಜೋಸೆಫನು ತನ್ನ
ಗೃಹನಿರ್ವಾಹಕನಿಗೆ, "ನೀನೆದ್ದು ಆ ಜನರನ್ನು ಹಿಂದಟ್ಟಿ ಹೋಗಿ ಹಿಡಿ. ಅವರಿಗೆ, 'ನೀವು ಉಪಕಾರಕ್ಕೆ
ಪ್ರತಿಯಾಗಿ ಏಕೆ ಅಪಕಾರ ಮಾಡಿದಿರಿ? 5ಆ ಪಾತ್ರೆಯಿಂದಲೆ ಅಲ್ಲವೆ ನನ್ನ ದಣಿ ಪಾನಮಾಡುವುದು?
ಅದರಲ್ಲಿ ನೋಡೇ ಅಲ್ಲವೆ ಶಕುನ ಹೇಳುವುದು? ನೀವು ಮಾಡಿರುವುದು ಮಹಾ ನೀಚತನ,' ಎನ್ನಬೇಕು,"
ಎಂದು ತಿಳಿಸಿದನು.
6 ಗೃಹನಿರ್ವಾಹಕನು ಅವರನ್ನು ಹಿಂದಟ್ಟಿ ಹೋಗಿ ಹಿಡಿದು ಆ ಮಾತುಗಳನ್ನೇ ಹೇಳಿದನು. 7ಅದಕ್ಕೆ
ಅವರು, "ಅಯ್ಯಾ, ನೀವು ಇಂಥಾ ಮಾತುಗಳನ್ನು ಆಡಬಹುದೆ! ನಿಮ್ಮ ಸೇವಕರಾದ ನಾವು ಇಂಥ
ಕೃತ್ಯವನ್ನು ಎಂದಿಗೂ ಮಾಡುವವರಲ್ಲ. 8ಮೊದಲು ನಮ್ಮ ಚೀಲಗಳ ಬಾಯಲ್ಲಿ ಸಿಕ್ಕಿದ ಹಣವನ್ನು ನಾವು
ಕಾನಾನ್ ನಾಡಿನಿಂದ ವಾಪಸ್ಸು ತಂದು ನಿಮಗೆ ಕೊಟ್ಟೆವಲ್ಲವೆ? ಹೀಗಿರುವಾಗ ನಾವು ನಿಮ್ಮ ದಣಿಯ
ಮನೆಯ ಒಳಗಿಂದ ಬೆಳ್ಳಿಬಂಗಾರ ಕದಿಯುವುದುಂಟೆ? 9ಆ ಪಾತ್ರೆ ನಿಮ್ಮ ಸೇವಕರಾದ ನಮ್ಮಲ್ಲಿ ಯಾರಾದರ
ಬಳಿ ಸಿಕ್ಕಿದ್ದಾದರೆ ಅವನಿಗೆ ಮರಣ ದಂಡನೆ ಆಗಲಿ! ಅದುಮಾತ್ರವಲ್ಲ, ನಾವೆಲ್ಲರೂ ನಮ್ಮೊಡೆಯರಿಗೆ
ಊಳಿಗದವರಾಗುತ್ತೇವೆ," ಎಂದರು. 10ಅದಕ್ಕೆ ಆ ಗೃಹನಿರ್ವಾಹಕ, "ಸರಿ, ನೀವು ಹೇಳಿದಂತೆಯೇ ಆಗಲಿ;
ಆ ಪಾತ್ರೆ ಯಾವನ ಬಳಿ ಸಿಕ್ಕುತ್ತದೋ ಅವನು ನನಗೆ ಊಳಿಗದವನಾಗಬೇಕು; ಉಳಿದವರು ತಪ್ಪಿಲ್ಲದವರು,'
ಎಂದು ಹೇಳಿದ್ದೇ 11ಅವರಲ್ಲಿ ಪ್ರತಿಯೊಬ್ಬನೂ ತನ್ನತನ್ನ ಚೀಲವನ್ನು ನೆಲಕ್ಕಿಳಿಸಿ ಬಿಚ್ಚಿದರು. 12ಅವನು
ಹಿರಿಯವನಿಂದ ಮೊದಲ್ಗೊಂಡು ಕಿರಿಯವನ ತನಕ ಪರೀಕ್ಷಿಸಿ ನೋಡಿದನು. ಆ ಪಾತ್ರೆ ಬೆನ್ಯಾಮೀನನ
ಚೀಲದಲ್ಲಿ ಸಿಕ್ಕಿತು. 13ಆಗ ಅವರು ತಮ್ಮ ಬಟ್ಟೆಗಳನ್ನು ಹರಿದುಕೊಂಡು ತಮ್ಮ ದುಃಖವನ್ನು ವ್ಯಕ್ತಪಡಿಸಿದರು;
ಕತ್ತೆಗಳ ಮೇಲೆ ಚೀಲಗಳನ್ನು ಹೇರಿ ಪಟ್ಟಣಕ್ಕೆ ಹಿಂದಿರುಗಿ ಬಂದರು.
14 ಯೆಹೂದನು ಮತ್ತು ಅವನ ಅಣ್ಣ ತಮ್ಮಂದಿರು ಜೋಸೆಫನ ಮನೆಗೆ ಹಿಂದಿರುಗಿದಾಗ
ಜೋಸೆಫನು ಇನ್ನೂ ಮನೆಯಲ್ಲೇ ಇದ್ದನು. ಅವರು ಅವನಿಗೆ ಅಡ್ಡಬಿದ್ದರು. 15ಅವನು ಅವರನ್ನು, "ನೀವು
ಮಾಡಿರುವ ಕೃತ್ಯ ಎಂಥದ್ದು! ನನ್ನಂಥವನು ಕಣಿನೋಡಿ ಗುಟ್ಟನ್ನು ರಟ್ಟುಮಾಡಬಲ್ಲವ ನೆಂಬುದು ನಿಮಗೆ
ತಿಳಿಯಲಿಲ್ಲವೋ?" ಎಂದು ಕೇಳಿದನು.
16 ಅದಕ್ಕೆ ಯೆಹೂದನು, "ನಮ್ಮೊಡೆಯರಿಗೆ ನಾವು ಏನು ಹೇಳೋಣ? ಯಾವ ಉತ್ತರ
ಕೊಡೋಣ? ನಾವು ನಿರ್ದೋಷಿಗಳೆಂದು ತೋರಿಸಲು, ಏನಾತಾನೆ ಮಾಡುವುದು? ನಿಮ್ಮ ಸೇವಕರಾದ
ನಮ್ಮ ಪಾಪಕೃತ್ಯವನ್ನು ದೇವರೇ ಹೊರಪಡಿಸಿದ್ದಾರೆ. ಆ ಪಾತ್ರೆ ಯಾರ ಬಳಿಯಲ್ಲಿ ಸಿಕ್ಕಿತೋ ಅವನು
ಮಾತ್ರವಲ್ಲ, ನಾವೆಲ್ಲರೂ ನಮ್ಮೊಡೆಯರಿಗೆ ಗುಲಾಮರಾದೆವಲ್ಲವೆ?" ಎಂದನು. 17ಜೋಸೆಫನು, "ಹಾಗೆ
ಎಂದಿಗೂ ಆಗಬಾರದು; ಆ ಪಾತ್ರೆ ಯಾರ ಬಳಿಯಲ್ಲಿ ಸಿಕ್ಕಿತೋ ಅವನು ಮಾತ್ರ ನನಗೆ
ಗುಲಾಮನಾಗಬೇಕು; ನೀವಾದರೋ ಅಡ್ಡಿಯಲ್ಲದೆ ನಿಮ್ಮ ತಂದೆಯ ಬಳಿಗೆ ಹೋಗಬಹುದು," ಎಂದನು.

## ಬೆನ್ಯಾಮೀನನ ಪರವಾಗಿ ಯೆಹೂದನ ಮೊರೆ

18 ಆಗ ಯೆಹೂದನು ಹತ್ತಿರಕ್ಕೆ ಬಂದು, "ನನ್ನೊಡೆಯಾ, ತಮ್ಮ ಸೇವಕನಾದ ನಾನು ಒಂದು
ಮಾತನ್ನು ಅರಿಕೆಮಾಡಿಕೊಳ್ಳುತ್ತೇನೆ: ನನ್ನ ಮೇಲೆ ಸಿಟ್ಟುಮಾಡಬೇಡಿ; ತಾವು ಫರೋಹನಿಗೆ ಸಮಾನರು.
19ಒಡೆಯರಾದ ತಾವು ಸೇವಕರಾದ ನಮ್ಮನ್ನು, 'ನಿಮಗೆ ತಂದೆಯಾಗಲಿ, ತಮ್ಮನಾಗಲಿ ಇದ್ದಾರೋ?' ಎಂದು
ಕೇಳಿದಿರಿ. 20ನಾವು 'ತಂದೆ ಇದ್ದಾರೆ, ಅವರು ಮುದುಕ; ಮುಪ್ಪಿನಲ್ಲಿ ಅವರಿಗೆ ಹುಟ್ಟಿದ ಒಬ್ಬ ಚಿಕ್ಕ ಹುಡುಗ
ಇದ್ದಾನೆ. ಅವನ ಒಡಹುಟ್ಟಿದವನು ಸತ್ತುಹೋದ. ಅವನ ತಾಯಿಯ ಹೊಟ್ಟೆಯಲ್ಲಿ ಹುಟ್ಟಿದವರಲ್ಲಿ
ಅವನೊಬ್ಬನೇ ಉಳಿದಿದ್ದಾನೆ. ಅವನ ಮೇಲೆ ತಂದೆಗೆ ಅಪಾರ ಪ್ರೀತಿ,' ಎಂದು ಹೇಳಿದೆವು. 21ಅದಕ್ಕೆ ತಾವು
ಸೇವಕರಾದ ನಮಗೆ, 'ನಾನು ಆ ಹುಡುಗನನ್ನು ನೋಡಬೇಕು, ಅವನನ್ನು ನನ್ನ ಬಳಿಗೆ ಕರೆದು ತನ್ನಿ,'
ಎಂದು ಅಪ್ಪಣೆಕೊಟ್ಟಿರಿ. 22ನಾವು, 'ಆ ಹುಡುಗನು ತಂದೆಯನ್ನು ಬಿಟ್ಟು ಅಗಲುವುದಕ್ಕಾಗುವುದಿಲ್ಲ;
ಅಗಲಿದರೆ ತಂದೆ ಸತ್ತು ಹೋದಾರು,' ಎಂದು ಒಡೆಯರಾದ ತಮಗೆ ತಿಳಿಸಿದೆವು. 23ಅದಕ್ಕೆ ತಾವು, 'ನಿಮ್ಮ
ತಮ್ಮನು ಬಾರದಿದ್ದರೆ ನೀವು ಮತ್ತೊಮ್ಮೆ ನನ್ನ ಮುಖವನ್ನು ನೋಡಕೂಡದು,' ಎಂದು ಆಜ್ಞೆಕೊಟ್ಟಿರಿ.

24 "ತಮ್ಮ ಸೇವಕರಾದ ನಾವು ನಮ್ಮ ತಂದೆಯ ಬಳಿಗೆ ಹೋದಾಗ ಒಡೆಯರ ಮಾತನ್ನು
ತಿಳಿಸಿದೆವು. 25ನಮ್ಮ ತಂದೆ, 'ನೀವು ಇನ್ನೊಮ್ಮೆ ಹೋಗಿ ಧಾನ್ಯ ಕೊಂಡುಕೊಂಡು ಬನ್ನಿ' ಎಂದಾಗ, 26ನಾವು,
'ಹೋಗಲಾಗದು, ತಮ್ಮನು ನಮ್ಮ ಜೊತೆಯಲ್ಲಿ ಇಲ್ಲವಾದರೆ ಆ ಮನುಷ್ಯನ ಮುಖವನ್ನು ನೋಡಲಾಗದು.
ತಮ್ಮನು ನಮ್ಮ ಸಂಗಡ ಬಂದರೆ ಮತ್ತೆ ಹೋಗುತ್ತೇವೆ' ಎಂದು ಹೇಳಿದೆವು. 27ಅದಕ್ಕೆ ತಮ್ಮ ಸೇವಕರಾದ
ನಮ್ಮ ತಂದೆ, 'ನನ್ನ ಪತ್ನಿಯಲ್ಲಿ ನನಗೆ ಇಬ್ಬರೇ ಗಂಡು ಮಕ್ಕಳು ಹುಟ್ಟಿದರೆಂಬುದು ನಿಮಗೆ ತಿಳಿದ ವಿಷಯ.
28ಅವರಲ್ಲಿ ಒಬ್ಬನು ನನ್ನನ್ನು ಬಿಟ್ಟು ಹೊರಟು ಹೋದ: ಅವನು ನಿಸ್ಸಂದೇಹವಾಗಿ ಕಾಡುಮೃಗದಿಂದ
ಸೀಳಿಹಾಕಲ್ಪಟ್ಟಿರಬೇಕು ಎಂದು ತಿಳಿದುಕೊಂಡೆ; ಅಂದಿನಿಂದ ಅವನನ್ನು ನಾನು ಕಂಡಿಲ್ಲ. 29ಈಗ ಇವನನ್ನೂ
ನನ್ನ ಬಳಿಯಿಂದ ತೆಗೆದುಕೊಂಡು ಹೋಗಬೇಕೆಂದಿದ್ದೀರಿ. ಇವನಿಗೂ ಏನಾದರು ಆಪತ್ತು ಒದಗಿದರೆ, ಈ
ನರೆಕೂದಲಿನ ಮುದುಕ ಸಂಕಟದಿಂದ ಸಮಾಧಿ ಸೇರಲು ನೀವೇ ಕಾರಣರಾಗುತ್ತೀರಿ' ಎಂದರು.

30 "ತಮ್ಮ ಸೇವಕರಾದ ನನ್ನ ತಂದೆಯ ಬಳಿಗೆ ನಾನು ಸೇರಿದಾಗ, ಅವರ ಪ್ರಾಣದ
ಪ್ರಾಣವಾಗಿರುವ ಈ ಹುಡುಗ ನನ್ನ ಸಂಗಡ ಇಲ್ಲದೆ ಹೋದರೆ, ಹುಡುಗ ಬರಲಿಲ್ಲವೆಂದು ಅವರು ಕೂಡಲೆ
ಸಾಯುವರು. 31ಆಗ ತಮ್ಮ ಸೇವಕರಾದ ನಾವು, ತಮ್ಮ ಸೇವಕ ಹಾಗೂ ನರೆಕೂದಲಿನ ಮುದುಕ ಆದ
ನಮ್ಮ ತಂದೆ ಸಂಕಟದಿಂದಲೆ ಸಮಾಧಿ ಸೇರಲು ಕಾರಣರಾಗುತ್ತೇವೆ. 32ಸೇವಕನಾದ ನಾನು ನನ್ನ ತಂದೆಯ
ಬಳಿಯಲ್ಲಿ ಈ ಹುಡುಗನಿಗೆ ಹೊಣೆಯಾಗಿದ್ದೇನೆ. 'ನಾನು ಇವನನ್ನು ನಿಮ್ಮ ಬಳಿಗೆ ಕರೆದುಕೊಂಡು
ಬಾರದಿದ್ದರೆ, ತಂದೆಗೆ ತಪ್ಪಿದವನ ದೋಷ ಸದಾಕಾಲ ನನ್ನದಾಗಲಿ' ಎಂದು ಮಾತುಕೊಟ್ಟೆ. 33ಆದುದರಿಂದ
ತಮ್ಮಲ್ಲಿ ನಾನು ಮಾಡುವ ಪ್ರಾರ್ಥನೆ ಇದು: ಈ ಹುಡುಗನಿಗೆ ಬದಲಾಗಿ, ತಮ್ಮ ಸೇವಕನಾದ ನನ್ನನ್ನು
ತಮ್ಮ ಗುಲಾಮನನ್ನಾಗಿ ಇರಿಸಿಕೊಳ್ಳಿ; ಇವನು ತನ್ನ ಅಣ್ಣಂದಿರ ಸಂಗಡ ಹೋಗುವಂತೆ ಅನುಗ್ರಹಿಸಿ. 34ಈ
ಹುಡುಗನನ್ನು ಬಿಟ್ಟು ನಾನು ನನ್ನ ತಂದೆಯ ಬಳಿಗೆ ಹೇಗೆ ತಾನೆ ಹೋಗಲಾದೀತು? ತಂದೆಗೆ ಉಂಟಾಗುವ
ಮನೋಯಾತನೆಯನ್ನು ನನ್ನಿಂದ ನೋಡಲಾಗದು."

## ಜೋಸೆಫನ ಪರಿಚಯ – ಸ್ವಜನರಿಗೆ ಆಶ್ಚರ್ಯ

**45** ಇದನ್ನು ಕೇಳಿದ ಮೇಲೆ ತನ್ನ ಪರಿವಾರದವರ ಮುಂದೆ, ತನ್ನನ್ನೇ ಇನ್ನು ತಡೆಹಿಡಿದುಕೊಳ್ಳಲು
ಜೋಸೆಫನಿಂದ ಆಗಲಿಲ್ಲ. "ಇಲ್ಲಿಂದ ಎಲ್ಲರನ್ನು ಆಚೆ ಕಳಿಸಿರಿ," ಎಂದು ಬಾಯ್ತೆರೆದು ಹೇಳಿದ. ಜೋಸೆಫನು
ಅಣ್ಣತಮ್ಮಂದಿರಿಗೆ ತನ್ನ ಪರಿಚಯ ಸಿಗುವಂತೆ ಮಾಡುವಾಗ ಇತರರು ಯಾರೂ ಹತ್ತಿರ ಇರಲಿಲ್ಲ. 2ಅವನು
ಗಟ್ಟಿಯಾಗಿ ಅತ್ತದ್ದು ಈಜಿಪ್ಟಿನವರಿಗೆ ಕೇಳಿಸಿತು; ಫರೋಹನ ಮನೆಯವರಿಗೂ ಆ ಸುದ್ದಿ ಮುಟ್ಟಿತು.
3ಜೋಸೆಫನು ತನ್ನ ಅಣ್ಣ ತಮ್ಮಂದಿರಿಗೆ, "ನಾನೇ ಜೋಸೆಫ್! ನನ್ನ ತಂದೆ ಇನ್ನೂ ಇದ್ದಾರೋ?" ಎಂದು
ಕೇಳಿದ. ಅವರು ತತ್ತರಗೊಂಡು ಉತ್ತರಿಸಲಾರದೆ ಹೋದರು. 4ಜೋಸೆಫನು, "ಹತ್ತಿರಕ್ಕೆ ಬನ್ನಿ" ಎನ್ನಲು,

ಅವರು ಹತ್ತಿರಕ್ಕೆ ಬಂದರು. ಅವನು ಅವರಿಗೆ, “ಈಜಿಪ್ಟ್ ದೇಶಕ್ಕೆ ಹೋಗಲಿ” ಎಂದು ನೀವು ಮಾರಿಬಿಟ್ಟ
ನಿಮ್ಮ ತಮ್ಮ ಜೋಸೆಫ್ ನಾನೇ. 5ನೀವು ನನ್ನನ್ನು ಇಲ್ಲಿಗೆ ಮಾರಿದ್ದಕ್ಕಾಗಿ ವ್ಯಸನಪಡಬೇಡಿ, ನಿಮ್ಮನ್ನೇ
ನಿಂದಿಸಿಕೊಳ್ಳಬೇಡಿ. ಏಕೆಂದರೆ ಜೀವ ರಕ್ಷಣೆಗಾಗಿಯೇ ದೇವರು ನನ್ನನ್ನು ನಿಮಗೆ ಮುಂಚಿತವಾಗಿ ಇಲ್ಲಿಗೆ
ಕಳುಹಿಸಿದರು. 6ದೇಶಕ್ಕೆ ಬರಗಾಲ ಬಂದು ಈಗಾಗಲೇ ಎರಡು ವರ್ಷಗಳಾದವು. ಇನ್ನೂ ಐದು ವರ್ಷಗಳ
ಪರ್ಯಂತರ ಬಿತ್ತುವುದಕ್ಕಾಗಲಿ ಕೊಯ್ಯುವುದಕ್ಕಾಗಲಿ ಅವಕಾಶವಿಲ್ಲ. 7ನಿಮ್ಮ ಜನ ಧರೆಯಲ್ಲಿ
ಉಳಿಯುವಂತೆಯೂ ನೀವು ಈ ವಿಪತ್ತಿಗೆ ಸಿಕ್ಕದೆ ಅಭಿವೃದ್ಧಿಯಾಗುವಂತೆಯೂ ದೇವರು ನನ್ನನ್ನು ನಿಮಗೆ
ಮುಂಚಿತವಾಗಿ ಕಳಿಸಿದರು. 8ನನ್ನನ್ನು ಇಲ್ಲಿಗೆ ಕಳಿಸಿದವರು ನೀವಲ್ಲ, ದೇವರೇ. ಅವರು ನನ್ನನ್ನು
ಫರೋಹನಿಗೆ ಮಂತ್ರಿಯಾಗಿಯೂ ಅವರ ಆಸ್ಥಾನಕ್ಕೆ ಅಧಿಪತಿಯಾಗಿಯೂ ಈಜಿಪ್ಟ್ ದೇಶಕ್ಕೆ
ಸರ್ವಾಧಿಕಾರಿಯಾಗಿಯೂ ಮಾಡಿದ್ದಾರೆ.

9 “ನೀವು ನನ್ನ ತಂದೆಯ ಬಳಿಗೆ ಬೇಗನೆ ಹೋಗಿ ಅವರಿಗೆ, ನಿಮ್ಮ ಮಗ ಜೋಸೆಫ್
ಹೀಗೆನ್ನುತ್ತಾನೆ: ‘ದೇವರು ನನ್ನನ್ನು ಈಜಿಪ್ಟ್ ದೇಶಕ್ಕೆ ಮುಖ್ಯಮಂತ್ರಿಯನ್ನಾಗಿ ನೇಮಿಸಿದ್ದಾರೆ. ನೀವು
ತಡಮಾಡದೆ ನನ್ನ ಬಳಿಗೆ ಬರಬೇಕು. 10ಗೋಷೆನ್ ಪ್ರಾಂತ್ಯದಲ್ಲಿ ನನ್ನ ಬಳಿಯಲ್ಲೇ ನೀವೂ ನಿಮ್ಮ ಮಕ್ಕಳೂ
ಮೊಮ್ಮಕ್ಕಳೂ ದನ, ಕುರಿ ಮೊದಲಾದ ಆಸ್ತಿಪಾಸ್ತಿಗಳ ಸಮೇತ ವಾಸಮಾಡಬಹುದು. 11ಬರಗಾಲ
ತೀರುವುದಕ್ಕೆ ಇನ್ನೂ ಐದು ವರ್ಷ ಕಳೆಯಬೇಕಾಗಿದೆ. ಆದುದರಿಂದ ನಿಮಗೂ ನಿಮ್ಮ ಕುಟುಂಬಕ್ಕೂ
ನಿಮಗಿರುವ ಸಮಸ್ತಕ್ಕೂ ಬಡತನ ತಟ್ಟದಂತೆ ನಾನು ನಿಮ್ಮನ್ನು ಪೋಷಿಸುತ್ತೇನೆ’, ಎಂದು ಹೇಳಿರುವುದಾಗಿ
ತಿಳಿಸಿರಿ.

12 “ನಾನೇ ಖುದ್ದಾಗಿ ನಿಮ್ಮ ಸಂಗಡ ಮಾತಾಡಿದ್ದೇನೆ; ಅದಕ್ಕೆ ನೀವೂ ಸಾಕ್ಷಿ; ನನ್ನ ಒಡಹುಟ್ಟಿದ
ಬೆನ್ಯಾಮೀನನೂ ಸಾಕ್ಷಿ; 13ಈಜಿಪ್ಟ್ ದೇಶದಲ್ಲಿ ನನಗಿರುವ ಘನತೆ ಗೌರವವನ್ನೂ ನೀವು ಕಂಡದ್ದೆಲ್ಲವನ್ನೂ
ತಂದೆಗೆ ತಿಳಿಸಿ, ಬೇಗನೆ ಅವರನ್ನು ಇಲ್ಲಿಗೆ ಕರೆದುಕೊಂಡು ಬನ್ನಿ,” ಎಂದು ಹೇಳಿದನು.

14 ಬಳಿಕ ಜೋಸೆಫನು ತನ್ನ ತಮ್ಮ ಬೆನ್ಯಾಮೀನನ ಕೊರಳನ್ನು ಅಪ್ಪಿಕೊಂಡು ಅತ್ತನು. 15ತನ್ನ
ಅಣ್ಣಂದಿರಲ್ಲಿ ಪ್ರತಿಯೊಬ್ಬನಿಗೂ ಮುದ್ದಿಟ್ಟು ಅವರನ್ನು ಅಪ್ಪಿಕೊಂಡು ಕಣ್ಣೀರಿಟ್ಟನು. ತರುವಾಯ ಅವರು
ಅವನ ಸಂಗಡ ಮಾತನಾಡತೊಡಗಿದರು.

16 ಜೋಸೆಫನ ಅಣ್ಣತಮ್ಮಂದಿರು ಬಂದಿರುವ ಸಮಾಚಾರ ಫರೋಹನ ಅರಮನೆಗೆ ತಲುಪಿತು.
ಫರೋಹನೂ ಅವನ ಪರಿವಾರದವರೂ ಅದನ್ನು ಕೇಳಿ ಸಂತೋಷಪಟ್ಟರು. 17ಫರೋಹನು ಜೋಸೆಫನನ್ನು
ಕರೆಸಿ, “ನೀನು ನಿನ್ನ ಸಹೋದರರಿಗೆ ತಿಳಿಸಬೇಕಾದ ನನ್ನ ಆಜ್ಞೆ ಇದು: ‘ನೀವು ನಿಮ್ಮ ವಾಹಕಪಶುಗಳ
ಮೇಲೆ ಸಾಮಾನುಗಳನ್ನು ಹೇರಿ ಕಾನಾನ್ ನಾಡಿಗೆ ಹೋಗಿ, ಅಲ್ಲಿಂದ 18ನಿಮ್ಮ ತಂದೆಯನ್ನೂ
ಕುಟುಂಬದವರನ್ನೂ ನನ್ನ ಬಳಿಗೆ ಕರೆದುಕೊಂಡು ಬರತಕ್ಕದ್ದು. ಈಜಿಪ್ಟ್ ದೇಶದಲ್ಲಿ ನಿಮಗೆ ಅತ್ಯುತ್ತಮವಾದ
ಭೂಮಿಯನ್ನು ಕೊಡುವೆನು. ನೀವು ಈ ದೇಶದ ಸುಖಸಂಪತ್ತನ್ನು ಅನುಭವಿಸಬಹುದು.’ 19ನಿನ್ನ
ಸಹೋದರರಿಗೆ ಈ ಆಜ್ಞೆಯನ್ನೂ ತಿಳಿಸು: ‘ನೀವು ನಿಮ್ಮ ಮಡದಿ ಮಕ್ಕಳನ್ನು ಕರೆದುತರಲು ಈಜಿಪ್ಟ್
ದೇಶದ ಬಂಡಿಗಳನ್ನು ತೆಗೆದುಕೊಂಡು ಹೋಗಿರಿ; ನಿಮ್ಮ ತಂದೆಯನ್ನು ತಂದು ಸೇರಿಸಿರಿ. 20ಆಸ್ತಿಪಾಸ್ತಿಗಳ
ವಿಷಯದಲ್ಲಿ ನೀವು ಚಿಂತಿಸಬೇಕಾಗಿಲ್ಲ. ಈಜಿಪ್ಟ್ ದೇಶದ ಅತ್ಯುತ್ತಮವಾದುವುಗಳು ನಿಮ್ಮದಾಗುವುವು’.”

21 ಯಕೋಬನ ಮಕ್ಕಳು ಅದೇ ಮೇರೆಗೆ ಮಾಡಿದರು. ಫರೋಹನ ಅಪ್ಪಣೆಯ ಪ್ರಕಾರ
ಜೋಸೆಫನು ಅವರಿಗೆ ಬಂಡಿಗಳನ್ನೂ ಮಾರ್ಗಕ್ಕೆ ಬೇಕಾದ ಆಹಾರವನ್ನೂ ಕೊಡಿಸಿದನು. 22ಅದೂ ಅಲ್ಲದೆ,
ಪ್ರತಿಯೊಬ್ಬನಿಗೂ ಶ್ರೇಷ್ಠವಾದ ಹೊಸ ಬಟ್ಟೆಗಳನ್ನು ಕೊಟ್ಟನು. ಬೆನ್ಯಾಮೀನನಿಗಾದರೋ ಮುನ್ನೂರು
ಬೆಳ್ಳಿನಾಣ್ಯಗಳನ್ನು ಹಾಗೂ ಐದು ಶ್ರೇಷ್ಠವಾದ ಹೊಸಬಟ್ಟೆಗಳನ್ನು ಕೊಟ್ಟನು. 23ತನ್ನ ತಂದೆಗೆ ಈಜಿಪ್ಟ್ ದೇಶದ
ಒಳ್ಳೊಳ್ಳೆಯ ವಸ್ತುಗಳನ್ನೂ ಹತ್ತು ಗಂಡುಕತ್ತೆಗಳ ಮೇಲೆ ಹೇರಿಸಿದನು. ಅವನ ಪ್ರಯಾಣಕ್ಕೆ ಹತ್ತು
ಹೆಣ್ಣುಕತ್ತೆಗಳ ಮೇಲೆ ದವಸಧಾನ್ಯಗಳನ್ನೂ ಇತರ ಆಹಾರ ಪದಾರ್ಥಗಳನ್ನೂ ಕಳಿಸಿಕೊಟ್ಟನು. 24ತನ್ನ ಅಣ್ಣ
ತಮ್ಮಂದಿರಿಗೆ, “ದಾರಿಯಲ್ಲಿ ಜಗಳವಾಡಬೇಡಿ” ಎಂದು ಬುದ್ಧಿ ಹೇಳಿ, ಅವರನ್ನು ಬೀಳ್ಕೊಟ್ಟನು. ಅವರು
ಹೊರಟುಹೋದರು.

25 ಅವರು ಈಜಿಪ್ಟ್ ದೇಶವನ್ನು ಬಿಟ್ಟು ಕಾನಾನ್ ನಾಡನ್ನು ಸೇರಿದರು. [26]ತಂದೆ ಯಕೋಬನ
ಬಳಿಗೆ ಬಂದು, "ಜೋಸೆಫನು ಇನ್ನೂ ಜೀವದಿಂದಿದ್ದಾನೆ; ಅವನೇ ಈಜಿಪ್ಟ್ ದೇಶದ ಪ್ರಧಾನಮಂತ್ರಿ"
ಎಂದು ಅರುಹಿದರು. ಅವನು ಅದನ್ನು ಕೇಳಿ ಸ್ತಬ್ಧನಾದ; ಅವರನ್ನು ನಂಬಲೇ ಇಲ್ಲ. [27]ಆದರೆ ಜೋಸೆಫನು
ಹೇಳಿಕಳಿಸಿದ ಎಲ್ಲ ಮಾತುಗಳನ್ನು ಕೇಳಿ, ತನ್ನ ಪ್ರಯಾಣಕ್ಕಾಗಿ ಅವನಿಂದ ಬಂದಿದ್ದ ಬಂಡಿಗಳನ್ನು ನೋಡಿ
ಅವರ ತಂದೆ ಯಕೋಬನಿಗೆ ಹೊಸ ಜೀವ ಬಂದಿತು. [28]ಕೊನೆಗೆ ಯಕೋಬನು, "ನನ್ನ ಮಗ ಜೋಸೆಫ್
ಜೀವದಿಂದಿದ್ದಾನೆ, ನನಗೆ ಅಷ್ಟೇ ಸಾಕು! ನಾನು ಸಾಯುವುದಕ್ಕೆ ಮುಂಚೆ ಹೋಗಿ ಅವನನ್ನು ನೋಡುತ್ತೇನೆ,"
ಎಂದನು.

## ಈಜಿಪ್ಟಿಗೆ ಯಕೋಬನ ಮತ್ತು ಅವನ ಕುಟುಂಬದ ಯಾತ್ರೆ

**46** ಯಕೋಬನು ತನಗಿದ್ದ ಸರ್ವಸ್ವವನ್ನು ತೆಗೆದುಕೊಂಡು ಪ್ರಯಾಣ ಮಾಡಿ ಬೇರ್ಷೆಬಕ್ಕೆ ಬಂದನು.
ಅಲ್ಲಿ ತನ್ನ ತಂದೆ ಇಸಾಕನ ದೇವರಿಗೆ ಬಲಿದಾನಗಳನ್ನು ಅರ್ಪಿಸಿದನು. [2]ಆ ರಾತ್ರಿ ದೇವರು ಯಕೋಬನಿಗೆ
ದರ್ಶನವಿತ್ತು, "ಯಕೋಬನೇ, ಯಕೋಬನೇ," ಎಂದು ಕರೆಯಲು, ಅವನು, "ಇಗೋ, ಸಿದ್ಧನಿದ್ದೇನೆ,"
ಎಂದನು. [3]ಆಗ ದೇವರು, "ನಾನೇ ದೇವರು, ನಿನ್ನ ತಂದೆ ಆರಾಧಿಸಿದ ದೇವರು, ನೀನು ಈಜಿಪ್ಟ್ ದೇಶಕ್ಕೆ
ಹೋಗಲು ಅಂಜಬೇಡ; ಅಲ್ಲಿ ನಿನ್ನಿಂದ ಮಹಾಜನಾಂಗ ಉತ್ಪನ್ನವಾಗುವಂತೆ ಮಾಡುವೆನು; [4]ನಾನೇ
ನಿನ್ನೊಂದಿಗೆ ಈಜಿಪ್ಟಿಗೆ ಬರುವೆನು. ಅಲ್ಲಿಂದ ನಿನ್ನನ್ನು ನಿಶ್ಚಯವಾಗಿ ವಾಪಸ್ಸು ಕರೆದುಕೊಂಡು ಬರುವೆನು.
ನೀನು ಸಾಯುವ ಕಾಲದಲ್ಲಿ ಜೋಸೆಫನು ಹಾಜರಿದ್ದು ನಿನ್ನ ಕಣ್ಣುಗಳನ್ನು ಮುಚ್ಚುವನು," ಎಂದರು.

5 ಬಳಿಕ ಯಕೋಬನು ಬೇರ್ಷೆಬದಿಂದ ಪ್ರಯಾಣ ಮಾಡಿದನು. ಯಕೋಬನ ಮಕ್ಕಳು ತಮ್ಮ
ತಂದೆಯಾದ ಯಕೋಬನನ್ನು ಮತ್ತು ತಮ್ಮ ಮಡದಿಮಕ್ಕಳನ್ನು ಫರೋಹನು ಕಳಿಸಿದ್ದ ಬಂಡಿಗಳಲ್ಲಿ
ಕೂರಿಸಿಕೊಂಡು ಹೊರಟರು. [6]ಕಾನಾನ್ ನಾಡಿನಲ್ಲಿ ತಾವು ಸಂಪಾದಿಸಿದ್ದ ಆಸ್ತಿಪಾಸ್ತಿಯನ್ನೂ
ದನಕುರಿಗಳನ್ನೂ ತೆಗೆದುಕೊಂಡು ಈಜಿಪ್ಟ್ ದೇಶವನ್ನು ತಲುಪಿದರು. [7]ಹೀಗೆ ಯಕೋಬನು ತನ್ನ ಗಂಡು
ಹೆಣ್ಣು ಮಕ್ಕಳನ್ನೂ ಮೊಮ್ಮಕ್ಕಳನ್ನೂ ತನ್ನ ಕುಟುಂಬದವರೆಲ್ಲರನ್ನೂ ತನ್ನ ಸಂಗಡವೇ ಕರೆದುಕೊಂಡು
ಈಜಿಪ್ಟಿಗೆ ಬಂದನು.

8 ಈಜಿಪ್ಟಿಗೆ ಬಂದು ಸೇರಿದ ಯಕೋಬನ ಮತ್ತು ಅವನ ಮಕ್ಕಳಾದ ಇಸ್ರಯೇಲರ ಹೆಸರುಗಳು
ಇವು – ಯಕೋಬನ ಜ್ಯೇಷ್ಠ ಪುತ್ರ ರೂಬೇನನು.

9 ರೂಬೇನನ ಮಕ್ಕಳು – ಹನೋಕ್, ಫಲ್ಲೂ, ಹೆಚ್ರೋನ್ ಮತ್ತು ಕರ್ಮಿ.

10 ಸಿಮೆಯೋನನ ಮಕ್ಕಳು – ಯೆಮೂವೇಲ್, ಯಾಮಿನ್, ಓಹದ್, ಯಾಕೀನ್, ಚೋಹರ್
ಮತ್ತು ಕಾನಾನ್ಯ ಮಹಿಳೆಯಲ್ಲಿ ಹುಟ್ಟಿದ ಸೌಲ.

11 ಲೇವಿಯ ಮಕ್ಕಳು – ಗೆರ್ಷೋನ್, ಕೆಹಾತ್ ಮತ್ತು ಮೆರಾರಿ.

12 ಯೆಹೂದನ ಮಕ್ಕಳು – ಏರ್, ಓನಾನ್, ಶೆಲಾಹ, ಪೆರೆಜ್ ಮತ್ತು ಜೆರಹ (ಇವರಲ್ಲಿ ಏರ್
ಹಾಗೂ ಓನಾನ್ ಕಾನಾನ್ ನಾಡಿನಲ್ಲೇ ಕಾಲವಾಗಿದ್ದರು). ಪೆರೆಜನ ಮಕ್ಕಳು – ಹೆಚ್ರೋನ್ ಮತ್ತು
ಹಾಮೂಲ್.

13 ಇಸ್ಸಾಕಾರನ ಮಕ್ಕಳು – ತೋಲಾ, ಪುವ್ವಾ, ಯೋಬ್ ಮತ್ತು ಶಿಮ್ರೋನ್.

14 ಜೆಬುಲೂನನ ಮಕ್ಕಳು – ಸೆರೆದ್, ಏಲೋನ್ ಮತ್ತು ಯಹ್ಲೇಲ್. [15]ಇವರೆಲ್ಲರು ಲೇಯಳ
ಸಂತತಿಯವರು. ಆಕೆ ಯಕೋಬನಿಗೆ ಇವರನ್ನಲ್ಲದೆ ದೀನಳೆಂಬ ಮಗಳನ್ನೂ ಮೆಸಪೊಟೇಮಿಯಾದಲ್ಲಿ
ಪಡೆದಳು. ಆಕೆಯಿಂದಾದ ಗಂಡು ಹೆಣ್ಣು ಮಕ್ಕಳು ಒಟ್ಟು ಮೂವತ್ತು ಮಂದಿ.

16 ಗಾದನ ಮಕ್ಕಳು – ಚಿಪ್ಯೋನ್, ಹಗ್ಗಿ, ಶೂನೀ, ಎಚ್ಬೋನ್, ಏರಿ, ಅರೋದಿ ಮತ್ತು ಅರೇಲಿ.

17 ಅಶೇರನ ಮಕ್ಕಳು – ಇಮ್ನಾ, ಇಷ್ವಾ, ಇಷಿವೀ, ಬೆರೀಗಾ ಮತ್ತು ಇವರ ತಂಗಿ ಸೆರಹ;
ಬೆರೀಗಾನ ಮಕ್ಕಳು – ಹೆಬೆರ್ ಮತ್ತು ಮಲ್ಕೀಯೇಲ್; [18]ಇವರು ಲಾಬಾನನು ತನ್ನ ಮಗಳಾದ ಲೇಯಳಿಗೆ

ದಾಸಿಯಾಗಿ ಕೊಟ್ಟ ಜಿಲ್ಪಳ ಸಂತತಿಯವರು. ಈಕೆಯಿಂದ ಯಕೋಬನಿಗಾದ ಮಕ್ಕಳು ಮತ್ತು ಮೊಮ್ಮಕ್ಕಳು ಒಟ್ಟು ಹದಿನಾರು ಮಂದಿ.

19 ಯಕೋಬನ ಹೆಂಡತಿಯಾದ ರಾಖೇಲಳ ಮಕ್ಕಳು – ಜೋಸೆಫ್ ಮತ್ತು ಬೆನ್ಯಾಮಿನ್.
[20]ಈಜಿಪ್ಟಿನಲ್ಲಿ ಜೋಸೆಫನಿಗೆ ಓನ್ ಪಟ್ಟಣದ ಆಚಾರ್ಯ ಪೋಟೀಫೆರನ ಮಗಳಾದ ಆಸನತ್ ಎಂಬಾಕೆಯಲ್ಲಿ ಹುಟ್ಟಿದ ಮನಸ್ಸೆ ಮತ್ತು ಎಫ್ರಯಿಮ್.

21 ಬೆನ್ಯಾಮಿನನ ಮಕ್ಕಳು – ಬಿಳಾ, ಬೆಕೆರ್, ಅಶ್ಬೇಲ್, ಗೇರಾ, ನಾಮಾನ್, ಏಹೀರೋಷ್, ಮುಪ್ಪೀಮ್, ಹುಪ್ಪೀಮ್ ಮತ್ತು ಆರ್ದ್. [22]ಈ ಹದಿನಾಲ್ಕು ಮಂದಿ ರಾಖೇಲಳ ಮೂಲಕ ಯಕೋಬನಿಂದಾದ ಸಂತತಿಯರವರು.

23 ದಾನನ ಮಗ – ಹುಶೀಮ್.

24 ನಪ್ತಾಲಿಯ ಮಕ್ಕಳು – ಯಹೇಲ್, ಗೂನಿ, ಯೇಚರ್ ಮತ್ತು ಶಿಲ್ಲೇಮ್; [25]ಇವರು
ಲಾಬಾನನು ತನ್ನ ಮಗಳು ರಾಖೇಲಳಿಗೆ ಕೊಟ್ಟ ದಾಸಿ ಬಿಲ್ಹಳ ಸಂತತಿಯವರು. ಈಕೆಯಿಂದ ಯಕೋಬನಿಗಾದ ಮಕ್ಕಳು ಮತ್ತು ಮೊಮ್ಮಕ್ಕಳು ಒಟ್ಟು ಏಳು ಮಂದಿ.

26 ಯಕೋಬನ ಸೊಸೆಯರಲ್ಲದೆ ಯಕೋಬನಿಂದಲೇ ಹುಟ್ಟಿ ಅವನೊಂದಿಗೆ ಈಜಿಪ್ಟ್ ದೇಶಕ್ಕೆ ಹೋದವರು ಒಟ್ಟು ಅರವತ್ತಾರು ಮಂದಿ. [27]ಅವರಿಲ್ಲದೆ ಈಜಿಪ್ಟ್ ದೇಶದಲ್ಲಿ ಜೋಸೆಫನಿಗೆ ಹುಟ್ಟಿದವರು ಇಬ್ಬರು. ಈಜಿಪ್ಟ್ ದೇಶಕ್ಕೆ ಹೋದ ಯಕೋಬನ ಕುಟುಂಬದವರೆಲ್ಲರು ಒಟ್ಟಾಗಿ ಎಪ್ಪತ್ತು ಮಂದಿ.

### ಈಜಿಪ್ಟಿನಲ್ಲಿ ಯಕೋಬನ ಕುಟುಂಬ

28 ಗೋಷೆನ್ ಪ್ರಾಂತ್ಯದಲ್ಲಿ ಜೋಸೆಫ್ ತನ್ನನ್ನು ಭೇಟಿಯಾಗಬೇಕೆಂದು ತಿಳಿಸಲು ಯಕೋಬನು ಯೆಹೂದನನ್ನು ಮುಂದಾಗಿ ಜೋಸೆಫನ ಬಳಿಗೆ ಕಳಿಸಿದನು. ಅವರೆಲ್ಲರು ಗೋಷೆನ್ ಪ್ರಾಂತ್ಯವನ್ನು ಬಂದು
ಸೇರಿದರು. [29]ಜೋಸೆಫನು ರಥವನ್ನೇರಿ ತನ್ನ ತಂದೆ ಯಕೋಬನನ್ನು ಭೇಟಿಯಾಗಲು ಗೋಷೆನಿಗೆ ಬಂದನು. ತಂದೆಯನ್ನು ಕಂಡೊಡನೆ ಅವರ ಕೊರಳನ್ನು ಅಪ್ಪಿಕೊಂಡು ಬಹಳ ಹೊತ್ತು ಅತ್ತನು.
[30]ಯಕೋಬನು ಜೋಸೆಫನಿಗೆ, "ಇನ್ನು ನಾನು ಸಂತೃಪ್ತಿಯಾಗಿ ಸಾಯುವೆನು ನೀನು ಇನ್ನೂ ಬದುಕಿರುವೆಯೆಂದು ಕೇಳಿದ್ದಾಯಿತು; ನಿನ್ನ ಮುಖವನ್ನು ಕಣ್ಣಾರೆ ನೋಡಿದ್ದಾಯಿತು," ಎಂದನು.

31 ತರುವಾಯ ಜೋಸೆಪನು ತನ್ನ ಅಣ್ಣ ತಮ್ಮಂದಿರನ್ನೂ ತಂದೆಯ ಮನೆಯವರೆಲ್ಲರನ್ನೂ ನೋಡಿ, "ನಾನು ಫರೋಹನ ಸನ್ನಿಧಿಗೆ ಹೋಗಿ ನೀವು ಬಂದಿರುವ ಸಮಾಚಾರವನ್ನು ತಿಳಿಸಿ, 'ಕಾನಾನ್ ನಾಡಿನಲ್ಲಿದ್ದ ನನ್ನ ಸಹೋದರರೂ ನನ್ನ ತಂದೆಯೂ, ಕುಟುಂಬದವರೂ ನನ್ನ ಬಳಿಗೆ ಬಂದಿದ್ದಾರೆ.
[32]ಅವರು ಕುರಿಕಾಯುವವರು, ಮಂದೆ ಮೇಯಿಸುವುದು ಅವರ ಕಸುಬು. ಅವರು ತಮ್ಮ ಕುರಿದನಗಳನ್ನೂ ತಮಗಿದ್ದ ಎಲ್ಲವನ್ನೂ ತಂದಿದ್ದಾರೆ,' ಎಂದು ಹೇಳುತ್ತೇನೆ. [33]ಫರೋಹನು ನಿಮ್ಮನ್ನು ಕರೆಸಿ, 'ನಿಮ್ಮ ಕಸುಬು ಏನೆಂದು ಕೇಳಿದರೆ, [34]'ಚಿಕ್ಕಂದಿನಿಂದ ಇಂದಿನವರೆಗೂ ನಿಮ್ಮ ಸೇವಕರಾದ ನಾವು, ನಮ್ಮ ಪೂರ್ವಜರ ಪದ್ಧತಿಯಂತೆ ಮಂದೆ ಮೇಯಿಸುವವರು,' ಎಂದು ಹೇಳಿರಿ. ಆಗ ಗೋಷೆನ್ ಪ್ರಾಂತ್ಯವನ್ನು ನಿಮ್ಮ ನಿವಾಸಕ್ಕೆ ನೇಮಿಸುವನು – ಏಕೆಂದರೆ ಕುರಿ ಕಾಯುವವರೆಂದರೆ ಈಜಿಪ್ಟಿಯರಿಗೆ ಹಿಡಿಸದು," ಎಂದು ಹೇಳಿದನು.

### ಫರೋಹನೊಡನೆ ಸಂದರ್ಶನ

**47** ಜೋಸೆಫನು ಫರೋಹನ ಬಳಿಗೆ ಬಂದು, "ನನ್ನ ತಂದೆಯೂ ಸಹೋದರರೂ ದನಕುರಿಗಳನ್ನು ಹಾಗೂ ಎಲ್ಲ ಆಸ್ತಿಪಾಸ್ತಿಯನ್ನು ತೆಗೆದುಕೊಂಡು ಕಾನಾನ್ ನಾಡಿನಿಂದ ಗೋಷೆನ್ ಪ್ರಾಂತ್ಯಕ್ಕೆ ಬಂದಿದ್ದಾರೆ,"
ಎಂದು ತಿಳಿಸಿದನು. [2]ಅದು ಮಾತ್ರವಲ್ಲ, ತನ್ನ ಅಣ್ಣ ತಮ್ಮಂದಿರಲ್ಲಿ ಐದು ಮಂದಿಯನ್ನು ಕರೆದುಕೊಂಡು
ಬಂದು ಫರೋಹನ ಸನ್ನಿಧಿಯಲ್ಲಿ ನಿಲ್ಲಿಸಿದನು. [3]ಫರೋಹನು, "ನಿಮ್ಮ ಕಸುಬು ಏನು?" ಎಂದು ಕೇಳಲು ಅವರು, "ನಿಮ್ಮ ಸೇವಕರಾದ ನಾವು ನಮ್ಮ ಪೂರ್ವಜರ ಪದ್ಧತಿಯ ಮೇರೆಗೆ ಕುರಿಕಾಯುವವರು;

[4]ಕಾನಾನ್ ನಾಡಿನಲ್ಲಿ ಬರವು ಘೋರವಾದ್ದರಿಂದ ನಿಮ್ಮ ಸೇವಕರ ದನಕುರಿಗಳಿಗೆ ಮೇವು ಸಿಕ್ಕಲಿಲ್ಲ.
ಆದ್ದರಿಂದ ಈ ದೇಶದಲ್ಲಿ ಸ್ವಲ್ಪಕಾಲ ಇರಬೇಕೆಂದು ಬಂದಿದ್ದೇವೆ. ಸೇವಕರು ಗೋಷೆನ್ ಪ್ರಾಂತ್ಯದಲ್ಲಿ
ವಾಸಮಾಡುವಂತೆ ಅಪ್ಪಣೆಯಾಗಬೇಕು," ಎಂದು ವಿನಂತಿಸಿದರು. [5]ಫರೋಹನು ಜೋಸೆಫನಿಗೆ, "ನಿನ್ನ
ತಂದೆಯೂ ಅಣ್ಣತಮ್ಮಂದಿರು ನಿನ್ನ ಬಳಿಗೆ ಬಂದಿದ್ದಾರಲ್ಲವೆ? [6]ಈಜಿಪ್ಟ್ ದೇಶವು ನಿನ್ನ ಮುಂದಿದೆ;
ಅದರಲ್ಲಿನ ಉತ್ತಮ ಭಾಗವನ್ನು ನಿನ್ನ ತಂದೆಗೂ ಸಹೋದರರಿಗೂ ವಾಸಸ್ಥಾನವಾಗಿ ನೇಮಿಸು; ಗೋಷೆನ್
ಪ್ರಾಂತ್ಯದಲ್ಲಿ ಬೇಕಾದರೆ ವಾಸಮಾಡಲಿ; ಅವರಲ್ಲಿ ನುರಿತವರು ಯಾರಾದರು ಇದ್ದರೆ ಅವರನ್ನು ನನ್ನ
ದನಕರುಗಳ ಮೇಲ್ವಿಚಾರಣೆಗೆ ನೇಮಿಸು," ಎಂದನು.

7 ಬಳಿಕ ಜೋಸೆಫನು ತನ್ನ ತಂದೆ ಯಕೋಬನನ್ನು ಕರೆದುಕೊಂಡು ಬಂದು ಫರೋಹನ
ಸನ್ನಿಧಿಯಲ್ಲಿ ನಿಲ್ಲಿಸಿದನು. ಯಕೋಬನು ಫರೋಹನನ್ನು ಆಶೀರ್ವದಿಸಿದನು. [8]ಫರೋಹನು, "ನಿನಗೆ ಎಷ್ಟು
ವರ್ಷ?" ಎಂದು ಕೇಳಿದನು. [9]ಯಕೋಬನು, "ನನ್ನ ಬಾಳಿನ ಪಯಣದ ದಿನಗಳು ನೂರ ಮೂವತ್ತು
ವರ್ಷಗಳಷ್ಟೇ. ಎಣಿಕೆಯಲ್ಲಿ ಅವು ಕಮ್ಮಿ; ಕಷ್ಟದುಃಖದಲ್ಲಿ ಜಾಸ್ತಿ; ನನ್ನ ಪೂರ್ವಜರು ಬಾಳಿದಷ್ಟು ವರ್ಷಗಳು
ನನಗಾಗಿಲ್ಲ," ಎಂದು ಹೇಳಿ [10]ಫರೋಹನನ್ನು ಆಶೀರ್ವದಿಸಿ, ಅವನ ಸನ್ನಿಧಿಯಿಂದ ಹೊರಟುಹೋದನು.
[11]ಫರೋಹನ ಅಪ್ಪಣೆಯ ಮೇರೆಗೆ ಜೋಸೆಫನು ತನ್ನ ತಂದೆಗೂ ಅಣ್ಣತಮ್ಮಂದಿರಿಗೂ ಈಜಿಪ್ಟಿನಲ್ಲಿ
ವಾಸಸ್ಥಾನವನ್ನು ನೇಮಿಸಿ, ಅದರಲ್ಲಿ ಉತ್ತಮವಾಗಿದ್ದ ರಮ್ಸೇಸ್ ಪ್ರದೇಶದಲ್ಲಿ ಸೊತ್ತನ್ನು ಕೊಟ್ಟನು.
[12]ತಂದೆಗೂ ಸಹೋದರರಿಗೂ ತಂದೆಯ ಮನೆಯವರೆಲ್ಲರಿಗೂ ಅವರವರ ಕುಟುಂಬಗಳಿಗೆ ಸೇರಿದವರ
ಲೆಕ್ಕದ ಪ್ರಕಾರ ಆಹಾರಕೊಟ್ಟು ಅವರನ್ನು ಸಂರಕ್ಷಿಸಿದನು.

### ಭೀಕರವಾದ ಬರ

13 ಬರವು ಬಹು ಘೋರವಾಗಿತ್ತು. ದೇಶದ ಯಾವ ಭಾಗದಲ್ಲೂ ಆಹಾರ ಸಿಕ್ಕುತ್ತಿರಲಿಲ್ಲ. ಈ
ನಿಮಿತ್ತ ಈಜಿಪ್ಟ್ ದೇಶವೂ ಕಾನಾನ್ ನಾಡೂ ಹಾಗೇ ಸೊರಗಿಹೋಗುತ್ತಿದ್ದುವು. [14]ಜೋಸೆಫನು ಈಜಿಪ್ಟ್
ದೇಶದವರಿಗೂ ಕಾನಾನ್ ನಾಡಿಗರಿಗೂ ದವಸಧಾನ್ಯ ಮಾರಿ ಬಂದ ಹಣದಿಂದ ಫರೋಹನ ಬೊಕ್ಕಸವನ್ನು
ತುಂಬಿದನು. [15]ಈಜಿಪ್ಟಿನ ಹಾಗೂ ಕಾನಾನಿನ ಹಣವೆಲ್ಲ ಮುಗಿದುಹೋದಾಗ ಈಜಿಪ್ಟಿನವರು ಜೋಸೆಫನ
ಬಳಿಗೆ ಬಂದು, "ನಾವೇಕೆ ನಿಮ್ಮ ಕಣ್ಮುಂದೆ ಸಾಯಬೇಕು? ನಮಗೆ ಆಹಾರ ಕೊಡಿ, ನಮ್ಮ ಹಣ
ಮುಗಿದುಹೋಯಿತು," ಎಂದರು. [16]ಜೋಸೆಫನು, 'ನಿಮ್ಮ ದನಕರುಗಳನ್ನು ತನ್ನಿ, ಹಣವಿಲ್ಲದಿದ್ದರೆ
ದನಕರುಗಳನ್ನು ತೆಗೆದುಕೊಂಡು ಧಾನ್ಯ ಕೊಡಿಸುತ್ತೇನೆ," ಎಂದನು. [17]ಅವರು ತಮ್ಮ ಪಶುಪ್ರಾಣಿಗಳನ್ನು
ಜೋಸೆಫನ ಬಳಿಗೆ ತಂದರು. ಅವನು ಅವರ ಕುದುರೆಗಳನ್ನೂ ದನಕುರಿಕತ್ತೆಗಳನ್ನೂ ತೆಗೆದುಕೊಂಡು
ಅವರಿಗೆ ಧಾನ್ಯ ಕೊಡಿಸಿದನು. ಹೀಗೆ ಆ ವರ್ಷ ಅವರ ಪಶು ಪ್ರಾಣಿಗಳನ್ನು ಪಡೆದು, ಧಾನ್ಯಕೊಟ್ಟು
ಅವರನ್ನು ಕಾಪಾಡಿದನು.

18 ಆ ವರ್ಷ ಕಳೆದು ಮಾರನೆಯ ವರ್ಷದಲ್ಲಿ ಅವರು ಅವನ ಬಳಿಗೆ ಬಂದು, "ನಮ್ಮ ಹಣವೆಲ್ಲ
ವೆಚ್ಚವಾಯಿತು. ನಮ್ಮ ಪಶುಪ್ರಾಣಿಗಳು ದಣಿಯ ವಶವಾದುವು; ಇನ್ನು ಉಳಿದಿರುವುದು ನಮ್ಮ ಭೂಮಿ
ಮತ್ತು ದೇಹಗಳೇ ಹೊರತು ಬೇರೇನೂ ಇಲ್ಲ; ದಣಿಗೆ ಮುಚ್ಚುಮರೆಯಿಲ್ಲದೆ ತಿಳಿಸುತ್ತಿದ್ದೇವೆ. [19]ನಾವೇಕೆ
ನಿಮ್ಮ ಕಣ್ಣೆದುರಿಗೆ ಸಾಯಬೇಕು? ನಮ್ಮ ಭೂಮಿಯೇಕೆ ಹಾಳಾಗಬೇಕು? ನಮ್ಮನ್ನೂ ನಮ್ಮ ಭೂಮಿಯನ್ನೂ
ತೆಗೆದುಕೊಂಡು ಧಾನ್ಯ ಕೊಡಿ, ನಾವು ನಮ್ಮ ಭೂಮಿಯನ್ನು ಫರೋಹನಿಗೆ ಕೊಟ್ಟುಬಿಟ್ಟು ಅವರಿಗೆ
ಗುಲಾಮರಾಗುತ್ತೇವೆ. ನಾವು ಸಾಯದೆ ಬದುಕಬೇಕಾದರೆ ಮತ್ತು ಭೂಮಿ ಪಾಳುಬೀಳಬಾರದಿದ್ದರೆ ಧಾನ್ಯ
ಕೊಡಿ," ಎಂದು ಕೇಳಿದರು.

20 ಜೋಸೆಫ್ ಈಜಿಪ್ಟ್ ದೇಶದ ಎಲ್ಲ ಸಾಗುವಳಿ ಭೂಮಿಯನ್ನು ಫರೋಹನಿಗಾಗಿ
ಕೊಂಡುಕೊಂಡನು. ಬರದ ಘೋರತೆಯಿಂದಾಗಿ ಈಜಿಪ್ಟಿನವರು ತಮ್ಮ ತಮ್ಮ ಹೊಲಗದ್ದೆಗಳನ್ನು
ಮಾರಿಬಿಟ್ಟರು. ಹೀಗೆ ಸಾಗುವಳಿ ಭೂಮಿಯೆಲ್ಲ ಫರೋಹನದಾಯಿತು. [21]ಈಜಿಪ್ಟಿನ ಎಲ್ಲೆಯಿಂದ
ಎಲ್ಲೆಯವರೆಗೆ ಜನರನ್ನು ಊಳಿಗಕ್ಕೆ ಈಡು ಮಾಡಿದನು. [22]ಅರ್ಚಕರ ಭೂಮಿಯನ್ನು ಮಾತ್ರ ಅವನು
ಕೊಂಡುಕೊಳ್ಳಲಿಲ್ಲ. ಏಕೆಂದರೆ ಅವರಿಗೆ ಫರೋಹನಿಂದ ಭತ್ಯ ದೊರಕುತ್ತಿತ್ತು. ಆ ಭತ್ಯದಿಂದ ಜೀವನ

ನಡೆಸುತ್ತಿದ್ದ ಆ ಅರ್ಚಕರು ತಮ್ಮ ಭೂಮಿಯನ್ನು ಮಾರಲಿಲ್ಲ. 23ಜೋಸೆಫನು ಪ್ರಜೆಗಳಿಗೆ, "ನಾನು ಈ
ದಿನ ನಿಮ್ಮನ್ನೂ ನಿಮ್ಮ ಭೂಮಿಯನ್ನೂ ಫರೋಹನಿಗಾಗಿ ಕೊಂಡುಕೊಂಡಿದ್ದೇನೆಂದು ತಿಳಿದುಕೊಳ್ಳಿ. ಇಗೋ,
ಬಿತ್ತನೆಗಾಗಿ ನಿಮಗೆ ಬೀಜವನ್ನು ಕೊಟ್ಟಿದ್ದೇನೆ. ಭೂಮಿಯಲ್ಲಿ ಬಿತ್ತಿರಿ. 24ಕೊಯ್ಲು ಕಾಲದಲ್ಲಿ ಐದರಲ್ಲೊಂದು
ಪಾಲು ಫರೋಹನಿಗೆ ಸಲ್ಲಬೇಕು, ಮಿಕ್ಕ ನಾಲ್ಕು ಪಾಲು ನಿಮ್ಮದು. ಅದನ್ನು ಬಿತ್ತನೆಗಾಗಿ ಮತ್ತು ನಿಮ್ಮ
ಮನೆಯವರ ಹಾಗು ಕುಟುಂಬದವರ ಜೀವನಕ್ಕಾಗಿ ಇಟ್ಟುಕೊಳ್ಳಿ," ಎಂದು ಹೇಳಿದನು. 25ಅದಕ್ಕೆ ಅವರು,
ನಮ್ಮ ಪ್ರಾಣಗಳನ್ನು ಉಳಿಸಿದ್ದೀರಿ. ನಮ್ಮ ದಣಿಗಳಾದ ನಿಮ್ಮ ದಯೆ ನಮ್ಮ ಮೇಲಿರಲಿ; ನಾವು ಫರೋಹನಿಗೆ
ಊಳಿಗದವರಾಗಿರುತ್ತೇವೆ," ಎಂದರು. 26ಬೆಳೆಯಲ್ಲಿ ಐದನೆಯ ಒಂದು ಪಾಲು ಫರೋಹನಿಗೆ ಸಲ್ಲತಕ್ಕದ್ದು
ಎಂಬ ಯೋಜನೆಯನ್ನು ಜೋಸೆಫನು ಈಜಿಪ್ಟ್ ದೇಶದ ಒಂದು ಶಾಸನವನ್ನಾಗಿ ಮಾಡಿದನು. ಈ
ದಿನದವರೆಗೂ ಆ ಶಾಸನ ರೂಢಿಯಲ್ಲಿದೆ. ಅರ್ಚಕರ ಭೂಮಿ ಮಾತ್ರ ಫರೋಹನಿಗೆ ಸ್ವಾಧೀನವಾಗಲಿಲ್ಲ.

### ಯಕೋಬನ ಅಂತಿಮ ಕೋರಿಕೆ

27 ಇಸ್ರಯೇಲರು ಈಜಿಪ್ಟ್ ದೇಶಕ್ಕೆ ಸೇರಿದ ಗೋಷೆನ್ ಪ್ರಾಂತ್ಯದಲ್ಲಿ ವಾಸಮಾಡಿದರು. ಅಲ್ಲಿ
ಅವರು ಆಸ್ತಿಪಾಸ್ತಿಯನ್ನು ಸಂಪಾದಿಸಿಕೊಂಡು ಬಹುಸಂತಾನವುಳ್ಳವರಾಗಿ ಅಭಿವೃದ್ಧಿಯಾದರು.
28ಯಕೋಬನು ಈಜಿಪ್ಟಿನಲ್ಲಿ ಹದಿನೇಳು ವರ್ಷ ಇದ್ದನು. ಅವನ ಜೀವಮಾನಕಾಲ ಒಟ್ಟಿಗೆ
ನೂರನಲವತ್ತೇಳು ವರ್ಷಗಳು.

29 ಯಕೋಬನಿಗೆ ಅಂತಿಮಕಾಲ ಹತ್ತಿರ ಆದಾಗ ಅವನು ತನ್ನ ಮಗ ಜೋಸೆಫನನ್ನು ಕರೆಸಿ,
"ನನ್ನ ಮೇಲೆ ನಿನಗೆ ಪ್ರೀತಿಯಿದ್ದರೆ ನೀನು ನನ್ನ ಮಾತನ್ನು ಪ್ರೀತಿಯಿಂದಲೂ ಪ್ರಾಮಾಣಿಕತೆಯಿಂದಲೂ
ನಡೆಸಿಕೊಡಬೇಕು. ಅದೇನೆಂದರೆ; ನನ್ನನ್ನು ಈಜಿಪ್ಟ್ ದೇಶದಲ್ಲಿ ಸಮಾಧಿಮಾಡಬಾರದು. 30ನಾನು
ಮೃತರಾದ ಪಿತೃಗಳೊಂದಿಗೆ ಸೇರಿಕೊಂಡಾಗ, ನನ್ನ ಶವವನ್ನು ಈಜಿಪ್ಟ್ ದೇಶದಿಂದ ತೆಗೆದುಕೊಂಡು
ಹೋಗಿ, ಆ ಪಿತೃಗಳ ಸ್ಮಶಾನ ಭೂಮಿಯಲ್ಲಿ ಸಮಾಧಿ ಮಾಡಬೇಕು. ಹಾಗೆ ಮಾಡುತ್ತೇನೆಂದು ನೀನು ನನ್ನ
ತೊಡೆಯ ಕೆಳಗೆ ಕೈಯಿಟ್ಟು ಪ್ರಮಾಣ ಮಾಡಬೇಕು" ಎಂದು ಕೇಳಿಕೊಂಡನು. ಅವನು, "ನೀನು
ಹೇಳಿದಂತೆಯೇ ಮಾಡುತ್ತೇನೆ," ಎಂದು ಪ್ರಮಾಣ ಮಾಡಿದನು. 31ಆಗ ಯಕೋಬನು ಆ ಹಾಸಿಗೆಯ
ತಲೆಭಾಗದ ಕಡೆ ಬಾಗಿ ಸ್ತೋತ್ರ ಮಾಡಿದನು.

### ಎಫ್ರಯಿಮ್ ಮತ್ತು ಮನಸ್ಸೆ ಇವರಿಗೆ ಯಕೋಬನ ಅಂತಿಮ ಆಶೀರ್ವಾದ

**48** ಕೆಲವು ಕಾಲವಾದ ಮೇಲೆ, "ತಂದೆ ಬಹಳ ಕಾಯಿಲೆಯಿಂದ ಹಾಸಿಗೆ ಹಿಡಿದಿದ್ದಾರೆ," ಎಂಬ ಸುದ್ದಿ
ಜೋಸೆಫನಿಗೆ ಬಂದಿತು. ಅವನು ಮನಸ್ಸೆ ಮತ್ತು ಎಫ್ರಯಿಮ್ ಎಂಬ ತನ್ನಿಬ್ಬರು ಮಕ್ಕಳನ್ನು ಕರೆದುಕೊಂಡು
ತನ್ನ ತಂದೆಯ ಬಳಿಗೆ ಬಂದನು. 2"ನಿಮ್ಮ ಮಗ ಜೋಸೆಫನು ಬಂದಿದ್ದಾನೆ," ಎಂದು ಯಕೋಬನಿಗೆ
ತಿಳಿಸಿದಾಗ ಅವನು ಚೇತರಿಸಿಕೊಂಡು ಹಾಸಿಗೆಯ ಮೇಲೆ ಕುಳಿತುಕೊಂಡನು. 3ಅವನು ಜೋಸೆಫನಿಗೆ,
"ಸರ್ವವಲ್ಲಭರಾದ ದೇವರು ಕಾನಾನ್ ನಾಡಿನ ಲೂಜಿನಲ್ಲಿ ನನಗೆ ದರ್ಶನಕೊಟ್ಟು, ಆಶೀರ್ವದಿಸಿ –
4'ನಾನು ನಿನ್ನನ್ನು ಫಲಪ್ರದನನ್ನಾಗಿ ಮಾಡಿ ನಿನ್ನ ಸಂತತಿಯನ್ನು ಹೆಚ್ಚಿಸುವೆನು; ಅನೇಕ ಜನರಿಗೆ ನಿನ್ನನ್ನು
ಮೂಲಪುರುಷನನ್ನಾಗಿ ಮಾಡುವೆನು; ನಿನ್ನ ತರುವಾಯ ನಿನ್ನ ಸಂತತಿಗೆ ಈ ನಾಡನ್ನು ಶಾಶ್ವತ ಸೊತ್ತನ್ನಾಗಿ
ಕೊಡುವೆನು,' ಎಂದು ಹೇಳಿದರು.

5 "ನಾನು ನಿನ್ನ ಬಳಿಗೆ ಈಜಿಪ್ಟ್ ದೇಶಕ್ಕೆ ಬರುವುದಕ್ಕೆ ಮುಂಚೆ ಇಲ್ಲಿ ಹುಟ್ಟಿದ್ದ ನಿನ್ನಿಬ್ಬರು ಮಕ್ಕಳು
ನನ್ನ ಮಕ್ಕಳಾಗಬೇಕು. ರೂಬೇನ್ ಮತ್ತು ಸಿಮೆಯೋನ್ ನನ್ನ ಮಕ್ಕಳಾಗಿರುವಂತೆಯೇ ಎಫ್ರಯಿಮ್ ಮತ್ತು
ಮನಸ್ಸೆ ನನ್ನ ಮಕ್ಕಳಾಗಿರಲಿ. 6ಅವರ ತರುವಾಯ ನೀನು ಪಡೆದ ಮಕ್ಕಳು ನಿನ್ನವರಾಗಿರಲಿ. ಅವರು ತಮ್ಮ
ಅಣ್ಣಂದಿರ ಸೊತ್ತಿಗೆ ಬಾಧ್ಯತೆ ಪಡೆದು ಅವರ ಕುಲದ ಹೆಸರನ್ನೇ ಇಟ್ಟುಕೊಳ್ಳಲಿ. 7ಏಕೆಂದರೆ ನಿಮ್ಮ ತಾಯಿ
ರಾಖೇಲಳು, ನಾನು ಮೆಸಪೊಟೇಮಿಯಾದಿಂದ ಬರುವಾಗ, ಕಾನಾನ್ ನಾಡಿನಲ್ಲಿ ಎಫ್ರಾತನ್ನು ಸೇರುವುದಕ್ಕೆ

ಇನ್ನು ಸ್ವಲ್ಪ ದೂರ ಇದ್ದಾಗಲೆ ದಾರಿಯಲ್ಲಿ ಸತ್ತು ನನ್ನನ್ನು ಅಗಲಿ ಹೋದಳು. ಈಗ ಬೆತ್ಲೆಹೇಮ್ ಎನಿಸಿಕೊಳ್ಳುವ ಎಫ್ರಾತಿಗೆ ಹೋಗುವ ದಾರಿಪಕ್ಕದಲ್ಲಿ ಆಕೆಯನ್ನು ಸಮಾಧಿಮಾಡಿದೆ," ಎಂದು ಹೇಳಿದನು.

8 ಯಕೋಬನು ಜೋಸೆಫನ ಮಕ್ಕಳನ್ನು ನೋಡಿ "ಇವರು ಯಾರು?" ಎಂದು ಕೇಳಿದನು. [9]ಅದಕ್ಕೆ
ಜೋಸೆಫನು "ಈ ದೇಶದಲ್ಲಿ ದೇವರು ನನಗೆ ಅನುಗ್ರಹಿಸಿದ ಮಕ್ಕಳು," ಎಂದನು. ಆಗ ತಂದೆ
ಯಕೋಬನು, "ಇವರನ್ನು ನಾನು ಆಶೀರ್ವದಿಸುತ್ತೇನೆ; ನನ್ನ ಹತ್ತಿರಕ್ಕೆ ಕರೆದುಕೊಂಡು ಬಾ," ಎಂದನು.
[10]ವೃದ್ಧಾಪ್ಯದ ನಿಮಿತ್ತ ಯಕೋಬನ ಕಣ್ಣು ಮೊಬ್ಬಾಗಿತ್ತು. ಜೋಸೆಫನು ಆ ಮಕ್ಕಳನ್ನು ಹತ್ತಿರಕ್ಕೆ ತಂದಾಗ
ಅವರನ್ನು ಮುದ್ದಿಟ್ಟು ಅಪ್ಪಿಕೊಂಡನು. [11]ಅನಂತರ ಜೋಸೆಫನಿಗೆ, "ನಿನ್ನ ಮುಖವನ್ನು ಮತ್ತೆ
ನೋಡುವೆನೆಂದು ನಾನು ನೆನಸಿರಲಿಲ್ಲ. ಈಗ ನಿನ್ನನ್ನು ಮಾತ್ರವಲ್ಲ, ನಿನ್ನ ಮಕ್ಕಳನ್ನೂ ನೋಡುವಂತೆ
ದೇವರು ಅನುಗ್ರಹಿಸಿದ್ದಾರೆ!" ಎಂದನು. [12]ಆಗ ಜೋಸೆಫನು ತಂದೆಯ ಮಡಲಿನಿಂದ ತನ್ನ ಮಕ್ಕಳನ್ನು
ಎತ್ತಿಕೊಂಡು ತಂದೆಗೆ ನೆಲದ ತನಕ ಬಾಗಿ ನಮಸ್ಕರಿಸಿದನು.

13 ತರುವಾಯ ಜೋಸೆಫನು ಎಫ್ರಯಿಮನನ್ನು ತನ್ನ ಬಲಕ್ಕೆ ಯಕೋಬನ ಎಡಗೈಗೆದುರಾಗಿ ಮತ್ತು
ಮನಸ್ಸೆಯನ್ನು ತನ್ನ ಎಡಕ್ಕೆ, ಯಕೋಬನ ಬಲಗೈಗೆದುರಾಗಿ ತಂದೆಯ ಮುಂದೆ ನಿಲ್ಲಿಸಿದನು. [14]ಮನಸ್ಸೆಯು
ಜೇಷ್ಠಮಗನಾಗಿದ್ದರೂ ಯಕೋಬನು ತನ್ನ ಕೈಗಳನ್ನು ಅಡ್ಡಡ್ಡವಾಗಿ ಚಾಚಿ ಕಿರಿಯವನಾದ ಎಫ್ರಯಿಮನ
ತಲೆಯ ಮೇಲೆ ಬಲಗೈಯನ್ನು, ಮನಸ್ಸೆಯ ತಲೆಯ ಮೇಲೆ ಎಡಗೈಯನ್ನು ಇಟ್ಟು, [15]ಜೋಸೆಫನನ್ನು
ಹೀಗೆಂದು ಆಶೀರ್ವದಿಸಿದನು: "ನನ್ನ ಪಿತೃಗಳಾದ ಅಬ್ರಹಾಮ್, ಇಸಾಕರು ಯಾವ ದೇವರ ಸಮ್ಮುಖದಲ್ಲಿ
ನಡೆದುಕೊಂಡರೋ ಆ ದೇವರು, ಚಿಕ್ಕಂದಿನಿಂದ ಇಂದಿನವರೆಗೆ ನನ್ನನ್ನು ಪರಿಪಾಲಿಸಿಕೊಂಡು ಬಂದ ಆ
ದೇವರು, [16]ಸಕಲ ಆಪತ್ತು ಕೇಡುಗಳಿಂದ ನನ್ನನ್ನು ಕಾಪಾಡಿಕೊಂಡು ಬಂದ ಆ ದೂತನು, ಈ ಹುಡುಗರನ್ನು
ಆಶೀರ್ವದಿಸಲಿ ಅವರ ಮುಖಾಂತರ ನನ್ನ ಹೆಸರೂ ನನ್ನ ಪಿತೃಗಳಾದ ಅಬ್ರಹಾಮ್ – ಇಸಾಕರ ಹೆಸರೂ
ಊರ್ಜಿತಗೊಳ್ಳಲಿ; ಧರೆಯಲ್ಲಿ ಇವರು ದೊಡ್ಡ ಜನಸ್ತೋಮವಾಗಿ ಬೆಳೆಯಲಿ!"

17 ತನ್ನ ತಂದೆ ಬಲಗೈಯನ್ನು ಎಫ್ರಯಿಮನ ತಲೆಯ ಮೇಲೆ ಇಟ್ಟದ್ದು ಜೋಸೆಪನಿಗೆ ಹಿಡಿಸಲಿಲ್ಲ.
ಅವನು ಆ ಕೈಯನ್ನು ಹಿಡಿದು ಎಫ್ರಯಿಮನ ತಲೆಯಿಂದ ಎತ್ತಿ ಮನಸ್ಸೆಯ ತಲೆಯ ಮೇಲೆ ಇಡುವಂತೆ
ತಂದೆಗೆ, [18]"ಹಾಗಲ್ಲ ಅಪ್ಪಾ, ಇವನೇ ಜೇಷ್ಠ ಪುತ್ರ; ಬಲಗೈಯನ್ನು ಇವನ ತಲೆಯ ಮೇಲೆ ಇಡು", ಎಂದು
ಹೇಳಿದ. [19]ಆದರೆ ತಂದೆ ಅದಕ್ಕೆ ಒಪ್ಪದೆ, "ಗೊತ್ತು ಮಗನೇ, ನನಗೆ ಗೊತ್ತು; ಇವನಿಂದಲೂ ಒಂದು ರಾಷ್ಟ್ರ
ಉತ್ಪತ್ತಿಯಾಗುವುದು; ಇವನೂ ಬಲಿಷ್ಠನಾಗುವನು. ಆದರೆ ತಮ್ಮನು ಇವನಿಗಿಂತ ಬಲಿಷ್ಠನಾಗುವನು.
ಅವನಿಂದ ರಾಷ್ಟ್ರಗಳ ಸಮೂಹವೇ ಉತ್ಪತ್ತಿಯಾಗುವುದು," ಎಂದು ಹೇಳಿದನು.

20 ಆ ದಿನ ಅವರನ್ನು ಆಶೀರ್ವದಿಸುತ್ತಾ ಹೀಗೆಂದನು:

"ಎಫ್ರಯಿಮ್ – ಮನಸ್ಸೆಯಂತೆ ನಿಮ್ಮನ್ನೂ
ಅಭಿವೃದ್ಧಿಗೊಳಿಸಲಿ ದೇವರು!
ಹೀಗೆ ನಿಮ್ಮ ಹೆಸರನ್ನು ಉಚ್ಚರಿಸುತ್ತಾ
ಇತರರನ್ನು ಆಶೀರ್ವದಿಸುವರು
ಇಸ್ರಯೇಲರು".

ಈ ರೀತಿಯಾಗಿ ಅವನು ಎಫ್ರಯಿಮನನ್ನು ಮನಸ್ಸೆಗಿಂತ ಮುಂದಿಟ್ಟನು. [21]ಬಳಿಕ ಯಕೋಬನು
ಜೋಸೆಫನಿಗೆ, "ನನಗೆ ಮರಣ ಸಮೀಪಿಸಿದೆ; ಆದರೆ ದೇವರು ನಿಮ್ಮೊಂದಿಗಿದ್ದು ನಿಮ್ಮನ್ನು ಪಿತೃಗಳ ನಾಡಿಗೆ
ಮರಳಿ ಬರಮಾಡುವರು. [22]ಇದಲ್ಲದೆ, ಕತ್ತಿ – ಬಿಲ್ಲುಗಳಿಂದ ನಾನು ಅಮೋರಿಯರ ವಶದಿಂದ ಪಡೆದ
ಬೆಟ್ಟದ ತಪ್ಪಲನ್ನು, ನಿನ್ನ ಅಣ್ಣಂದಿರಿಗೆ ಕೊಟ್ಟ ಪಾಲಿಗಿಂತ ಹೆಚ್ಚಾಗಿ, ನಿನಗೆ ಕೊಟ್ಟಿದ್ದೇನೆ," ಎಂದು ಹೇಳಿದನು.

### ತನ್ನ ಮಕ್ಕಳನ್ನು ಕುರಿತು ಯಕೋಬನ ಭವಿಷ್ಯವಾಣಿ

**49** ಯಕೋಬನು ತನ್ನ ಮಕ್ಕಳನ್ನು
ಕರೆಯಿಸಿ ಇಂತೆಂದನು:

ಕೂಡಿಬನ್ನಿ ನೀವೆಲ್ಲರು,
ನುಡಿವೆನು ನಿಮಗೆ ಮುಂದೆ
ಸಂಭವಿಸುವುದನ್ನು:
2 ಯಕೋಬನ ಮಕ್ಕಳೇ, ಕೂಡಿಬಂದು
ಕೇಳಿ ನೀವೆಲ್ಲರು
ಆಲಿಸಿ ನಿಮ್ಮ ತಂದೆ ಇಸ್ರಯೇಲನ
ಮಾತನ್ನು:
3 ರೂಬೇನನೇ, ನೀನೆನ್ನ ಜೇಷ್ಠಪುತ್ರನು
ನನ್ನ ಚೈತನ್ಯಸ್ವರೂಪನು,
ನನ್ನ ವೀರ್ಯದ ಪ್ರಥಮ ಫಲ ನೀನು
ಹಿರಿಮೆಯಲು, ಒಲುಮೆಯಲು
ಪ್ರಮುಖನೆನಿಸಿಕೊಳ್ಳುವವನು.
4 ಆದರೆ ದಡಮೀರಿದ ಪ್ರವಾಹ ನೀನು
ಹತ್ತಿದೆ, ಹೊಲೆಮಾಡಿದೆ, ತಂದೆಯ
ಹಾಸಿಗೆಯನು
ಪ್ರಮುಖಸ್ಥಾನದಲ್ಲಿರೆ ನನ್ನ
ಮಂಚವನ್ನೇರಿದೆ ನೀನು.
5 ಅಣ್ಣತಮ್ಮಂದಿರು ಸಿಮೆಯೋನ್ –
ಲೇವಿಯರು
ಅವರ ಕತ್ತಿಗಳು ಹಿಂಸಾತ್ಮಕ
ಆಯುಧಗಳು.
6 ನನ್ನ ಮನವೇ, ಒಳಗಾಗಬೇಡ
ಅವರ ದುರಾಲೋಚನೆಗೆ
ನನ್ನ ಪ್ರಾಣವೇ, ಸೇರಬೇಡ
ನೀನವರ ಗುಂಪಿಗೆ
ಕೊಂದರವರು ನರರನು
ಕೋಪೋದ್ರೇಕದಿಂದ
ಊನಪಡಿಸಿದರು ಎತ್ತುಗಳನ್ನು
ಮದದಿಂದ.
7 ಅವರ ಕೋಪ ಭೀಕರ,
ಅದಕ್ಕಿರಲಿ ಧಿಕ್ಕಾರ !
ಅವರ ರೌದ್ರ – ಕ್ರೂರ,
ಅದಕ್ಕಿರಲಿ ಧಿಕ್ಕಾರ !
ವಿಭಾಗಿಸುವೆನವರನು ಯಕೋಬ
ಕುಲದಲಿ
ಚದರಿಸುವೆನವರನು ಇಸ್ರಯೇಲರಲಿ.
8 ಯೆಹೂದನೇ, ವಂದಿಸುವರು
ನಿನ್ನನು ಸಹೋದರರು
ನಿನ್ನ ಕೈಯಲ್ಲಿರುವುದು
ಶತ್ರುಗಳ ಕುತ್ತಿಗೆಯು

ಎರಗುವರು ನಿನಗೆ ನಿನ್ನ
ಅಣ್ಣತಮ್ಮಂದಿರು.
9 ನನ್ನ ಪುತ್ರ ಯೆಹೂದ,
ನೀ ಪ್ರಾಯದ ಸಿಂಹದಂತೆ
ಬೇಟೆಹಿಡಿದು ಬೆಟ್ಟ ಏರಿದ
ಕಂಠೀರವನಂತೆ
ಕಾಲು ಮಡಿಚಿ ಹೊಂಚು ಕೂತ
ಕೇಸರಿಯಂತೆ
ಈ ಸಿಂಹಿಣಿಯನ್ನು ಕೆಣಕುವ ಕೆಚ್ಚು
ಯಾರಿಗಿದೆ?
10 ರಾಜ್ಯಾಧಿಕಾರ ಪಡೆದವನು ಬರುವ ತನಕ
ರಾಷ್ಟ್ರಗಳು ಆತನಿಗೆ ತಲೆಬಾಗುವ ತನಕ
ತಪ್ಪದು ರಾಜದಂಡ ಯೆಹೂದನ
ಕೈಯಿಂದ
ಕದಲದು ಮುದ್ರೆಕೋಲು ಅವನ
ವಂಶದಿಂದ.
11 ಕಟ್ಟುವನು ತನ್ನ ವಾಹನಪಶುವನು
ದ್ರಾಕ್ಷಾಲತೆಗೆ
ಬಿಗಿಯುವನು ತನ್ನ ಹೇಸರಕತ್ತೆಯನು
ರಾಜದ್ರಾಕ್ಷೆಗೆ
ಒಗೆಯುವನು ತನ್ನ ಬಟ್ಟೆಯನು
ದ್ರಾಕ್ಷಾರಸದಲ್ಲಿ
ತೊಳೆವನು ಮೇಲಂಗಿಯನು ಆ
ರಕ್ತಗೆಂಪು ರಸದಲಿ.
12 ಅವನ ಕಣ್ಣು ಕೆಂಪಾಗಿರುವುವು
ದ್ರಾಕ್ಷಾರಸದ ಸಮೃದ್ಧಿಯಿಂದ
ಅವನ ಹಲ್ಲು ಬೆಳ್ಳಗಿರುವುವು
ಹಾಲಿನ ಸಮೃದ್ಧಿಯಿಂದ.
13 ಜೆಬುಲೂನನು ವಾಸಿಸುವನು
ಸಮುದ್ರದ ಕರಾವಳಿಯಲ್ಲಿ
ಹಡಗುಗಳು ಬಂದು ಹೋಗುವ
ರೇವಂತೆ ಇರುವನಲ್ಲಿ
ಸಿದೋನಿನ ತನಕ ಹರಡಿರುವುದು
ಅವನ ಪ್ರಾಂತ್ಯದ ಗಡಿ.
14 ಇಸ್ಸಾಕಾರನು ಕುರಿಹಟ್ಟಿಗಳ ನಡುವೆ
ಮಲಗಿರುವ ದೊಡ್ಡ ಕತ್ತೆ.
15 ಸೂಕ್ತವೆಂದುಕೊಂಡು ತನ್ನ ನಾಡು
ವಿಶ್ರಾಂತಿಗೆ, ಸುಖಾನುಭವಕೆ
ಬಗ್ಗಿಸುವನು ಬೆನ್ನನು ಹೊರೆ
ಹೊರುವುದಕ್ಕೆ, ಬಿಟ್ಟಿಯ ಕೆಲಸಕ್ಕೆ.

16 ದಾನನು ತನ್ನ ಜನರನ್ನಾಳುವನು
ಇಸ್ರಯೇಲಿನಿತರ ಕುಲಗಳಂತೆ.
17 ಇರುವನವನು ದಾರಿಯಲ್ಲಿರುವ
ವಿಷಸರ್ಪದಂತೆ,
ಕುದುರೆಯ ಹಿಮ್ಮಡಿ ಕಚ್ಚಿ
ರಾಹುತನನು ಕೆಡವುವ ಹಾವಿನಂತೆ.
18 ಸರ್ವೇಶ್ವರಾ, ಎದುರುನೋಡುತ್ತಿರುವೆನು
ನಿನ್ನಿಂದ ಬರುವಾ ಸಂರಕ್ಷಣೆಯನು.
19 ಗಾದನು ಗುರಿಯಾಗುವನು
ಸುಲಿಗೆಗಾರರಾಕ್ರಮಣಕೆ
ಓಡುವನಾ ದರೋಡೆಗಾರರನ್ನು
ಹಿಮ್ಮೆಟ್ಟಿಕೊಂಡೇ.
20 ಆಶೇರನಗಿರುವುದು ಸಮೃದ್ಧಿಯಾಗಿ
ಧಾನ್ಯ
ದೊರಕುವುದವನಲಿ ರಾಜನಿಗೂ
ತಕ್ಕ ಭಕ್ಷ್ಯ.
21 ನಪ್ತಾಲಿ ಸ್ವಚ್ಛಂದ ಜಿಂಕೆಮರಿಯಂತೆ
ಸಿಗುವುದವನಲಿ ಸುಮಧುರವಾದ
ಮಾತುಕತೆ.
22 ಜೋಸೆಫನು ಫಲಭರಿತ ವೃಕ್ಷದಂತೆ
ಒರತೆ ಬಳಿಯಲೆ ಬೆಳೆದ
ದ್ರಾಕ್ಷಿಯಂತೆ
ಚಾಚಿದೆ ಅದರ ರೆಂಬೆ ಬೇಲಿಯಿಂದಾಚೆ.
23 ಬಿಲ್ಲುಗಾರರೆಸಗಿದರು ಅವನ ಮೇಲೆ
ಆಕ್ರಮಣ
ಸುತ್ತುವರೆದರವನನು ಎಸೆದು
ಬಿರುಸುಬಾಣ.
24 ಆದರೂ ಯಕೋಬಕುಲದ ಸರ್ವ
ಬಲಾಢ್ಯನ ಶಕ್ತಿಯಿಂದ
ಇಸ್ರಯೇಲನ ಪೊರೆಬಂಡೆ –
ಪರಿಪಾಲಕನ ನಾಮದಿಂದ
ನಿಂತಿತು ಸ್ಥಿರವಾಗಿ ಅವನ ಬಿಲ್ಲು
ಚುರುಕುಗೊಂಡಿತು ಅವನ
ಕೈಗಳ ಬಲ್ಬು.
25 ಹೀಗಾಯಿತು ನಿನ್ನ ತಂದೆಯ ದೇವರಿಂದ
ಸಿಗಲಿ ನಿನಗಾತನ ಸಹಾಯ
ಹೀಗಾಯಿತು ಸರ್ವವಲ್ಲಭ ದೇವರಿಂದ.
ದೊರಕಲಿ ನಿನಗಾತನ ಆಶೀರ್ವಾದ.
ಮೇಲಣ ಆಕಾಶದಿಂದ,
ಕೆಳಗಣ ಸಾಗರ ಸೆಲೆಗಳಿಂದ

ಸ್ತನ್ಯದಿಂದ, ಗರ್ಭದಿಂದ,
ಆತ ನೀಡುವ ವರದಾನ.
26 ಪ್ರಾಚೀನ ಪರ್ವತಗಳಿಗಿಂತ,
ಚಿರಸ್ಥಾಯಿ ಗುಡ್ಡಗಳಿಗಿಂತ
ಉತ್ತಮೋತ್ತಮ
ನಿನ್ನ ತಂದೆಯಿಂದ ಬರುವ ಆಶೀರ್ವಾದ.
ಇಳಿದು ಬರಲೀ ವರದಾನಗಳು
ಜೋಸೆಫನ ಮೇಲೆ
ಸೋದರರಿಂದ ಬೇರ್ಪಟ್ಟವನ
ಶಿರಸ್ಸಿನ ಮೇಲೆ.
27 ಕಿತ್ತು ತಿನ್ನುವ ತೋಳ ಬೆನ್ಯಾಮೀನನು
ಬೆಳಗ್ಗೆ ತಿನ್ನುವನು ಹಿಡಿದುಕೊಂಡದುದನು
ಸಂಜೆ ಹಂಚಿಕೊಳ್ಳುವನು
ಕೊಳ್ಳೆಹೊಡೆದುದನು.

28 ಇವೇ ಇಸ್ರಯೇಲಿನ ಹನ್ನೆರಡು ಕುಲಗೋತ್ರಗಳು; ಇದೇ ಅವರ ತಂದೆ ಕೊಟ್ಟ ಆಶೀರ್ವಾದ: ಒಂದೊಂದು ಕುಲಕ್ಕೆ ಅವನು ನುಡಿದ ಒಂದೊಂದು ಆಶೀರ್ವಚನ.

### ಯಕೋಬನ ಮರಣ

29 ಯಕೋಬನು ತನ್ನ ಮಕ್ಕಳಿಗೆ ಕೊಟ್ಟ ಆಜ್ಞೆ ಇದು: "ನಾನು ನನ್ನ ದಿವಂಗತ ಪೂರ್ವಜರನ್ನು
ಸೇರುವ ಕಾಲ ಸಮೀಪಿಸಿತು. ಹಿತ್ತಿಯನಾದ ಎಫ್ರೋನನ ಭೂಮಿಯಲ್ಲಿರುವ ಗವಿಯೊಳಗೆ, ಪಿತೃಗಳ
ಬಳಿಯಲ್ಲಿ ನನ್ನನ್ನು ಸಮಾಧಿಮಾಡಬೇಕು. 30ಆ ಗವಿ ಕಾನಾನ್ ನಾಡಿನ ಮಮ್ರೆಗೆದುರಾಗಿರುವ ಮಕ್ಪೇಲ
ಎಂಬ ಬಯಲಿನಲ್ಲಿದೆ. ಅದನ್ನು ಅಬ್ರಹಾಮನು ಅದರ ಸುತ್ತಲಿರುವ ಭೂಮಿ ಸಹಿತ ಹಿತ್ತಿಯನಾದ
ಎಫ್ರೋನನಿಂದ ಸ್ವಂತ ಸ್ಮಶಾನ ಭೂಮಿಗಾಗಿ ಕೊಂಡು ಕೊಂಡನು. 31ಅಲ್ಲೇ ಅಬ್ರಹಾಮನಿಗೂ ಅವನ ಪತ್ನಿ
ಸಾರಳಿಗೂ ಸಮಾಧಿಯಾಯಿತು. ಅಲ್ಲೇ ಇಸಾಕನಿಗೂ ಅವನ ಮಡದಿ ರೆಬೆಕ್ಕಳಿಗೂ ಸಮಾಧಿ ಆಯಿತು.
ಲೇಯಳನ್ನೂ ನಾನು ಅಲ್ಲಿ ಸಮಾಧಿ ಮಾಡಿದ್ದೇನೆ. 32ಹೊಲದ ಸಮೇತ ಹಿತ್ತಿಯರಿಂದ ಕ್ರಯಕ್ಕೆ
ಕೊಂಡುಕೊಂಡ ಆ ಗವಿಯೊಳಗೆ ನನಗೂ ಸಮಾಧಿಯಾಗಲಿ," ಎಂದನು. 33ಮಕ್ಕಳಿಗೆ ಈ ಆಜ್ಞೆಯನ್ನು
ಕೊಟ್ಟು ಮುಗಿಸಿದನಂತರ ಯಕೋಬನು ಹಾಸಿಗೆಯಲ್ಲಿ ತನ್ನ ಕಾಲುಗಳನ್ನು ಮಡಚಿಕೊಂಡು ಪ್ರಾಣಬಿಟ್ಟು,
ಮೃತರಾದ ಪಿತೃಗಳ ಬಳಿಗೆ ಸೇರಿದನು.

### ಯಕೋಬನ ಭೂಸ್ಥಾಪನೆ

**50** ಆಗ ಜೋಸೆಫನು ತನ್ನ ತಂದೆಯ ಶವದ ಮೇಲೆ ಬಿದ್ದು, ಕಣ್ಣೀರು ಇಡುತ್ತಾ, ಅವರಿಗೆ ಮುದ್ದಿಟ್ಟನು.
2ತರುವಾಯ ತನ್ನ ಸೇವಕರಲ್ಲಿ ಶವಲೇಪಕರಾದವರಿಗೆ, "ನನ್ನ ತಂದೆಯ ಶವವನ್ನು ಸುಗಂಧ ದ್ರವ್ಯಗಳಿಂದ
ಲೇಪಿಸಿ ಸಿದ್ಧ ಪಡಿಸಿರಿ," ಎಂದು ಅಪ್ಪಣೆ ಕೊಟ್ಟನು. ಅವರು ಹಾಗೆಯೇ ಮಾಡಿದರು. 3ಪದ್ಧತಿಯ ಪ್ರಕಾರ
ನಲವತ್ತು ದಿನಗಳು ಸುಗಂಧ ದ್ರವ್ಯಗಳನ್ನು ಲೇಪಿಸಬೇಕಾಗಿತ್ತು. ಅಷ್ಟು ದಿನಗಳವರೆಗೂ ಅವನಿಗೋಸ್ಕರ
ಈಜಿಪ್ಟಿನವರಿಂದ ಶೋಕಾಚರಣೆ ಇತ್ತು.

4 ದುಃಖದ ದಿನಗಳು ಕಳೆದ ನಂತರ ಜೋಸೆಫನು ಫರೋಹನ ಪರಿವಾರದವರಿಗೆ, "ದಯವಿಟ್ಟು
ನೀವು ಫರೋಹನ ಬಳಿಗೆ ಹೋಗಿ ಈ ವಿಷಯವನ್ನು ಮನಮುಟ್ಟುವಂತೆ ಮಾಡಿ: 5ನನ್ನ ತಂದೆಯವರು
ತಾವು ಕಾನಾನ್ ನಾಡಿನಲ್ಲಿ ಸಿದ್ಧಮಾಡಿಕೊಂಡಿರುವ ಸ್ಥಳದಲ್ಲಿಯೇ ತಮಗೆ ಸಮಾಧಿಮಾಡಬೇಕೆಂದು

ಸಾಯುವುದಕ್ಕೆ ಮೊದಲೇ ನನ್ನಿಂದ ಪ್ರಮಾಣಮಾಡಿಸಿದರು. ಆದ್ದರಿಂದ ನಾನು ಹೋಗಿ ತಂದೆಯನ್ನು
ಸಮಾಧಿಮಾಡಿ ಬರುವುದಕ್ಕೆ ಅಪ್ಪಣೆಯಾಗಬೇಕೆಂದು ವಿನಂತಿಸುತ್ತಿದ್ದೇನೆ," ಎಂದನು. 6ಫರೋಹನು ಈ
ಸಂಗತಿಯನ್ನು ಕೇಳಿ ಜೋಸೆಫನಿಗೆ, "ನಿನ್ನ ತಂದೆ ಪ್ರಮಾಣಮಾಡಿಸಿದ ಮೇರೆಗೆ ನೀನು ಹೋಗಿ ಅವನಿಗೆ
ಸಮಾಧಿಮಾಡಿ ಬರಬಹುದು," ಎಂದು ಅಪ್ಪಣೆಕೊಟ್ಟನು. 7ಜೋಸೆಫನು ತಂದೆಯನ್ನು ಸಮಾಧಿಮಾಡಲು
ಹೊರಟುಹೋದಾಗ, ಅವನ ಜೊತೆಯಲ್ಲಿ ಫರೋಹನ ಪರಿವಾರದವರೆಲ್ಲರು, ಅರಮನೆಯ ಮುಖಂಡರು,
ಈಜಿಪ್ಟಿನ ಮುಖ್ಯಸ್ಥರೆಲ್ಲರು, 8ಜೋಸೆಫನ ಮನೆಯವರೆಲ್ಲರು, ಅಣ್ಣತಮ್ಮಂದಿರು, ತಂದೆಯ
ಮನೆಯವರೆಲ್ಲರು ಹೋದರು. ತಮ್ಮ ಮಡದಿ ಮಕ್ಕಳನ್ನೂ ಕುರಿದನಗಳನ್ನೂ ಮಾತ್ರ ಗೋಷೆನ್ ಪ್ರಾಂತ್ಯದಲ್ಲಿ
ಬಿಟ್ಟುಹೋದರು. 9ಅವನ ಸಂಗಡ ರಥಗಳೂ ಕುದುರೆಸವಾರರೂ ಸಹ ಇದ್ದರು. ಹೀಗೆ ದೊಡ್ಡ
ಜನಸಮೂಹವೇ ಅವನೊಂದಿಗೆ ಹೋಯಿತು.

10 ಅವರು ಜೋರ್ಡನ್ ನದಿಯಿಂದಾಚೆ ಇರುವ ಆಟಾದ್ ಎಂಬ ಕಣಕ್ಕೆ ಬಂದು ಅಲ್ಲಿ
ಅತ್ಯಧಿಕವಾಗಿ ಗೋಳಾಡಿದರು; ಜೋಸೆಫನು ತನ್ನ ತಂದೆಗೋಸ್ಕರ ಏಳು ದಿನದ ಶೋಕಾಚರಣೆಯನ್ನು
ಏರ್ಪಡಿಸಿದನು. 11ಆ ನಾಡಿನ ಜನರಾದ ಕಾನಾನ್ಯರು ಆಟಾದ್ ಕಣದಲ್ಲಿ ನಡೆದ ಧೋಕಾಚರಣೆಯನ್ನು
ನೋಡಿ, "ಈಜಿಪ್ಟಿನವರಿಗೆ ಒದಗಿ ಇರುವ ಈ ಶೋಕ ಬಹು ವಿಶೇಷವಾದುದು!" ಎಂದರು. ಈ ಕಾರಣ
ಜೋರ್ಡನ್ ನದಿಯಾಚೆ ಇರುವ ಆ ಸ್ಥಳಕ್ಕೆ 'ಆಬೇಲ್ ಮಿಜ್ರಯಿಮ್' ಎಂದು ಹೆಸರಾಯಿತು.

12 ಯಕೋಬನ ಮಕ್ಕಳು ತಂದೆಯ ಅಪ್ಪಣೆಯಂತೆ 13ಅವನ ಶವವನ್ನು ಕಾನಾನ್ ನಾಡಿಗೆ
ಹೊತ್ತುಕೊಂಡು ಹೋಗಿ ಮಕ್ಪೇಲ ಎಂಬ ಬಯಲಿನಲ್ಲಿರುವ ಗವಿಯೊಳಗೆ ಸಮಾಧಿಮಾಡಿದರು.
ಅಬ್ರಹಾಮನು ಹಿತ್ತಿಯನಾದ ಎಫ್ರೋನನಿಂದ ಮಮ್ರೆಗೆದುರಿನಲ್ಲಿರುವ ಆ ಗವಿಯನ್ನು ಸುತ್ತಲು ಇರುವ
ಭೂಮಿ ಸಮೇತ, ಸ್ವಂತ ಸ್ಮಶಾನಭೂಮಿಗಾಗಿ ಕೊಂಡುಕೊಂಡಿದ್ದನು. 14ತಂದೆಯನ್ನು ಸಮಾಧಿಮಾಡಿದ
ಮೇಲೆ ಜೋಸೆಫನೂ ಅವನ ಅಣ್ಣತಮ್ಮಂದಿರೂ ಆ ಶವ ಸಂಸ್ಕಾರಕ್ಕಾಗಿ ಅವನ ಜೊತೆಯಲ್ಲಿ ಹೋಗಿದ್ದ
ಎಲ್ಲರೂ ಈಜಿಪ್ಟಿಗೆ ಹಿಂದಿರುಗಿದರು.

### ತನ್ನ ಸಹೋದರರಿಗೆ ಜೋಸೆಫನು ಕೊಟ್ಟ ಆಶ್ವಾಸನೆ

15 ತಂದೆ ಸತ್ತ ಬಳಿಕ ಜೋಸೆಫನ ಅಣ್ಣತಮ್ಮಂದಿರು, "ಜೋಸೆಫನು ಬಹುಶಃ ನಮ್ಮನ್ನು
ದ್ವೇಷಿಸಿಯಾನು! ನಾವು ಅವನಿಗೆ ಮಾಡಿದ ಎಲ್ಲ ಹಾನಿಗೆ ಪ್ರತಿಯಾಗಿ ಶಿಕ್ಷಿಸಿಯಾನು," ಎಂದು
ತಮ್ಮತಮ್ಮೊಳಗೆ ಮಾತನಾಡಿಕೊಂಡರು. 16ಆದುದರಿಂದ ಜೋಸೆಫನಿಗೆ ಹೀಗೆಂದು ಹೇಳಿಕಳಿಸಿದರು: "ನಿನ್ನ
ತಂದೆ ಸಾಯುವುದಕ್ಕೆ ಮುಂಚೆ ನಮಗೆ ಅಪ್ಪಣೆಮಾಡಿದ್ದೇನೆಂದರೆ – 17'ನೀವು ಜೋಸೆಫನಿಗೆ – ನಿನ್ನ
ಅಣ್ಣಂದಿರಾದ ನಾವು ನಿನಗೆ ಹಾನಿಮಾಡಿದ್ದೇನೋ ನಿಜ; ಆದರೂ ನಮ್ಮ ಅಪರಾಧವನ್ನು, ಪಾಪವನ್ನು
ಕ್ಷಮಿಸು – ಎಂದು ಕೇಳಿಕೊಳ್ಳಬೇಕು.' ಅವರು ಹೀಗೆ ವಿಧಿಸಿದ್ದರಿಂದ ನಾವು ಮಾಡಿದ ಅಪರಾಧವನ್ನು
ಈಗ ನೀನು ಕ್ಷಮಿಸಬೇಕೆಂದು ಬೇಡಿಕೊಳ್ಳುತ್ತಿದ್ದೇವೆ." ಈ ಮಾತುಗಳನ್ನು ಕೇಳಿ ಜೋಸೆಫನು ಕಣ್ಣೀರು
ಸುರಿಸಿದನು.

18 ಇದೂ ಅಲ್ಲದೆ, ಅಣ್ಣಂದಿರು ತಾವೇ ಬಂದು ಅವನಿಗೆ ಅಡ್ಡಬಿದ್ದರು. "ಇಗೋ ನಾವು ನಿನಗೆ
ಗುಲಾಮರು," ಎಂದು ಹೇಳಿದರು. 19ಆದರೆ ಜೋಸೆಫನು ಅವರಿಗೆ, "ಹೆದರಬೇಡಿ; ನಾನು ದೇವರ
ಸ್ಥಾನದಲ್ಲಿ ಇಲ್ಲ; 20ನೀವೇನೋ ನನಗೆ ಹಾನಿಮಾಡಬೇಕೆಂದು ಎಣಿಸಿದಿರಿ. ಆದರೆ ದೇವರು
ಒಳಿತಾಗಬೇಕೆಂದು ಸಂಕಲ್ಪಿಸಿದರು; ಇದರಿಂದ ಅನೇಕ ಜನರ ಪ್ರಾಣ ಉಳಿಯುವಂತೆ ಮಾಡಿದರು.
ಇಂದಿಗೂ ಈ ಕಾರ್ಯ ನಡೆಯುತ್ತಿದೆ. 21ಆದುದರಿಂದ ನೀವು ಸ್ವಲ್ಪವೂ ಸಂಕೋಚಪಡಬೇಕಾಗಿಲ್ಲ. ನಾನು
ನಿಮ್ಮನ್ನೂ ನಿಮಗೆ ಸೇರಿದೆ ಎಲ್ಲರನ್ನೂ ಪೋಷಿಸುತ್ತೇನೆ," ಎಂದು ಹೇಳಿ ಅವರನ್ನು ಸಂತೈಸಿ, ಅವರ
ಸಂಗಡ ಪ್ರೀತಿಯಿಂದ ಮಾತಾಡಿದನು.

**ಜೋಸೆಫನ ಮರಣ**

22 ಜೋಸೆಫನೂ ಅವನ ತಂದೆಯ ಕುಟುಂಬದವರೂ ಈಜಿಪ್ಟಿನಲ್ಲಿ ವಾಸಮಾಡುತ್ತಾ ಬಂದರು.
ಜೋಸೆಫನು ನೂರಹತ್ತು ವರ್ಷ ಬದುಕಿದ್ದನು; 23ಎಫ್ರಯಿಮನ ಮಕ್ಕಳ ಮೊಮ್ಮಕ್ಕಳನ್ನೂ ನೋಡಿದನು.
ಮನಸ್ಸೆಯ ಮಗನಾದ ಮಾಕೀರನಿಗೂ ಮಕ್ಕಳು ಹುಟ್ಟಿದಾಗ ಜೋಸೆಫನು ಅವರನ್ನೂ ತನ್ನ ಮಡಲಿಗೆ
ಬರಮಾಡಿಕೊಂಡನು. 24ಜೋಸೆಫನು ತನ್ನ ಅಣ್ಣ ತಮ್ಮಂದಿರಿಗೆ, "ನನ್ನ ಮರಣಕಾಲವು ಸಮೀಪಿಸಿತು.
ಆದರೆ ದೇವರು ನಿಶ್ಚಯವಾಗಿ ನಿಮ್ಮನ್ನು ಕಾಪಾಡಲು ಬರುವರು; ತಾವು ಅಬ್ರಹಾಮ್, ಇಸಾಕ್,
ಯಕೋಬರಿಗೆ ಕೊಡುವುದಾಗಿ ವಾಗ್ದಾನಮಾಡಿರುವ ನಾಡಿಗೆ ನೀವು ಹೋಗಿ ಸೇರುವಂತೆ ಮಾಡುವರು,"
ಎಂದು ಹೇಳಿದನು. 25ಇದೂ ಅಲ್ಲದೆ ಜೋಸೆಫನು ಆ ಇಸ್ರಯೇಲನ ಮಕ್ಕಳಿಗೆ, "ದೇವರು ನಿಸ್ಸಂದೇಹವಾಗಿ
ನಿಮ್ಮನ್ನು ಕಾಪಾಡಲು ಬರುವರು; ಆಗ ನೀವು ನನ್ನ ಶವವನ್ನು ನಿಮ್ಮ ಸಂಗಡ ಹೊತ್ತುಕೊಂಡು
ಹೋಗಬೇಕು," ಎಂದು ಹೇಳಿ, "ಹಾಗೆಯೇ ಮಾಡುತ್ತೇನೆ," ಎಂಬುದಾಗಿ ಅವರಿಂದ ಪ್ರಮಾಣ
ಮಾಡಿಸಿದನು. 26ಜೋಸೆಫನು ಈಜಿಪ್ಟ್ ದೇಶದಲ್ಲಿ ತನ್ನ ನೂರಹತ್ತನೇ ವರ್ಷದಲ್ಲಿ ಸತ್ತನು. ಅವನ ಶವಕ್ಕೆ
ಸುಗಂಧ ದ್ರವ್ಯಗಳನ್ನು ಲೇಪಿಸಿ, ಅದನ್ನು ಒಂದು ಪೆಟ್ಟಿಗೆಯಲ್ಲಿ ಇರಿಸಿದರು.